ಸಂಪುಟ: 04 ಸಂಚಿಕೆ: 53 ಪುಟಗಳು: 08 ಮಂಗಳವಾರ 07 ಮೇ 2024
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

ಮುಂಜಾನೆ ಮಾತು

ನೀವು ನಾಳೆ ಸಾಯುವವರಿದ್ದೀರಿ ಎಂಬಂತೆ ಬದುಕಿ. ಶಾಶ್ವತವಾಗಿ ಬದುಕುವುದು ಹೇಗೆ ಎಂಬುದನ್ನು ಕಲಿಯಿರಿ

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಆಂಬ್ಯುಲೆನ್ಸ್ ಸೇವೆ ಬಂದ್ ಸರ್ಕಾರದ ವಿರುದ್ಧ ಎಚ್‌ಡಿಕೆ ಕಿಡಿ!

• ಉದಯವಾಹಿನಿ, ಬೆಂಗಳೂರು

ಕಳೆದ ಮೂರು ತಿಂಗಳಿನಿಂದ ವೇತನ ಪಾವತಿ ಆಗದ ಹಿನ್ನೆಲೆ ರೊಚ್ಚಿಗೆದ್ದಿರುವ ಸಿಬ್ಬಂದಿಗಳು ಇಂದಿನಿಂದ ಆಂಬ್ಯುಲೆನ್ಸ್ ಸೇವೆ ಬಂದ್ ಮಾಡಿದ್ದಾರೆ. ಇದೇ ವಿಚಾರವಾಗಿ ಕಿಡಿಕಾರಿರುವ ಮಾಜಿ ಮುಖ್ಯಮಂತ್ರಿ, ಹೆಚ್ ಡಿ ಕುಮಾರಸ್ವಾಮಿ, ರಾಜ್ಯ ಕಾಂಗ್ರೆಸ್ ಸರಕಾರಕ್ಕೆ ಜನರಿಗಿಂತ ಜನಪ್ರಿಯತೆಯ ವ್ಯಸನವೇ ಹೆಚ್ಚು. ಬರ ನಿರ್ವಹಣೆಗಿಂತ ಬೇಜವಾಬ್ದಾರಿಯೇ ಜಾಸ್ತಿ. ಗ್ಯಾರಂಟಿ ಕೊಟ್ಟು ಜನರ ಬದುಕು ಹಸನು ಮಾಡಿದ್ದೇವೆನ್ನುವ ಇವರಿಗೆ 108 ಆಂಬುಲೆನ್ಸ್ ಚಾಲಕರಿಗೆ ಸಂಬಳ ಕೊಡಲಿಕ್ಕೂ ಹಣವಿಲ್ಲ! ತಮ್ಮ ಜೀವ ಪಣಕ್ಕಿಟ್ಟು ಜನರ ಜೀವ ರಕ್ಷಿಸುವ ಈ ಚಾಲಕರಿಗೆ ಸಂಬಳದ ಗ್ಯಾರಂಟಿ ಕೊಡಲು ಸಾಧ್ಯವಾಗಿಲ್ಲ. 3 ತಿಂಗಳಿಂದ ಅವರಿಗೆ ವೇತನ ಪಾವತಿ ಮಾಡಿಲ್ಲ ಎಂದರೆ ನಾಚಿಕೆಗೇಡು! ಎಂದು ವಾಗ್ದಾಳಿ ಮಾಡಿದರು. ಬಾಗಲಕೋಟೆಯಲ್ಲಿ ಸಿಎಂ ಸಿದ್ದರಾಮಯ್ಯ ಅವರು ಭಾಷಣ ಬಿಗಿದಿದ್ದಾರೆ. ರಾಜ್ಯದ ಒಬ್ಬನೇ ಒಬ್ಬ ಸರಕಾರಿ ನೌಕರ ನನ್ನ ಬಳಿ ಬಂದು ಸಂಬಳ ಪಾವತಿಯಾಗಿಲ್ಲ ಎಂದು ಹೇಳಿದರೆ ರಾಜಕೀಯ ನಿವೃತ್ತಿ ಪಡೆಯುತ್ತೇನೆ ಎಂದು ಗುಡುಗಿದ್ದರು. ಹಾಗಾದರೆ, ಮಾನ್ಯ ಸಿದ್ದರಾಮಯ್ಯನವರೇ.. ನೀವು ರಾಜೀನಾಮೆ ನೀಡುವುದು ಯಾವಾಗ ಕುರ್ಚಿ ಬಿಡುವ ಮೊದಲು ಆಂಬುಲೆನ್ಸ್ ಚಾಲಕರಿಗೆ ವೇತನ ಕೊಡಿಸಿ ಎಂದು ಹರಿಹಾಯ್ದರು. ವೇತನ ಪಾವತಿ ಸಂಬಂಧ ಆಂಬ್ಯುಲೆನ್ಸ್ ಸಿಬ್ಬಂದಿ ಜೊತೆ ಆರೋಗ್ಯ ಇಲಾಖೆ ಸಭೆ ನಡೆಸಿದೆ. ಇಲಾಖೆ ಸಂಜೆ 6 ಗಂಟೆಯವರೆಗೂ ಕಾಲಾವಕಾಶ ಕೇಳಿದೆ.

## ವಿದ್ಯುತ್ ವಿಭಾಗದ ಅಧಿಕಾರಿ, ಕೆಲಸದ ಅವಧಿ ಬದಲಾವಣೆ

• ಉದಯವಾಹಿನಿ, ಬೆಂಗಳೂರು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಿದ್ಯುತ್ ವಿಭಾಗದ ಎಲ್ಲಾ ಅಭಿಯಂತರರು/ಅಧಿಕಾರಿಗಳಿಗೆ ಕಾರ್ಯನಿರ್ವಹಿಸುವ ಅವಧಿ ಬದಲಾವಣೆ ಮಾಡಲಾಗಿದೆ. ಈ ಕುರಿತಂತೆ ಮುಖ್ಯ ಆಯುಕ್ತರು ಮಾಹಿತಿ ನೀಡಿದ್ದು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ವಿದ್ಯುತ್ ವಿಭಾಗಕ್ಕೆ ಸಂಬಂಧಿಸಿದಂತೆ, ಸಾರ್ವಜನಿಕರ ವಲಯದಿಂದ ಹಲವಾರು ಬೀದಿ ದೀಪಗಳು ಹುರಿಯದೇ ಇರುವ ಬಗ್ಗೆ ದೂರುಗಳು ಬಂದಿರುತ್ತದೆ ಎಂದಿದ್ದಾರೆ.

ಸದರಿ ದೂರುಗಳು ಹೆಚ್ಚಾಗಿ ರಾತ್ರಿ ಹೊತ್ತಿನಲ್ಲಿ ಅಂದರೆ ಸಂಜೆ 6.00 ಗಂಟೆಯಿಂದ ರಾತ್ರಿ 9.00 ಗಂಟೆಯವರೆಗೂ ಬರುತ್ತಿದ್ದು, ಬೀದಿ ದೀಪಗಳ ನಿರ್ವಹಣೆಗೆ ನಿಯೋಜಿಸಲ್ಪಟ್ಟ ಗುತ್ತಿಗೆದಾರರು ನಿಗದಿಪಡಿಸಲಾದ ಸಮಯಕ್ಕೆ ಸರಿಪಡಿಸದಿರುವುದು ಕಂಡುಬಂದಿದ್ದು, ಸದರಿ ಕಾರ್ಯಕ್ಷಮತೆಯ ಕೊರತೆಯು ಬಿಬಿಎಂಪಿ ವಿದ್ಯುತ್ ವಿಭಾಗದ ಮೇಲು ಉಸ್ತುವಾರಿಯು ನಡೆಯದೇ ಇರುವುದು ಸಹ ಒಂದು ಕಾರಣವಾಗಿರುತ್ತದೆ ಎಂದು ಹೇಳಿದ್ದಾರೆ. ಈ ಹಿನ್ನಲೆಯಲ್ಲಿ ಮುಖ್ಯ ಆಯುಕ್ತರಾದ ತುಷಾರ್ ಗಿರಿ ನಾಥ್ ರವರ ನಿರ್ದೇಶನ ದಂತೆ ವಿದ್ಯುತ್ ಇಲಾಖೆಯ ಎಲ್ಲಾ ಅಧೀಕ್ಷಕ ಅಭಿಯಂತರರು, ಕಾರ್ಯಪಾಲಕ ಅಭಿಯಂತರರು, ಸಹಾಯಕ ಕಾರ್ಯಪಾಲಕ ಅಭಿಯಂತರರು, ಸಹಾಯಕ/ಕಿರಿಯ ಅಭಿಯಂತರರು, ಗುತ್ತಿಗೆ ಅಭಿಯಂತರರು ದಿನಾಂಕ:07.05.2024ರಿಂದ ಪ್ರಾರಂಭಿಸಿದಂತೆ ಬೆಳಗ್ಗೆ 10.00 ಗಂಟೆಯಿಂದ ಮಧ್ಯಾಹ್ನ 2.00 ಗಂಟೆಯವರೆಗೆ ಹಾಗೂ ಸಂಜೆ 5.00 ಗಂಟೆಯಿಂದ ರಾತ್ರಿ 8.30 ಗಂಟೆಯವರೆಗೆ ತಮ್ಮ ವ್ಯಾಪ್ತಿಯ ಪ್ರದೇಶದಲ್ಲಿ ಕರ್ತವ್ಯ ನಿರ್ವಹಿಸಲು ಪ್ರಧಾನ ಅಭಿಯಂತರರು ಆಂತರಿಕ ಕಛೇರಿ ಟಿಪ್ಪಣಿಯಲ್ಲಿ ಆದೇಶಿಸಿದ್ದಾರೆ.

## ಪ್ರಜ್ವಲ್ ಇವತ್ತು ಇಲ್ಲ ನಾಳೆ ಬರುವ ಮಾಹಿತಿ ಇದೆ : ಕೃಷಿ ಸಚಿವ

• ಉದಯವಾಹಿನಿ, ಬೆಂಗಳೂರು

ಅಶ್ಲೀಲ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ವಿದೇಶದಲ್ಲಿರುವ ಹಾಸನ ಸಂಸದ ಪ್ರಜ್ವಲ್ ರೇವಣ್ಣ ಇಂದು ಅಥವಾ ನಾಳೆ ಭಾರತಕ್ಕೆ ಆಗಮಿಸಬಹುದು ಎಂಬುದರ ಕುರಿತು ಮಾಹಿತಿ ಇದೆ ಎಂದು ಕೃಷಿ ಸಚಿವ ಎನ್ ಚೆಲುವರಾಯಸ್ವಾಮಿ ತಿಳಿಸಿದರು. ಜೆಡಿಎಸ್ ಮುಖಂಡರೇ ಮಾಧ್ಯಮಗಳಿಗೆ ಈ ಒಂದು ಮಾಹಿತಿಯನ್ನು ನೀಡಿದ್ದಾರೆ. ಈ ಪ್ರಕರಣದಲ್ಲಿ ರಾಜಕಾರಣವನ್ನು ನಾವು ಬೆರೆಸುತ್ತಿಲ್ಲ ಎಂದು ಚೆಲುವರಾಯಸ್ವಾಮಿ ಪ್ರತಿಕ್ರಿಯೆ ನೀಡಿದರು.

## ತೇಜಸ್ವಿ ಯಾದವ್ ಬದಲು ತೇಜಸ್ವಿ ಸೂರ್ಯಗೆ ಜಾಡಿಸಿದ ಕಂಗನಾ

• ಉದಯವಾಹಿನಿ, ಬೆಂಗಳೂರು

ನಟಿ-ರಾಜಕಾರಣಿ ಕಂಗನಾ ರಣಾವತ್ ಅವರು ಪ್ರತಿಪಕ್ಷದ ನಾಯಕನನ್ನು ಟೀಕಿಸಲು ಹೋಗಿ ತಮ್ಮ ಬಿಜೆಪಿ ಅಭ್ಯರ್ಥಿಯ ಮೇಲೆಯೇ ದಾಳಿ ನಡೆಸಿ, ಇದೀಗ ಟ್ರೋಲ್‌ಗೆ ಒಳಗಾಗಿದ್ದಾರೆ. ಲೋಕಸಭೆ ಚುನಾವಣೆಯ ಪ್ರಚಾರದ ಭಾಷಣದಲ್ಲಿ ತೇಜಸ್ವಿ ಯಾದವ್‌ರನ್ನು ಟೀಕಿಸುವ ಭರದಲ್ಲಿ ತಮ್ಮದೇ ಪಕ್ಷದ ಬೆಂಗಳೂರು ದಕ್ಷಿಣದ ಅಭ್ಯರ್ಥಿ ತೇಜಸ್ವಿ ಸೂರ್ಯರ ಅವರನ್ನು ಹಿಗ್ಗಾಮುಗ್ಗಾ ಜಾಡಿಸಿದ್ದಾರೆ. ಹಾಳಾದ ರಾಜಕುಮಾರರ ಪಕ್ಷವಿದೆ. ಚಂದ್ರನ ಮೇಲೆ ಆಲೂಗಡ್ಡೆ ಬೆಳೆಯಲು ಬಯಸುವ ರಾಹುಲ್ ಗಾಂಧಿಯಾಗಲಿ ಅಥವಾ ಗೂಂಡಾಗಿರಿ ಮಾಡಿ ಮೀನು ತಿನ್ನುವ ತೇಜಸ್ವಿ ಸೂರ್ಯ ಆಗಲಿ ಎಂದು ಮಾತಿನ ಭರದಲ್ಲಿ ತಮ್ಮದೇ ಪಕ್ಷದ ಸಂಸದನನ್ನು ಟೀಕಿಸಿದರು. ಆರ್‌ಜೆಡಿ ನಾಯಕಿ ಮತ್ತು ಬಿಹಾರದ ಮಾಜಿ ಉಪಮುಖ್ಯಮಂತ್ರಿ ತೇಜಸ್ವಿ ಯಾದವ್ ಅವರು ಮೀನು ತಿನ್ನುತ್ತಿರುವ ವೀಡಿಯೊವನ್ನು ಬಿಜೆಪಿ ಚರ್ಚೆಗೆ ಗುರಿಮಾಡಿತ್ತು.

# ಎರಡನೇ ಹಂತದ ಮತದಾನ ಉತ್ಸಾಹಭರಿತದ ವರದಾನ

**ಎರಡನೇ ಹಂತ ಮತದಾನ, ಮತ ಹಾಕಲು ಊರಿನತ್ತ ಹೊರಟ ಜನ, ರಾಜ್ಯದಲ್ಲಿ ಇಂದು 2ನೇ ಹಂತದ ಮತದಾನ ಘಟಾನುಘಟಿಗಳು ಸೇರಿ 227 ಅಭ್ಯರ್ಥಿಗಳ ಭವಿಷ್ಯ ನಿರ್ಧಾರ ಬಿ.ವೈ.ರಾಘವೇಂದ್ರ ಬಿರುಸಿನ ಪ್ರಚಾರ, ಇಬ್ಬರು ಮಾಜಿ ಸಿಎಂಗಳು, ಹಲವರು ಹೊಸಬರು ಚುನಾವಣಾ ಕಣದಲ್ಲಿ...!**




### 2.59 ಕೋಟಿ ಮತದಾರರು

ಇಂದು ನಡೆಯಲಿರುವ ಎರಡನೇ ಹಂತದಲ್ಲಿ ನಡೆಯಲಿರುವ ಮತದಾನದಲ್ಲಿ 2,59,17,193 ಮಂದಿ ಮತಚಲಾಯಿಸುವ ಹಕ್ಕು ಚಲಾಯಸಲಿದ್ದಾರೆ.1,29,48,978 ಪುರುಷರು, 1,299,66,570ಮಹಿಳೆಯರು, ಇತರೆ 1,945 ಮತದಾರರರು ಮತ ಚಲಾಯಿಸಲಿದ್ದಾರೆ. 3,78,144 ಯುಪ ಪುರುಷ ಮತದಾರರು ಹಾಗೂ 3,12,703 ಯುವ ಮಹಿಳಾ ಮತದಾರರು ಈ ಬಾರಿ ಚುನಾವಣೆಯಲ್ಲಿ ತಮ್ಮ ಹಕ್ಕು ಚಲಾಯಿಸುತ್ತಿರುವುದು ವಿಶೇಷ. ೮೫ ವರ್ಷ ಮೇಲ್ಪಟ್ಟವರು,2.29,263 ಮತದಾರರಿದ್ದರೆ, 3,43966 ದಿವ್ಯಾಂಗ ಮತದಾರರ ಹೆಸರು ಪಟ್ಟಿಯಲ್ಲಿವೆ.

### ಎಲ್ಲೆಲ್ಲಿ ಮತದಾನ

ಬಾಗಲಕೋಟೆ, ಚಿಕ್ಕೋಡಿ, ಬೆಳಗಾವಿ, ವಿಜಯಪುರ, ಕಲಬುರಗಿ, ರಾಯಚೂರು, ಬೀದರ್,ಕೊಪ್ಪಳ, ಬಳ್ಳಾರಿ, ಹಾವೇರಿ, ಧಾರವಾಡ, ಉತ್ತರ ಕನ್ನಡ, ದಾವಣಗೆರೆ, ಶಿವಮೊಗ್ಗ ಜಿಲ್ಲೆಗಳಲ್ಲಿ ಬೆಳಿಗ್ಗೆ ೭ ರಿಂದ ಸಂಜೆ ೬ ಗಂಟೆಯವರೆಗೆ ಮತದಾನ ನಡೆಯಲಿದೆ.

1. ಲೋಕಸಭಾ ಚುನಾವಣೆಯ 2ನೇ ಹಂತದ ಮತದಾನಕ್ಕೆ ಕರ್ನಾಟಕ ಸಜ್ಜು
2. ಕರ್ನಾಟಕದಲ್ಲಿ ಮಂಗಳವಾರ ಎಲ್ಲೆಲ್ಲಿ ಲೋಕಸಭಾ ಚುನಾವಣೆ?
3. 2ನೇ ಹಂತದ ಮತದಾನದ ಸಮಯ ಏನು? ಅಭ್ಯರ್ಥಿಗಳು ಯಾರು?
4. ಕರ್ನಾಟಕದಲ್ಲಿ ಎರಡನೇ ಹಂತದ ಲೋಕಸಭಾ ಚುನಾವಣೆಗೆ ಕ್ಷಣಗಣನೆ
5. ಉತ್ತರ ಕರ್ನಾಟಕದ 14 ಲೋಕಸಭಾ ಕ್ಷೇತ್ರಗಳಲ್ಲಿ ರೋಚಕ ಹಣಾಹಣಿ
6. ಇಬ್ಬರು ಮಾಜಿ ಸಿಎಂಗಳು, ಹಲವರು ಹೊಸಬರು ಚುನಾವಣಾ ಕಣದಲ್ಲಿ!

• ಉದಯವಾಹಿನಿ, ಬೆಂಗಳೂರು

ಎರಡನೇ ಹಂತದಲ್ಲಿ 14 ಲೋಕಸಭಾ ಕ್ಷೇತ್ರಗಳಲ್ಲಿ ಇಂದು ಮತ ಸಂಭ್ರಮಕ್ಕೆ ವೇದಿಕೆ ಸಜ್ಜಗೊಂಡಿದೆ. ಮುಕ್ತ, ನ್ಯಾಯಸಮ್ಮತ ಮತದಾನಕ್ಕಾಗಿ ಚುನಾವಣಾ ಆಯೋಗ ಸಕಲ ಸಿದ್ಧತೆ ಮಾಡಿಕೊಂಡಿದ್ದು, ಮತಗಗಟ್ಟೆ ಕೇಂದ್ರಗಳ ಮುಂದೆ ಬಿಗಿಭದ್ರತೆ ಕೈಗೊಳ್ಳಲಾಗಿದೆ. 14 ಕ್ಷೇತ್ರಗಳ ಮತದಾನಕ್ಕಾಗಿ ಆಯಾ ಮತಗಗಟ್ಟೆಗಳಿಗೆ ನಿಯೋಜನೆಗೊಂಡಿರುವ ಸಿಬ್ಬಂದಿ ಚುನಾವಣಾ ಸಾಮಗ್ರಿಗಳೊಂದಿಗೆ ತೆರಳಿದರು. ಮತಗಟ್ಟೆ ಕೇಂದ್ರಕ್ಕೆ ತೆರಳುವ ಮುನ್ನ ಇವಿಎಂಗಳ ಕ್ಲಸ್ಟರ್ ನಡೆಸಲಾಯಿತು. ಬಹಿರಂಗ ಪ್ರಚಾರಕ್ಕೆ ತೆರೆಬಿದ್ದಿರುವ ಹಿನ್ನೆಲೆ ಉಮೇದುವಾರರು ಮನೆ ಮನೆಗೆ ತೆರಳಿ ಕಡೆಗಳಿಗೆಯಲ್ಲಿ ಮತದಾರ ಮನಗೆಲ್ಲಲು ಕಸರತ್ತು ನಡೆಸಿದ್ದಾರೆ. ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್.ಯಡಿಯೂರಪ್ಪ ಪುತ್ರ, ಬಿ.ವೈ.ರಾಘವೇಂದ್ರ, ಎಸ್. ಬಂಗಾರಪ್ಪ, ನಟ ಶಿವರಾಜ್ ಕುಮಾರ್ ಪತ್ನಿ ಗೀತಾ ಶಿವರಾಜ್ ಕುಮಾರ್, ಶಿವಮೊಗ್ಗದಲ್ಲಿ ಬಂಡಾಯ ಅಭ್ಯರ್ಥಿಯಾಗಿ ಕಣಕ್ಕಿಳಿದಿರುವ ಮಾಜಿ ಉಪಮುಖ್ಯಮಂತ್ರಿ ಕೆ.ಎಸ್.ಈಶ್ವರಪ್ಪ, ಮಾಜಿ ಮುಖ್ಯಮಂತ್ರಿಗಳಾದ, ಬಸವರಾಜ ಬೊಮ್ಮಾಯಿ, ಜಗದೀಶ್ ಶೆಟ್ಟರ್, ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಬಿ. ಶ್ರೀರಾಮುಲು, ತುಕಾರಾಂ , ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅಳಿಯ ರಾಧಾಕೃಷ್ಣ ದೊಡ್ಡಮನಿ, ಉಮೇಶ್ ಜಾಧವ್, ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಪುತ್ರ, ಮೃಣಾಳ್ ಹೆಬ್ಬಾಳ್ಕರ್, ಸಚಿವ ಉಮೇಶ್ ಖಂಡ್ರೆ ಪುತ್ರ, ಸಾಗರ್ ಖಂಡ್ರೆ, ಪ್ರಭಾ ಮಲ್ಲಿಕಾರ್ಜುನ್, ಸಂಯುಕ್ತ ಪಾಟೀಲ್, ಭಗವಂತ್ ಖೂಬಾ ಸೇರಿ ಘಟಾನುಘಟಿಗಳ ಭವಿಷ್ಯ ಮತದಾರ ಪ್ರಭು ಇಂದು ನಿರ್ಧರಿಸಲಿದ್ದಾನೆ. ಒಟ್ಟು 206 ಪುರುಷರು, 21 ಸೇರಿ ಒಟ್ಟು 207 ಅಭ್ಯರ್ಥಿಗಳು ಕಣದಲ್ಲಿದ್ದಾರೆ.

14 ಕ್ಷೇತ್ರಗಳಲ್ಲಿ ಕಾಂಗ್ರೆಸ್ ನಾಯಕರಾದ ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ, ಮಲ್ಲಿಕಾರ್ಜುನ ಖರ್ಗೆ, ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಹಾಗೂ ಉಪಮುಖ್ಯಮಂತ್ರಿ, ಡಿ.ಕೆ.ಶಿವಕುಮಾರ್ ಸೇರಿ ಇತರ ನಾಯಕರು ಮತಬೇಟೆ ನಡೆಸಿದ್ದರು. ಪ್ರಧಾನಿ ಮೋದಿ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ, ಕೇಂದ್ರ ಗೃಹ ಸಚಿವ ಅಮಿತ್ ಶಾ, ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ, ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ, ಮಾಜಿ ಮುಖ್ಯಮಂತ್ರಿ ಬಿ.ಎಸ್ .ಯಡಿಯೂರಪ್ಪ, ಡಿ.ವಿ.ಸದಾನಂದಗ ಗೌಡ, ವಿಪಕ್ಷ ನಾಯಕ ಆರ್. ಅಶೋಕ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ರಾಘವೇಂದ್ರ ಬಿರುಸಿನ ಪ್ರಚಾರ ನಡೆಸಿದ್ದರು.

ಇಂದು ಬೆಳಿಗ್ಗೆ 7 ಗಂಟೆಯಿಂದ ಸಂಜೆ 6 ಗಂಟೆವರೆಗೆ ಮತದಾನ ನಡೆಯಲಿದ್ದು, ಭಾರತದ ಚುನಾವಣಾ ಆಯೋಗ ಮತದಾನಕ್ಕೆ ಸಕಲ ಸಿದ್ಧತೆ ಮಾಡಿಕೊಂಡಿದೆ.

ಚುನಾವಣಾ,ಭದ್ರತಾ ಸಿಬ್ಬಂದಿ ಆಯಾ ಕ್ಷೇತ್ರದ ಮಸ್ಟರಿಂಗ್ ಕೇಂದ್ರಗಳಲ್ಲಿ ಸಮಾವೇಶಗೊಂಡು ನಿಗದಿಪಡಿಸಿದ ಮತಗಟ್ಟೆಗಳಿಗೆ ಮತಯಂತ್ರ, ಚುನಾವಣಾ ಸಾಮಗ್ರಿ , ಭದ್ರತಾ ಸಿಬ್ಬಂದಿಯೊಂದಿಗೆ ಮಧ್ಯಾಹ್ನದ ನಂತರ ತೆರಳಿದರು.

ಚಿಕ್ಕೋಡಿ, ಬೆಳಗಾವಿ, ಬಾಗಲಕೋಟೆ, ಬಿಜಾಪುರ ಗುಲ್ಬರ್ಗ, ರಾಯಚೂರು, ಬೀದರ್, ಕೊಪ್ಪಳ, ಬಳ್ಳಾರಿ, ಹಾವೇರಿ, ಧಾರವಾಡ, ಉತ್ತರಕನ್ನಡ, ದಾವಣಗೆರೆ, ಶಿವಮೊಗ್ಗ ಲೋಕಸಭಾ ಕ್ಷೇತ್ರಗಳಿಗೆ ಇಂದು ಮತದಾನ ನಡೆಯಲಿದ್ದು, ಕಾಂಗ್ರೆಸ್, ಬಿಜೆಪಿ ಎಲ್ಲಾ ಕ್ಷೇತ್ರಗಳಲ್ಲೂ ಸ್ಪರ್ಧಿಸಿದ್ದರೆ, ಬಿಎಸ್‌ಪಿ 9, ನೋಂದಾಯಿತ ಮಾನ್ಯತೆ ಪಡೆಯದ ರಾಜಕೀಯ ಪಕ್ಷಗಳು 23, ಸ್ವತಂತ್ರ ಅಭ್ಯರ್ಥಿಗಳು 117 ಸೇರಿದಂತೆ ಮತ್ತು 327 ಅಭ್ಯರ್ಥಿಗಳು ಸ್ಪರ್ಧೆಗಿಳಿದಿದ್ದಾರೆ. ಇದರಲ್ಲಿ 206 ಪುರುಷ, 21 ಮಹಿಳಾ ಅಭ್ಯರ್ಥಿಗಳಿದ್ದಾರೆ. ಉ.ಕ.ದ ಒಟ್ಟು 14 ಕ್ಷೇತ್ರಗಳಲ್ಲಿ 2,59,52,958 ಮತದಾರರಿದ್ದು, 1,29,48,978 ಪುರುಷ, 1,29,64,570 ಮಹಿಳಾ ಹಾಗೂ 1,945 ತೃತೀಯ ಲಿಂಗಿ ಮತದಾರರು ಇದ್ದಾರೆ. ಉತ್ತರ ಕನ್ನಡ ಜಿಲ್ಲೆಯಲ್ಲಿ ಅತೀ ಕಡಿಮೆ 16,41,156 ಮತದಾರರಿದ್ದರೆ, ಅತೀಹೆಚ್ಚು ಗುಲ್ಬರ್ಗ ಲೋಕಸಭಾ ಕ್ಷೇತ್ರದಲ್ಲಿ 20,98,202 ಮತದಾರರಿದ್ದಾರೆ. 28,269 ಮತಗಟ್ಟೆ ಸ್ಥಾಪಿಸಲಾಗಿದೆ. ಸೂಕ್ಷ್ಮ ಮತಗಟ್ಟೆಗಳಿಗೆ ಒಬ್ಬರು ಹೆಡ್ ಕಾನ್ಸ್ ಟೇಬಲ್, ಒಬ್ಬರು ಕಾನ್‌ಸ್ಟೇಬಲ್ ಅನ್ನು ಭದ್ರತೆಗಾಗಿ ನಿಯೋಜಿಸಲಾಗಿದೆ. ಸಾಮಾನ್ಯ ಮತಗಟ್ಟೆಗೆ ಒಬ್ಬರು ಕಾನ್ಸ್ ಟೇಬಲ್ ಅನ್ನು ನಿಯೋಜಿಸಲಾಗಿದ್ದು, ಮತಗಟ್ಟೆಗಳ ಸಮೂಹ ಇರುವ ಕಡೆ ಕೇಂದ್ರದ ಪಡೆ ನಿಯೋಜಿಸಲಾಗಿದೆ. ಸುರಪುರ ಉಪಚುನಾವಣೆ, ಲೋ.ಚು.ನಡೆಯುವ 14 ಕ್ಷೇತ್ರಗಳಲ್ಲೂ ಎಡಗೈ ತೋರುಬೆರಳಿಗೆ ಅಳಿಸಲಾಗದ ಶಾಯಿ ಹಾಕಲಾಗುತ್ತದೆ.

### ಮತದಾನ ಸಾರ್ವತ್ರಿಕ ರಜೆ

ಮತದಾನ ನಡೆಯುವ ಎಲ್ಲಾ ಕ್ಷೇತ್ರಗಳಲ್ಲಿ ಶಾಲಾ, ಕಾಲೇಜು, ಸರ್ಕಾರಿ ಕಚೇರಿಗಳು, ಬ್ಯಾಂಕ್‌ಗಳು, ಕೈಗಾರಿಕೋದ್ಯಮಗಳು, ವಿವಿಧ ಖಾಸಗಿ ಸಂಸ್ಥೆಗಳಿಗೆ ಸಾರ್ವತ್ರಿಕ ರಜೆ ಘೋಷಿಸಲಾಗಿದ್ದು, ದಿನಗೂಲಿ ವೇತನದಲ್ಲಿ ಕೆಲಸ ಮಾಡುವವರಿಗೂ ಮತ ಚಲಾಯಿಸಲು ಅನುಕೂಲವಾಗುವಂತೆ ಸರ್ಕಾರ ವೇತನ ಸಹಿತ ರಜೆಯನ್ನು ಮಂಜೂರು ಮಾಡಿ ಆದೇಶಿಸಿದೆ.

### ಪರ್ಯಾಯ ಗುರುತಿನ ಚೀಟಿ

ಚುನಾವಣಾ ಆಯೋಗದಿಂದ ಈಗಾಗಲೇ ನೀಡಲಾಗಿರುವ ವೋಟರ್‌ರಸ ಸ್ಲಿಪ್‌ನ ಜೊತೆಗೆ ಮತದಾರರ ಗುರುತಿನ ಚೀಟಿ, ಆಧಾರ್‌ಕಾರ್ಡ್, ನರೇಗ ಜಾಬ್‌ಕಾರ್ಡ್, ಬ್ಯಾಂಕ್, ಪೋಸ್‌ಟ ಆಫೀಸ್ ಪಾಸ್‌ಬುಕ್, ಕಾರ್ಮಿಕ ಸಚಿವರು ನೀಡುವ ಆರೋಗ್ಯ ವಿಮಾ ಸ್ಮಾರ್ಟ್ ಕಾರ್ಡ್, ಡ್ರೈವಿಂಗ್ ಲೈಸೆನ್‌ಸ, ಪ್ಯಾನ್ ಕಾರ್ಡ್, ಪಾಸ್‌ಪೋರ್ಟ್, ಪಿಂಚಣಿಯ ದಾಖಲೆ, ರಾಜ್ಯಸರ್ಕಾರ, ಸಾರ್ವಜನಿಕ ಸಂಸ್ಥೆಗಳು, ಪಬ್ಲಿಕ್ ಲಿಮಿಟೆಡ್ ಕಂಪನಿಗಳು ಉದ್ಯೋಗಿಗಳಿಗೆ ನೀಡಿದ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿಗಳು, ಎಂಪಿ, ಎಂಎಲ್‌ಎ, ಎಂಎಲ್‌ಸಿಗಳಿಗೆ ನೀಡಿರುವ ಅಧಿಕೃತ ಗುರುತಿನ ಚೀಟಿ, ಸಾಮಾಜಿಕ ನ್ಯಾಯ ಸಬಲೀಕರಣ ನೀಡಿರುವ ವಿಶಿಷ್ಟ ಅಂಗವಿಕಲ ಗುರುತಿನ ಚೀಟಿ ತೋರಿಸಿ ಮತ ಚಲಾಯಿಸಬಹುದಾಗಿದೆ.

### ಸಂಸ್ಕೃತಿಯ ಪ್ರತಿಬಿಂಬ

560 ಮತಗಟ್ಟೆಗಳನ್ನು ಮಹಿಳೆಯರೇ ನಿರ್ವಹಿಸಲಿದ್ದು, 112 ಮತಗಟ್ಟೆಗಳನ್ನು ದಿವ್ಯಾಂಗರು ನಿರ್ವಹಿಸುತ್ತಾರೆ. ಇತರೆ ವಿವಿಧ ವಿಷಯಗಳ 224 ಮಾದರಿ ಮತಗಟ್ಟೆಗಳನ್ನು ಸ್ಥಾಪಿಸಿದ್ದು, ಸ್ಥಳೀಯ ಸಂಸ್ಕೃತಿ ಸಂಪ್ರದಾಯವನ್ನು ಬಿಂಬಿಸುವಂತೆ ಅಲಂಕರಿಸಲಾಗಿದೆ.

# ಪೆನ್‌ಡ್ರೈವ್ ಕಥಾನಾಯಕರೇ ಡಿಕೆಶಿ: ದೇವರಾಜೇಗೌಡ ಹೊಸ ಬಾಂಬ್

• ಉದಯವಾಹಿನಿ, ಬೆಂಗಳೂರು

ಪ್ರಜ್ವಲ್ ರೇವಣ್ಣ ವಿರುದ್ಧ ಅಶ್ಲೀಲ ವಿಡಿಯೋ ಪ್ರಕರಣಕ್ಕೆ ಇದೀಗ ಹೊಸ ತಿರುವು ಸಿಕ್ಕಿದ್ದು, ಬಿಜೆಪಿ ಮುಖಂಡ ಹಾಗೂ ವಕೀಲ ದೇವರಾಜೇಗೌಡ, ಪೆನ್ ಡ್ರೈವ್‌ನ ಕಥಾನಾಯಕರೇ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಎಂದು ಗಂಭೀರವಾದ ಆರೋಪ ಮಾಡಿದರು. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪೆನ್ ಡ್ರೈವ್ ಕಥಾನಾಯಕರೇ ಕಾಂಗ್ರೆಸ್ ಪಕ್ಷದ ಅಧ್ಯಕ್ಷರು ಹಾಗೂ ಡಿಸಿಎಂ ಆಗಿರುವ ಡಿಕೆ ಶಿವಕುಮಾರ್ ಅವರೇ ಇದರ ರೂವಾರಿ ಎಂದು ಹೊಸ ಬಾಂಬ್ ಸಿಡಿಸಿದ್ದಾರೆ. ಇದರಲ್ಲಿ ಇನ್ನೊಬ್ಬರ ನಾಯಕರ ಆಡಿಯೋ ಸಹ ಇದೆ ದೇವರಾಜೇಗೌಡ ಮೇಲೆ ಕೇಸ್ ಹಾಕಲು ಈಗ ಹೊರಟಿದ್ದಾರೆ. ಡಿಸಿಎಂ ರವರು ಮಾತುಕತೆಗೆ ನನ್ನ ಬಳಿ ಕೆಲ ಜನರನ್ನು ಕಳುಹಿಸಿದ್ದರು.ಪೆನ್ ಡ್ರೈವ್ ಒಬ್ಬ ಮಹಾ ನಾಯಕನ ಬಳಿ ಹೋಗಿತ್ತು.

ಡಿಕೆ ಮಾತಾಡಿರುವ ಆಡಿಯೋ ಬಿಡುಗಡೆ ಮಾಡಿದ ದೇವರಾಜ್ ಗೌಡ , ಶಿವ ರಾಮೇಗೌಡ ಮೊದಲು ಮಾತನಾಡಿದರು ಆಮೇಲೆ ಡಿಸಿಎಂ ಡಿಕೆ ಶಿವಕುಮಾರ್ ಗೆ ಫೋನ್ ಕೊಟ್ಟರು ಎಲ್ಲರ ಶಿವರಾಮೇಗೌಡರಿಂದ ಆಡಿಯೋದಲ್ಲಿ ಭರವಸೆ ನೀಡಿದರು ಎಂದು ಡಿಕೆ ಶಿವಕುಮಾರ್ ಮಾತನಾಡಿರುವ ಆಡಿಯೋ ಬಿಡುಗಡೆ ಮಾಡಿದ್ದಾರೆ.



ಡಿಕೆ ಕೈಗೆ ಎಲ್ ಆರ್ ಶಿವರಾಮೇಗೌಡ ಫೋನ್ ಕೊಟ್ಟರು ಇಷ್ಟನ್ನಾದರೂ ಮಾಡ್ತಿದ್ದೀವಲ್ಲ ಅದಕ್ಕಾದ್ರು ಖುಷಿ ಪಡಿ ಎಂದು ಡಿಕೆ ಶಿವಕುಮಾರ್ ಅಂದರು. ಆಡಿಯೋ ದಲ್ಲಿ ಯಾರೂ ಮಾತಾಡಿದ್ದಾರೆ ಗೊತ್ತಾಯಿತಲ್ಲವಾ ಇದರಲ್ಲಿ ಯಾರ ಪಾತ್ರ ಇದೆ ಎಂದು ಗೊತ್ತಾಯಿತು ಅಲ್ವಾ ನಾನು ಸಿ ಬಿ ಐ ಗೆ ದೂರು ಕೊಡುತ್ತೇನೆ ಎಸ್ ಐ ಟಿ ಮೇಲೆ ನಂಬಿಕೆ ಇಲ್ಲ ಎಂದರು.

ಅಶ್ಲೀಲ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ಈ ಒಂದು ಬಿಡುಗಡೆಯಾಗಿರುವ ವಿಡಿಯೋಗಳನ್ನು, ಕೆಲ ಕಿಡಿಗೇಡಿ ರಾಜಕಾರಣಿಗಳು ವಿಡಿಯೋಗಳನ್ನು ಅಸ್ತ್ರಮಾಡಿಕೊಂಡಿದ್ದಾರೆ ಎಂದು ಬಿಜೆಪಿ ಮುಖಂಡ ದೇವರಾಜೇಗೌಡ ಹೇಳಿಕೆ ನೀಡಿದರು.

### ವಿಡಿಯೋಗಳನ್ನು ಬ್ಲರ್ ಮಾಡದೆ ಹರಿಬಿಟ್ಟಿದ್ದಾರೆ

ಸ್ಟೇ ಇದ್ದರೂ ವಿಡಿಯೋಗಳನ್ನು ಹಂಚಿದ್ದಾರೆ ಎಂದು ದೂರು ದಾಖಲಿಸಲಾಗಿದೆ ವಿಶೇಷ ಅಂದರೆ ವಿಡಿಯೋಗಳನ್ನು ಬ್ಲರ್ ಮಾಡದೆ ಹರಿಬಿಟ್ಟಿದ್ದಾರೆ ಎಂದರು. ಇದೆಲ್ಲರ ನಡುವೆ ಯಕ್ಷಪ್ರಶ್ನೆ ಏನೆಂದರೆ ದೇವರಾಜೆಗೌಡ ಪಾತ್ರ ಏನು ಎಂಬುದಾಗಿದೆ. ವಕೀಲ ವೃತ್ತಿಯ ನಿಯಮ ಏನಪ್ಪ ಅಂದರೆ ರಕ್ಷಣೆ ಕೊಡುವುದು ಕೊಲೆಗಾರ ಬಂದರು ಆತನಿಗೆ ರಕ್ಷಣೆ ಕೊಡಬೇಕಾಗಿರುವುದು ಕೆಲ ಕಿಡಿಗೇಡಿ ರಾಜಕಾರಣಿಗಳು ವಿಡಿಯೋವನ್ನು ಅಸ್ತ್ರಮಾಡಿ ಕೊಂಡಿದ್ದಾರೆ ಎಂದು ಕಿಡಿ ಕಾರಿದರು.

# ಮಾನ್ಯ ಸಿದ್ದರಾಮಯ್ಯನವರೇ, ನೀವು ರಾಜೀನಾಮೆ ನೀಡುವುದು ಯಾವಾಗ?

● ಕುರ್ಚಿ ಬಿಡುವ ಮುನ್ನ ವೇತನ ಕೊಡಿಸಿ' ● ನಾಡಿನ ಮಹಿಳೆಯರಿಗೆ ಪತ್ರ ಬರೆದು ವಿಶೇಷ ಮನವಿ ಮಾಡಿದ ಮುಖ್ಯಮಂತ್ರಿ

• ಉದಯವಾಹಿನಿ, ಬೆಂಗಳೂರು

ಆರೋಗ್ಯ ಕವಚ 108 ಆಂಬುಲೆನ್ಸ್ ಸಿಬ್ಬಂದಿಗೆ ಕಳೆದ ಮೂರು ತಿಂಗಳಿನಿಂದ ವೇತನ ನೀಡಿಲ್ಲ. ಇದರಿಂದ ಆಂಬುಲೆನ್ಸ್ ಸಿಬ್ಬಂದಿಗಳು ಕುಟುಂಬ ನಿರ್ವಹಣೆಗೂ ಪರದಾಡುತ್ತಿದ್ದಾರೆ. ಜಿವಿಕೆ ಎಂಬ ಸಂಸ್ಥೆಯಡಿ 710 ಆಂಬುಲೆನ್ಸ್ ಕಾರ್ಯನಿರ್ವಹಿಸುತ್ತಿದ್ದು, ಅಂದಾಜು 3,600 ಸಿಬ್ಬಂದಿ ಕಾರ್ಯ ನಿರ್ವಹಿಸುತ್ತಿದ್ದಾರೆ.

ಕೊರೊನಾ ನಂತರ ಸಿಬ್ಬಂದಿಗೆ ಹಲವು ಬಾರಿ ವೇತನ ಪಾವತಿ ಸಮಸ್ಯೆಯಾಗುತ್ತಲೇ ಇತ್ತು.

2022 ಸೆಪ್ಟೆಂಬರ್‌ನಲ್ಲಿ ಸಿಬ್ಬಂದಿ ನ್ಯಾಯಾಲಯದ ಮೊರೆ ಹೋಗಿದ್ದರು. ವೇತನ ಪಾವತಿಯಾಗದ ಹಿನ್ನೆಲೆಯಲ್ಲಿ ಜಿವಿಕೆ ಮತ್ತು ಸರ್ಕಾರದ ವಿರುದ್ಧ ಸಿಬ್ಬಂದಿ ತಿರುಗಿಬಿದ್ದಿದ್ದು,ಕರ್ತವ್ಯ ನಿಲ್ಲಿಸಿ ಮುಷ್ಕರ ನಡೆಸಿದ ನಂತರ ಸಂಬಳ ನೀಡಿದ್ದರು. ಆದರೆ, ಮುಂದಿನ ಎರಡು ತಿಂಗಳಲ್ಲಿ ಸರಿಯಾಗಿ ವೇತನ ಪಾವತಿಯಾಯಿತು. ನಂತರ ಮತ್ತೆ ಸಂಬಳ ನೀಡದೆ



ಸತಾಯಿಸುತ್ತಿದ್ದಾರೆ ಎಂದು ಸಿಬ್ಬಂದಿ ತಿಳಿಸಿದ್ದಾರೆ. ಅಲ್ಲದೇ ಸಂಬಳ ಆಗದ ಹಿನ್ನೆಲೆ ಇಂದು (ಮೇ 6) ರಂದು ರಾತ್ರಿ 8 ಗಂಟೆಯಿಂದ ಆಂಬ್ಯುಲೆನ್ಸ್ ಸೇವೆ ಸ್ಥಗಿತಗೊಳ್ಳಲಿದೆ.

ಈ ವಿಚಾರ ತಿಳಿಯುತ್ತಿದ್ದಂತೆ ಜೆಡಿಎಸ್ ರಾಜ್ಯ ಘಟಕ ಟ್ವೀಟ್ ಮಾಡಿದ್ದು, ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ರಾಜ್ಯ ಕಾಂಗ್ರೆಸ್ ಸರಕಾರಕ್ಕೆ ಜನರಿಗಿಂತ ಜನಪ್ರಿಯತೆಯ ವ್ಯಸನವೇ ಹೆಚ್ಚು. ಬರ ನಿರ್ವಹಣೆಗಿಂತ ಬೇಜವಾಬ್ದಾರಿಯೇ ಜಾಸ್ತಿ. ಗ್ಯಾರಂಟಿ ಕೊಟ್ಟು ಜನರ ಬದುಕು ಹಸನು ಮಾಡಿದ್ದೇವೆನ್ನುವ ಇವರಿಗೆ 108 ಆಂಬುಲೆನ್ಸ್ ಚಾಲಕರಿಗೆ ಸಂಬಳ ಕೊಡಲಿಕ್ಕೂ ಹಣವಿಲ್ಲ! ತಮ್ಮ ಜೀವ ಪಣಕ್ಕಿಟ್ಟು ಜನರ ಜೀವ ರಕ್ಷಿಸುವ ಈ ಚಾಲಕರಿಗೆ ಸಂಬಳದ ಗ್ಯಾರಂಟಿ ಕೊಡಲು ಸಾಧ್ಯವಾಗಿಲ್ಲ. 3 ತಿಂಗಳಿಂದ ಅವರಿಗೆ ವೇತನ ಪಾವತಿ ಮಾಡಿಲ್ಲ ಎಂದರೆ ನಾಚಿಕೆಗೇಡು! ಎಂದು ವಾಗ್ದಾಳಿ ನಡೆಸಿದೆ.

ರಾಜ್ಯದ ಒಬ್ಬನೇ ಒಬ್ಬ ಸರಕಾರಿ ನೌಕರ ನನ್ನ ಬಳಿ ಬಂದು ಸಂಬಳ ಪಾವತಿಯಾಗಿಲ್ಲ ಎಂದು ಹೇಳಿದರೆ ರಾಜಕೀಯ ನಿವೃತ್ತಿ ಪಡೆಯುತ್ತೇನೆ ಎಂದು ಗುಡುಗಿದ್ದರು.

ಹಾಗಾದರೆ, ಮಾನ್ಯ ಸಿದ್ದರಾಮಯ್ಯನವರೇ.. ನೀವು ರಾಜೀನಾಮೆ ನೀಡುವುದು ಯಾವಾಗ ಕುರ್ಚಿ ಬಿಡುವ ಮೊದಲು ಆಂಬುಲೆನ್ಸ್ ಚಾಲಕರಿಗೆ ವೇತನ ಕೊಡಿಸಿ ಎಂದು ಹರಿಹಾಯ್ದರು.

### ಮಹಿಳೆಯರಿಗೆ ಪತ್ರವೊಂದನ್ನು ಬರೆದು ವಿಶೇಷ ಮನವಿ

ಸಿದ್ದರಾಮಯ್ಯ ಅವರು ರಾಜ್ಯದ ಮಹಿಳೆಯರಿಗೆ ಪತ್ರವೊಂದನ್ನು ಬರೆದು ವಿಶೇಷ ಮನವಿ ಮಾಡಿಕೊಂಡಿದ್ದಾರೆ. ನನ್ನ ಪ್ರೀತಿಯ ತಾಯಂದಿರೇ ಮತ್ತು ಅಕ್ಕ-ತಂಗಿಯರೇ ಎಂಬ ಉಲ್ಲೇಖದೊಂದಿಗೆ ಸಿಎಂ ಸಿದ್ದರಾಮಯ್ಯ ಪತ್ರ ಆರಂಭಿಸಿದ್ದಾರೆ. ಹದಿನೆಂಟನೇ ಲೋಕಸಭಾ ಚುನಾವಣೆಯಲ್ಲಿ ನಿರ್ಧಾರವಾಗಲಿರುವುದು ರಾಜಕೀಯ ಪಕ್ಷಗಳ ಸೋಲು-ಗೆಲುವುಗಳು ಮಾತ್ರ ಅಲ್ಲ, ಈ ಚುನಾವಣೆ ಮಹಿಳೆಯರ ಪರವಾದ ಸರ್ಕಾರದ ಕಾರ್ಯಕ್ರಮಗಳ ಸೋಲು-ಗೆಲುವನ್ನು ಕೂಡಾ ನಿರ್ಧರಿಸಲಿದೆ. ''ಮಹಿಳೆಯರು ಸ್ವಾತಂತ್ರ್ಯಕ್ಕೆ ಅರ್ಹರಲ್ಲ'' ಎಂದು ನಂಬಿರುವ ಭಾರತೀಯ ಜನತಾ ಪಕ್ಷ ಮತ್ತು ಮಹಿಳೆಯರಿಗೆ ಸಮಾನ ಅವಕಾಶ ಮತ್ತು ಸ್ಥಾನಮಾನ ನೀಡಬೇಕೆಂದು ಸಾರಿದ ಸಂವಿಧಾನಕ್ಕೆ ಬದ್ಧವಾಗಿರುವ ಕಾಂಗ್ರೆಸ್ ಪಕ್ಷಗಳ ನಡುವೆ ಇಂದಿನ ಮಹಿಳೆಯರು ಆಯ್ಕೆ ಮಾಡಬೇಕಾಗಿದೆ ಎಂದರು.

**ಈ ದಿನದ ದರ** | ಪೆಟ್ರೋಲ್: 99.84 ₹/L | ಡೀಸೆಲ್ : 85.93 ₹/L | ಬಂಗಾರ: ₹7,205/Gram(24ct) ₹6,605/Gram(22ct) | ಬೆಳ್ಳಿ: ₹84.00/Gram

## ಬಿಜೆಪಿ ಮುಖಂಡ ದಾಖಲೆ ಬಿಡುಗಡೆ!!

• ಉದಯವಾಹಿನಿ, ಬೆಂಗಳೂರು

ಡಾ. ಬಿ.ಆರ್.ಅಂಬೇಡ್ಕರ್ ಮೆಡಿಕಲ್ ಕಾಲೇಜು, ಅಂಬೇಡ್ಕರ್ ದಂತ ವೈದ್ಯಕೀಯ ಕಾಲೇಜು, ಮಾತೃಶ್ರೀ ರಮಾಬಾಯಿ ನರ್ಸಿಂಗ್ ಕಾಲೇಜು ಸೇರಿದಂತೆ ಮತ್ತಿತರ ಉನ್ನತ ಶೈಕ್ಷಣಿಕ ವಿದ್ಯಾಸಂಸ್ಥೆಗಳಲ್ಲಿ ಭಾರೀ ಪ್ರಮಾಣದ ಭ್ರಷ್ಟಾಚಾರ ನಡೆಯುತ್ತಿದೆ ಎಂದು ಬಿಜೆಪಿ ಮುಖಂಡ ಎನ್.ಆರ್.ರಮೇಶ್ ಆರೋಪಿಸಿದ್ದಾರೆ. ಈ ಕುರಿತು ದಾಖಲೆಗಳನ್ನು ಬಿಡುಗಡೆ ಮಾಡಿರುವ ಎನ್.ಆರ್.ರಮೇಶ್, ಈ ಕಾಲೇಜುಗಳು ಎಐಸಿಸಿಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಅವರ ಅಳಿಯ ಕಾಂಗ್ರೆಸ್ ಲೋಕಸಭಾ ಅಭ್ಯರ್ಥಿ ರಾಧಾಕೃಷ್ಣ ಅವರ ಒಡೆತನದಲ್ಲಿದ್ದು, 2012-2017 ರ ಅವಧಿಯಲ್ಲಿ ನೂರಾರು ಕೋಟಿ ಭ್ರಷ್ಟಾಚಾರ ನಡೆದಿದೆ ಎಂದಿದ್ದಾರೆ. ನಾಲ್ಕನೇ ದರ್ಜೆ ನೌಕರನಾಗಿದ್ದ ಅಮಾನುಲ್ಲಾ ಖಾನ್ ಎಂಬ ವ್ಯಕ್ತಿಯನ್ನು ಸಾರ್ವಜನಿಕ ಸಂಪರ್ಕ ಅಧಿಕಾರಿಯಾಗಿ ನೇಮಿಸಲಾಗಿದೆ. 2008 ರಿಂದ ಇದುವರೆಗೂ ಮ್ಯಾನೇಜ್ ಮೆಂಟ್ ಕೋಟಾ ಅಡಿಯಲ್ಲಿ ಸಾವಿರಾರು ಅಕ್ರಮ ನಡೆದಿದೆ. ಅನುತ್ತೀರ್ಣ ಮತ್ತು ಅನರ್ಹ ವಿದ್ಯಾರ್ಥಿಗಳಿಂದ 1-2 ಕೋಟಿ ರೂ. ಹಣ ಪಡೆದು, ಸರ್ಕಾರದ ಅನುಮೋದನೆ ಪಡೆಯದ ನಕಲಿ ಕಾಲೇಜುಗಳಿಂದ ಪ್ರಮಾಣ ಪತ್ರ ಕೊಡಿಸಿ, ವೈದ್ಯಕೀಯ ಸೀಟು ಮಾರಿಕೊಳ್ಳಲಾಗಿದೆ ಎಂದು ಎನ್.ಆರ್. ರಮೇಶ್ ಆರೋಪಿಸಿದ್ದಾರೆ. ಜೊತೆಗೆ, ಇಂಟರ್ನಲ್ ಅಂಕಗಳನ್ನು ನೀಡಲು ಲಕ್ಷಾಂತರ ರೂ. ಲಂಚ ಪಡೆಯಲಾಗುತ್ತಿದೆ. ಅಲ್ಲದೇ ಕಾಮೆಡ್ -ಕೆ, ಮತ್ತಿತರ ಪರೀಕ್ಷೆಗಳನ್ನು ಬರೆದಂತೆ ದಾಖಲೆ ಸೃಷ್ಟಿಸಿ ನೂರಾರು ವಿದ್ಯಾರ್ಥಿಗಳನ್ನು ಉತ್ತೀರ್ಣಗೊಳಿಸಲಾಗಿದೆ. ಈ ಬಗ್ಗೆ ಹಲವು ರಾಜ್ಯಪಾಲರು , ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ ದೂರು ನೀಡಿದ್ದರೂ ಕ್ರಮ ಕೈಗೊಂಡಿಲ್ಲ ಎಂದು ಎನ್.ಆರ್. ರಮೇಶ್ ದೂರಿದ್ದಾರೆ.

## 108 ಆಂಬುಲೆನ್ಸ್ ಸಿಬ್ಬಂದಿಗಳಿಂದ ಮುಷ್ಕರ ಸೇವೆಯಲ್ಲಿ ವ್ಯತ್ಯಯ ಸಾಧ್ಯತೆ

• ಉದಯವಾಹಿನಿ, ಬೆಂಗಳೂರು

ಬಾಕಿ ಉಳಿಸಿಕೊಂಡಿರುವ ವೇತನ ಪಾವತಿಗೆ ಆಗ್ರಹಿಸಿ 108-ಆರೋಗ್ಯ ಕವಚ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ಮುಷ್ಕರಕ್ಕೆ ಕರೆ ನೀಡಿದ್ದಾರೆ. ಈ ಮೂಲಕ ಆಂಬುಲೆನ್ಸ್ ಸೇವೆಯಲ್ಲಿ ವ್ಯತ್ಯಯವಾಗುವ ಸಾಧ್ಯತೆಯಿದೆ.ಈ ಆರೋಗ್ಯ ಕವಚ ಯೋಜನೆಯನ್ನು ಜಿವಿಕೆ-ಇಎಂಆರ್ಐ ಸಂಸ್ಥೆ ನಿರ್ವಹಿಸುತ್ತಿದ್ದು ಸುಮಾರು 2,500 ಸಿಬ್ಬಂದಿ ಕಾರ್ಯನಿರ್ವಹಿಸುತ್ತಿದ್ದಾರೆ. ರಾಜ್ಯ ಸರ್ಕಾರ ಮತ್ತು ಜಿವಿಕೆ ಸಂಸ್ಥೆ ವಿರುದ್ಧ ನೌಕರರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಒಂದು ಕಡೆ ನಿಗದಿಪಡಿಸಿದ ವೇತನದಲ್ಲಿ ಡಿಸೆಂಬರ್, ಜನವರಿ ತಿಂಗಳಲ್ಲಿ ಅರ್ಧದಷ್ಟು ವೇತನ ಮಾತ್ರ ನೀಡಲಾಗಿದ್ದು, ಕಳೆದ ಮೂರು ತಿಂಗಳಿಂದ ವೇತನ ಪಾವತಿಸಿಲ್ಲ. ಬಾಕಿ ಉಳಿಸಿಕೊಂಡಿರುವ ವೇತನ ಪಾವತಿಗೆ ಆಗ್ರಹಿಸಿ 108-ಆರೋಗ್ಯ ಕವಚ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ಇಂದಿನಿಂದ ಮುಷ್ಕರಕ್ಕೆ ಮುಂದಾಗಿದ್ದಾರೆ.ಈ ಕುರಿತು ಮಾತನಾಡಿರುವ 108 ನೌಕರರ ಸಂಘದ ರಾಜ್ಯ ಉಪಾಧ್ಯಕ್ಷ ಎನ್.ಎಚ್. ಪರಮಶಿವ, ಸಿಬ್ಬಂದಿಯ ಹಿತದೃಷ್ಟಿಯಿಂದ ಅನಿರ್ದಿಷ್ಟಾವಧಿ ಮುಷ್ಕರ ಅನಿವಾರ್ಯವಾಗಿದೆ. ಆದ್ದರಿಂದ ಸೋಮವಾರ ರಾತ್ರಿಯಿಂದ ನೌಕರರು ಕರ್ತವ್ಯ ನಿಭಾಯಿಸುವುದಿಲ್ಲ ಎಂದು ತಿಳಿಸಿದ್ದಾರೆ.

## ಮಹಿಳೆ ಕಿಡ್ನ್ಯಾಪ್ ಕೇಸ್: ಆರೋಪಿ ಸತೀಶ್ ಬಾಬು ಎಸ್ಐಟಿ ಕಸ್ಟಡಿಗೆ

• ಉದಯವಾಹಿನಿ, ಬೆಂಗಳೂರು

ಸಂತ್ರಸ್ತ ಮಹಿಳೆ ಕಿಡ್ನ್ಯಾಪ್ ಪ್ರಕರಣದಲ್ಲಿ ಹೆಚ್.ಡಿ.ರೇವಣ್ಣ ಬಂಧನ ಕೇಸ್ ಗೆ ಸಂಬಂಧಿಸಿದಂತೆ ಆರೋಪಿ ಸತೀಶ್ ಬಾಬುಗೆ 8 ದಿನಗಳ ಕಾಲ ಎಸ್ಐಟಿ ವಶಕ್ಕೆ ನೋಡಿ ಕೋರ್ಟ್ ಆದೇಶ ಹೊರಡಿಸಿದೆ. ಸಂತ್ರಸ್ತ ಮಹಿಳೆಯನ್ನು ಆರೋಪಿ ಸತೀಶ್ ಬಾಬು ಅಪಹರಿಸಿದ ಆರೋಪದಲ್ಲಿ ಎಸ್ಐಟಿ ಅಧಿಕಾರಿಗಳು ಬಂಧಿಸಿ, ಇಂದು ಬೆಂಗಳೂರಿನ 17ನೇ ಎಸಿಎಂಎಂಕೋರ್ಟ್ ಗೆ ಹಾಜರುಪಡಿಸಿದ್ದರು. ವಿಚಾರಣೆಗಾಗಿ ಕಸ್ಟಡಿಗೆ ನೀಡುವಂತೆ ಕೋರಿದ್ದರು. ಈ ಹಿನ್ನೆಲೆಯಲ್ಲಿ ನ್ಯಾಯಾಲಯ ಆರೋಪಿ ಸತೀಶ್ ಬಾಬುನನ್ನು ಮೇ 13ವರೆಗೆ ಎಸ್ಐಟಿ ಕಸ್ಟಡಿಗೆ ನೀಡಿ ಆದೇಶ ಹೊರಡಿಸಿದೆ.

## ಕೇಂದ್ರ-ರಾಜ್ಯ ನಡುವೆ ಬರಪರಿಹಾರಕ್ಕೆ ಫೈಟ್-ಸುಪ್ರೀಂನಲ್ಲಿ ವಿಚಾರಣೆ.!

• ಉದಯವಾಹಿನಿ, ಬೆಂಗಳೂರು

ಕೇಂದ್ರ ಹಾಗೂ ರಾಜ್ಯ ಸರ್ಕಾರದ ನಡುವೆ ಬರಪರಿಹಾರಕ್ಕೆ ಫೈಟ್ ನಡೆಯುತ್ತಿದೆ. ಬರಪರಿಹಾರದ ಬಿಡುಗಡೆ ಸಂಬಂಧ ಸುಪ್ರೀಂಕೋರ್ಟ್‌ನ ನ್ಯಾ. ಗವಾಯಿ ನೇತೃತ್ವದ ಪೀಠದಲ್ಲಿ ಅರ್ಜಿಯ ವಿಚಾರಣೆ ನಡೆಯಲಿದೆ. ಕರುನಾಡಿನಲ್ಲಿ ಈ ಬಾರಿ ಮಳೆ ಇಲ್ಲದೆ ಬೆಳೆಗಳು ಒಣಗುತ್ತಿವೆ ಇದರಿಂದ ರೈತರು ಕಂಗಾಲಾಗಿದ್ದು ಕೇಂದ್ರ ಸರ್ಕಾರ ಬರಪರಿಹಾರ ಬಿಡುಗಡೆ ಮಾಡಬೇಕೆಂದು ರಾಜ್ಯ ಸರ್ಕಾರ ಮನವಿ ಮಾಡಿತ್ತು ಹಾಗೂ ಹೋರಾಟ ಸಹ ನಡೆಸಿತ್ತು. ಇತ್ತೀಚೆಗೆ ಕೇಂದ್ರ ಸರ್ಕಾರ ರಾಜ್ಯಕ್ಕೆ ಬರಪರಿಹಾರ ಘೋಷಣೆ ಮಾಡಿತ್ತು. ಆದರೆ ಕೇಂದ್ರ ಸರ್ಕಾರ ಬಿಡುಗಡೆ ಮಾಡಿರುವ ಬರಪರಿಹಾರ ಕಡಿಮೆ ಇದೆ ಎಂದು ಆರೋಪ ಮಾಡುವ ಜೊತೆ ಮತ್ತೆ ಸುಪ್ರೀಂಕೋರ್ಟ್‌ಗೆ ಅರ್ಜಿ ಸಲ್ಲಿಸಿದೆ. ಈ ಇಂದು ಅರ್ಜಿಯ ವಿಚಾರಣೆಯನ್ನು ಸುಪ್ರೀಂಕೋರ್ಟ್ ನಡೆಸಲಿದೆ.

## ಪ್ರಜ್ವಲ್ ಕೇಸ್‌ನಲ್ಲಿ ಹೆಚ್‌ಡಿಡಿ, ಹೆಚ್‌ಡಿಕೆ ಹೆಸರು ಬಳಸದಂತೆ ತಡೆಯಾಜ್ಞೆ.!

• ಉದಯವಾಹಿನಿ, ಬೆಂಗಳೂರು

ಪ್ವಲ್ ರೇವಣ್ಣ ಲೈಂಗಿಕ ದೌರ್ಜನ್ಯ ಮತ್ತು ಅಶ್ಲೀಲ ವಿಡಿಯೋ ಚಿತ್ರೀಕರಣ ಪ್ರಕರಣದಲ್ಲಿ ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡ ಹಾಗೂ ಹೆಚ್‌ಡಿಕೆ ಹೆಸರು ಬಳಸದಂತೆ ತಡೆಯಾಜ್ಞೆ ನೀಡಲಾಗಿದೆ. ಪ್ರಜ್ವಲ್ ರೇವಣ್ಣ ವಿಚಾರದಲ್ಲಿ ಅನಾವಶ್ಯಕವಾಗಿ ತಮ್ಮ ಹೆಸರನ್ನು ಎಳೆದು ತರಲಾಗುತ್ತಿದೆ, ಹೆಚ್ ಡಿ ದೇವೇಗೌಡರ ಹೆಸರನ್ನು ಕೂಡ ಉಲ್ಲೇಖಿಸಲಾಗುತ್ತಿದೆ ಎಂದು ಹೆಚ್‌ಡಿಕೆ ಅಸಮಾಧಾನ ವ್ಯಕ್ತಪಡಿಸಿದ್ದರು. ಇದರಿಂದ ದೇವೇಗೌಡರು ಬಹಳ ನೊಂದಿದ್ದಾರೆ ಎಂದು ಕೂಡ ಹೇಳಿದ್ದರು. ಹೀಗಾಗಿ ತಮ್ಮ ಹೆಸರನ್ನು ಈ ಪ್ರಕರಣದ ವಿಚಾರವಾಗಿ ಸುದ್ದಿ ಪ್ರಸಾರ ಮಾಡುವಾಗ ಬಳಸದಂತೆ ತಡೆಯಾಜ್ಞೆ ತಂದಿದ್ದಾರೆ. ಅಶ್ಲೀಲ ವಿಡಿಯೋ ಕೇಸ್‌ಗೂ ತಮಗೂ ಸಂಬಂಧವಿಲ್ಲ ಎಂದು ಅನೇಕ ಬಾರಿ ಮಾಧ್ಯಮದ ಮುಂದೆ ಹೆಚ್‌ಡಿಕೆ ಹೇಳಿದ್ದರೂ ಕೂಡ. ಈಗ ಸೆಷನ್ಸ್ ಕೋರ್ಟ್ ಹೆಸರು ಬಳಸದಂತೆ ಸೂಚನೆ ನೀಡಿದೆ.

## ಅಪ್ಪ,ಮಗನ ಕರ್ಮಕಾಂಡ ಬಿಚ್ಚಿಟ್ಟ ಸಂತ್ರಸ್ತೆ

• ಉದಯವಾಹಿನಿ, ಬೆಂಗಳೂರು

ಪ್ರಜ್ವಲ್ ರೇವಣ್ಣ ಲೈಂಗಿಕ ಹಗರಣದ ಪ್ರಕರಣಕ್ಕೆ ಸಂಬಂಧಪಟ್ಟಂತೆ ಇದೀಗ ತನಿಖೆಯು ವೇಗ ಪಡೆದುಕೊಂಡಿದೆ. ಹೊಳೆನರಸೀಪುರದ ಪೊಲೀಸ್ ಠಾಣೆಯಲ್ಲಿ ದೂರು ದಾಖಲು ಮಾಡಿರುವ ಸಂತ್ರಸ್ತೆಯೊಬ್ಬರು ಸ್ಫೋಟಕ ಆರೋಪವನ್ನು ಮಾಡಿದ್ದಾರೆ. ರೇವಣ್ಣ ನೀಡುತ್ತಿದ್ದ ಕಿರುಕುಳ ಬಗ್ಗೆ ಮಾತನಾಡಿದ್ದು, ತಮ್ಮ ಕೊಠಡಿಗೆ ಬರುವಂತೆ ಆಹ್ವಾನಿಸಿ, ಹಣ್ಣು ಕೊಡುವ ನೆಪದಲ್ಲಿ ಮೈ ಮುಟ್ಟುತ್ತಿದ್ದರು. ಸ್ಟೋರ್ ರೂಂ ನಲ್ಲಿ ಕೈ ಹಿಡಿದು ಎಳೆಯುತ್ತಿದ್ದರು. ಸೀರೆಯ ಪಿನ್ ಕಿತ್ತು ಲೈಂಗಿಕ ದೌರ್ಜನ್ಯ ಮಾಡುತ್ತಿದ್ದು. ಪ್ರಜ್ವಲ್ ಹಿಂದಿನಿಂದ ಬಂದು ಮೈ ಮುಟ್ಟುತ್ತಾ ಹೊಟ್ಟೆಯನ್ನು ಮುಟ್ಟುತ್ತಿದ್ದರು. ಈ ರೀತ ಹಲವು ಬಾರಿ ಮಾಡಿದ್ದಾರೆ ಎಂದು ಮಹಿಳೆ ದೂರು ನೀಡಿದ್ದಾರೆ. ತನ್ನ ಮಗಳ ಫೋನ್‌ಗೆ ಪ್ರಜ್ವಲ್ ರೇವಣ್ಣ ವೀಡಿಯೋ ಕಾಲ್ ಮಾಡಿ ಅಸಭ್ಯ ಸಂಭಾಷಣೆ ಮಾಡಿ ಪ್ರಚೋದನೆ ಮಾಡಿಸಲು ಪ್ರಯತ್ನಿಸಿದ್ದರು ಎಂದು ಮಹಿಳೆ ಆರೋಪ ಮಾಡಿದ್ದಾರೆ. ಈ ದೂರಿನನ್ವಯ ಪ್ರಜ್ವಲ್ ರೇವಣ್ಣ ವಿರುದ್ಧ ಲೈಂಗಿಕ ಕಿರುಕುಳ ಸೆಕ್ಷನ್ ಅಡಿಯಲ್ಲಿ ಹೊಳೆನರಸೀಪುರ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಲಾಗಿತ್ತು. 2 ದಿನಗಳ ಹಿಂದೆ ಹೊಳೆನರಸೀಪುರ ನಿವಾಸದಲ್ಲಿ ಸ್ಥಳಮಹಜರನ್ನು ಎಸ್ಐಟಿ ತಂಡ ನಡೆಸಿತ್ತು. ಇದೀಗ ಬಸನವಗುಡಿ ನಿವಾಸಕ್ಕೆ ಸಂತ್ರಸ್ತೆಯನ್ನು ಕರೆತಂದು ಮಹಜರು ಮಾಡಲಾಗಿದೆ.

# 50 ವರ್ಷ ಹಳೆಯ ಕಾವೇರಿ ಥಿಯೇಟರ್ ಇನ್ನು ನೆನಪು

■ ಅಣ್ಣಾವ್ರ' ಸಿನಿಮಾ ಪ್ರದರ್ಶನದಿಂದ ಶುರು, ಮತ್ತೊಂದು ಥಿಯೇಟರ್ ಇತಿಹಾಸ ಪುಟ, ಕಾವೇರಿ' ಚಿತ್ರಮಂದಿರ ಆರಂಭ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಚಿತ್ರ ಮಂದಿರ ಸ್ಥಗಿತ

ಓಟಿಟಿ, ಮಲ್ಟಿಪ್ಲೆಕ್ಸ್‌ಗಳ ಹಾವಳಿ ಮತ್ತು ಬದಲಾದ ಕಾಲಘಟ್ಟದಲ್ಲಿ ಅನೇಕ ಸಿನಿಮಾ ಪ್ರದರ್ಶನಗಳ ಮೂಲಕ ಅರ್ಧ ಶತಮಾನ ಕಂಡ ಬೆಂಗಳೂರು ಮತ್ತೊಂದು ಥಿಯೇಟರ್ ಇತಿಹಾಸ ಪುಟ ಸೇರಲಿದೆ. ಇಲ್ಲಿ ಅನೇಕ ದಿಗ್ಗಜರ ಸಿನಿಮಾ ಪ್ರದರ್ಶನ ಕಂಡಿವೆ. ಅಲ್ಲದೇ 'ಪುನೀತ್ ರಾಜಕುಮಾರ್' ಅವರ 'ಪರಮಾತ್ಮ' ಸಿನಿಮಾದ ದೃಶ್ಯಗಳನ್ನು ಈ ಥಿಯೇಟರ್‌ನಲ್ಲಿ ಸೆರೆ ಹಿಡಿಯಲಾಗಿದೆ.

ವರನಟ ಡಾ.ರಾಜಕುಮಾರ್ ಅವರ ಬಂಗಾರದ ಪಂಜರ' ಸಿನಿಮಾ ಮೂಲಕ ಆರಂಭವಾಗಿದ್ದ ಐಕಾನಿಕ್ 'ಕಾವೇರಿ' ಚಿತ್ರಮಂದಿರ ಇನ್ನು ನೆನಪು ಮಾತ್ರ. ಏಕೆಂದರೆ ಒಂದು ಕಡೆ ಓಟಿಟಿ, ಸಿನಿಮಾಲ್‌ಗಳ ಹಾವಳಿ ಮತ್ತೊಂದರೆ ಮೊದಲಿನಂತರ ಸಾಲು ಸಾಲು ಸಿನಿಮಾ ರೀಲೀಸ್ ಆಗುತ್ತಿಲ್ಲ. ಹೀಗಾಗಿ ಸಿನಿಮಾ ನಡೆಸುವುದು ಸವಾಲಾಗಿದೆ.

ಈ ಕಾರಣದಿಂದ ಈ ಚಿತ್ರಮಂದಿರ ಸ್ಥಗಿತಗೊಳ್ಳಲಿದೆ. ಬೆಂಗಳೂರು ಮೆಜೆಸ್ಟಿಕ್ ಕಪಾಲಿ ಥಿಯೇಟರ್ ಬಿಟ್ಟರೆ ನಂತರ ಅತೀ ಹೆಚ್ಚು ಜನರು ಕೂತು ವೀಕ್ಷಿಸಬಹುದಾಗಿದ್ದ ದೊಡ್ಡ ಚಿತ್ರಮಂದಿರ ಇದಾಗಿತ್ತು.

1974ರ ಜನವರಿ 11 ಅಣ್ಣಾವ್ರ 'ಬಂಗಾರದ ಪಂಜರ' ಸಿನಿಮಾ ಮೂಲಕ ಸಿಂಗಲ್ ಸ್ಕ್ರೀನ್‌ನ ಈ ಕಾವೇರಿ ಚಿತ್ರಮಂದಿರ ಆರಂಭವಾಗಿತ್ತು. ಇತ್ತೀಚೆಗಷ್ಟೇ 50 ವರ್ಷ ಪೂರೈಸಿದ್ದಕ್ಕಾಗಿ ಸುವರ್ಣ ಮಹೋತ್ಸವ ಆಚರಿಸಲಾಯಿತು. ಅದಾಗಿ ಕೆಲವೇ ವಾರಗಳಲ್ಲಿ ಚಿತ್ರಮಮಂದಿರ ಸ್ಥಗಿತ ಸುದ್ದಿ ಹೊರ ಬಿದ್ದಿದೆ. ಈ ಕಾವೇರಿ ಚಿತ್ರಮಂದಿರದ ಜಾಗದಲ್ಲಿ ಮುಂದಿನ ದಿನಗಳಲ್ಲಿ

**ಬದಲಾದ ಸನ್ನಿವೇಶದಲ್ಲಿ ಒಟಿಟಿ ಅಲೆ ಶುರುವಾಗಿದೆ. ಇದು ಸಿಂಗಲ್ ಸ್ಕ್ರೀನ್ ಚಿತ್ರಮಂದಿರಗಳ ಸರ್ವನಾಶಕ್ಕೆ ಕಾರಣವಾಗಿದೆ. ಅಲ್ಲದೇ ಸಿನಿಮಾ ನೋಡುವ ಶೈಲಿಯು ಬದಲಾಗಿದೆ. ಇದೀಗ ಎಲ್ಲವೂ ಆನ್‌ಲೈನ್ ಆಗಿಬಿಟ್ಟಿದೆ. ಇದಕ್ಕೆಲ ಕೋರೊನಾ ಸಾಂಕ್ರಾಮಿಕವೂ ಒಂದು ಕಾರಣವಾಯಿತು ಎಂದು ಅವರು ಭಾವುಕರಾಗಿ ಹೇಳಿದರು.**

ವಾಣಿಜ್ಯ ಕಟ್ಟಡ ತಲೆ ಎತ್ತಲಿದೆ. ಈ ಮೂಲಕ ಐಕಾನಿಕ್ ಕಾವೇರಿ ಥಿಯೇಟರ್ ತನ್ನ ವೈಭವದ ಓಟವನ್ನು ಕೊನೆಗೊಳಿಸಲಿದೆ. ಅಂದಿನ ಕಾಲದಿಂದಲೇ ಕಳೆದ ಕೆಲವು ವರ್ಷಗಳವರೆಗೆ ಈ ಥಿಯೇಟರ್‌ನಲ್ಲಿ ಜನರು ಕಿಕ್ಕಿರಿದು ತುಂಬಿರುತ್ತಿದ್ದರು. ಈ ಅನುಭವ ಕಂಡ ಹಳೆಯ ಬೆಂಗಳೂರು ನಿವಾಸಿಗಳಿಗೆ ಇದೊಂದು ಅವಿಸ್ಮರಣೆಯವಾಗಿ ಉಳಿದು ಬಿಡಲಿದೆ.

ಕಳೆದ ತಿಂಗಳು ಏಪ್ರಿಲ್ 20 ರಂದು ಥಿಯೇಟರ್‌ಗೆ ತೆರೆ ಬಿದ್ದಿದೆ. ಇದಕ್ಕೂ ಮೊದಲು 'ಬಡೇ ಮಿಯಾನ್ ಚೋಟೆ

**ದಶಕಗಳಿಂದ ಸಿನಿಮಾ ಪ್ರದರ್ಶನ ನಡೆಸಿಕೊಂಡು ಬಂದ ಈ ಥಿಯೇಟರ್ ಅನ್ನು ಮುಚ್ಚಲು ನನಗೆ ಅತೀವ ಬೇಸರವಾಗಿದೆ. ಆದರೆ ಕಳೆದ 5 ವರ್ಷಗಳಲ್ಲಿ ಆದಾಯ ಸಂಗ್ರಹದಲ್ಲಿ ಭಾರೀ ಹಿನ್ನಡೆ ಆಗಿದೆ. 50 ವರ್ಷಗಳ ಹಿಂದೆ ರಂಗಭೂಮಿಯನ್ನು ಕಟ್ಟಿ ಬೆಳೆಸಿದ ತಂದೆ ನರಸಿಂಹಯ್ಯನವರ ಈ ಪರಂಪರೆ ಮುಂದುವರೆಸಿದ್ದರು, ಇದೀಗ ಅನಿವಾರ್ಯವಾಗಿ ಚಿತ್ರಮಂದಿರ ಸ್ಥಗಿತಗೊಳಿಸಬೇಕಾಗಿದೆ ಎಂದು ತಿಳಿಸಿದರು.**

**ಥಿಯೇಟರ್ ಮಾಲೀಕ ಪ್ರಕಾಶ್ ನರಸಿಂಹಯ್ಯ**

ಮಿಯಾನ್' ಮತ್ತು 'ಮೈದಾನ್' ಇಲ್ಲಿ ಪ್ರದರ್ಶನಗೊಂಡ ಕೊನೆಯ ಎರಡು ಹಿಂದಿ ಚಿತ್ರಗಳಾಗಿವೆ. ಇಲ್ಲಿ 1300 ಆಸನ ವ್ಯವಸ್ಥೆ ಇದ್ದು, ಮಿನಿ ಬಾಲ್ಕನಿ ಸಹ ಇತ್ತು. ಒಂದೆರಡು ಸಿನಿಮಾಗಳ ಶೂಟಿಂಗ್ ಸಹ ಇಲ್ಲಿ ನಡೆದಿದೆ. ಸದ್ಯ ಥಿಯೇಟರ್ ಸ್ಥಗಿತಗೊಂಡ ಕಾರಣ ಇಲ್ಲಿ ಹೊಸ ಕಟ್ಟಡ ನಿರ್ಮಿಸುವ ಕೆಲಸ ಆರಂಭವಾಗುತ್ತಿದೆ.

## ಬೆಂಗಳೂರಿನಲ್ಲಿ ಶೀಘ್ರದಲ್ಲೇ ಬಿಯರ್ ಕೊರತೆ

• ಉದಯವಾಹಿನಿ, ಬೆಂಗಳೂರು

ನೀರಿನ ಬಿಕ್ಕಟ್ಟಿನ ಮಧ್ಯೆ, ಬೆಂಗಳೂರು ಮತ್ತೊಂದು ಬಿಕ್ಕಟ್ಟಿಗೆ ಸಾಕ್ಷಿಯಾಗುವ ಸಾಧ್ಯತೆಯಿದೆ. ನಗರದ ಪಬ್‌ಗಳು ಮತ್ತು ಬ್ರೂವರಿಗಳು ಗ್ರಾಹಕರಿಂದ ಹೆಚ್ಚುತ್ತಿರುವ ಬೇಡಿಕೆಯನ್ನು ಉಳಿಸಿಕೊಳ್ಳಲು ಹೆಣಗಾಡುತ್ತಿವೆ ಎಂದು ನಗರದ ಪಬ್‌ಗಳು ಬ್ರೂವರಿಗಳು ತಿಳಿಸಿವೆ. ಇತ್ತೀಚಿನ ತಿಂಗಳುಗಳಲ್ಲಿ ಬಿಯರ್‌ಗಳ ಮಾರಾಟವು ಹೆಚ್ಚುತ್ತಿದ್ದರೂ, ನಿರಂತರ ಅತಿಯಾದ ಉತ್ಪಾದನೆಯಿದ್ದರೂ ಬಿಯರ್ ಕೊರತೆ ಯಾಗಿದೆ. ಇದರಮದ ಚಿಲ್ಲರೆ ಅಂಗಡಿಗಳಿಗೆ ದಾಸ್ತಾನುಗಳನ್ನು ಮರು ದಾಸ್ತಾನು ಮಾಡುವಲ್ಲಿ ವಿಳಂಬಕ್ಕೆ ಕಾರಣವಾಗಿದೆ. ಈ ಬೆಳವಣಿಗೆಗಳ ಹಿನ್ನೆಲೆಯಲ್ಲಿ, ನಗರದ ಹಲವಾರು ಪಬ್‌ಗಳು ಬ್ರೂವರಿಗಳು ವಾರಾಂತ್ಯದ ಕೊಡುಗೆಗಳನ್ನು ನಿಲ್ಲಿಸಲು ಯೋಜಿ ಸುತ್ತಿವೆ, ಉದಾಹರಣೆಗೆ 2 ಗೆಟ್ 1 ಮತ್ತು 1 ಗೆಟ್ 1 ಅನ್ನು ಆಫರ್ ನಿಲ್ಲಿಸಿವೆ.

**ವರದಿಯ ಪ್ರಕಾರ, ಮಾರತ್ತಹಳ್ಳಿಯ ಪ್ರಮುಖ ಬ್ರೂವರಿಗಳ ಪ್ರತಿನಿಧಿಯೊಬ್ಬರು ಈ ವರ್ಷ ಪೂರೈಕೆ ಮತ್ತು ಬಳಕೆ ನಿರೀಕ್ಷೆಗಳನ್ನು ಮೀರಿದೆ, ಇದಕ್ಕಾಗಿ ಪೂರೈಕೆ ಸಾಧ್ಯವಿಲ್ಲ ಎಂದು ಹೇಳಿದರು. ಬೇಸಿಗೆಯಲ್ಲಿ, ಬ್ರೂವರಿಗಳು ಹಣ್ಣು-ಪರಿಮಳದ ಬಿಯರ್ ಅನ್ನು ಪರಿಚಯಿಸುತ್ತವೆ, ಮಾರಾಟವು ಭಾರಿ ಪ್ರಮಾಣದಲ್ಲಿ ಕುಸಿಯುತ್ತದೆ ಎಂದು ಅವರು ಹೇಳಿದ್ದಾರೆ.**

ಬೆಂಗಳೂರು ನಗರದಲ್ಲಿ ಬಿಯರ್ ಕೊರತೆ ಏಕೆ? ಬೆಂಗಳೂರಿನಲ್ಲಿ ಬಿಯರ್ ಕೊರತೆಗೆ ಮುಖ್ಯ ಕಾರಣ ಬೇಸಿಗೆಯ ಕಾರಣದಿಂದಾಗಿ ಬೇಡಿಕೆಯ ಹೆಚ್ಚಳವಾಗಿದೆ .

## ಟ್ರಾಫಿಕ್ ಜಾಮ್, ಸುಗಮ ಸಂಚಾರಕ್ಕೆ ಸಲಹೆ ನೀಡಿದ ಪೊಲೀಸರು

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಪೊಲೀಸರು ಸಂಚಾರ ಸಲಹೆ

ಲೋಕಸಭಾ ಚುನಾವಣೆ 2024 ರ ಮೂರನೇ ಹಂತದ ಕಾರಣ ಮೇ 6 ಮತ್ತು 7 ರಂದು ಮೆಟ್ರೋಪಾಲಿಟನ್ ಪ್ರದೇಶದ ಹಲವಾರು ಸ್ಥಳಗಳಲ್ಲಿ ಟ್ರಾಫಿಕ್ ಜಾಮ್ ಉಂಟಾಗಬಹುದು ಎಂದು ಬೆಂಗಳೂರು ಸಂಚಾರ ಪೊಲೀಸರು ಸಂಚಾರ ಸಲಹೆ ನೀಡಿದ್ದಾರೆ. ಮಂಗಳವಾರ ಹೆಚ್ಚಿನ ಸಂಖ್ಯೆಯ ಜನರು ಮತ ಚಲಾಯಿಸಲು ತಮ್ಮ ಊರುಗಳಿಗೆ ಹೋಗುತ್ತಿರುವುದರಿಂದ ಮೆಜೆಸ್ಟಿಕ್ ಸುತ್ತಲೂ ಸಂಚಾರ ದಟ್ಟಣೆ ಉಂಟಾಗುವ ಸಾಧ್ಯತೆಯಿದೆ ಎಂದು ಸಂಚಾರ ಸಲಹೆಗಾರ ಹೇಳಿದ್ದಾರೆ. ಮೇ 7 ರಂದು ಕರ್ನಾಟಕದ 14 ಲೋಕಸಭಾ ಕ್ಷೇತ್ರಗಳಲ್ಲಿ ಮತದಾನ ನಡೆಯಲಿದ್ದು, ಉತ್ತರ ಮತ್ತು ಮಧ್ಯ ಕರ್ನಾಟಕದ ಅನೇಕ ಜನರು ಸೋಮವಾರ ಬೆಂಗಳೂರಿನಿಂದ ಹೊರಡುವ ಸಾಧ್ಯತೆಯಿದೆ. ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ (ಕೆಎಸ್‌ಆರ್‌ಟಿಸಿ) ಮೆಜೆಸ್ಟಿಕ್ / ಕೆಂಪೇಗೌಡ ಬಸ್ ನಿಲ್ದಾಣದಿಂದ ಜನರು ತಮ್ಮ ಊರುಗಳಿಗೆ ತೆರಳಲು ಹೆಚ್ಚುವರಿ ಬಸ್‌ಗಳನ್ನು ಘೋಷಿಸಿದೆ. ಮೆಜೆಸ್ಟಿಕ್ ಬಳಿ ಸಂಚಾರ ದಟ್ಟಣೆಯನ್ನು ತಪ್ಪಿಸಲು ಬೆಂಗಳೂರು ಸಂಚಾರ ಪೊಲೀಸರು ಮೇ 7 ರಂದು ಪ್ರಯಾಣಿಕರಿಗೆ ಪರ್ಯಾಯ ಮಾರ್ಗಗಳನ್ನು ತೆಗೆದುಕೊಳ್ಳುವಂತೆ ಸಲಹೆ ನೀಡಿದ್ದಾರೆ.

2ನೇ ಹಂತದ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಹೆಚ್ಚಿನ ಸಂಖ್ಯೆಯ ಜನರು ತಮ್ಮ ಊರುಗಳಿಗೆ ತೆರಳುತ್ತಿದ್ದು, ಮೆಜೆಸ್ಟಿಕ್/ ಕೆಂಪೇಗೌಡ ಬಸ್ ನಿಲ್ದಾಣದಿಂದ ಕೆಎಸ್‌ಆರ್‌ಟಿಸಿ ಹೆಚ್ಚುವರಿ ಬಸ್‌ಗಳನ್ನು ಬಿಟ್ಟಿದೆ. ಸಂಚಾರ ದಟ್ಟಣೆಯ ಸಾಧ್ಯತೆ ಇದೆ ಎಂದು ಸಂಚಾರ ಸಲಹೆಗಾರ ಹೇಳಿದರು.

## ಹಾಸನ ಅಶ್ಲೀಲ ವಿಡಿಯೋ ಶೇರ್ ಮಾಡಿದ್ರೆ ಶಿಕ್ಷಾರ್ಹ ಅಪರಾಧ

• ಉದಯವಾಹಿನಿ, ಬೆಂಗಳೂರು

ಹಾಸನದ ಲೈಂಗಿಕ ದೌರ್ಜನ್ಯ ಪ್ರಕರಣ ಸಂಬಂಧ ಯಾವುದೇ ವಿಡಿಯೋಗಳನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡರೆ ಮಾಹಿತಿ ತಂತ್ರಜ್ಞಾನ ಕಾಯ್ದೆಯಡಿ ಶಿಕ್ಷಾರ್ಹ ಅಪರಾಧವಾಗುತ್ತದೆ ಎಂದು ಎಸ್ ಐಟಿ ಅಧಿಕಾರಿಗಳು ತಿಳಿಸಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಹಾಸನದ ಅಶ್ಲೀಲ ವಿಡಿಯೋ ಹಂಚಿಕೊಂಡರೆ ಮಾಹಿತಿ ತಂತ್ರಜ್ಞಾನ ಕಾಯ್ದೆಯಡಿ ಶಿಕ್ಷಾರ್ಹ ಅಪರಾಧವಾಗುತ್ತದೆ. ಮತ್ತು ಅವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಾಗುವುದು ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಯಾವುದೇ ಸಂತ್ರಸ್ತರ ಗುರುತನ್ನು ಬಹಿರಂಗಪಡಿಸುವ ಕೆಲಸವನ್ನು ಮಾಧ್ಯಮ ಸಂಸ್ಥೆಗಳು, ವ್ಯಕ್ತಿಗಳು ಅಥವಾ ಸಂಘ ಸಂಸ್ಥೆಗಳು ಅಥವಾ ಇನ್ಯಾರೇ ಆದರೂ ಮಾಡದಂತೆ ಸೂಚಿಸಲಾಗಿದೆ.

ಹಾಸನದ ಲೈಂಗಿಕ ಹಿಂಸೆ ಮತ್ತು ಶೋಷಣೆಯ ಪ್ರಕರಣದ ಹಿನ್ನೆಲೆಯಲ್ಲಿ ಈ ಪ್ರಕಟಣೆಯನ್ನು ಹೊರಡಿಸಲಾಗುತ್ತಿದೆ.

• **ಸದರಿ ಪ್ರಕರಣದ ಯಾವುದೇ ಸಂತ್ರಸ್ತ ವ್ಯಕ್ತಿಯು ಈಗಾಗಲೇ ಆರಂಭಿಸಲಾಗಿರುವ ನಮ್ಮ ಹೆಲ್ಪ್ ಲೈನ್ 6360938947 ಈ ನಂಬರ್ ಅನ್ನು ಬೆಳಿಗ್ಗೆ 8ರಿಂದ ರಾತ್ರಿ 8ರ ನಡುವೆ ಯಾವಾಗ ಬೇಕಾದರೂ ಸಂಪರ್ಕಿಸಬಹುದಾಗಿದೆ. ಈ ನಂಬರಿಗೆ ಕರೆ ಮಾಡುವ ಯಾವುದೇ ವ್ಯಕ್ತಿಯ ಗುರುತನ್ನು ಗೌಪ್ಯವಾಗಿಡಲಾಗುವುದು. ಅವರು ಎಸ್ ಐ ಟಿ ಕಚೇರಿಗೆ ಬರುವ ಅಗತ್ಯವೂ ಇಲ್ಲ. ಸಂತ್ರಸ್ತರಿಗೆ ಅಗತ್ಯವಿರುವ ನೆರವನ್ನು ಒದಗಿಸಲಾಗುವುದು.**

• **3.ಯಾವುದೇ ಸಂತ್ರಸ್ತರ ಗುರುತನ್ನು ಬಹಿರಂಗಪಡಿಸುವ ಕೆಲಸವನ್ನು ಮಾಧ್ಯಮ ಸಂಸ್ಥೆಗಳು, ವ್ಯಕ್ತಿಗಳು ಅಥವಾ ಸಂಘ ಸಂಸ್ಥೆಗಳು ಅಥವಾ ಇನ್ಯಾರೇ ಆದರೂ ಮಾಡಬಾರದೆಂದು ಈ ಮೂಲಕ ಸೂಚಿಸಲಾಗುತ್ತಿದೆ. ಈ ವಿಚಾರದಲ್ಲಿ ಅಗತ್ಯ ಕಂಡುಬಂದರೆ ಕಾನೂನು ಕ್ರಮ ಜರುಗಿಸಲಾಗುವುದು.**



• **ಯಾವುದೇ ಲೈಂಗಿಕ ಹಿಂಸೆ ಅಥವಾ ಅತ್ಯಾಚಾರ ಪ್ರಕರಣಗಳಲ್ಲಿ ನಾಚಿಕೆ ಪಟ್ಟುಕೊಳ್ಳಬೇಕಾದ್ದು, ಹಿಂಜರಿಯಬೇಕಾದ್ದು, ಅವಮಾನ ಎಂದು ಭಾವಿಸಬೇಕಾದ್ದು ಅಂತಹ ಪ್ರಕರಣಗಳಲ್ಲಿ ಅಪರಾಧವೆಸಗಿದ ವ್ಯಕ್ತಿಯೇ ಹೊರತು, ಶೋಷಣೆಗೆ ಒಳಗಾದ ವ್ಯಕ್ತಿ ಅಲ್ಲ ಎಂಬುದನ್ನು ಅರಿಯಬೇಕು ಮತ್ತು ಸೂಕ್ತ ಸಂವೇದನೆಯಿಂದ ಪ್ರವರ್ತಿಸುವುದು ಸಮಾಜದ ಆರೋಗ್ಯದ ದೃಷ್ಟಿಯಿಂದ ಬಹಳ ಮುಖ್ಯ. ಈ ವಿಚಾರದಲ್ಲಿ ಎಸ್ ಐ ಟಿಯು ಅತ್ಯಂತ ಹೆಚ್ಚಿನ ಸಂವೇದನೆಯಿಂದ**

**ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಯಾವುದೇ ವಿಡಿಯೋಗಳನ್ನು ಯಾರೇ ಆಗಲಿ ಸಾಮಾಜಿಕ ಜಾಲತಾಣಗಳಲ್ಲಿ (ವಾಟ್ಸಾಪಿನಂತಹ ಮೆಸೆಂಜರ್ ಆಪ್ ಮೂಲಕವೂ ಸೇರಿ) ಹಂಚುವುದು ಮಾಹಿತಿ ತಂತ್ರಜ್ಞಾನ ಕಾಯಿದೆ ಕಲಂ 67(ಎ) ಐಟಿ ಆಕ್ಟ್ ಹಾಗೂ ಕಲಂ 228ಎ(1), 292 ಐಪಿಸಿ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವಾಗಿದೆ. ಖಾಸಗಿ ಮೆಸೇಜಿಂಗ್ ಆಪ್‌ಗಳ ಮುಖಾಂತರ ಹಂಚುವುದನ್ನೂ ಪತ್ತೆ ಹಚ್ಚುವುದು ಸಾಧ್ಯವಿದ್ದು, ಅಂಥದ್ದರ ವಿರುದ್ಧ ಕ್ರಮ ತೆಗೆದುಕೊಳ್ಳಲಾಗುವುದು. ಇದು ಸಂಬಂಧಿಸಿದ ಬಲಿಪಶು ಮಹಿಳೆಯರ ಘನತೆ ಹಾಗೂ ಗೌಪ್ಯತೆಗೆ ಕುಂದುಂಟು ಮಾಡುವುದಾಗಿದ್ದು, ಅದನ್ನು ಗಂಭೀರವಾಗಿ ಪರಿಗಣಿಸಲಾಗುವುದು.**

**ನಡೆದುಕೊಳ್ಳಲಿದೆ. ಈಗಾಗಲೇ ಇದಕ್ಕೆ ಅಗತ್ಯವಿರುವ ವೃತ್ತಿಪರ ಕೌನ್ಸೆಲರುಗಳು, ವೈದ್ಯರುಗಳು, ಇಂತಹ ಕಾರ್ಯದಲ್ಲಿ ಅನುಭವವಿರುವ ಸಂಸ್ಥೆಗಳ ನೆರವನ್ನು ಎಸ್ ಐ ಟಿ ಪಡೆದುಕೊಂಡಿದೆ. ಸಾರ್ವಜನಿಕರೂ ಈ ವಿಚಾರದಲ್ಲಿ ಸ್ಪಂದಿಸುವುದು ಅಗತ್ಯ ಎಂದು ತಿಳಿಸಿದೆ.**

## ಯುವಜೋಡಿಗಳ ಮುದ್ದಾಟಕ್ಕೆ ಪ್ರಯಾಣಿಕರ ಆಕ್ರೋಶ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಬೆಂಗಳೂರಿನ ಮೆಟ್ರೋದಲ್ಲಿ ಆಗಾಗ ಕೆಲವು ಘಟನೆಗಳು ಪ್ರಯಾಣಿಕರಿಗೆ ಮುಜುಗರ ಉಂಟು ಮಾಡುತ್ತಿರುತ್ತವೆ. ಇದೀಗ ಮೆಟ್ರೋದಲ್ಲಿ ಮತ್ತೊಂದು ಘಟನೆ ನಡೆದಿದ್ದು, ಯುವ ಜೋಡಿಗಳು ತಬ್ಬಿಕೊಂಡು ಮುದ್ದಾಡಿರುವ ಘಟನೆ ನಡೆದಿದೆ. ಈ ದೃಶ್ಯವನ್ನು ಮೆಟ್ರೋದ ಸಹ ಪ್ರಯಾಣಿಕರು ಮೊಬೈಲ್‌ನಲ್ಲಿ ಸೆರೆ ಹಿಡಿದು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ.

ಬೆಂಗಳೂರು ಮೆಟ್ರೋ ಕೂಡ, ದೆಹಲಿ ಮೆಟ್ರೋದಂತೆ ಅಸಹ್ಯಕರ ಘಟನೆಗಳಿಗೆ ಸಾಕ್ಷಿ ಆಗುತ್ತಿದೆಯೇ ಎಂದು ಆಕ್ರೋಶ ಹೊರ ಹಾಕಿದ್ದಾರೆ. ಯುವ ಜೋಡಿಯೊಂದು ಮೆಟ್ರೋ ರೈಲಿನಲ್ಲಿ ನಿಂತುಕೊಂಡಾಗ ಪರಸ್ಪರ ತಬ್ಬಿಕೊಂಡು ನಿಂತಿದ್ದಾರೆ. ಇದನ್ನು ನೋಡಿದ ಕೆಲವರು, ಚಿಕ್ಕ ಮಕ್ಕಳು ನೋಡಿದರೆ ಇದನ್ನು ಅನುಕರಿಸುವುದಿಲ್ಲವೇ ಎಂದು ಅಸಹ್ಯದಿಂದ ಬೇಸರಿಸಿಕೊಂಡಿದ್ದಾರೆ.

ಸಾರ್ವಜನಿಕ ಸಾರಿಗೆಯಾದ ಮೆಟ್ರೋದಲ್ಲಿ ತಬ್ಬಿಕೊಂಡು ನಿಂತರೂ ಯಾರೂ ಪ್ರಶ್ನೆ ಮಾಡದ ಹಿನ್ನೆಲೆಯಲ್ಲಿ ಯುವ ಜೋಡಿ ತಮ್ಮ ಆಪ್ತತೆಯನ್ನು ಮತ್ತಷ್ಟು ಮುಂದುವರೆಸಿದೆ. ಈ ವೇಳೆ ಮೈಮರೆತು ಇಬ್ಬರೂ ಪರಸ್ಪರ ಚುಂಬಿಸಿಕೊಂಡಿದ್ದಾರೆ.

ಈ ಕುರಿತಂತೆ ಟ್ವಿಟರ್‌ನಲ್ಲಿ ಸ್ಯಾಮ್ ಎನ್ನುವ ವ್ಯಕ್ತಿಯೊಬ್ಬರು ಕೆಪಿಎಸ್‌ಬಿ52 ಎಂಬ ಹೆಸರಿನ ಖಾತೆಯಿಂದ ವಿಡಿಯೋ ಪೋಸ್ಟ್ ಹಂಚಿಕೊಂಡಿದ್ದು,ಬೆಂಗಳೂರು ಮೆಟ್ರೋ ರೈಲು ಕಾರ್ಪೊರೇಷನ್ ಲಿಮಿಟೆಡ್ ನಮ್ಮ ಮೆಟ್ರೋ, ಮತ್ತು ಬೆಂಗಳೂರು ಸಿಟಿ ಪೊಲೀಸ್‌ಗೆ ಟ್ಯಾಗ್ ಮಾಡಿದ್ದಾರೆ. ನಮ್ಮ ಮೆಟ್ರೋದಲ್ಲಿ ಏನಾಗುತ್ತಿದೆ ಬೆಂಗಳೂರು ಮೆಟ್ರೋ ನಿಧಾನವಾಗಿ ದೆಹಲಿ ಮೆಟ್ರೋ ಆಗಿ ಬದಲಾಗುತ್ತಿದೆ.ಅವರ ಮೇಲೆ ಸ್ವಲ್ಪ ಕ್ರಮ ಕೈಗೊಳ್ಳಿ. ಹುಡುಗಿ ಅಕ್ಷರಶಃ ಹುಡುಗನನ್ನು ಚುಂಬಿಸುತ್ತಿದ್ದಳು ಎಂದು ಬರೆದುಕೊಂಡಿದ್ದಾರೆ.

## ಎಸ್‌ಎಸ್‌ಎಲ್‌ಸಿ ರಿಸಲ್ಟ್ ಈ ದಿನ ಫಲಿತಾಂಶ ಪ್ರಕಟ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಎಸ್ ಎಸ್ ಎಲ್ ಸಿ ಪರೀಕ್ಷೆ ಫಲಿತಾಂಶದ ಕುರಿತು ಪರೀಕ್ಷಾ ಮಂಡಳಿ ಹೊಸ ಅಪ್ ಡೇಟ್ ನೀಡಿದ್ದು, ಫಲಿತಾಂಶ ಮೇ. 9 ಅಥವಾ 10 ರಂದು ಪ್ರಕಟವಾಗುವ ಸಾಧ್ಯತೆ ಇದೆ ಎಂದು ತಿಳಿಸಿದೆ. ರಾಜ್ಯದಲ್ಲಿ ಎರಡನೇ ಹಂತದ ಲೋಕಸಭೆ ಚುನಾವಣೆಗೆ ಮತದಾನ ಹಿನ್ನೆಲೆಯಲ್ಲಿ ಎಸ್ ಎಸ್ ಎಲ್ ಸಿ ಫಲಿತಾಂಶ ವಿಳಂಬವಾಗಿದ್ದು, ಮೇ 9 ಅಥವಾ 10 ರಂದು ಪ್ರಕಟವಾಗಲಿದೆ ಎಂದು ಮೂಲಗಳು ತಿಳಿಸಿವೆ. 2024ನೇ ಸಾಲಿನ ಎಸ್ ಎಸ್ ಎಲ್ಲಿ ಪರೀಕ್ಷೆಯಲ್ಲಿ ಒಟ್ಟು 8.69 ಲಕ್ಷ ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಣಿ ಮಾಡಿಕೊಂಡಿದ್ದರು. ಇದರಲ್ಲಿ 4.41 ಲಕ್ಷ ಬಾಲಕರು 4.28 ಲಕ್ಷ ಬಾಲಕಿಯರು. ಸಾಮಾನ್ಯ ವಿದ್ಯಾರ್ಥಿಗಳ ಜೊತೆಯಲ್ಲಿ 18,225 ಖಾಸಗಿ ವಿದ್ಯಾರ್ಥಿಗಳು 41,375 ಮರು ಪರೀಕ್ಷೆ ಬರೆದಿದ್ದ ವಿದ್ಯಾರ್ಥಿಗಳು ಕೂಡ ಸೇರಿದ್ದಾರೆ.

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತೀರ್ಣ ಪ್ರಮಾಣದಲ್ಲಿ ವರ್ಷದಿಂದ ವರ್ಷಕ್ಕೆ ದಾಖಲೆ ಬರೆಯುತ್ತಿದ್ದ ಫಲಿತಾಂಶವು ಈ ಬಾರಿ ಕುಸಿತ ಕಾಣುವ ಸಾಧ್ಯತೆ ಇದೆ. ಎಲ್ಲಾ ಪರೀಕ್ಷಾ ಕೇಂದ್ರಗಳು, ಕೊಠಡಿಗಳಲ್ಲಿ ಸಿಸಿ ಕ್ಯಾಮೆರಾಗಳ ಅಳವಡಿಸುವುದರಿಂದ ರಾಜ್ಯದ ಎಲ್ಲೆಡೆ ಪರೀಕ್ಷೆ ಕಟ್ಟುನಿಟ್ಟಾಗಿ ನಡೆದಿದೆ. ಹೀಗಾಗಿ ಫಲಿತಾಂಶ ಶೇ. 60ಕ್ಕೆ ಕುಸಿಯಬಹುದು ಎನ್ನಲಾಗಿದೆ.

# ಗ್ರಾಮ ಆಡಳಿತ ಅಧಿಕಾರಿ ನೇಮಕಾತಿ; 1 ಸಾವಿರ ಹುದ್ದೆಗೆ 9 ಲಕ್ಷ ಅರ್ಜಿ!

■ ಅಭ್ಯರ್ಥಿಗಳ ಬೇಡಿಕೆಯಂತೆ ಅರ್ಜಿ ಸಲ್ಲಿಕೆ,ಮೇ 15ರ ತನಕ ವಿಸ್ತರಣೆ, ಕೆಇಎ ಮೂಲಕ ನೇಮಕ ಮಾಡುವ ಪ್ರಕ್ರಿಯೆ ಆರಂಭ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಅಧಿಸೂಚನೆ ಒಟ್ಟು ಹುದ್ದೆ

ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) 1,000 ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳಿಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಅಭ್ಯರ್ಥಿಗಳ ಬೇಡಿಕೆಯಂತೆ ಅರ್ಜಿ ಸಲ್ಲಿಕೆ ದಿನಾಂಕವನ್ನು ಮೇ 15ರ ತನಕ ವಿಸ್ತರಣೆ ಮಾಡಲಾಗಿದೆ.

ಕಂದಾಯ ಇಲಾಖೆ ಉಳಿಕೆ ಮೂಲ ವೃಂದ ಮತ್ತು ಕಲ್ಯಾಣ ಕರ್ನಾಟಕ (ಸ್ಥಳೀಯ) ವೃಂದದಲ್ಲಿರುವ ಒಟ್ಟು 1000 ಗ್ರಾಮ ಆಡಳಿತಾಧಿಕಾರಿ ಹುದ್ದೆಗಳನ್ನು ಕೆಇಎ ಮೂಲಕ ನೇಮಕ ಮಾಡುವ ಪ್ರಕ್ರಿಯೆ ಆರಂಭಿಸಲಾಗಿದೆ.

ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ನೇಮಕಾತಿ ಅಧಿಸೂಚನೆ ಪ್ರಕಾರ ಒಟ್ಟು ಹುದ್ದೆಗಳ ಸಂಖ್ಯೆ 1000. ಆಯ್ಕೆಯಾದ ಅಭ್ಯರ್ಥಿಗಳಿಗೆ 21,400-42,000 ರೂ. ವೇತನ ನಿಗದಿ ಮಾಡಲಾಗಿದೆ. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಕೆ ಮಾಡಲು ಮೇ 15ರ ತನಕ ಅವಕಾಶವಿದೆ.

9 ಲಕ್ಷ ಅರ್ಜಿಗಳು: ಈ ಮೊದಲು ಅರ್ಜಿ ಸಲ್ಲಿಕೆ ಮಾಡಲು ಮೇ 4 ಕೊನೆಯ ದಿನವಾಗಿತ್ತು. ಆದರೆ ಅಭ್ಯರ್ಥಿಗಳ ಬೇಡಿಕೆ, ಕೆಲವು ತಾಂತ್ರಿಕ ತೊಂದರೆಗಳ ಕಾರಣ ಅರ್ಜಿ ಸಲ್ಲಿಸಲು ಮೇ 15 ಮತ್ತು ಶುಲ್ಕ ಪಾವತಿ ಮಾಡಲು ಮೇ 18ರ ತನಕ ಅವಕಾಶ ನೀಡಲಾಗಿದೆ. ಆನ್‌ಲೈನ್ ಮೂಲಕ ಮಾತ್ರ ಅರ್ಜಿಗಳನ್ನು ಸಲ್ಲಿಕೆ ಮಾಡಬೇಕಿದೆ. ಸದ್ಯದ ಮಾಹಿತಿ ಪ್ರಕಾರ 1 ಸಾವಿರ ಖಾಲಿ ಹುದ್ದೆಗಳಿಗೆ 9 ಲಕ್ಷ ಅರ್ಜಿಗಳು ಸಲ್ಲಿಕೆಯಾಗಿವೆ.

ಇನ್ನೂ ಸಹ ಅರ್ಜಿ ಸಲ್ಲಿಕೆಗೆ ಅವಕಾಶವಿದ್ದು, ಈ ಸಂಖ್ಯೆ ಇನ್ನಷ್ಟು ಹೆಚ್ಚಾಗಲಿದೆ. 9 ಲಕ್ಷ ಅರ್ಜಿಗಳಲ್ಲಿ 4 ಲಕ್ಷ ಜನರು ಮಾತ್ರ ಶುಲ್ಕ ಪಾವತಿ ಮಾಡಿದ್ದಾರೆ. ಅರ್ಜಿ ಸಲ್ಲಿಸಿದವರು ಶುಲ್ಕ ಪಾವತಿ ಮಾಡುವುದು ಕಡ್ಡಾಯ. ಇಲ್ಲವಾದಲ್ಲಿ ಅರ್ಜಿ ತಿರಸ್ಕಾರವಾಗಲಿದೆ ಎಂದು ನೇಮಕಾತಿ ಅಧಿಸೂಚನೆ ಹೇಳಿದೆ. ಗ್ರಾಮ ಆಡಳಿತ ಅಧಿಕಾರಿ ಹುದ್ದೆ ಕಂದಾಯ ಇಲಾಖೆ ವ್ಯಾಪ್ತಿಗೆ ಬರುತ್ತದೆ. ಈ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ದ್ವಿತೀಯ ಪಿಯುಸಿ ಅಥವಾ

**ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ಅರ್ಜಿ ಸಲ್ಲಿಕೆ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಕನಿಷ್ಠ 18 ವರ್ಷ ತುಂಬಿರತಕ್ಕದ್ದು. ಗರಿಷ್ಠ ವಯೋಮಿತಿ ಸಾಮಾನ್ಯ ವರ್ಗಕ್ಕೆ 35 ವರ್ಷ, ಪ್ರವರ್ಗ 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳಿಗೆ 38 ವರ್ಷ, ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ/ ಪ್ರವರ್ಗ-1ರ ಅಭ್ಯರ್ಥಿಗಳಿಗೆ 40 ವರ್ಷ ಎಂದು ನಿಗದಿ ಮಾಡಲಾಗಿದೆ.**

ತತ್ಸಮಾನ ವಿದ್ಯಾರ್ಹತೆ ನಿಗದಿ ಮಾಡಲಾಗಿದೆ. ಆದ್ದರಿಂದ ಹೆಚ್ಚಿನ ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಕೆ ಮಾಡಿರುವ ನಿರೀಕ್ಷೆ ಇದೆ. ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 81 ಸೇವನೆ 2017, ದಿನಾಂಕ 27/02/2018ರನ್ವಯ ಈ ವಿದ್ಯಾರ್ಹತೆಗಳನ್ನು ತತ್ಸಮಾನವೆಂದು ಪರಿಗಣಿಸಲಾಗುತ್ತದೆ ಎಂದು ನೇಮಕಾತಿ ಅಧಿಸೂಚನೆಯಲ್ಲಿ ತಿಳಿಸಲಾಗಿದೆ. ಈ ಹುದ್ದೆಗೆ ಅರ್ಜಿ ಸಲ್ಲಿಸಲು ಸಿಬಿಎಸ್‌ಸಿ ಮತ್ತು ಐಸಿಎಸ್‌ಸಿ ಮಂಡಳಿಯು ನಡೆಸುವ ಕ್ಲಾಸ್ 12 ಪರೀಕ್ಷೆ, ಇತರ ರಾಜ್ಯ ಸರ್ಕಾರದ ಪರೀಕ್ಷಾ ಮಂಡಳಿಗಳಿಂದ ನಡೆಸುವ ಕ್ಲಾಸ್ 12 ಪರೀಕ್ಷೆ, ನ್ಯಾಷನಲ್ ಇನ್ಸಿಟ್ಯೂಟ್ ಆಫ್ ಓಪನ್ ಸ್ಕೂಲಿಂಗ್

**ಅಲ್ಲದೇ ಅಭ್ಯರ್ಥಿಗಳು ಎನ್‌ಐಓಎಸ್ ವತಿಯಿಂದ ನಡೆಸುವ ಒಂದು ಭಾಷಾ ಕೋರ್ಸ್ ಮತ್ತು ಒಂದು ಶೈಕ್ಷಣಿಕ ವಿಷಯದಲ್ಲಿ (ದೂರಕಲಿಕೆ ಮಾದರಿಯಲ್ಲಿ) ಅಥವಾ ಪದವಿ ಪೂರ್ವ ಮಂಡಳಿಯು ನಡೆಸುವ ಪರೀಕ್ಷೆಯಲ್ಲಿ ಒಂದು ಭಾಷೆ ಮತ್ತು ಒಂದು ವಿಷಯದಲ್ಲಿ ಉತ್ತೀರ್ಣರಾದಲ್ಲಿ ಮಾತ್ರ ಪಿಯುಸಿ ಗೆ ತತ್ಸಮಾನವೆಂದು ಪರಿಗಣಿಸಬಹುದು.) ಎಂದು ನೇಮಕಾತಿ ಅಧಿಸೂಚನೆ ಹೇಳಿದೆ.**

(ಎನ್‌ಐಓಎಸ್) ವತಿಯಿಂದ ನಡೆಸುವ ಉನ್ನತ ಪ್ರೌಢ ಶಿಕ್ಷಣ ಕೋರ್ಸ್/ ಹೆಚ್.ಎಸ್.ಸಿ., ಮೂರು ವರ್ಷಗಳ ಡಿಪ್ಲೋಮಾ ಅಥವಾ ಎರಡು ವರ್ಷಗಳ ಐಟಿಐ ಕೋರ್ಸ್ ಅಥವಾ ಎರಡು ವರ್ಷಗಳ ವೃತ್ತಿ ಶಿಕ್ಷಣ ಡಿಪ್ಲೋಮಾ (ಜೆ.ಓ.ಸಿ/ ಜೆ.ಓ.ಡಿ.ಸಿ/ ಜೆ.ಎಲ್.ಡಿ.ಸಿ).

ಅರ್ಜಿ ಸಲ್ಲಿಕೆ ಮಾಡಲು ಇನ್ನೂ ಸಹ ಅವಕಾಶವಿದೆ. ಆಸಕ್ತರು ಆಸಕ್ತರು https://kea.kar.nic.in ನಲ್ಲಿ ತೋರಿಸುವ ಲಿಂಕ್ ಅನ್ನು ಆಯ್ಕೆ ಮಾಡಿ ಅರ್ಜಿಯನ್ನು ಭರ್ತಿ ಮಾಡಬೇಕು.

# ಮೇವು ಇಲ್ಲದೆ ಜಾನುವಾರು ತತ್ತರ

## ಬರದ ಬಿಸಿ, ಕೈ ಹಿಡಿದ ಹೈನುಗಾರಿಕೆ, ಜಾನುವಾರುಗಳಿಗೆ ನೀರು, ಮೇವು ಒದಗಿಸುವುದೇ ಸವಾಲ

• **ಉದಯವಾಹಿನಿ, ಗುಡಿಬಂಡೆ**

ಬರಗಾಲದಿಂದಾಗಿ ಜನ ಜಾನುವಾರು, ಪ್ರಾಣಿಪಕ್ಷಿಗಳಿಗೆ ಆಹಾರ, ಮೇವಿನ ಕೊರತೆ ಎದುರಾಗಿದೆ.

ಅರಣ್ಯ ಇಲಾಖೆ ಎಲ್ಲೋಡು, ಬೀಚಗಾನಹಳ್ಳಿಯಲ್ಲಿ ನೀರಿನ ತೊಟ್ಟಿಗಳನ್ನು ನಿರ್ಮಿಸಿ ನೀರು ಒದಗಿಸುವ ಕೆಲಸ ಮಾಡುತ್ತಿದೆ. ಪಟ್ಟಣ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಬಿಸಿಲಿನ ಝಳ ಮುಂದುವರಿದಿದೆ.

ಬರ ಹೊಡೆತಕ್ಕೆ ರೈತರು ತತ್ತರಿಸಿದ್ದಾರೆ. ಇಂತಹ ಸಂದಿಗ್ಧ ಪರಿಸ್ಥಿತಿಯಲ್ಲೂ ಕೈ ಹಿಡಿಯುತ್ತಿದ್ದ ಹೈನುಗಾರಿಕೆಗೂ ಬರದ ಬಿಸಿ ತಟ್ಟಿದೆ. ಜಾನುವಾರುಗಳಿಗೆ ನೀರು, ಮೇವು ಒದಗಿಸುವುದೇ ಸವಾಲಾಗಿ ಪರಿಣಮಿಸಿದೆ.

ಮಳೆ ಅಭಾವದಿಂದ ಬಯಲು ಪ್ರದೇಶದಲ್ಲಿ ಹಸಿರು ಮಾಯವಾಗಿದೆ. ಗಿಡ-ಮರ, ಹುಲ್ಲು ಒಣಗಿ ಗುಡ್ಡಗಾಡು ಪ್ರದೇಶ ಬಣಗುಡುತ್ತಿದೆ. ಬೆಟ್ಟಗಳಲ್ಲಿ ನೀರು ಆಹಾರ ನೆರಳಿನ ಆಶ್ರಯಕ್ಕಾಗಿ ಜಾನುವಾರು ಪರದಾಡುವಂತಾಗಿದೆ. ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಅಗತ್ಯ ಇರುವ ಕಡೆ ಜಾನುವಾರು ಕುಡಿಯುವ ನೀರಿಗಾಗಿ ನಿರ್ಮಿಸಿರುವ ತೊಟ್ಟಿಗಳ ನಿರ್ವಹಣೆ ಮಾಡುವವರು ಇಲ್ಲವಾಗಿದ್ದಾರೆ. ತಾಲ್ಲೂಕಿನ ಬಹುತೇಕ ಕೆರೆ, ಕುಂಟೆ ಬರಿದಾಗಿವೆ. ಜಾನುವಾರುಗೆ ನೀರಿನ ಅಭಾವ ಒಂದೆಡೆಯಾದರೆ ಮೇವು ಒದಗಿಸುವ ಸವಾಲು ಎದುರಾಗಿದೆ. ಮೇವು ಕೇಂದ್ರ, ಆರಂಭಕ್ಕೆ ಸಂಬಂಧಿಸಿದಂತೆ ಸರ್ಕಾರಿ ಕಚೇರಿಗಳಿಗೆ ರೈತರು ಅಲೆದಾಡುತ್ತಿದ್ದಾರೆ. ಆದರೆ, ಈ ಕುರಿತು ಕಂದಾಯ ಇಲಾಖೆ, ಪಶು ಪಾಲನಾ ಇಲಾಖೆ ಗಮನಹರಿಸುತ್ತಿಲ್ಲ. ಅನಿವಾರ್ಯವಾಗಿ ರೈತರು ನೆರೆಯ ಜಿಲ್ಲೆಗಳಿಂದ ದುಬಾರಿ ಬೆಲೆಗೆ ಮೇವು ಖರೀದಿಸುತ್ತಿದ್ದಾರೆ.

ಬೇಸಿಗೆ ಮೊದಲೇ ಕಂದಾಯ, ಪಶುಪಾಲನೆ ಹಾಗೂ ಅರಣ್ಯ ಇಲಾಖೆಯಿಂದ ಬೆಟ್ಟಗುಡ್ಡ ಅರಣ್ಯ ಪ್ರದೇಶಗಳಲ್ಲಿ ಪಕ್ಷಿಗಳ ದಾಹ ನೀಗಿಸಲು ಕ್ರಮ ವಹಿಸಲಾಗುತ್ತಿತ್ತು. ಆದರೆ, ಪ್ರಸಕ್ತ ವರ್ಷ ಚುನಾವಣೆ ಕಾರ್ಯದ ಒತ್ತಡದಿಂದ ಈ ಯೋಜನೆ ಅನುಷ್ಠಾನಗೊಂಡಿಲ್ಲ.


ಉದಯವಾಹಿನಿ ಚಿತ್ರ

ತಾಲ್ಲೂಕಿನಲ್ಲಿ 40 ಸಾವಿರಕ್ಕೂ ಅಧಿಕ ಕುರಿ-ಮೇಕೆಗಳಿವೆ. ಗ್ರಾಮೀಣ ಪ್ರದೇಶಗಳಲ್ಲಿ ನೀರಿನ ತೊಟ್ಟಿಗಳ ನೈರ್ಮಲ್ಯ ಕಾಪಾಡಲು ಪಿಡಿಒಗಳಿಗೆ ಪತ್ರ ಬರೆಯಲಾಗುವುದು ಎಂದು ತಾಲ್ಲೂಕು ಪಂಚಾಯಿತಿ ಇ.ಒ ಹೇಮಾವತಿ ಪ್ರತಿಕ್ರಿಯಿಸಿದ್ದಾರೆ. ರೈತರಿಗೆ ವಿವಿಧ ಬಗೆ ಮೇವಿನ ತಳಿ ಬೀಜ ವಿತರಣೆ ಮಾಡಲಾಗಿದೆ. ಸದ್ಯ ತಾಲ್ಲೂಕಿನ ಎರಡು ಕಡೆ ಮೇವು ಕೇಂದ್ರ ಸ್ಥಾಪನೆ ಮಾಡಲು ಸಿದ್ಧತೆ ನಡೆದಿದೆ ಎನ್ನುತ್ತಾರೆ ಗುಡಿಬಂಡೆ ಪಶು ಆಸ್ಪತ್ರೆ ಮುಖ್ಯ ವೈದ್ಯಾಧಿಕಾರಿ ರವಿ. ಅರಣ್ಯ ಇಲಾಖೆ ವತಿಯಿಂದ ಪ್ರಾಣಿ-ಪಕ್ಷಿಗಳಿಗೆ ನೀರು ಒದಗಿಸುವ ಸಲುವಾಗಿ ಎಲ್ಲೋಡು, ಬೀಚಗಾನಹಳ್ಳಿ ಅರಣ್ಯ ಪ್ರದೇಶದಲ್ಲಿ ತಲಾ 12 ಸಾವಿರ ಲೀಟರ್ ಸಾಮರ್ಥ್ಯದ ನೀರು ಶೇಖರಣೆ ಟ್ಯಾಂಕ್ ಹಾಗೂ 25 ನೀರಿನ ತೊಟ್ಟಿಗಳನ್ನು ಅಳವಡಿಸಲಾಗಿದೆ ಎನ್ನುತ್ತಾರೆ ಸಾಮಾಜಿಕ ಅರಣ್ಯ ಇಲಾಖೆ ಆರ್‌ಎಫ್‌ಒ ಪೂರ್ಣಿಕಾ ರಾಣಿ. ತಾಲ್ಲೂಕಿನ ಅರಣ್ಯ ಪ್ರದೇಶದಲ್ಲಿ ಅಳವಡಿಸಿರುವ ನೀರಿನ ತೊಟ್ಟಿ ಬಿಸಿಲಿನ ಧಗೆಯಲ್ಲೂ ಮೇವಿಗಾಗಿ ಪರದಾಡುತ್ತಿರುವ ಕುರಿಗಳು ತಾಲ್ಲೂಕಿನಲ್ಲಿ ಮಳೆಯ ಅಭಾವದಿಂದ ಕಳೆದ ವರ್ಷ ಬೆಳೆಯಾಗದೇ ಜಾನುವಾರುಗಳಿಗೆ ಮೇವು ಕೊರತೆಯಾಗಿದ್ದು ಪಕ್ಕದ ಅಂದ್ರಪ್ರದೇಶದಿಂದ ಟ್ಯಾಕ್ಟರ್‌ನಲ್ಲಿ ಜೋಳದ ಮೇವು ಖರೀದಿ ಮಾಡಿ ತರುತ್ತಿರುವ ರೈತರು. ನಿರ್ವಹಣೆ ಇಲ್ಲದ ನೀರಿನ ತೊಟ್ಟಿಗಳು.

> **ಸರ್ಕಾರ ಗಂಭೀರವಾಗಿ ಪರಿಗಣಿಸಲಿ ಬರ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ವಹಿಸುತ್ತಿರುವ ಅಧಿಕಾರಿಗಳ ನಡೆ ಕುರಿತು ಜಿಲ್ಲಾಧಿಕಾರಿ ಗಂಭೀರವಾಗಿ ಪರಿಗಣಿಸಬೇಕು. ಮೇವು ಬ್ಯಾಂಕ್‌ಗಿಂತ ಪ್ರತಿ ಗ್ರಾಮ ಪಂಚಾಯಿತಿ ಕೇಂದ್ರದಲ್ಲಿ ಗೋಶಾಲೆ ನಿರ್ಮಾಣ ಮಾಡಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾ ಘಟಕದ ಅಧ್ಯಕ್ಷ ಎಚ್.ಪಿ.ರಾಮನಾಥರೆಡ್ಡಿ ಒತ್ತಾಯಿಸಿದ್ದಾರೆ.**

> **ಕುಡಿಯುವ ನೀರು ಮತ್ತು ಮೇವಿಗೆ ತೀವ್ರ ಬರ ಆವರಿಸಿದೆ. ಸುಳ್ಳು ಹೇಳುತ್ತಾ ಕಾಲಹರಣ ಮಾಡದೆ ಅಧಿಕಾರಿಗಳು ಕೂಡಲೇ ಗೋಶಾಲೆ ಹಾಗೂ ಮೇವು ಕೇಂದ್ರ ಸ್ಥಾಪನೆಗೆ ಒತ್ತು ನೀಡಬೇಕು. ಇಲ್ಲದಿದ್ದರೆ ಜಾನುವಾರು ಸಾಕಣೆ ಮಾಡಲಾಗದೆ ಕಸಾಯಿಖಾನೆಗೆ ಮಾರಾಟ ಮಾಡುವ ಪರಿಸ್ಥಿತಿ ಬರಲಿದೆ ಎಂದು ರೈತ ಮುಖಂಡ ಕಡೇಹಳ್ಳಿ ಅನಂದಪ್ಪ ಆಕ್ರೋಶ ವ್ಯಕ್ತಪಡಿಸುತ್ತಾರೆ.**

# 45 ಗ್ರಾಮಗಳಲ್ಲಿ ನೀರಿನ ಕೊರತೆ

• **ಉದಯವಾಹಿನಿ, ಹುಳಿಯಾರು**

ದಿನದಿಂದ ದಿನಕ್ಕೆ ತಾಪಮಾನ ಏರುತ್ತಿದ್ದು ಹೋಬಳಿ ಸೇರಿದಂತೆ ಚಿಕ್ಕನಾಯಕನಹಳ್ಳಿ ತಾಲ್ಲೂಕು ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣಗೊಳ್ಳುತ್ತಿದೆ. ಈಗಾಗಲೇ 45 ಗ್ರಾಮಗಳಲ್ಲಿ ನೀರಿನ ಸಮಸ್ಯೆ ಎದುರಾಗಿದೆ. ಸುಮಾರು 10ಕ್ಕೂ ಹೆಚ್ಚು ಗ್ರಾಮಗಳಿಗೆ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ.

ತಾಲ್ಲೂಕು ವ್ಯಾಪ್ತಿಯಲ್ಲಿ ಬೋರನಕಣಿವೆ ಜಲಾಶಯದಿಂದ ಹುಳಿಯಾರು ಪಟ್ಟಣಕ್ಕೆ ಹೊರತುಪಡಿಸಿದರೆ ಬೇರೆ ಯಾವುದೇ ಪಟ್ಟಣ ಹಾಗೂ ಗ್ರಾಮಗಳಿಗೆ ಕೆರೆಗಳ ನೀರು ಸರಬರಾಜಿನ ವ್ಯವಸ್ಥೆ ಇಲ್ಲ. ಆಯಾಯ ಗ್ರಾಮ ಹಾಗೂ ಪಟ್ಟಣಗಳಲ್ಲಿ ಹಾಕಲಾಗಿರುವ ಕೊಳವೆಬಾವಿಗಳೇ ಕುಡಿಯುವ ನೀರಿಗೆ ಆಧಾರವಾಗಿವೆ.

ಗ್ರಾಮಗಳಲ್ಲಿನ ಕೊಳವೆ ಬಾವಿ ಬತ್ತುತ್ತಿವೆ. ಇನ್ನೂ ಕೆಲ ಕೊಳವೆಬಾವಿಗಳಲ್ಲಿ ಅಲ್ಪಸ್ವಲ್ಪ ನೀರು ಬಂದರೂ ಇಡೀ ಗ್ರಾಮಕ್ಕೆ ಸರಬರಾಜು ಮಾಡುವಷ್ಟು ಸಾಕಾಗುವುದಿಲ್ಲ. ತಾಲ್ಲೂಕಿನ ಶೆಟ್ಟಿಕೆರೆ ಹೋಬಳಿಯ ಕೆಲ ಗ್ರಾಮಗಳು ಹೊರತು ಪಡಿಸಿದರೆ ಹುಳಿಯಾರು, ಹಂದನಕೆರೆ, ಕಂದಿಕೆರೆ, ಚಿಕ್ಕನಾಯಕನಹಳ್ಳಿ ಕಸಬಾ ಹೋಬಳಿಯ ವ್ಯಾಪ್ತಿಯಲ್ಲಿ ಅಂತರ್ಜಲ ಮಟ್ಟ ಸಾವಿರ ಅಡಿ ದಾಟಿದೆ. ಕೆಲ ಕೊಳವೆಬಾವಿಗಳಲ್ಲಿ ಬರುವ ಒಂದಿಷ್ಟು ನೀರಿಗೆ ಗ್ರಾಮಗಳಲ್ಲಿ ನೀರು ಹಿಡಿಯುವುದೇ ಒಂದು ಕೆಲಸವಾಗಿದೆ. ಕೊಳಾಯಿಗಳ ಮುಂದೆ ಸರದಿ ಸಾಲಿನಲ್ಲಿ ಬಿಂದಿಗೆಗಳ ಸಾಲು ಕಾಣಿಸುತ್ತಿದೆ.


ಉದಯವಾಹಿನಿ ಚಿತ್ರ

**ಎಲ್ಲೆಲ್ಲಿ ನೀರಿಗೆ ಬರ:** ತಾಲ್ಲೂಕಿನ ಗೊಟ್ಟೆಗೇನಹಳ್ಳಿ, ಉಪಲೀಕನಹಳ್ಳಿ, ಮೈಲುಕಬ್ಬೆ ಗೊಲ್ಲರಹಟ್ಟಿ, ಮಲ್ಲೇನಹಳ್ಳಿ, ದೊಡ್ಡರಾಂಪುರ, ತಮ್ಮಡಿಹಳ್ಳಿ ಗೊಲ್ಲರಹಟ್ಟಿ, ಜಡಿಯಪ್ಪನಪಾಳ್ಯ, ತರಬೇನಹಳ್ಳಿ ಕಾಲೋನಿ, ಬಲ್ಲಪ್ಪನಹಟ್ಟಿ, ಬಡಕೆಗುಡ್ಲು ಭೋವಿ ಕಾಲೋನಿ, ಲಿಂಗದಹಳ್ಳಿ ಗೊಲ್ಲರಹಟ್ಟಿ, ಬೀಮಸಂದ್ರ, ಮಲ್ಲಿಗೆರೆ, ಮಲ್ಲಿಗೆರೆ ಗೊಲ್ಲರಹಟ್ಟಿ ಸೇರಿದಂತೆ ಅನೇಕ ಗ್ರಾಮಗಳಲ್ಲಿ ಕುಡಿಯುವ ನೀರಿನ ಹಾಹಾಕಾರ ಪ್ರಾರಂಭವಾಗಿದೆ.

ಈ ಗ್ರಾಮಗಳಲ್ಲಿದ್ದ ಕೊಳವೆಬಾವಿಗಳನ್ನು ರಿಬೋರ್ ಮಾಡಿ ತಾತ್ಕಾಲಿಕ ವ್ಯವಸ್ಥೆ ಮಾಡಲಾಗುತ್ತಿದೆ. ಆದರೆ ಪ್ರತಿದಿನ ಒಂದೆರಡು ಗ್ರಾಮಗಳ ಕೊಳವೆಬಾವಿಗಳಲ್ಲಿ ನೀರು ಬತ್ತುತ್ತಿರುವುದು ತಾಲ್ಲೂಕು ಆಡಳಿತಕ್ಕೆ ತಲೆನೋವು ತಂದಿದೆ.

## ಮಿನಿ ನ್ಯೂಸ್

### ಬೆಳಗಬೇಕಿದೆ ಟ್ರಾಫಿಕ್ ಸಿಗ್ನಲ್ ಲೈಟ್!

• **ಉದಯವಾಹಿನಿ, ಮೈಸೂರು**

ನಗರದ ಜನದಟ್ಟಣೆ ದಿನೇ ದಿನೇ ಹೆಚ್ಚುತ್ತಿದ್ದು, ಸರ್ವೇ ಸಾಮಾನ್ಯವಾಗಿರುವ ವಾಹನ ದಟ್ಟಣೆಯನ್ನು ಸುಲಲಿತವಾಗಿ ನಿರ್ವಹಿಸಲು ಪೊಲೀಸ್ ಇಲಾಖೆ ಸುಮಾರು ಇಪ್ಪತ್ತು ಟ್ರಾಫಿಕ್ ಸಿಗ್ನಲ್ ಪಾಯಿಂಟ್ ಗುರುತಿಸಿದೆ. ಅದರಲ್ಲಿ ಹತ್ತು ಕಡೆ ಪಾಲಿಕೆ ವತಿಯಿಂದ ನಡೆದಿರುವ ಕಾಮಗಾರಿ ಕುಂಟುತ್ತಿದೆ. ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಮೈಸೂರಿನ ಕಾರ್ಯ ವ್ಯಾಪ್ತಿ ವಿಸ್ತರಿಸುತ್ತಿದೆ. ಕೈಗಾರಿಕೆ, ಕಂಪೆನಿಗಳ ಕಾರ್ಯಾರಂಭದ ಬಳಿಕ ವರ್ತುಲ ರಸ್ತೆಗಳಲ್ಲೂ ವಾಹನ ಸಂಚಾರ ಹೆಚ್ಚಿದೆ. ನಗರ ಭಾಗದ ಹಲವೆಡೆ ದಟ್ಟಣೆ ಉಂಟಾಗುತ್ತಿದ್ದು, ನಿರ್ವಹಣೆಗಾಗಿ ಟ್ರಾಫಿಕ್ ಸಿಗ್ನಲ್ ಪಾಯಿಂಟ್ ನಿರ್ಮಿಸುವಂತೆ ಪೊಲೀಸ್ ಇಲಾಖೆಯು ಪ್ರಸ್ತಾವನೆ ಸಲ್ಲಿಸಿತ್ತು. ಪಾಲಿಕೆಯು ಕಳೆದ ಮಾರ್ಚ್‌ನಲ್ಲಿ ಯೋಜನೆಯನ್ನು ಕೈಗೆತ್ತಿಕೊಂಡಿದ್ದು, ನಗರದಲ್ಲಿ ಐದು ಹಾಗೂ ವರ್ತುಲ ರಸ್ತೆಯ ಐದು ಪಾಯಿಂಟ್‌ಗಳಲ್ಲಿ ಟ್ರಾಫಿಕ್ ಸಿಗ್ನಲ್ ನಿರ್ಮಿಸಲು ಗುತಿಸಲಾಗಿತ್ತು. ಆರ್‌ಟಿಒ ವೃತ್ತ, ಅಗ್ರಹಾರ ವೃತ್ತ, ಕೌಟಿಲ್ಯ ವೃತ್ತ, ಆರ್.ಆರ್ ನಗರ, ಜೆ.ಪಿ ನಗರ ಜಂಕ್ಷನ್ (ಅಕ್ಕಮಹಾದೇವಿ ರಸ್ತೆ), ದೇವೇಗೌಡ ವೃತ್ತ, ಸಾತಗಳ್ಳಿ ಡಿಪೋ ಜಂಕ್ಷನ್, ವಿಜಯ ನಗರ ನಾಲ್ಕನೇ ಹಂತದ ವರ್ತುಲ ರಸ್ತೆ (ಬಸವನಹಳ್ಳಿ ಜಂಕ್ಷನ್), ಹಿನಕಲ್ ರಸ್ತೆ ಜಂಕ್ಷನ್, ನಜರ್ ಬಾದ್ ವೃತ್ತದಲ್ಲಿ ಟ್ರಾಫಿಕ್ ಸಿಗ್ನಲ್ ಅಳವಡಿಸಲಾಗುತ್ತಿದೆ.

### ಬಗೆಹರಿದ ಕಸ ವಿಲೇವಾರಿ ಘಟಕದ ಸಮಸ್ಯೆ

• **ಉದಯವಾಹಿನಿ, ಶನಿವಾರಸಂತೆ**


ಇಲ್ಲಿನ ಆರೋಗ್ಯ ಕೇಂದ್ರದ ಸಮೀಪವಿದ್ದ ಕಸ ವಿಲೇವಾರಿ ಘಟಕದ ಸಮಸ್ಯೆಯನ್ನು ಬಗೆಹರಿಸುವಲ್ಲಿ ಶನಿವಾರಸಂತೆ ಗ್ರಾಮ ಪಂಚಾಯಿತಿ ಯಶಸ್ವಿಯಾಗಿದೆ. ಇಲ್ಲಿನ ಮುಖ್ಯ ರಸ್ತೆಯ ಸಮುದಾಯ ಆರೋಗ್ಯ ಕೇಂದ್ರ ಮತ್ತು ಶಾಲಾ ಕಾಲೇಜಿನ ಸಮೀಪದಲ್ಲಿ ಕಸ ವಿಲೇವಾರಿ ಘಟಕವಿತ್ತು. ಕಸ ವಿಲೇವಾರಿಯನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡದೆ ಹಾಗೆಯೇ ಸುರಿಯಲಾಗುತ್ತಿತ್ತು. ದುರ್ವಾಸನೆಯಿಂದ ಪಟ್ಟಣದ ಜನತೆ ಹಲವು ವರ್ಷಗಳಿಂದ ಸಮಸ್ಯೆಯನ್ನು ಎದುರಿಸುತ್ತಿದ್ದರು. ಇತ್ತೀಚೆಗೆ ಶನಿವಾರಸಂತೆಯ ಸರ್ಕಾರಿ ಪ್ರಾಥಮಿಕ ಶಾಲೆಯ ನೂತನ ಕೊಠಡಿಯ ಉದ್ಘಾಟನೆಯ ವೇಳೆ ಶಾಸಕ ಡಾ.ಮಂತರ್‌ಗೌಡ ಕಸ ವಿಲೇವಾರಿ ಘಟಕವನ್ನು ತಕ್ಷಣದಲ್ಲೇ ದುಂಡಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನಿರ್ಮಾಣವಾಗಿರುವ ನೂತನವಾಗಿ ಕಸ ವಿಲೇವಾರಿ ಘಟಕಕ್ಕೆ ಸ್ಥಳಾಂತರಿಸುವಂತೆ ತಿಳಿಸಿದರು. ಆದರೆ, ದುಂಡಳ್ಳಿ ಗ್ರಾಮಸ್ಥರು ಕಸ ವಿಲೇವಾರಿ ಘಟಕಕ್ಕೆ ಕಾಂಪೌಂಡ್ ಇಲ್ಲದೆ ಕಸವನ್ನು ವಿಲೇವಾರಿ ಮಾಡಬಾರದು ಎಂದು ಪಟ್ಟು ಹಿಡಿದಿದ್ದರು.

# ಕೊಡಗಿನಲ್ಲಿ ವರನ ಸ್ನೇಹಿತರಿಗೆ ಊಟದಲ್ಲಿ ಸಿಗದ ಸ್ವೀಟ್

• **ಉದಯವಾಹಿನಿ, ಕೊಡಗು**

ಒಂದು ಶುಭ ಕಾರ್ಯವಾಗುತ್ತಿದೆ ಅಂದ್ರೆ, ಅದು ನಿರ್ವಿಘ್ನವಾಗಿ ನಡೆಯಲಪ್ಪ ಅಂತ ಬೇಡಿಕೊಳ್ತಾರೆ. ಮದುವೆ ಆದ್ರೇ ಸಾಕು ಒಳ್ಳೇದಾದ್ರೆ ಸಾಕು ಅನ್ನೋರೇ ಹೆಚ್ಚು. ಆದ್ರೇ ಇಲ್ಲೊಂದು ಮದುವೆ ವರನ ಸ್ನೇಹಿತರಿಗೆ ಊಟದಲ್ಲಿ ಸ್ವೀಟ್ ಸಿಗಲಿಲ್ಲ ಅನ್ನೋ ಒಂದೇ ಒಂದು ಕಾರಣಕ್ಕೆ ಮುರಿದು ಬಿದ್ದಿದೆ.

ಕೊಡಗು ಜಿಲ್ಲೆಯ ಸೋಮವಾರಪೇಟೆಯಲ್ಲಿ ಶನಿವಾರದಂದು ಹಾನಗಲ್ ಯುವತಿ ಹಾಗೂ ಬೆಂಗಳೂರಿನ ಖಾಸಗಿ ಕಂಪನಿಯಲ್ಲಿ ಸಿವಿಲ್ ಇಂಜಿನಿಯರ್ ಆಗಿ ಕೆಲಸ ಮಾಡ್ತಿರೋ ತುಮಕೂರಿನ ಹರ್ಷಿತ್ ಎಂಬಾತನೊಂದಿಗೆ ಮದುವೆ ನಿಶ್ಚಿತಾರ್ಥ ಕಾರ್ಯ ನಡೆಯಿತು. ಈ ವಧು ವರರಿಬ್ಬರೂ ಮ್ಯಾಟ್ರಿಮೋನಿಯಲ್ಲಿ ಪರಿಚಿತರಾಗಿ, ಮದುವೆಯವರೆಗೆ ಬಂದಿದ್ದರು.ಮ್ಯಾಟ್ರಿಮೋನಿಯಲ್ಲಿ ಯುವತಿಯನ್ನು ನೋಡಿದ್ದಂತ ಹರ್ಷಿತ್ ಆಕೆಯನ್ನು ಮದುವೆಯಾಗೋದಕ್ಕೆ ಒಪ್ಪಿಕೊಂಡಿದ್ದರು. ಅಲ್ಲದೇ ಕುಟುಂಬಸ್ಥರನ್ನು ಒಪ್ಪಿಸಿ, ರಿಸೆಪ್ಷನ್ ಅನ್ನು ಸೋಮವಾರಪೇಟೆಯಲ್ಲಿ ಶನಿವಾರ ರಾತ್ರಿ ಸೋಮವಾರಪೇಟೆಯ ಜಾನಕಿ ಕನ್ವೆನ್ಷನ್ ಹಾಲ್ ನಲ್ಲಿ ಹಮ್ಮಿಕೊಳ್ಳಲಾಗಿತ್ತು. ವರನ ಕಡೆಯವರು ಜಾನಕಿ ಕನ್ವೆನ್ಷನ್ ಹಾಲಿಗೆ 2 ಗಂಟೆಗೆ ಬಂದಿದ್ರೇ, ವಧು ಮತ್ತು ಅವರ ಕುಟುಂಬದವರು 2 ಗಂಟೆ ತಡವಾಗಿ ಕಲ್ಯಾಣ ಮಂಟಪಕ್ಕೆ ಆಗಮಿಸಿದ್ದರು. ಇದೇ ವಿಚಾರಕ್ಕೆ ಆರಂಭದಲ್ಲಿ ಗಲಾಟೆ ಕೂಡ ಆಗಿತ್ತು. ರಿಸೆಪ್ಷನ್ ಆರಂಭಗೊಂಡು, ಊಟ ಶುರುವಾದಾಗ ವರನ ಸ್ನೇಹಿತರಿಗೆ ಊಟದ ವೇಳೆಯಲ್ಲಿ ಸ್ವೀಟ್ ಸಿಕ್ಕಿರಲಿಲ್ಲ. ಇದೇ ಕಾರಣಕ್ಕೆ ವರ ಹರ್ಷಿತ್ ವಧುವಿನ ಕಡೆಯವರೊಂದಿಗೆ ಗಲಾಟೆ ಮಾಡಿದ್ದಾನೆ. ಈ ಗಲಾಟೆಯಲ್ಲಿ ಭಾನುವಾರ ನಡೆಯಬೇಕಿದ್ದಂತ ಮದುವೆಯೇ ಮುರಿದು ಬಿದ್ದಿದೆ.


ಉದಯವಾಹಿನಿ ಚಿತ್ರ

# ಗ್ರಾಮೀಣ ಭಾಗದಲ್ಲೊಂದು ಹೈಟೆಕ್ ಸರ್ಕಾರಿ ಶಾಲೆ

• **ಉದಯವಾಹಿನಿ, ಕನಕಪುರ**

ಅತ್ಯಾಧುನಿಕ ವ್ಯವಸ್ಥೆಯ ಶಾಲಾ-ಕೊಠಡಿಗಳು, ಕಂಪ್ಯೂಟರ್ ಮತ್ತು ವಿಜ್ಞಾನ ಪ್ರಯೋಗಾಲಯ, ಆಕರ್ಷಕ ಸಮವಸ್ತ್ರಗಳು, ಸುಸಜ್ಜಿತವಾದ ಶಾಲಾ ಆವರಣ, ಮೈದಾನ, ಗುಣಮಟ್ಟದ ಶಿಕ್ಷಣ, ಸ್ಪೋಕನ್ ಇಂಗ್ಲಿಷ್ ತರಬೇತಿ, ಅತ್ಯುತ್ತಮ ಬೋಧನಾ ತಂಡ ಹಾಗೂ ವಿದ್ಯಾರ್ಥಿಗಳನ್ನು ಶಾಲೆಗೆ ಕರೆದುಕೊಂಡು ಬಂದು ಕಳಿಸಲು ಬಸ್ ವ್ಯವಸ್ಥೆ...

ಇದ್ಯಾವುದೂ ಹೈಟೆಕ್ ಶಾಲೆಯಲ್ಲಿ ಸಿಗುವ ಸೌಲಭ್ಯಗಳಲ್ಲ. ಬದಲಿಗೆ, ಹೈಟೆಕ್ ಆಗಿರುವ ತಾಲ್ಲೂಕಿನ ಏಳಗಳ್ಳಿಯ ಸರ್ಕಾರಿ ಗ್ರಾಮ ಪಂಚಾಯಿತಿ ಪಬ್ಲಿಕ್ ಶಾಲೆಯಲ್ಲಿರುವ ಸೌಕರ್ಯಗಳು.

ತಿಂಗಳುಗಳ ಹಿಂದೆ ಇತರ ಶಾಲೆಗಳಂತಿದ್ದ ಏಳಗಳ್ಳಿ ಸರ್ಕಾರಿ ಶಾಲೆಗೆ ಸ್ಥಳೀಯ ಶಾಸಕರೂ ಆಗಿರುವ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತ್ತು ಸಂಸದ ಡಿ.ಕೆ. ಸುರೇಶ್ ಅವರು ನೀಡಿರುವ ಹೊಸ ಕಾಯಕಲ್ಪವಿದು. ಖಾಸಗಿ ಶಾಲೆಗಳನ್ನು ಮೀರಿಸುವಂತಿರುವ ಈ ಹೈಟೆಕ್ ಶಾಲೆಯು, ಗ್ರಾಮೀಣ ವಿದ್ಯಾರ್ಥಿಗಳ ಪಾಲಿಗೆ ಸಂಜೀವಿನಿಯಾಗಿದೆ. ಸರಿಯಾದ ಸೌಲಭ್ಯಗಳಿಲ್ಲ ಎಂದು ಸರ್ಕಾರಿ ಶಾಲೆಗಳತ್ತ ಬೆನ್ನು ತಿರುಗಿಸಿದ್ದ ಪೋಷಕರು, ಇದೀಗ ಈ ಶಾಲೆಗೆ ತಮ್ಮ ಮಕ್ಕಳನ್ನು ದಾಖಲಿಸು ಮುಗಿ ಬೀಳುತ್ತಿದ್ದಾರೆ. ಸರ್ಕಾರಿ ಶಾಲೆಗಳಿಗೆ ಸೌಲಭ್ಯಗಳನ್ನು ಕಲ್ಪಿಸಿ ಸಬಲೀಕರಿಸುವ ನಿಟ್ಟಿನಲ್ಲಿ ಕ್ರಮ ಕೈಗೊಂಡರೆ ಪರಿಣಾಮ ಹೇಗಿರಬಹುದು ಎಂಬುದಕ್ಕೆ ಈ ಶಾಲೆ ನಿದರ್ಶನವಾಗಿದೆ.


ಉದಯವಾಹಿನಿ ಚಿತ್ರ

> **4 ಶಾಲೆ ವಿಲೀನ:**
> **'ರಾಜ್ಯದಾದ್ಯಂತ ಸುಸಜ್ಜಿತ ಪಬ್ಲಿಕ್ ಶಾಲೆಗಳನ್ನು ನಿರ್ಮಿಸುವ ಸರ್ಕಾರದ ಮಹತ್ವಕಾಂಕ್ಷಿ ಯೋಜನೆಯ ಭಾಗವಾಗಿ ಏಳಗಳ್ಳಿ ಶಾಲೆ ತಲೆ ಎತ್ತಿದೆ. ಗ್ರಾಮದ ಜೊತೆಗೆ ಸುತ್ತಮುತ್ತಲ ಐದು ಹಳ್ಳಿಗಳ ಸರ್ಕಾರಿ ಶಾಲೆಗಳನ್ನು ಈ ಹೈಟೆಕ್ ಶಾಲೆಯಲ್ಲಿ ವಿಲೀನಗೊಳಿಸಲಾಗಿದೆ. 2024-25ನೇ ಶೈಕ್ಷಣಿಕ ವರ್ಷದಲ್ಲಿ ಶಾಲೆಗೆ 175 ವಿದ್ಯಾರ್ಥಿಗಳು ದಾಖಲಾಗಿದ್ದಾರೆ' ಎಂದು ಶಿಕ್ಷಣ ಇಲಾಖೆ ಅಧಿಕಾರಿಯೊಬ್ಬರು ತಿಳಿಸಿದರು.**

# ಹೇಮಾವತಿ ಎಕ್ಸ್‌ಪ್ರೆಸ್ ಕೆನಾಲ್ ನಿಲ್ಲಿಸಬೇಕು! ನಮ್ಮ ನೀರು ನಮ್ಮ ಹಕ್ಕು

• **ಉದಯವಾಹಿನಿ, ತುಮಕೂರು**

ನಗರದ ಖಾಸಗಿ ಹೋಟೆಲ್ ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಹೇಮಾವತಿ ಎಕ್ಸ್‌ಪ್ರೆಸ್ ಕೆನಾಲ್ ಯೋಜನೆಯ 35.4 ಕಿ.ಮೀ ಉದ್ದದ ಪೈಪ್ ಲೈನ್ ಲಿಂಕ್ ಕೆನಾಲ್ ಕಾಮಗಾರಿಯನ್ನು ನಿಲ್ಲಿಸಬೇಕೆಂದು ಸೊಗಡು ಶಿವಣ್ಣ ಒತ್ತಾಯಿಸಿದರು.

ನಮ್ಮ ನೀರು ನಮ್ಮ ಹಕ್ಕು ಈ ಪ್ರತಿಭಟನೆಯ ಪ್ರಮುಖ ಉದ್ದೇಶವೆಂದರೆ ತುಮಕೂರು ಜಿಲ್ಲೆಗೆ ಅದರಲ್ಲೂ ತುರುವೇಕೆರೆ, ಶಿರಾ, ಮಧುಗಿರಿ, ಕೊರಟಗೆರೆ, ತುಮಕೂರು ನಗರ ಮತ್ತು ಗ್ರಾಮಾಂತರ ಕ್ಷೇತ್ರದಲ್ಲಿ ಜನರಿಗೆ, ಪ್ರಾಣಿಗಳಿಗೆ ದನ - ಕರುಗಳಿಗೆ ಕುಡಿಯುವ ನೀರಿಗೂ ಸಹ ಆಹಾಕಾರ ಉಂಟುಮಾಡಲು ಹೊರಟಿರುವ ಕಾಂಗ್ರೆಸ್ ಸರ್ಕಾರದ ವಿರುದ್ಧ ಮಾಜಿ ಸಚಿವರು ಹಾಗೂ ಮಾಜಿ ಶಾಸಕರಾದ ಸೊಗಡು ಶಿವಣ್ಣ ಕಿಡಿಕಾರಿದರು.


ಉದಯವಾಹಿನಿ ಚಿತ್ರ

ಅವೈಜ್ಞಾನಿಕ ಹಾಗೂ ಅಮಾನವೀಯತೆಯಿಂದ ಕೂಡಿರುವ ಬಹಳಷ್ಟು ಅಡ್ಡಪರಿಣಾಮಗಳಿಗೆ ಕಾರಣವಾಗಿರುವ ಈ ಯೋಜನೆಯನ್ನು ತರ್ತಾಗಿ ನಿಲ್ಲಿಸಬೇಕು. ಇಲ್ಲದಿದ್ದರೆ ಸಾಮಾಜಿಕ ನ್ಯಾಯದ ಹಿತದೃಷ್ಟಿಯಿಂದ ಸುಸ್ಥಿರ ಸಮಾಜದ ನಿರ್ಮಾಣಕ್ಕಾಗಿ ಸದರಿ ಕಾಮಗಾರಿಯನ್ನು ತಡೆಯಲು ತುರುವೇಕೆರೆ ಶಾಸಕ ಎಂ. ಟಿ. ಕೃಷ್ಣಪ್ಪ, ಕೊರಟಗೆರೆ ಎ. ಪಿ. ಎಂ. ಸಿ. ಮಾಜಿ ಅಧ್ಯಕ್ಷ ಪಂಚಾಕ್ಷರಯ್ಯ, ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯಾಧ್ಯಕ್ಷ ಬಿ. ಎ. ಲಕ್ಷ್ಮೀನಾರಾಯಣಗೌಡರು ಹಾಗೂ ಎಲ್ಲಾ ಮಠಾಧೀಶರುಗಳ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆಯನ್ನು ಹಾಗೂ ರೈತ ಸಂಘಟನೆಗಳ ಮುಖಂಡರುಗಳ ಸಹಕಾರದಲ್ಲಿ ಮಾಡಲಾಗುವುದು ಎಂದು ಮಾಜಿ ಸಚಿವರು ಹಾಗು ಶಾಸಕರಾದ ಸೊಗಡು ಶಿವಣ್ಣ ತಿಳಿಸಿದರು.

> **ರಾಮನಗರ ಜಿಲ್ಲೆಯ ತಾಲ್ಲೂಕುಗಳಿಗೆ ಎತ್ತಿನ ಹೊಳೆ, ಶಿಂಷಾ ನದಿ, ಕಾವೇರಿ ನದಿಯ ನೀರನ್ನು ಒದಗಿಸಬಹುದು. ಆದರೆ ಹೇಮಾವತಿ ನಾಲೆಯ ನೀರುನ್ನು ಆಶ್ರಯಿಸಿರುವ ತುಮಕೂರು ಜಿಲ್ಲೆಯ ಜನತೆಗೆ ಮಧುಗಿರಿ ಹಾಗೂ ಕೊರಟಗೆರೆಯ ಸಚಿವರಿಬ್ಬರು ಅನ್ಯಾಯ ಮಾಡುತ್ತಿದ್ದಾರೆ.**
> **- ಎಂ.ಟಿ. ಕೃಷ್ಣಪ್ಪ - ಶಾಸಕರು ತುರುವೇಕೆರೆ ಕ್ಷೇತ್ರ**

> **ಕಾಂಗ್ರೆಸ್ ಸರ್ಕಾರದ ಜಲಸಂಪನ್ಮೂಲ ಸಚಿವರ ಒತ್ತಡದ ಮೇರೆಗೆ ಅಧಿಕಾರಿಗಳು ಈ ಲಿಂಕ್ ಕೆನಾಲ್ ಯೋಜನೆಯನ್ನು ರೂಪಿಸಿದ್ದಾರೆ. ಆಳವಾಗಿ ಈ ಯೋಜನೆಯನ್ನು ಅಧ್ಯಯನ ಮಾಡಿದರೆ ಯೋಜನೆಯು ಬ್ರಹ್ಮಾಂಡ ಭ್ರಷ್ಟಾಚಾರದ ಪ್ರತೀಕವಾಗಿದೆ, ಸರ್ಕಾರದ ಬೊಕ್ಕಸಕ್ಕೆ ಕನ್ನ ಹಾಕಲು ನಡೆಸಿರುವ ಹುನ್ನಾರವಾಗಿದೆ. -**
> **ಬಿ. ಎ. ಲಕ್ಷ್ಮೀನಾರಾಯಣ ಗೌಡ - ರಾಜ್ಯಾಧ್ಯಕ್ಷರು - ಕರ್ನಾಟಕ ರಾಜ್ಯ ರೈತ ಸಂಘ.**

# ರೇಷ್ಮೆ ಹುಳು ಸಾಕಾಣಿಕೆಗೂ ತಟ್ಟಿದ ಬಿಸಿಲ ಬೇಗೆ

• **ಉದಯವಾಹಿನಿ, ಬಂಗಾರಪೇಟೆ**

ತಾಲ್ಲೂಕಿನಲ್ಲಿ ಬಿಸಿಲಿನ ಬೇಗೆ ಹೆಚ್ಚಾಗಿದ್ದು, ರೇಷ್ಮೆ ಬೆಳೆಗಾರರಿಗೆ ಬೆಳೆ ತೆಗೆಯುವುದು ದೊಡ್ಡ ಸವಾಲಾಗಿದೆ.

ಸಾಮಾನ್ಯವಾಗಿ ರೇಷ್ಮೆ ಬೆಳೆಗೆ 26 ಡಿಗ್ರಿ ಸೆಲ್ಸಿಯಸ್‌ನಿಂದ 28 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶವಿರಬೇಕು. ಆದರೆ, 40 ಡಿಗ್ರಿ ಸೆಲ್ಸಿಯಸ್‌ಗೂ ಹೆಚ್ಚು ಬಿಸಿಲಿನ ತಾಪಮಾನ ಏರಿಕೆಯಾಗಿದ್ದು, ರೇಷ್ಮೆ ಹುಳುಗಳನ್ನು ರಕ್ಷಿಸುವುದು ಬೆಳೆಗಾರರಿಗೆ ಸವಾಲಾಗಿ ಪರಿಣಮಿಸಿದೆ. ತಾಲ್ಲೂಕಿನ ಸುಮಾರು ಮೂರು ಸಾವಿರ ಕುಟುಂಬಗಳು ರೇಷ್ಮೆ ಬೆಳೆಯನ್ನು ಜೀವನಾಧಾರವಾಗಿ ನಂಬಿಕೊಂಡಿವೆ. ಶೀತರಕ್ತ ಕೀಟವಾದ ರೇಷ್ಮೆ ಹುಳುಗಳಿಗೆ ಹೆಚ್ಚಿನ ತಾಪಮಾನ ತಡೆಯುವ ಸಾಮರ್ಥ್ಯ ಕಡಿಮೆ. ಈ ಬಾರಿ ಬಿಸಿಲಿಗೆ ಬೇಗೆ ಹೆಚ್ಚಿದ ಕಾರಣ 9 ದಿನಗಳ ಕಾಲ ಹಿಪ್ಪುನೇರಳೆ ಸೊಪ್ಪು ತಿನ್ನುತ್ತಿದ್ದ ರೇಷ್ಮೆ ಹುಳುಗಳು ಕೇವಲ 5 ರಿಂದ 6 ದಿನಗಳು ಮಾತ್ರ ತಿನ್ನುತ್ತಿವೆ. ಇನ್ನೊಂದೆಡೆ ಬಿಸಿಲ ತಾಪ ಹೆಚ್ಚಾಗಿದ್ದು, ಹಿಪ್ಪು ನೇರಳೆ ಸೊಪ್ಪಿನ ತೇವಾಂಶ ಬೇಗ ಆವಿಯಾಗುತ್ತಿದೆ. ಇದರಿಂದ ಹುಳುಗಳಿಗೆ ಸೊಪ್ಪಿನಿಂದ ಸಿಗುತ್ತಿದ್ದ ನೀರಿನಂಶ ಸಿಗದೆ ಇದರಿಂದ ರೇಷ್ಮೆ ಗೂಡಿನ ಉತ್ಪಾದನೆ ಕಡಿಮೆಯಾಗುವುದರ ಜೊತೆಗೆ ರೇಷ್ಮೆ ಗೂಡುಗಳ ಗುಣಮಟ್ಟ ಮೇಲೂ ಪರಿಣಾಮ ಬೀರುವಂತಾಗಿದೆ. ಹಾಗಾಗಿ, ಈ ಬಾರಿ ಮಾರುಕಟ್ಟೆಗೆ ಈ ಹಿಂದೆಗಿಂತ ಶೇ 50ಕ್ಕಿಂತ ಕಡಿಮೆ ಪ್ರಮಾಣದಲ್ಲಿ ರೇಷ್ಮೆ ಗೂಡುಗಳು ಪೂರೈಕೆಯಾಗುತ್ತಿವೆ. ಬೇಸಿಗೆಯ ಸಮಯದಲ್ಲಿ ರೇಷ್ಮೆ ನಿರ್ವಹಣೆ ಸಲಹೆ ನೀಡಲು ರೇಷ್ಮೆ ಇಲಾಖೆಯಲ್ಲೂ ಸಿಬ್ಬಂದಿಯ ಕೊರತೆ ಎದುರಾಗಿದೆ. ಇದರಿಂದ ರೇಷ್ಮೆ ಬೆಳೆಗಾರರಿಗೆ ಸೂಕ್ತ ಮಾರ್ಗದರ್ಶನ ದೊರೆಯದ ಸ್ಥಿತಿ ಎದುರಾಗಿದೆ.



## ಸುಗಮ ಸಂಚಾರಕ್ಕೆ ಅಡ್ಡಿ

• **ಉದಯವಾಹಿನಿ, ಶಿರಾ**

ರಾಷ್ಟ್ರೀಯ ಹೆದ್ದಾರಿ 48 (ಬೆಂಗಳೂರು- ಪುಣೆ) ರ ಚಿಕ್ಕನಹಳ್ಳಿ ಬಳಿ ನಡೆಯುತ್ತಿರುವ ಮೇಲ್ಸೇತುವೆ ಕಾಮಗಾರಿ ಮಂದಗತಿಯಿಂದ ಸಾಗುತ್ತಿದ್ದು ಸುಗಮ ಸಂಚಾರಕ್ಕೆ ಅಡ್ಡಿಯಾಗುತ್ತಿದೆ. ಉತ್ತರ ಕರ್ನಾಟಕದ ಜನತೆ ರಾಜಧಾನಿಗೆ ತೆರಳಲು ಇದು ಹೆಬ್ಬಾಗಿಲಾಗಿದ್ದು ಇಲ್ಲಿ ಪ್ರತಿನಿತ್ಯ ಸಾವಿರಾರು ವಾಹನಗಳು ಸಂಚಾರ ಮಾಡುತ್ತಿವೆ. ಮುಖ್ಯಮಂತ್ರಿ, ಸಚಿವರು ಸೇರಿದಂತೆ ಹಿರಿಯ ಅಧಿಕಾರಿಗಳು ಸಂಚಾರ ಮಾಡುತ್ತಿದ್ದರು ಸಹ ಕಾಮಗಾರಿ ವಿಳಂಬದ ಬಗ್ಗೆ ಯಾರು ಸಹ ಚಕಾರ ಎತ್ತದೆ ಮೌನ ವಹಿಸಿರುವುದು ಆಶ್ಚರ್ಯ ಮೂಡಿಸುತ್ತದೆ. ಸ್ಥಳೀಯರಿಗೆ ಅನುಕೂಲವಾಗಲಿ ಎನ್ನುವ ಉದ್ದೇಶದಿಂದ ಫೆಬ್ರುವರಿ 2023ರಲ್ಲಿ ರೂ.14.50 ಕೋಟಿ ವೆಚ್ಚದಲ್ಲಿ ಮೇಲ್ಸೇತುವೆ ಕಾಮಗಾರಿ ಪ್ರಾರಂಭ ಮಾಡಲಾಯಿತು. ಒಂದ ವರ್ಷ ಮೂರು ತಿಂಗಳು ಕಳೆದರೂ ಇನ್ನು ಕಾಮಗಾರಿ ಪೂರ್ಣಗೊಂಡಿಲ್ಲ. ಗುತ್ತಿಗೆದಾರರಿಗೆ ನೀಡಿದ್ದ ಅವಧಿ ಮುಕ್ತಾಯವಾದರೂ ಸಹ ಕಾಮಗಾರಿ ಕುಂಟುತ್ತಾ ಸಾಗುತ್ತಿರುವುದು ವಾಹನ ಸವಾರರು ಹಾಗೂ ಸ್ಥಳೀಯರಲ್ಲಿ ಸಂಕಷ್ಟ ಮೂಡಿಸಿದೆ. ರಾಷ್ಟ್ರೀಯ ಹೆದ್ದಾರಿಯಲ್ಲಿ ಮೇಲ್ಸೇತುವೆ ಕಾಮಗಾರಿ ನಡೆಯುತ್ತಿರುವುದರಿಂದ ಇಲ್ಲಿ ಸಂಚರಿಸುತ್ತಿದ್ದ ವಾಹನಗಳು ಸರ್ವಿಸ್ ರಸ್ತೆಯಲ್ಲಿ ಸಂಚರಿಸಬೇಕಿದೆ. ಕಿರಿದಾದ ರಸ್ತೆಯಲ್ಲಿ ಒಂದರ ಹಿಂದೆ ಒಂದು ಸಂಚರಿಸಬೇಕಿರುವುದರಿಂದ ವಾಹನ ದಟ್ಟಣೆ ಹೆಚ್ಚಾಗಿ ವಾಹನ ಚಾಲನೆ ಕಷ್ಟವಾಗುತ್ತಿದೆ. ಜತೆಗೆ ಆಂಬುಲೆನ್ಸ್ ಹಾಗೂ ತುರ್ತು ಪ್ರಯಾಣ ಮಾಡುವರು ದಟ್ಟಣೆಯಲ್ಲಿ ಸಿಕ್ಕಿ ಹಾಕಿಕೊಂಡರೆ ಅವರ ನೋವು ಕೇಳುವವರು ಇಲ್ಲದಂತಾಗಿದೆ.




# ನೀರು ಪೂರೈಕೆ ಕೆರೆಗಳು ಬಹುತೇಕ ಖಾಲಿ

• **ಉದಯವಾಹಿನಿ, ಚಿಂತಾಮಣಿ**

ತಾಲ್ಲೂಕಿನಲ್ಲಿ ಬರಗಾಲ ಆವರಿಸಿದೆ. ನಗರಕ್ಕೆ ನೈಸರ್ಗಿಕ ನೀರು ಪೂರೈಕೆ ಪ್ರಮುಖ ಆಸರೆಯಾಗಿದ್ದ ಕನಂಪಲ್ಲಿ ಕೆರೆ ಖಾಲಿಯಾಗಿದೆ. ಇದರಿಂದ ಕುಡಿಯುವ ನೀರಿನ ಸಮಸ್ಯೆ ಗಂಭೀರ ಸ್ವರೂಪ ಪಡೆದುಕೊಂಡಿದೆ.

ಕಳೆದ ವರ್ಷ ಮಳೆ ಕೈಕೊಟ್ಟಿದ್ದರಿಂದ ಕೆರೆಗೆ ನೀರು ಹರಿದು ಬರಲೇ ಇಲ್ಲ.

ದಿನದಿಂದ ದಿನಕ್ಕೆ ಬಿಸಿಲಿನ ಧಗೆ ಹೆಚ್ಚುತ್ತಿದ್ದು ಕೊಳವೆ ಬಾವಿಗಳು ಬತ್ತಿ ಹೋಗುತ್ತಿವೆ.



ನಗರಕ್ಕೆ ನೀರು ಪೂರೈಕೆ ಮಾಡುವ ಮತ್ತೊಂದು ಮೂಲ ಭಕ್ತರಹಳ್ಳಿ-ಅರಸೀಕೆರೆಯಲ್ಲಿ ಕೂಡ ಕೇವಲ ಒಂದು ತಿಂಗಳಿಗಾಗುವಷ್ಟು ನೀರು ಮಾತ್ರ ಲಭ್ಯವಿದೆ. ಮೇ ಅಂತ್ಯದೊಳಗೆ ಮಳೆ ಆಗದಿದ್ದರೆ ಮತ್ತಷ್ಟು ಸಂಕಷ್ಟ ಎದುರಿಸಬೇಕಾಗುತ್ತದೆ. ಸದ್ಯಕ್ಕೆ ನಗರದ ಯಾವುದೇ ಬಡಾವಣೆಗೆ ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡುವ ಪರಿಸ್ಥಿತಿ ಸೃಷ್ಟಿಯಾಗಿಲ್ಲ. ಮಳೆಯಾಗದಿದ್ದರೆ ಸಮಸ್ಯೆ ಗಂಭೀರವಾಗುತ್ತದೆ ಎಂಬ ಆತಂಕ ನಾಗರಿಕರನ್ನು ಕಾಡುತ್ತಿದೆ. ನಗರದಲ್ಲಿ 2011ರ ಜನಗಣತಿ ಪ್ರಕಾರ 76,306 ಜನಸಂಖ್ಯೆ ಇದೆ. ಈಗಿನ ಜನಸಂಖ್ಯೆ ಸುಮಾರು ಒಂದು ಲಕ್ಷ ಆಗಬಹುದು. ಪ್ರತಿನಿತ್ಯ ಹೊರಗಡೆಯಿಂದ ಬಂದು ಹೋಗುವವರು ಇರುತ್ತಾರೆ.ಪ್ರತಿನಿತ್ಯ 12 ಎಂ.ಎಲ್.ಡಿ ನೀರು ಬೇಕಾಗಿದೆ. ಕನಂಪಲ್ಲಿ ಕೆರೆ ಸಂಪೂರ್ಣವಾಗಿ ಬತ್ತಿಹೋಗಿದೆ. ಪ್ರಸ್ತುತ 7 ಎಂ.ಎಲ್.ಡಿ ನೀರು ಪೂರೈಕೆ ಮಾಡಲಾಗುತ್ತಿದೆ. ಭಕ್ತರಹಳ್ಳಿ-ಅರಸೀಕೆರೆ ಮತ್ತು ಕೊಳವೆ ಬಾವಿಗಳಿಂದ ನೀರು ಪೂರೈಕೆ ಮಾಡಬೇಕಾಗಿದೆ ಎಂದು ನಗರಸಭೆ ಅಧಿಕಾರಿಗಳು ಹೇಳುತ್ತಾರೆ. ಜತೆಗೆ 4 ಖಾಸಗಿ ಕೊಳವೆ ಬಾವಿಗಳಿಂದ ನೀರು ಪಡೆಯಲಾಗುತ್ತಿದೆ. ನಗರದ 8 ವಾರ್ಡ್‌ಗಳಲ್ಲಿ ಖಾಸಗಿ ಕೊಳವೆ ಬಾವಿಗಳಿಂದ ನೀರು ಪೂರೈಕೆ ಮಾಡಲಾಗುತ್ತಿದೆ.

ಏಪ್ರಿಲ್ ಅಂತ್ಯದಲ್ಲಿ ಒಂದು ವಾರ್ಡ್‌ನಲ್ಲಿ ಮೂರು ದಿನಕ್ಕೊಮ್ಮೆ, 2 ವಾರ್ಡ್‌ಗಳಲ್ಲಿ 5 ದಿನಕ್ಕೊಮ್ಮೆ, 28 ವಾರ್ಡ್‌ಗಳಲ್ಲಿ ವಾರಕ್ಕೊಮ್ಮೆ ನೀರು ಸರಬರಾಜು ಮಾಡುತ್ತಿರುವುದಾಗಿ ಅಧಿಕಾರಿಗಳು ಮಾಹಿತಿ ನೀಡಿದರು. ಲಭ್ಯವಿರುವ ನೀರು ಸಮರ್ಪಕವಾಗಿ ಪೂರೈಸಿದರೆ ಈಗಲೂ ವಾರಕ್ಕೊಮ್ಮೆ ನೀರು ಪೂರೈಸಬಹುದು. ಅಧಿಕಾರಿಗಳ ಆಡಳಿತ ವೈಫಲ್ಯ ನೀರಿನ ಸಮಸ್ಯೆ ಉಲ್ಬಣಕ್ಕೆ ಕಾರಣ ಎಂದು ನಗರಸಭೆ ಸದಸ್ಯರೊಬ್ಬರು ಪರ್ಯಾಯ ವ್ಯವಸ್ಥೆ ಮಾಡಿಕೊಳ್ಳದಿರುವುದರಿಂದ ಜನರು ಪರಿತಪಿಸುವಂತಾಗಿದೆ. ಇರುವ ನೀರು ಸಮರ್ಪಕವಾಗಿ ವಿತರಿಸಿದರೆ ಪರಿಸ್ಥಿತಿ ಸುಧಾರಿಸಬಹುದು. ನೀರು ಬಿಡುವ ವಾಟರ್‌ಮನ್‌ಗಳ ಕೈವಾಡ ಅತಿಯಾಗಿದೆ. ಅಧಿಕಾರಿಗಳಿಗೆ ಅವರ ಮೇಲೆ ಹಿಡಿತವೇ ಇಲ್ಲ ಎಂದು ನಾಗರಿಕರು ದೂರುತ್ತಾರೆ.

> **ನಾಗರಿಕರ ಮನೆಗಳಲ್ಲಿ ನೀರಿನ ಸಂಗ್ರಹ**
> **ಚುನಾಯಿತ ಆಡಳಿತ ಮಂಡಳಿ ಇಲ್ಲದೆ ಅಧಿಕಾರಿಗಳಿಗೆ ಅಂಕುಶ ಹಾಕುವವರೇ ಇಲ್ಲವಾಗಿದ್ದಾರೆ ಎಂಬುದು ಸಾರ್ವಜನಿಕರ ಆರೋಪ.ನಗರದ ಚೌಡರೆಡ್ಡಿ ಪಾಳ್ಯ, ವಿನಾಯಕ ನಗರ, ತಪತೇಶ್ವರ ಕಾಲೊನಿ, ಶ್ರೀರಾಮನಗರ, ಆಶ್ರಯ ಬಡಾವಣೆಯಲ್ಲಿ ನೀರಿನ ಸಮಸ್ಯೆ ಇದೆ. ಸಾಮಾನ್ಯವಾಗಿ ಬಡವರೇ ಹೆಚ್ಚಾಗಿ ವಾಸಿಸುವ ಈ ಪ್ರದೇಶಗಳಲ್ಲಿ ನಾಗರಿಕರ ಮನೆಗಳಲ್ಲಿ ನೀರಿನ ಸಂಗ್ರಹ ತೊಟ್ಟಿಗಳು ಇರುವುದಿಲ್ಲ ಎನ್ನುತ್ತಾರೆ ಅಧಿಕಾರಿಗಳು**

> **ನಗರಕ್ಕೆ ನೀರು ಪೂರೈಕೆ ಮಾಡುತ್ತಿದ್ದ ಕನಂಪಲ್ಲಿ ಕೆರೆ ಖಾಲಿಯಾಗಿದೆ. ಭಕ್ತರಹಳ್ಳಿ-ಅರಸೀಕೆರೆ ನೀರು ಇನ್ನೂ ಒಂದು ತಿಂಗಳವರೆಗೂ ಪೂರೈಸಬಹುದು. ಮೇ ಅಂತ್ಯದ ಒಳಗೆ ಮಳೆ ಬಾರದಿದ್ದರೆ ಸಾರ್ವಜನಿಕರಿಗೆ ನೀರು ಪೂರೈಸುವುದು ನಗರಸಭೆಗೆ ಸವಾಲಾಗಲಿದೆ. ಖಾಸಗಿ ಕೊಳವೆ ಬಾವಿಗಳನ್ನು ಬಾಡಿಗೆ ಆಧಾರದ ಮೇಲೆ ಪಡೆದುಕೊಳ್ಳಲು ಚಿಂತನೆ ನಡೆಸಲಾಗಿದೆ.**
> **- ಮಾಧವಿ,ಪೌರಾಯುಕ್ತೆ**

> **ಅಧಿಕಾರಿಗಳು ಮಳೆ ಕೊರತೆ, ನೀರಿಲ್ಲ ಎಂಬ ಸಿದ್ಧ ಉತ್ತರ ಹೇಳುವುದನ್ನು ಬಿಟ್ಟು ಲಭ್ಯ ಇರುವ ನೀರು ಸಮರ್ಪಕವಾಗಿ ವಿತರಿಸಿದರೆ ಈಗಲೂ ಪರಿಸ್ಥಿತಿ ಉತ್ತಮಪಡಿಸಬಹುದು. ಕೆಟ್ಟು ನಿಂತ ಪಂಪ್ ಮೋಟಾರು ಕೂಡಲೇ ರಿಪೇರಿ ಮಾಡುವುದಿಲ್ಲ.**
> **- ಅಗ್ರಹಾರ ಮೋಹನ್, ನಾಗರಿಕ**

# ನೀರು, ಮೇವು ಇಲ್ಲದೆ ಬಳಲಿದ ಜಾನುವಾರುಗಳು

• **ಉದಯವಾಹಿನಿ, ಬಾಗೇಪಲ್ಲಿ**

ಪ್ರಸಕ್ತ ವರ್ಷದ ಬರದ ಪರಿಣಾಮ ತಾಲ್ಲೂಕು ನೀರಿನ ಸಮಸ್ಯೆ ದಿನದಿಂದ ದಿನಕ್ಕೆ ಉಲ್ಬಣಿಸುತ್ತಿದೆ. ಜಲ ಮೂಲಗಳಾದ ಕೆರೆ, ನದಿ, ಬಾವಿ, ಕೊಳವೆಬಾವಿ ಬತ್ತಿಹೊಗಿವೆ. ಇದರಿಂದ ಜನ, ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗಿದೆ.

ತಾಲ್ಲೂಕಿನಲ್ಲಿ ತಾಪಮಾನ 39 ಡಿಗ್ರಿ ಸೆಲ್ಸಿಯಸ್ ನಷ್ಟಿದ್ದು, ತಾಪಕ್ಕೆ ಭೂಮಿಯು ಕಾದ ಕೆಂಡದಂತೆ ಆಗುತ್ತಿದೆ. ಇದರಿಂದ ತಾಲ್ಲೂಕಿನ ಕೆರೆ, ಕುಂಟೆಗಳಲ್ಲಿ ನೀರು ಬರಿದಾಗಿದ್ದು, ಬರಡಾಗಿದೆ. ಗೋಮಾಳ, ಹೊಲ ಗದ್ದೆಗಳಲ್ಲಿ, ಬಯಲು ಪ್ರದೇಶ, ಕೆರೆ ಅಚ್ಚುಕಟ್ಟು ಪ್ರದೇಶ ಸೇರಿದಂತೆ ಗುಡ್ಡಗಾಡು ಪ್ರದೇಶದಲ್ಲಿ ಹಸಿರು ಹುಲ್ಲು ಬಿಸಿಲಿನ ತಾಪಮಾನಕ್ಕೆ ಒಣಗಿದೆ. ಇದರಿಂದ ಜಾನುವಾರುಗಳಿಗೆ ಹಸಿರು ಮೇವು ಸಿಗದೆ, ಹಾಲಿನ ಉತ್ಪಾದನೆ ಕಡಿಮೆಯಾಗಿದೆ. ಬರ ಹೊಡೆತಕ್ಕೆ ರೈತರು ತತ್ತರಿಸಿದ್ದಾರೆ. ಇಂತಹ ಸಂದಿಗ್ಧ ಪರಿಸ್ಥಿತಿಯಲ್ಲೂ ಕೈ ಹಿಡಿಯುತ್ತಿದ್ದ ಹೈನುಗಾರಿಕೆಗೂ ಬರದ ಬಿಸಿ ತಟ್ಟಿದೆ. ಜಾನುವಾರುಗಳಿಗೆ ನೀರು, ಮೇವು ಒದಗಿಸುವುದೇ ಸವಾಲಾಗಿ ಪರಿಣಮಿಸಿದೆ. ಮಳೆ ಅಭಾವದಿಂದ ಬಯಲು ಪ್ರದೇಶದಲ್ಲಿ ಹಸಿರು ಮಾಯವಾಗಿದೆ. ಗಿಡ-ಮರ, ಹುಲ್ಲು ಒಣಗಿ ಗುಡ್ಡಗಾಡು ಪ್ರದೇಶ ಬಣಗುಡುತ್ತಿದೆ. ಬೆಟ್ಟಗಳಲ್ಲಿ ನೀರು ಆಹಾರ ನೆರಳಿನ ಆಶ್ರಯಕ್ಕಾಗಿ ಜಾನುವಾರು ಪರದಾಡುವಂತಾಗಿದೆ.


ಉದಯವಾಹಿನಿ ಚಿತ್ರ



**ಜಾನುವಾರು ನೀರಿನ ಸಮಸ್ಯೆ**

ಪ್ರತಿದಿನ ಊರಿನ ಬಯಲು, ಹೊಲ ಗದ್ದೆಗಳಲ್ಲಿ, ಬೆಟ್ಟ-ಗುಡ್ಡಗಳಲ್ಲಿ, ಕೆರೆ, ಕಾಲುವೆಗಳ ಅಚ್ಚುಕಟ್ಟು ಪ್ರದೇಶಗಳಲ್ಲಿ ಜಾನುವಾರು ಮೇಯಿಸಲಾಗುತ್ತಿತು. ಇದೀಗ ಮಧ್ಯಾಹ್ನ 11 ಗಂಟೆಯಿಂದ 3 ಗಂಟೆಯವರಿಗೂ ಬಿಸಿಲಿನ ಶಾಖ ಹೆಚ್ಚಾಗಿರುವುದರಿಂದ ಜಾನುವಾರುಗಳನ್ನು ಗಿಡ ಮರದ ಕೆಳಗೆ ವಿಶ್ರಾಂತಿಗೆ ಬಿಡುತ್ತಾರೆ.

ಮೇವು ಬ್ಯಾಂಕ್ ತೆರೆಯಿರಿ ರೈತರಿಗೆ ಹಸಿ ಹುಲ್ಲಿನ ಬೀಜ ವಿತರಣೆ ಮಾಡಬೇಕು. ಮೇವು ಬ್ಯಾಂಕ್ ತೆರೆಯಬೇಕು. ಜನ ಹಾಗೂ ಜಾನುವಾರುಗಳಿಗೆ ಮೇವು ಹಾಗೂ ನೀರು ಸಮರ್ಪಕವಾಗಿ ಕಲ್ಪಿಸಬೇಕು ಎಂದು ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ತಾಲ್ಲೂಕು ಅಧ್ಯಕ್ಷ ಎಚ್.ಎನ್.ಗೋವಿಂದರೆಡ್ಡಿ ಒತ್ತಾಯಿಸಿದ್ದಾರೆ. ಜಾನುವಾರುಗಳಿಗೆ ಮೇವು-ನೀರು ಸಿಗುತ್ತಿಲ್ಲ. ಮೇವಿನ ಕೊರತೆಯಿಂದ ಕುರಿಗಳನ್ನು ಮಾರಾಟ ಮಾಡಿದ್ದೇವೆ- ಟಿ.ಲಕ್ಷ್ಮೀನಾರಾಯಣರೆಡ್ಡಿ, ರೈತಬಿರು ಬೇಸಿಗೆಯ ಪ್ರತಿಕೂಲ ಹವಾಮಾನ ಜಾನುವಾರುಗಳ ಮೇಲೆ ದುಷ್ಪರಿಣಾಮ ಬೀರಿದೆ. ಹಸಿರು ಮೇವು ಸಿಗದೇ ಹಾಲು ಉತ್ಪಾದನೆ ಕಡಿಮೆಯಾಗಿದೆ. ಜಾನುವಾರುಗೆ ನೀರಿನ ಅಭಾವ ಒಂದೆಡೆಯಾದರೆ ಮೇವು ಒದಗಿಸುವ ಸವಾಲು ಎದುರಾಗಿದೆ. ಮೇವು ಕೇಂದ್ರ ಆರಂಭಕ್ಕೆ ಸಂಬಂಧಿಸಿದಂತೆ ಸರ್ಕಾರಿ ಕಚೇರಿಗಳಿಗೆ ರೈತರು ಅಲೆದಾಡುತ್ತಿದ್ದಾರೆ. ಆದರೆ, ಈ ಕುರಿತು ಕಂದಾಯ ಇಲಾಖೆ, ಪಶು ಪಾಲನಾ ಇಲಾಖೆ ಗಮನಹರಿಸುತ್ತಿಲ್ಲ. ಅನಿವಾರ್ಯವಾಗಿ ರೈತರು ನೆರೆಯ ಜಿಲ್ಲೆಗಳಿಂದ ದುಬಾರಿ ಬೆಲೆಗೆ ಮೇವು ಖರೀದಿಸುತ್ತಿದ್ದಾರೆ.

> **ನೀರಿನ ಕೊರತೆ ಇದೆ**
> **ತಾಲ್ಲೂಕಿನಲ್ಲಿ ಮೇವಿನ ಕೊರತೆ ಇಲ್ಲ. ಆದರೆ ನೀರಿನ ಕೊರತೆ ಇದೆ. ಕಡಿಮೆ ಜಾನುವಾರುಗಳ ಸಂಖ್ಯೆ ಇರುವುದರಿಂದ ಮೇವಿನ ಬ್ಯಾಂಕ್ ಅವಶ್ಯಕತೆ ಇಲ್ಲ. 15 ದಿನಗಳ ಒಳಗೆ ಮಳೆ ಆಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಪ್ರಕಟಿಸಿದೆ. ತಾಲ್ಲೂಕಿನಲ್ಲಿ ರೈತರಿಗೆ ಮತ್ತು ಹೈನುದಾರರಿಗೆ ಮೇವಿನ ಬೀಜ ವಿತರಿಸಲಾಗಿದೆ ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಕೃಷ್ಣಮೂರ್ತಿ ಪ್ರತಿಕ್ರಿಯಿಸಿದ್ದಾರೆ.**

# ಬಿಸಿಲ ಬೇಗೆಯ ಪರಿಣಾಮ: ಜಾನುವಾರುಗಳಲ್ಲಿ ಅನಾರೋಗ್ಯದ ಪ್ರಮಾಣ ಹೆಚ್ಚಳ

**• ಹವಾಮಾನದ ಬದಲಾವಣೆ, ಉಷ್ಣಾಂಶದಲ್ಲಿ ಏರಿಳಿತಗಳಿಂದ ಜಾನುವಾರುಗಳ ರೋಗ ನಿರೋಧಕ ಶಕ್ತಿ ಕುಂಠಿತ**

**• ಉದಯವಾಹಿನಿ ಕೋಟ**

ವಿಪರೀತ ಬಿಸಿಲು ಹಾಗೂ ಬಿಸಿಗಾಳಿಯ ದುಷ್ಪರಿಣಾಮ ಜಾನುವಾರುಗಳ ಮೇಲೆ ಕೂಡ ಆಗುತ್ತಿದ್ದು ಅನಾರೋಗ್ಯದಿಂದ ದನಗಳು ಮೃತಪಡುತ್ತಿರುವ ಪ್ರಕರಣಗಳು ಅಲ್ಲಲ್ಲಿ ದಾಖಲಾಗುತ್ತಿವೆ. ಆದ್ದರಿಂದ ಜನರ ಜತೆಗೆ ಜಾನುವಾರುಗಳ ಆರೋಗ್ಯ ರಕ್ಷಣೆಗೂ ಹೆಚ್ಚಿನ ಕಾಳಜಿ ತೋರುವ ಅಗತ್ಯವಿದೆ.

> **ಮನುಷ್ಯನ ರೀತಿಯಲ್ಲೇ ಬೇಸಗೆಯಲ್ಲಿ ಪ್ರಾಣಿಗಳ ಆರೋಗ್ಯದ ಬಗ್ಗೆ ಕೂಡ ಹೆಚ್ಚು ಕಾಳಜಿ ವಹಿಸಬೇಕು. ಅನಾರೋಗ್ಯದ ಲಕ್ಷಣ ಕಾಣಿಸಿದಾಗ ನಿರ್ಲಕ್ಷ್ಯ ತೋರಿದಲ್ಲಿ ಜೀವ ಹಾನಿಯಾಗುವ ಸಾಧ್ಯತೆಯೂ ಇರುತ್ತದೆ. ಹೀಗಾಗಿ ಹೆಚ್ಚಿನ ಜಾಗ್ರತೆ ಅಗತ್ಯ.**
> – ಡಾ| ರೆಡ್ಡಪ್ಪ


ಉದಯವಾಹಿನಿ ಚಿತ್ರ

**ಜೀವ ಹಾನಿಯಾಗುವ ಸಾಧ್ಯತೆ**

ಹವಾಮಾನದ ಬದಲಾವಣೆ, ಉಷ್ಣಾಂಶದಲ್ಲಿ ಏರಿಳಿತಗಳಿಂದ ಜಾನುವಾರುಗಳ ರೋಗ ನಿರೋಧಕ ಶಕ್ತಿ ಕುಂಠಿತವಾಗುತ್ತದೆ. ರೋಗ ವಾಹಕಗಳಾದ ಉಣುಗು ಮತ್ತಿತರ ಸೂಕ್ಷ್ಮ ಜೀವಿಗಳಿಂದ ರೋಗಾಣುಗಳು ವೃದ್ಧಿಸಿ ಹಲವು ರೀತಿಯ ಕಾಯಿಲೆಗಳು ಬಾಧಿಸುತ್ತವೆ. ಎಲ್ಲಕ್ಕಿಂತ ಮುಖ್ಯವಾಗಿ ಬೇಸಗೆಯಲ್ಲಿ ಸರಿಯಾಗಿ ಕುಡಿಯಲು ನೀರು ನೀಡದಿದ್ದರೆ, ಪೋಷಕಾಂಶದ ಬಗ್ಗೆ ಗಮನಹರಿಸದಿದ್ದರೆ, ಸ್ವಚ್ಛ ವಾತಾವರಣ ಕಲ್ಪಿಸದಿದ್ದರೆ ಹೆಚ್ಚಿನ ಸಮಸ್ಯೆಯಾಗುತ್ತದೆ. ಗಬ್ಬದ / ಕರು ಹಾಕಿದ ದನಗಳು, /ಅಶಕ್ತ ದನಗಳ ಬಗ್ಗೆ ಹೆಚ್ಚಿನ ಜಾಗ್ರತೆ ಮುಖ್ಯ. ಪುಟ್ಟ ಕರುಗಳಿಗೆ ದೇಹದ ಉಷ್ಣತೆ ಸರಿದೂಗಿಸಿಕೊಳ್ಳುವ ಶಕ್ತಿ ಇಲ್ಲದ ಕಾರಣ ಜ್ವರ ಬಾಧಿಸಬಹುದು.

ಬಯಲು ಗುಡ್ಡಗಾಡುಗಳಲ್ಲಿ ಮೇಯುವವು, ಕಾಂಕ್ರೀಟ್ ಛಾವಣಿ, ಶೀಟ್‌ಗಳಿಂದ ನಿರ್ಮಿಸಿದ ಹಟ್ಟಿಗಳಲ್ಲಿ ಸಾಕುವ ಜಾನುವಾರುಗಳು ಹೆಚ್ಚಿನ ಸಂಖ್ಯೆಯಲ್ಲಿ ಸೂರ್ಯಾಘಾತಕ್ಕೆ ಒಳಗಾಗುತ್ತವೆ. ಆದ್ದರಿಂದ ಅವುಗಳಿಗೆ ದಿನಕ್ಕೆ 2ರಿಂದ 3 ಸಲ ಶುದ್ಧವಾದ ನೀರನ್ನು ಕುಡಿಸಬೇಕು. ಬೆಳಗ್ಗೆ 11ರಿಂದ ಸಂಜೆ 4ರ ತನಕ ಬಿಸಿಲಿನ ತಾಪ ಹೆಚ್ಚು ಇರುವುದರಿಂದ ನೆರಳಿನಲ್ಲಿ ಸಂರಕ್ಷಿಸಬೇಕು. ಪೌಷ್ಟಿಕ ಆಹಾರ, ಹಸಿರು ಹುಲ್ಲು ನೀಡಬೇಕು. ಅಪರಾಹ್ನ ಬಿಸಿಲಿನ ವೇಳೆ ಬೂಸ ಮುಂತಾದ ಪಶು ಆಹಾರ ಒಳ್ಳೆಯದಲ್ಲ. ದೇಹದ ಉಷ್ಣತೆಯನ್ನು ಕಾಪಾಡಲು ದೇಹಕ್ಕೆ ನೀರು ಚಿಮುಕಿಸಿದರೆ ಉತ್ತಮ. ಕಾಂಕ್ರೀಟ್ ಛಾವಣಿ, ಶೀಟ್‌ಗಳಿಂದ ನಿರ್ಮಿಸಿದ ಗಾಳಿ-ಬೆಳಕು ಇಲ್ಲದ ಕೊಟ್ಟಿಗೆಗಳಿದ್ದರೆ ಅದರಿಂದ ದೂರವಿರಿಸಿ ಮರದ ಅಡಿ, ನೆರಳಿನ ಪ್ರದೇಶದಲ್ಲಿ ಕಟ್ಟಿ ಹಾಕುವುದು ಸೂಕ್ತ. ಆರೋಗ್ಯದಲ್ಲಿ ಸ್ವಲ್ಪ ವ್ಯತ್ಯಾಸ ಕಂಡು ಬಂದರೂ ತತ್‌ಕ್ಷಣ ಪಶುವೈದ್ಯರನ್ನು ಸಂಪರ್ಕಿಸಿ ಔಷಧ ನೀಡುವುದು, ಸೂಕ್ತಸಲಹೆ ಪಡೆಯುವುದು ಉತ್ತಮ ಎನ್ನುತ್ತಾರೆ ಬ್ರಹ್ಮಾವರ ತಾಲ್ಲೂಕು ಆಡಳಿತ ಪಶುವೈದ್ಯಾಧಿಕಾರಿ ಡಾ| ಪ್ರದೀಪ್ ಕುಮಾರ್. ಬೇಸಗೆಯಲ್ಲಿ ನಾಯಿ, ಬೆಕ್ಕುಗಳು ಕೂಡ ತಂಪಾದ ವಾತಾವರಣಕ್ಕೆ ಹಾತೊರೆಯುತ್ತವೆ. ಬಿಸಿ ಗಾಳಿಯಿಂದ ಅವುಗಳಿಗೆ ಉಸಿರುಗಟ್ಟುವಿಕೆ, ಹೃದಯ ಬಡಿತ ಹೆಚ್ಚಳ, ಜೊಲ್ಲು ಸುರಿಯುವಿಕೆ ಕಾಣಿಸಿಕೊಳ್ಳಬಹುದು. ಆಗ ಅವುಗಳಿಗೆ ನೆರಳಿನಲ್ಲಿ ವಿಶ್ರಾಂತಿ ಸಿಗುವಂತೆ ಮಾಡಿ ಸ್ವಚ್ಛ ವಾತಾವರಣ ಕಲ್ಪಿಸಬೇಕು. ತಣ್ಣನೆಯ ಆಹಾರ, ತಂಪಾದ ಗಾಳಿ ಇರುವಂತೆ ನೋಡಿಕೊಳ್ಳಬೇಕು. ನಿತ್ಯ ಸ್ನಾನ ಮಾಡಿಸುವ ಮೂಲಕ ದೇಹ ತಂಪಗಿರುವಂತೆ ಮಾಡಬೇಕು. ಕಾರಿನಲ್ಲಿ ಹೊರಗಡೆ ಕರೆದೊಯ್ಯುವುದು, ಕಾರಿನ ಒಳಗಡೆ ಬಿಡುವುದು ಸರಿಯಲ್ಲ. ಅತಿಯಾಗಿ ಜೊಲ್ಲು ಸುರಿಸುವುದು, ಉಸಿರಾಟದ ತೊಂದರೆಯ ಲಕ್ಷಣ ಕಂಡರೆ ಅಥವಾ ಜ್ವರ, ವಾಂತಿಯ ಲಕ್ಷಣ ಗಮನಕ್ಕೆ ಬಂದರೆ ವೈದ್ಯರನ್ನು ಭೇಟಿಯಾಗುವುದು ಸೂಕ್ತ.

### ಬೇಸಿಗೆಯಲ್ಲಿ ಉಲ್ಬಣ

**ಉಡುಪಿ ಜಿಲ್ಲೆಯಲ್ಲಿ ಕಳೆದ ಒಂದು ತಿಂಗಳಲ್ಲಿ 16 ದನಗಳು ಸಾವನ್ನಪ್ಪಿದ್ದು ಅದರಲ್ಲಿ 4 ವಿಷಮಿಶ್ರಿತ ಆಹಾರ ಸೇವನೆಯಿಂದ ಸಂಭವಿಸಿದರೆ, ಮಿಕ್ಕುಳಿದವು ಆರೋಗ್ಯ ಸಮಸ್ಯೆ ಬೇಸಗೆಯಲ್ಲಿ ಉಲ್ಬಣಗೊಂಡು ಸಂಭವಿಸಿದೆ. ದ.ಕ. ಜಿಲ್ಲೆಯಲ್ಲಿ 5 ದನಗಳು ಆರೋಗ್ಯ ಸಮಸ್ಯೆ ಉಲ್ಬಣಗೊಂಡು ಸಾವನ್ನಪ್ಪಿವೆ ಎಂದು ಪಶು ವೈದ್ಯ ಇಲಾಖೆ ಮೂಲಗಳು ತಿಳಿಸಿದೆ.**

### ವೈದ್ಯರ ಸಲಹೆ


**ಮೊಸರು ಮತ್ತು ಅನ್ನ, ಮಜ್ಜಿಗೆ ಅಥವಾ ಮೊಸರು ಬೆರೆಸಿದ ಪೀನಟ್ ಬಟರ್ ಅವುಗಳಿಗೆ ಬೇಸಗೆಯ ಉತ್ತಮ ಆಹಾರ. ಮಾಂಸಾಹಾರ, ಉಪ್ಪು ಮತ್ತು ಸಕ್ಕರೆ ಇರುವ ಉತ್ಪನ್ನಗಳನ್ನು ಕಡಿಮೆ ನೀಡಬೇಕು ಎನ್ನುವುದು ವೈದ್ಯರ ಸಲಹೆಯಾಗಿದೆ.**

# ಭಾವಿತಾಂಡಾ ಮತದಾರರು ಚುನಾವಣಾ ಬಹಿಷ್ಕಾರಕ್ಕೆ ನಿರ್ಧಾರ

**• ಉದಯವಾಹಿನಿ, ಚಿಂಚೋಳಿ**

ತಾಲ್ಲೂಕಿನ ಭಾವಿತಾಂಡಾದಲ್ಲಿ ಮತಗಟ್ಟೆ ಇಲ್ಲದಿರುವುದರಿಂದ ಸುಮಾರು 4ಕಿಮೀ ಪ್ರಯಾಣಿಸಿ ಕಲಭಾವಿ ತಾಂಡಾಕ್ಕೆ ಹೋಗಿ ಮತಚಲಾವಣೆ ಮಾಡಬೇಕು ಇದರಿಂದ ಗ್ರಾಮದಲ್ಲಿ ಅನೇಕರು ಹಿರಿಯರು,ಗರ್ಭಿಣಿಯರು, ವಿಕಲಚೇತನರು ಇರುವುದರಿಂದ ಅನ್ಯ ತಾಂಡಾಕ್ಕೆ ಹೋಗಿ ಮತದಾನ ಮಾಡಲು ಬಹಳಷ್ಟು ತೊಂದರೆ ಆಗುತ್ತಿದ್ದು ಭಾವಿತಾಂಡಾದಲ್ಲಿಯೇ ಮತದಾನದ ಭೂತ್ ಸ್ಥಾಪಿಸುವಂತೆ ಅನೇಕ ಬಾರಿ ತಹಸೀಲ್ದಾರ್ ಹಾಗೂ ಶಾಸಕರು ಸಂಸದರಿಗೂ ಮನವಿ ಸಲ್ಲಿಸಿದರು ಯಾವುದೇ ಪ್ರಯೋಜನವಾಗಿಲ್ಲ ಅದಕಾರಣ ಚುನಾವಣಾ ಬಹಿಷ್ಕಾರಕ್ಕೆ ತಾಂಡಾ ಜನರು ನಿರ್ಧಾರ ಮಾಡಲಾಗಿದೆ ಎಂದು ತಾಂಡಾ ನಿವಾಸಿ ಭೋಜು ಶೇಷು ಜಾಧವ ತಿಳಿಸಿದ್ದಾರೆ.

ಪೋಲಕಪಳ್ಳಿ ಗ್ರಾ.ಪಂ.ವ್ಯಾಪ್ತಿಯಲ್ಲಿ ಬರುವ ಭಾವಿತಾಂಡಾದಲ್ಲಿ ಸುಮಾರು 600ಜನಸಂಖ್ಯೆಯಿದ್ದು,370ಮತದಾರರಿದ್ದಾರೆ,ಒಬ್ಬರು ಗ್ರಾ.ಪಂ.ಸದಸ್ಯರಿದ್ದು,ಒಂದರಿಂದ ಐದನೇ ತರಗತಿವರೆಗೆ ಶಾಲೆಯಿದೆ,ಅಂಗನವಾಡಿ ಕೇಂದ್ರ ಸ್ಥಾನವಿದೆ,ಮತದಾನದ ಭೂತ್ ಯಾಕೆ ಇಲ್ಲಾ,ಮತದಾನ ಮಾಡುವುದಕ್ಕೆ ಭೂತ್ ಸ್ಥಾಪಿಸುವಂತೆ ಕಳೆದ 15ವರ್ಷಗಳಿಂದ ಮನವಿಗಳು ಸಲ್ಲಿಸುತ್ತಾ ಬಂದಿದ್ದೇವೆ,ಆದರೆ ಯಾವುದೇ ಪ್ರಯೋಜನವಾಗಿಲ್ಲಾ ಭೂತ್ ತಾಂಡಾದಲ್ಲಿ ಸ್ಥಾಪನೆ


ಉದಯವಾಹಿನಿ ಚಿತ್ರ

ಆಗುವವರೆಗೆ ನಾವೆಲ್ಲರೂ ಮತದಾನ ಮಾಡುವುದಿಲ್ಲ ಎಂದು ತಾಂಡಾ ನಿವಾಸಿಗಳು ಹೇಳಿದರು.

**ತಾಂಡಾಕ್ಕೆ ಮೂಲಭೂತ ಸೌಕರ್ಯ ಕೊರತೆ:** ತಾಂಡಾಕ್ಕೆ ಬಸ್ಸಿನ ಸೌಲಭ್ಯ ಇಲ್ಲ,ಸಾರ್ವಜನಿಕ ಶೌಚಾಲಯ ಇಲ್ಲ,ಜೆಜೆಎಂ ಯೋಜನೆಯಡಿಯಲ್ಲಿ ಕುಡಿಯುವ ನೀರು ಸರಬರಾಜು ಕಾಮಗಾರಿ ಕಳಪೆ ಕಾಮಗಾರಿ ಮಾಡಿ ಸಮರ್ಪಕವಾಗಿ ನೀರು ಮನೆಗಳಿಗೆ ತಲುಪುತ್ತಿಲ್ಲಾ, ಹದಗೆಟ್ಟ ಡಾಂಬರೀಕರಣ ರಸ್ತೆ,ಚರಂಡಿಗಳು ನಿರ್ಮಾಣ ಇಲ್ಲ,ಸಮರ್ಪಕವಾಗಿ ವಿದ್ಯುತ್ ಸಂಪರ್ಕ ತಂತಿಗಳು ಕೊರತೆಗಳುಯಿವೆ. ಶೀಘ್ರದಲ್ಲೇ ಭಾವಿತಾಂಡಾದಲ್ಲಿ ಮತದಾನ ಮಾಡಲು ಭೂತ್ ಸ್ಥಾಪಿಸಬೇಕು ಇಲ್ಲದಿದ್ದರೆ ನಾವೆಲ್ಲರೂ ಮತದಾನ ಮಾಡುವುದಿಲ್ಲ ಎಂದು ತಾಂಡಾ ನಿವಾಸಿಗಳು ಒಗ್ಗೂಡಿ ತಾಂಡಾದಲ್ಲಿ ಪತ್ರಕರ್ತರ ಮುಂದೆ ನೋವು ತೋಡಿಕೊಂಡರು.

ಈ ಸಂದರ್ಭದಲ್ಲಿ ಗ್ರಾಪಂ ಸದಸ್ಯ ನರಸಿಂಗ್ ರಾಠೋಡ್,ಚಂದುನಾಯಕ,ಹೇಮ್ಲಾನಾಯಕ, ದೇವಾಜಿನಾಯಕ,ಗೋಪಾಲ ರಾಠೋಡ್,ಧರ್ಮು ರಾಠೋಡ್ ,ಥಾಕು ರಾಠೋಡ್,ವಿಠ್ಠಲ ಜಾಧವ,ಖೂಭು ಜಾಧವ, ಪ್ರಭು ರಾಠೋಡ್,ಮಂಗಲಿಬಾಯಿ,ವಿಮಲಬಾಯಿ, ಸಭುತಿಬಾಯಿ,ದೇವಿದಾಸ ರಾಠೋಡ್,ಸುನೀಲ ರಾಠೋಡ್, ಭಾಗ್ಯಶ್ರೀ ಜಾಧವ,ದೇವಲಿಬಾಯಿ,ಧಮಸಿಬಾಯಿ, ಬಿಕ್ಕಿಬಾಯಿ ಚವ್ಹಾಣ,ಗೌರಿಬಾಯಿ,ಅನೇಕರಿದ್ದರು.

> **ಮತದಾನ ಮಾಡುವುದು ಪ್ರತಿಯೊಬ್ಬರ ಹಕ್ಕು ಮತದಾನ ಮಾಡುವಂತೆ ಕಂದಾಯ ಇಲಾಖೆಯ ಅಧಿಕಾರಿಗಳು ತಾಂಡಾಕ್ಕೆ ತೆರಳಿ ಜನರಿಗೆ ಮನವೋಲಿಸುವ ಪ್ರಯತ್ನ ಮಾಡಲಾಗುವುದು. ಭಾವಿತಾಂಡಾದಲ್ಲಿ ಅಂದಾಜು 365 ಮತದಾರರಿದ್ದು,ಮತಗಟ್ಟೆ ಸ್ಥಾಪಿಸಲು ಆಯೋಗದ ನಿಯಾಮವಳಿ ಪ್ರಕಾರ ನಿರ್ಧಿಷ್ಟ ಮಾನದಂಡಗಳಿದ್ದು,ಮುಂದಿನ ಚುನಾವಣೆವರೆಗೆ ಮತದಾರರ ಜನಸಂಖ್ಯೆ ನೋಡಿ ನಿರ್ಧಾರ ಮಾಡುತ್ತಾರೆ,ಮತಗಟ್ಟೆಗೆ ಭಾವಿತಾಂಡಾಕ್ಕೆ ಹೋಗಲು ಅಂತರ 4ಕಿಮೀಯಿದೆ,ಮೇಲಾಧಿಕಾರಿಗಳ ಆದೇಶ ಬಂದರೆ ಬಸ್ಸಿನ ವ್ಯವಸ್ಥೆ ಮಾಡಲಾಗುವುದು.**
> – ಸಂತೋಷ ಇನಾಂದಾರ
> ಸಹಾಯಕ ಚುನಾವಣಾಧಿಕಾರಿ ಚಿಂಚೋಳಿ.

# ಕಿಂಡಿ ಅಣೆಕಟ್ಟುಗಳಿಗೆ ಅಕ್ರಮ ಮರಳುಗಾರಿಕೆ ಹೊಡೆತ?

**• ಉದಯವಾಹಿನಿ, ಸುರತ್ಕಲ್**

ಒಂದೆಡೆ ತೀವ್ರವಾದ ಜಲಕ್ಷಾಮವನ್ನು ಎದುರಿಸುತ್ತಿರುವ ರೈತರು ಇದೀಗ ಕೃಷಿಗೆ ಆಸರೆಯಾಗಿದ್ದ ಸೂರಿಂಜೆ ಮೂಡಬೆಟ್ಟು ಬಳಿಯ ಕಿಂಡಿ ಅಣೆಕಟ್ಟು ಕುಸಿತವಾಗಿರುವುದರಿಂದ ಮುಂದಿನ ಬಾರಿ ಮಳೆ ನೀರನ್ನು ಹಿಡಿದಿಡುವ ಬಗ್ಗೆ ಚಿಂತಾಕ್ರಾಂತರಾಗಿದ್ದಾರೆ. ಈ ನಡುವೆ ಅಕ್ರಮ ಮರಳುಗಾರಿಕೆಯಿಂದಾಗಿ ಸೂರಿಂಜೆ ಗ್ರಾಮ ಪಂಚಾಯತ್ ವ್ಯಾಪ್ತಿಯ ಪುಚ್ಚಾಡಿ ಹಾಗೂ ಶಿಬರೂರು ಕಿಂಡಿ ಅಣೆಕಟ್ಟಿಗೂ ಕಂಟಕ ಎದುರಾಗಬಹುದೇ ಎಂಬ ಆತಂಕ ತಲೆದೋರಿದೆ.

ರಾತ್ರಿಯಾಗುತ್ತಿದ್ದಂತೆ ಸಿಕ್ಕ ಸಿಕ್ಕಲ್ಲಿ ಜೆಸಿಬಿ, ಡ್ರೆಜ್ಜಿಂಗ್ ಯಂತ್ರ, ದೋಣಿ ಬಳಸಿ ಮರಳು ತೆಗೆದು ಸಾಗಿಸುವ ಕಾರ್ಯ ನಡೆಯುತ್ತಿದ್ದು, ಇದರಿಂದ ಕಿಂಡಿಅಣೆಕಟ್ಟುಗಳ ಮೇಲೆ ಬೀಳುವ ದುಷ್ಪರಿಣಾಮವನ್ನು ರೈತರು ಎದುರಿಸುವಂತಾಗಿದೆ.

ನಂದಿನಿ ನದಿಗೆ ಒಟ್ಟು 17 ಕಿಂಡಿ ಅಣೆಕಟ್ಟುಗಳನ್ನು ನಿರ್ಮಿಸಲಾಗಿದೆ. ಇದನ್ನು ಕಾಲಕಾಲಕ್ಕೆ ಪರಿಶೀಲಿಸಿ ಸೋರಿಕೆ, ಬಿರುಕು ಮತ್ತಿತರ ಅಪಾಯದ ಕುರಿತು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಗ್ರಾಮ ಪಂಚಾಯತ್ ಸಹಯೋಗದಲ್ಲಿ ಮಾಹಿತಿ ಕಲೆ ಹಾಕಿ ನೀಡಬೇಕಿದೆ. ಮಾಹಿತಿ ನೀಡುವ ಕೆಲಸ ಆಗಿದ್ದರೂ ಸೂಕ್ತ ಸಂದರ್ಭದಲ್ಲಿ ಕ್ರಮ ಕೈಗೊಳ್ಳದಿರುವುದು ದುರಂತಕ್ಕೆ ಕಾರಣವಾಗಿದೆ. ಅಣೆಕಟ್ಟಿನ 500 ಮೀಟರ್ ಸುತ್ತಮುತ್ತ ಮರಳು ತೆಗೆಯಲು ನಿರ್ಬಂಧವಿದೆ. ಆದರೆ ಮರಳು ಹೆಚ್ಚಾಗಿ ಶೇಖರಣೆಯಾಗುವುದೇ ಇಂತಹ ಅಣೆಕಟ್ಟುಗಳ ಬಳಿ ಎಂಬುದು ಸಾಮಾನ್ಯ ವಿಚಾರ.



ಉದಯವಾಹಿನಿ ಚಿತ್ರ

**ಕ್ರಮ ಕೈಗೊಳ್ಳದಿರುವುದು ದುರಂತಕ್ಕೆ ಕಾರಣ**

# ಸೋಲಿನ ಭೀತಿಯಿಂದ ಜಿಗಜಿಣಗಿ ವಿರುದ್ಧ ಆಲಗೂರ ಅಪಪ್ರಚಾರ

**• ಉದಯವಾಹಿನಿ, ವಿಜಯಪುರ**

ಚುನಾವಣೆ ಪೂರ್ವದಲ್ಲೇ ಸೋಲು ಒಪ್ಪಿಕೊಂಡಿರುವ ಕಾಂಗ್ರೆಸ್ ಪಕ್ಷ ಅಭಿವೃದ್ಧಿ ವಿಷಯ ಪ್ರಸ್ತಾಪಿಸದೇ ಹಿಟ್ ಎಂಡ್ ರನ್ ಮಾಡುತ್ತದೆ. ಕ್ಷೇತ್ರಕ್ಕೆ ಮಾಡುವ ಕೆಲಸದ ಬಗ್ಗೆ ಮಾತನಾಡದೇ, ಬಿಜೆಪಿ ನಾಯಕರ ಮಧ್ಯೆ ಅಪಪ್ರಚಾರದ ಹೇಳಿಕೆಯಲ್ಲಿ ತೊಡಗಿರುವುದೇ ಸಾಕ್ಷಿ ಎಂದು ಮಾಜಿ ಶಾಸಕ ಅರುಣ ಶಹಾಪುರ ಹೇಳಿದರು.



ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಯತ್ನಾಳ ಅವರಿಗೆ ಮುಖ್ಯಮಂತ್ರಿ ಸ್ಥಾನ ತಪ್ಪಿಸಿ ಜಿಗಜಿಣಗಿ ಎಂದು ಟೀಕಿಸುವ ಕಾಂಗ್ರೆಸ್ ಅಭ್ಯರ್ಥಿಗೆ ನಮಗೂ ತಿರುಗೇಟು ನೀಡಲು ಬರುತ್ತದೆ ಎಂಬುದು ಗೊತ್ತಿರಲಿ. ಎಂ.ಬಿ.ಪಾಟೀಲ ಅವರಿಗೆ ಚುನಾವಣೆ ಪೂರ್ವದಲ್ಲಿ ನಡೆದ ಭಾರತ ಜೋಡೋ ಕಾಂಗ್ರೆಸ್ ರ‍್ಯಾಲಿಗೆ ಬಳಸಿಕೊಂಡು, ಉಪ ಮುಖ್ಯಮಂತ್ರಿ ಸ್ಥಾನವನ್ನೂ ನೀಡದೇ, ಕನಿಷ್ಠ ಅವರು ಕೇಳಿದ ಖಾತೆಯನ್ನೂ ನೀಡದೇ ಅವಮಾನ ಮಾಡಿಲ್ಲವೇ ಎಂದು ಕುಟುಕಿದರು. ಯತ್ನಾಳ ಎಂದರೆ ಅವರ ಸ್ಟೈಲೇ ಬೇರೆ, ಶೈಲಿಯೇ ಬೇರೆ, ಅವರು ತಮ್ಮ ವೈಖರಿಯಲ್ಲಿ ಪ್ರಚಾರ ಮಾಡಿದ್ದಾರೆ. ಜೆಡಿಎಸ್ ಮಾಜಿ ಶಾಸಕ ದೇವಾನಂದ ಚವ್ಹಾಣ ಪ್ರಧಾನಿ ನರೇಂದ್ರ ಮೋದಿ ಅವರು ಪಾಲ್ಗೊಂಡಿದ್ದ ಬಾಗಲಕೋಟೆ ಸಮಾವೇಶಕ್ಕೆ ಬಂದಿದ್ದರು. ಪ್ರತಿಯೊಬ್ಬರೂ ತಮ್ಮ ಕೆಲಸ ತಾವು ಮಾಡುತ್ತಿದ್ದಾರೆ ಎಂದರು.

ಸ್ವಯಂ ತಮ್ಮದೇ ನಾಯಕ ರಾಹುಲ್ ಗಾಂಧಿ ನಗರಕ್ಕೆ ಬಹಿರಂಗ ಪ್ರಚಾರಕ್ಕೆ ಬಂದಾಗ ದಲಿತ ಅಭ್ಯರ್ಥಿಯಾದ ರಾಜು ಆಲಗೂರ ಅವರನ್ನು ವೇದಿಕೆ ಕರೆಯುವುದಿರಲಿ, ಬ್ಯಾನರ್‌ನಲ್ಲಿ ಅವರ ಫೋಟೋ ಕೂಡ ಹಾಕಿರಲಿಲ್ಲ. ಕಾಂಗ್ರೆಸ್ ಅಭ್ಯರ್ಥಿ ಯಾರೆಂದೂ ಪ್ರಸ್ತಾಪಿಸಿ ಮತ ಯಾಚನೆ ಮಾಡದಿರುವುದು ಕಾಂಗ್ರೆಸ್ ಚುನಾವಣೆ ಪೂರ್ವದಲ್ಲೇ ಸೋಲು ಒಪ್ಪಿಕೊಂಡಂತಾಗಿದೆ ಎಂದರು.

> **ಶಾಸಕರಾಗಿದ್ದಾಗಲೇ ರಾಜು ಆಲಗೂರ ಅವರಿಗೆ ಟಿಕೆಟ್ ನಿರಾಕರಿಸಿ ಬೇರೆ ಪಕ್ಷದಿಂದ ಬಂದವರಿಗೆ ಟಿಕೆಟ್ ನೀಡಿದ್ದರು. ಕಳೆದ ವಿಧಾನಸಭೆ ಚುನಾವಣೆಯಲೂ ಟಿಕೆಟ್ ನೀಡಿರಲಿಲ್ಲ. ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಅಭ್ಯರ್ಥಿಗಳೇ ಸಿಗದ ಕಾರಣ ರಾಜು ಆಲಗೂರ ಕೊರಳಿಗೆ ಕಟ್ಟಲಾಗಿದೆ ಎಂದು ಕುಟುಕಿದರು** –ಅರುಣ ಶಹಾಪುರ

# ಬೀದರ್ ಲೋಕಸಭಾ: ಮತದಾನಕ್ಕೆ ಸಿದ್ಧತೆ ಪೂರ್ಣ


ಉದಯವಾಹಿನಿ ಚಿತ್ರ

**• ಉದಯವಾಹಿನಿ, ಬೀದರ್**

ಬಿರು ಬಿಸಿಲು, ಉಷ್ಣ ಹವೆಯ ನಡುವೆ ಬೀದರ್ ಲೋಕಸಭಾ ಕ್ಷೇತ್ರದ ಮತದಾನಕ್ಕೆ ಸಿದ್ಧತೆ ಪೂರ್ಣಗೊಂಡಿದೆ.ನೆರೆಯ ಚಿಂಚೋಳಿ, ಆಳಂದ ಕ್ಷೇತ್ರ ಸೇರಿದಂತೆ ಕ್ಷೇತ್ರದ ಒಟ್ಟು 2,024 ಮತಗಟ್ಟೆಗಳಲ್ಲಿ 18.92 ಲಕ್ಷ ಮತದಾರರು 18 ಅಭ್ಯರ್ಥಿಗಳ ಭವಿಷ್ಯ ನಿರ್ಧರಿಸುವರು.

ಚುನಾವಣೆ ಕರ್ತವ್ಯಕ್ಕೆ ನಿಯೋಜನೆಗೊಂಡ ಸಿಬ್ಬಂದಿ, ಭದ್ರತಾ ಸಿಬ್ಬಂದಿ ಸೋಮವಾರ ನಗರದ ಬಿ.ವಿ.ಬಿ ಕಾಲೇಜಿನ ಮಸ್ಟರಿಂಗ್ ಕೇಂದ್ರಕ್ಕೆ ಬಂದು ಚುನಾವಣಾ ಸಾಮಗ್ರಿಗಳೊಂದಿಗೆ ನಿಗದಿತ ಮತಗಟ್ಟೆಗಳಿಗೆ ತೆರಳಿದರು.

### ಒಟ್ಟು 6,896 ಸಿಬ್ಬಂದಿ ಕರ್ತವ್ಯಕ್ಕೆ ನಿಯೋಜನೆ

**ಮತಗಟ್ಟೆಗಳಿಗೆ ತೆರಳಲು ಚುನಾವಣಾ ಸಿಬ್ಬಂದಿಗೆ 243 ಕೆಎಸ್‌ಆರ್‌ಟಿಸಿ ಬಸ್, 250 ಕ್ರೂಸರ್‌ಗಳನ್ನು ಬಾಡಿಗೆ ಮೇಲೆ ತೆಗೆದುಕೊಳ್ಳಲಾಗಿದೆ. ಈ ಪೈಕಿ ಕೆಲವು ವಾಹನಗಳನ್ನು ಚುನಾವಣಾ ಅಧಿಕಾರಿಗಳು ಗಸ್ತಿನಲ್ಲಿ ತಿರುಗಾಡಲು ಮತ್ತು ಸಿಬ್ಬಂದಿಯನ್ನು ಕೊಂಡೊಯ್ಯಲು ಬಳಸಲಾಗುತ್ತದೆ. ಈ ವಾಹನಗಳಲ್ಲಿಯೇ ಮತದಾನ ಪೂರ್ಣಗೊಂಡ ನಂತರ ಚುನಾವಣಾ ಸಿಬ್ಬಂದಿ ಇವಿಎಂಗಳನ್ನು ತೆಗೆದುಕೊಂಡು ಬೀದರ್‌ನ ಬಿ.ವಿ.ಬಿ ಕಾಲೇಜಿನ ಮತದಾನ ಕೇಂದ್ರಕ್ಕೆ ತೆಗೆದುಕೊಂಡು ಬರುವರು. ಪಿಆರ್‌ಒ, ಎಪಿಆರ್, ಮತಗಟ್ಟೆ ಅಧಿಕಾರಿ ಸೇರಿದಂತೆ ಒಟ್ಟು 6,896 ಸಿಬ್ಬಂದಿ ಕರ್ತವ್ಯಕ್ಕೆ ನಿಯೋಜನೆಗೊಂಡಿದ್ದಾರೆ. ಅದೇ ರೀತಿ 2,349 ಜನ ಭದ್ರತಾ ಸಿಬ್ಬಂದಿಯನ್ನು ನೇಮಿಸಲಾಗಿದೆ.5,046 ಬ್ಯಾಲೆಟ್ ಯೂನಿಟ್, 2,743 ಕಂಟ್ರೋಲ್ ಯೂನಿಟ್ ಹಾಗೂ 2,908 ವಿವಿಪ್ಯಾಟ್‌ಗಳನ್ನು ಬಳಸಲಾಗುತ್ತಿದೆ.**

ಇವಿಎಂ, ವಿವಿಪ್ಯಾಟ್, ಕಂಟ್ರೋಲ್ ಯೂನಿಟ್, ಶಾಹಿ, ಒಆರ್‌ಎಸ್ ಪೊಟ್ಟಣ, ಮತದಾರರ ಪಟ್ಟಿಗಳೊಂದಿಗೆ ಬಸ್‌ಗಳ ಮೂಲಕ ಮತಗಟ್ಟೆಗಳಿಗೆ ತೆರಳಿದರು. ಇದಕ್ಕೂ ಮುನ್ನ ಸೆಕ್ಟರ್‌ವಾರು ಮತದಾನಕ್ಕೆ ಸಂಬಂಧಿಸಿದ ಸಾಮಗ್ರಿಗಳನ್ನು ವಿತರಿಸಲಾಯಿತು. ಸಿಬ್ಬಂದಿಗೆ ಅನ್ನ, ಸಾಂಬಾರ, ಮಜ್ಜಿಗೆ ವ್ಯವಸ್ಥೆ ಮಾಡಲಾಗಿತ್ತು. ಸಿಬ್ಬಂದಿ ಕುಳಿತುಕೊಳ್ಳಲು ಶಾಮಿಯಾನ ಹಾಕಲಾಗಿತ್ತು. ಬಿಸಿಲು, ಉಷ್ಣ ಅಲೆಗಳಿಂದ ಸಿಬ್ಬಂದಿ ಪರದಾಟ ನಡೆಸುವುದು ಕಂಡು ಬಂತು. ಬೇಗ ಚುನಾವಣೆ ಮುಗಿದರೆ ಸಾಕು ಎನ್ನುತ್ತಿದ್ದರು.

# ಕನ್ನಡ ಸಾಹಿತ್ಯ ಓದುವ ಹವ್ಯಾಸ ಬೆಳೆಸಿಕೊಳ್ಳಿ: ಸವಿತಾ ಹಿರೇಮಠ

**• ಉದಯವಾಹಿನಿ, ಚನ್ನಮ್ಮನ ಕಿತ್ತೂರು**

ಕನ್ನಡ ಪುಸ್ತಕ ಹಾಗೂ ಗ್ರಂಥಗಳನ್ನು ಓದುವ ಹವ್ಯಾಸ ಬೆಳೆಸಿಕೊಂಡಾಗ ಮಾತ್ರ ಕನ್ನಡ ಸಾಹಿತ್ಯ ಮತ್ತು ಭಾಷೆ ಉಳಿಸಿ, ಬೆಳಸಲು ಸಾಧ್ಯವೆಂದು ಕಿತ್ತೂರಿನ ಸಂಕಲ್ಪ ನೃತ್ಯಾಲಯದ ಸಂಚಾಲಕಿ ಸವಿತಾ ಹಿರೇಮಠ ನುಡಿದರು. ಕಿತ್ತೂರು ಕಲ್ಮಠದ ಶ್ರೀ ಚಂದರಗಿ ಸಭಾ ಭವನದಲ್ಲಿ ನಡೆದ ಕನ್ನಡ ಸಾಹಿತ್ಯ ಪರಿಷತ್ತಿನ 110ನೆಯ ಸಂಸ್ಥಾಪನಾ ದಿನಾಚರಣೆ

ಕಾರ್ಯಕ್ರಮದಲ್ಲಿ ''ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ'' ಎಂಬ ವಿಷಯ ಕುರಿತು ಉಪನ್ಯಾಸ ನೀಡಿ, ಇಂದು ಪಾಲಕರು ಮತ್ತು ವಿದ್ಯಾರ್ಥಿಗಳು ಇಂಗ್ಲಿಷ್ ಭಾಷೆಯ ವ್ಯಾಮೋಹದಿಂದ ನಮ್ಮ ಮಾತೃಭಾಷೆ ಕನ್ನಡವನ್ನು ಕಡೆಗಣಿಸುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು. ಅಧ್ಯಕ್ಷತೆ ವಹಿಸಿದ್ದ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ. ಎಸ್. ಬಿ. ದಳವಾಯಿ


ಉದಯವಾಹಿನಿ ಚಿತ್ರ

**ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ**

ಮಾತನಾಡಿ, ಕನ್ನಡ ಭಾಷೆ, ಸಾಹಿತ್ಯ, ಕಲೆ, ಜನಪದ, ಸಂಸ್ಕೃತಿ ಸಂವರ್ಧನೆ ಮತ್ತು ಸಂರಕ್ಷಣೆಯ ಮಹದಾಶೆಯೊಂದಿಗೆ 5 ಮೇ 1915 ರಲ್ಲಿ ಅಂದಿನ ಮೈಸೂರು ಅರಸರಾಗಿದ್ದ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರಿಂದ ಸ್ಥಾಪನೆಯಾದ ಕನ್ನಡ ಸಾಹಿತ್ಯ ಪರಿಷತ್ತು ಇಂದು ಹೆಮ್ಮರವಾಗಿ ಬೆಳೆದು ನಾಡೋಜ ಡಾ.ಮಹೇಶ ಜೋಶಿ ನೇತೃತ್ವದಲ್ಲಿ ಕನ್ನಡ ಭಾಷೆಯ ಬಲವರ್ಧನೆಗೆ ಕ್ರಿಯಾಶೀಲವಾಗಿರುವದು ಹೆಮ್ಮೆಯ ವಿಷಯವಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು.

### ಸುವರ್ಣ ಸಂಭ್ರಮ

**ಮುಖ್ಯ ಅತಿಥಿ ರಾಜಗುರು ಶಿಕ್ಷಣ ಸಂಸ್ಥೆಯ ಮುಖ್ಯಾಧ್ಯಾಪಕಿ ರಾಜೇಶ್ವರಿ ಕಳಸಣ್ಣವರ ಮಾತನಾಡಿ, ಅಂದಿನ ಮೈಸೂರು ರಾಜ್ಯವು ಕರ್ನಾಟಕ ರಾಜ್ಯವೆಂದು ನಾಮಕರಣವಾಗಿ ಸುವರ್ಣ ಸಂಭ್ರಮ ಆಚರಿಸುತ್ತಿರುವ ಸಂದರ್ಭದಲ್ಲಿ ಕಿತ್ತೂರಿನ ಕನ್ನಡ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು ಕನ್ನಡ ವಿಷಯದಲ್ಲಿ ನೂರಕ್ಕೆ ನೂರು ಅಂಕ ಪಡೆದ ವಿದ್ಯಾರ್ಥಿಗಳನ್ನು ಗೌರವಿಸುವುದರ ಜೊತೆಗೆ ಮಕ್ಕಳಿಗಾಗಿ ಕನ್ನಡ ಗೀತೆಗಳ, ಶರಣರ ವಚನಗಳು ಮತ್ತು ನೃತ್ಯಗಳನ್ನು ಹಮ್ಮಿಕೊಂಡಿರುವುದನ್ನು ಸ್ವಾಗತಿಸಿ, ಕನ್ನಡ ತೇರನ್ನು ಮುನ್ನಡೆಸುವಲ್ಲಿ ಯಶ ಕಾಣಲಿ ಎಂದು ಶುಭ ಕೋರಿದರು.**

# ಸೋಲಿನ ಭಯದಿಂದ ಕಾಂಗ್ರೆಸ್ ಹತಾಶ: ಶೆಟ್ಟರ್

**• ಉದಯವಾಹಿನಿ, ಬೆಳಗಾವಿ**

ಸೋಲಿನ ಭಯದಿಂದ ಕಾಂಗ್ರೆಸ್ ನಾಯಕರು ಹತಾಶರಾಗಿದ್ದಾರೆ. ಹೀಗಾಗಿ ವಾಮಮಾರ್ಗ ಹಿಡಿದು ಎಲ್ಲಾ ಕಡೆ ಹಣ ಹಂಚುವ ಕಾರ್ಯಕ್ಕೆ ಇಳಿದಿದ್ದಾರೆ ಎಂದು ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ ನೇರ ಆರೋಪ ಮಾಡಿದರು. ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯ ಆಭಿವೃದ್ಧಿಗೆ ಕಾಂಗ್ರೆಸ್ ಕೊಡುಗೆ ಶೂನ್ಯ. ಅದೇ ಬಿಜೆಪಿ ಸಾಧನೆಯ ದೊಡ್ಡ ಪಟ್ಟಿಯೇ ಇದೆ. ಇದರಿಂದ ಹತಾಶಗೊಂಡಿರುವ ಕಾಂಗ್ರೆಸ್ ಮತದಾರರಿಗೆ ಹಣ ಹಂಚುವ ಕಾರ್ಯ ಆರಂಭಿಸಿದ್ದಾರೆ ಎಂದರು.

ಗೋಕಾಕ ಮತ್ತು ಬೆಳಗಾವಿ ದಕ್ಷಿಣ ಕ್ಷೇತ್ರದಲ್ಲಿ ಮತದಾರರಿಗೆ ಹಣ ಹಂಚುವಾಗ ನಮ್ಮ ಕಾರ್ಯಕರ್ತರ ಕೈಗೆ ಸಿಕ್ಕುಬಿದ್ದಿದ್ದಾರೆ. ಸಚಿವೆ ಲಕ್ಷ್ಮೀ ಹೆಬ್ಬಾಳಕರ ಇದರ ಹಿಂದೆ ಇರುವುದು ಗೊತ್ತಾಗಿದೆ. ಬೆಳಗಾವಿಯ ಶಹಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲು ನಮ್ಮವರು ಹೋದಾಗ ಹಣ ಹಿಡಿದುಕೊಟ್ಟವರ ಮೇಲೆಯೇ ಪ್ರಕರಣ ದಾಖಲಿಸುವ ಪ್ರಯತ್ನವನ್ನು ಪೊಲೀಸರು


ಉದಯವಾಹಿನಿ ಚಿತ್ರ

ಮಾಡಿದ್ದಾರೆ. ಇಲ್ಲಿ ಕಾಂಗ್ರೆಸ್‌ನವರಿಂದ ಆಧಿಕಾರ ದುರುಪಯೋಗವಾಗುತ್ತಿದೆ. ನಾವು ಈ ಸಂಬಂಧ ಕಾನೂನಾತ್ಮಕವಾಗಿ ಹೋರಾಟ ಮಾಡುತ್ತೇವೆ ಎಂದು ಹೇಳಿದರು. ಕಾಂಗ್ರೆಸ್‌ನವರು ಹಣದಿಂದ ಚುನಾವಣೆ ಗೆಲ್ಲಬಹುದು ಎಂಬ ಉತ್ಸಾಹದಲ್ಲಿದ್ದಾರೆ. ಆದರೆ ಜನರು ಅವರಿಂದ ಹಣ ಪಡೆದು ಬಿಜೆಪಿಗೆ ಮತಹಾಕಲಿದ್ದಾರೆ. ಜಿಲ್ಲೆಯ ಜನರಿಗೆ ಕಾಂಗ್ರೆಸ್‌ನ ಧೋರಣೆ ಹಾಗೂ ಮೋದಿ ಅವರ ಜನಪ್ರಿಯತೆಯ ಅರಿವಾಗಿದೆ ಎಂದರು. ಈ ಚುನಾವಣೆ ಎರಡನೇ ಸ್ವಾತಂತ್ರ್ಯ ಹೋರಾಟವಾಗಿದೆ ಎಂಬ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ ಅವರು, ಮುಖ್ಯಮಂತ್ರಿಗಳು ಏನೇನೋ ಹೇಳುತ್ತಾರೆ. ಇದು ಬ್ರಿಟಿಷರ ವಿರುದ್ಧದ ಹೋರಾಟವೇ ಎಂದು ಮರು ಪ್ರಶ್ನೆ ಹಾಕಿದರು.

# ಪ್ರಜ್ವಲ್ ರೇವಣ್ಣ ಬಂಧಿಸಿ: ಜನಪರ ಸಂಘಟನೆಗಳು ಒತ್ತಾಯ

**• ರಾಜ್ಯ ಸರ್ಕಾರ ಯಾವುದೇ ಕಾರಣಕ್ಕೂ ಜಾತಿ ಲೆಕ್ಕಾಚಾರ ಮಾಡದೆ ಅಧಿಕಾರಿಗಳು ಸೂಕ್ತ ಕ್ರಮದೊಂದಿಗೆ ತನಿಖೆ ನಡೆಸಬೇಕು**

**• ಉದಯವಾಹಿನಿ ಸಿಂಧನೂರು**

ಹಾಸನ ಜಿಲ್ಲೆಯ ಪೆನ್ ಡ್ರೈವ್ ಲೈಂಗಿಕ ದೌರ್ಜನ್ಯ ಪ್ರಕರಣಕ್ಕೆ ಸಂಬಂಧಿಸಿದ ಪ್ರಜ್ವಲ್ ರೇವಣ್ಣ ಇವರುಗಳು ಅತ್ಯಾಚಾರ ಫೇಸ್ಬುಕ್. ವಾಟ್ಸಪ್ ನಲ್ಲಿ ಅಶ್ಲೀಲ ವಿಡಿಯೋ ಹರಿದಾಡುತ್ತಿರುವುದು ಇಡೀ ಕರ್ನಾಟಕ ರಾಜ್ಯದ ಜನರು ತಲೆ ತಗ್ಗಿಸುವಂತೆ ಮಾಡಿದ ಪ್ರಜ್ವಲ್ ರೇವಣ್ಣ ಎಲ್ಲಿದ್ದರೂ ಸಹ ರಾಜ್ಯ ಸರ್ಕಾರ ಕಾನೂನು ಮೂಲಕ ಬಂಧಿಸಿ ಸೂಕ್ತ ತನಿಖೆ ನಡೆಸಿ ಶಿಕ್ಷೆಗೆ ಗೊಳಿಪಡಿಸಬೇಕು ಮತ್ತು ಮಹಿಳೆಯರನ್ನು ರಕ್ಷಿಸುವ ನಿಟ್ಟಿನಲ್ಲಿ ಸರ್ಕಾರ ಕಾನೂನು ಜಾರಿಗೆ ತರಬೇಕೆಂದು ಎಂದು ಜನ ಪರ ಸಂಘಟನೆಗಳು ತಾಲ್ಲೂಕು ತಹಶೀಲ್ದಾರ್ ಮೂಲಕ ಮಾನ್ಯ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಿ. ಪ್ರತಿಭಟನೆ ಮೂಲಕ ಆಗ್ರಹಿಸಿದರು.

ಪ್ರತಿಭಟನೆ ಕುರಿತು ಮಾತನಾಡಿದ ಜನಪರ ಸಂಘಟನೆಗಳು ಸಂಚಾಲಕ ನಾಗರಾಜ ಪೂಜಾರಿ ಅವರು ಮಾಜಿ ಪ್ರಧಾನಿ ದೇವೇಗೌಡ ಅವರು ದೊಡ್ಡ ಮಗನಾದ ಎಚ್ ಡಿ ರೇವಣ್ಣ ಮೊಮ್ಮಗ ನಾದ ಹಾಸನ ಜಿಲ್ಲೆಯ ಎಂಪಿ ಪ್ರಜ್ವಲ್ ರೇವಣ್ಣ ಇವರುಗಳು ಪೆನ್ ಡ್ರೈವ್ ಲೈಂಗಿಕ ಲೈಂಗಿಕ ದೌರ್ಜನ್ಯ ಪ್ರಕರಣಗಳು ಅಶ್ಲೀಲ ವಿಡಿಯೋ ತುಣುಕುಗಳು ವಾಟ್ಸಪ್ ಫೇಸ್ಬುಕ್ ನಲ್ಲಿ ಹರಿದಾಡುತ್ತಿರುವುದನ್ನು ನೋಡಿ ಇಡೀ ರಾಜ್ಯದ ಜನರು ತಲೆ ತಗ್ಗಿಸುವಂತೆ ಮಾಡಿದ್ದಾರೆ. ತಮ್ಮ ಮನೆಯ ಕೆಲಸ ಮಾಡುವ ಮಹಿಳಾ ಸೇರಿ ಸುಮಾರು ಮಹಿಳೆಯರಿಗೆ ಮಾನಸಿಕ ಕಿರುಕುಳ ಕೊಟ್ಟು ಕೊಲೆ ಬೆದರಿಕೆ ಹಾಕಿದ್ದಲ್ಲದೆ 2700 ಅಧಿಕ ಮಹಿಳೆಯರನ್ನು ಅತ್ಯಾಚಾರ ಮಾಡಿದ್ದಾನೆ. ಹಾಸನ ಜಿಲ್ಲೆಯ ಎಂಪಿ. ಪ್ರಜ್ವಲ್ ರೇವಣ್ಣ ಎಂದು ಕಿಡಿಕಾರಿದರು.

ರಾಜ್ಯ ಸರ್ಕಾರ ಯಾವುದೇ ಕಾರಣಕ್ಕೂ ಜಾತಿ ಲೆಕ್ಕಾಚಾರ ಮಾಡಿದೆ ಅಧಿಕಾರಿಗಳು ಸೂಕ್ತ ಕ್ರಮದೊಂದಿಗೆ ತನಿಖೆ ನಡೆಸಿ ಪ್ರಜ್ವಲ್ ರೇವಣ್ಣ ಹಾಗೂ ಎಚ್ಡಿ ರೇವಣ್ಣ ಅವರನ್ನು ಶಿಕ್ಷೆಗೆ ಗೊಳಿಪಡಿಸಬೇಕು ಎಂದು ಒತ್ತಾಯಿ ಮಾಡಿದರು.


ಉದಯವಾಹಿನಿ ಚಿತ್ರ

**ಸೂಕ್ತ ಕ್ರಮದೊಂದಿಗೆ ತನಿಖೆ ನಡೆಸಿ**

ರಾಜ್ಯದಲ್ಲಿ ಹೆಣ್ಣು ಮಕ್ಕಳು ತಲೆ ತಗ್ಗಿಸುವಂತೆ ಮಾಡಿದ 2700 ಹೆಚ್ಚು ಮಹಿಳೆಯರನ್ನು ಅತ್ಯಾಚಾರ ಮಾಡಿದ. ಕಾಮುಕರು ವಿರುದ್ಧ ಮತ್ತು ಮಹಿಳೆಯರಿಗಾಗಿ ರಾಜ್ಯ ಸರ್ಕಾರ ಒಂದು ವಿಶೇಷ ಕಾನೂನು ರಚಿಸಬೇಕು. ಈ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಇಂತಹ ನೀಚ ಕೃತಿಯನ್ನು ಎಸಗಿದ ಪ್ರಜ್ವಲ್ ರೇವಣ್ಣ ಹಾಗೂ ಎಚ್ಡಿ ರೇವಣ್ಣ ಅವರನ್ನು ಸರ್ಕಾರ ಸರಿಯಾದ ರೀತಿಯಲ್ಲಿ ತನಿಖೆ ನಡೆಸಿ ವಿಕೃತ ಕಾಮುಕರನ್ನು ಗಲ್ಲಿಗೆ ಹಾಕಬೇಕು ಎಂದು ಜನಪರ ಸಂಘಟನೆಗಳು ಮಹಿಳೆಯ ಅಧ್ಯಕ್ಷರಾದ ವಿರುಪಾಮ್ಮ ಅವರು ಆಗ್ರಹಿಸಿದರು.

ಈ ಸಂದರ್ಭದಲ್ಲಿ. ಬಿ ಎನ್ ಯರದಿಹಾಳ. ಬಸವರಾಜ ಬೆಳಗುರ್ಕಿ. ಬಸವರಾಜ ರೈತನ ನಗರ ಕ್ಯಾಂಪ್. ಮೋಕ್ಷಮ್ಮ. ದೀಪಾ. ಕವಿತಾ. ಇಂದ್ರಮ್ಮ ಬಸುಲಿಂಗಮ್ಮ. ಭೀಮಾಂಬಿಕೆ ಸೇರಿದಂತೆ ಇತರರು ಇದ್ದರು

### ಇದರಲ್ಲಿ ವಿರೋಧ ಪಕ್ಷಗಳ ಕೈವಾಡ ಇದೆ

**ನಾಚಿಕೆ ಮಾನ ಮರ್ಯಾದೆ ಇದ್ದರೆ. ಬಿಜೆಪಿ ನಾಯಕರು ಪ್ರಜ್ವಲ್ ರೇವಣ್ಣ ವಿರುದ್ಧ ದ್ವನಿ ಮಾತಾಡುತ್ತಿಲ್ಲ. ಯಾಕೆ..? ರಾಜ್ಯ ಸರ್ಕಾರ ಕೂಡಲೇ ಪ್ರಜ್ವಲ್ ರೇವಣ್ಣನನ್ನು ಬಂಧಿಸಿ ಪೋಲಿಸ್ ಇಲಾಖೆ ಒಬ್ಬ ಮಹಿಳೆ ಪಿಎಸ್ಐ ಸೇರಿ ಮಹಿಳಾ ಅಧಿಕಾರಿಗಳನ್ನು ಅಧಿಕಾರದ ದರ್ಪದಿಂದ ಹೆಣ್ಣು ಮಕ್ಕಳನ್ನು ತನ್ನ ಕಾಮಕ್ಕಾಗಿ ಮಹಿಳೆಯರನ್ನು ಬಳಸಿಕೊಳ್ಳುತ್ತಿದ್ದಾನೆ. ಈ ಪ್ರಕಾರಗಳು ಬಗ್ಗೆ ಸ್ವಾಮೀಜಿಗಳು ಮತ್ತು ಪ್ರಧಾನಿ ಮೋದಿ. ಹಾಗೂ ಮಾಜಿ ಪ್ರಧಾನಿ ದೇವೇಗೌಡರ ಯಾಕೆ ಮಾತನಾಡುತ್ತಿಲ್ಲ. ಬೇರೆ ಹೆಣ್ಣು ಮಕ್ಕಳ ಬಗ್ಗೆ ಸಾರ್ವಜನಿಕರು ವೇದಿಕೆ ಮೇಲೆ ದೊಡ್ಡದಾಗಿ ಭಾಷಣ ಮಾಡುತ್ತಾರೆ. ಈಗ ಎಲ್ಲಿ ಹೋಯಿತೋ ಪುರುಷೋತ್ತಮ..?**

## ಮಿನಿ ನ್ಯೂಸ್

### ನಿಯಂತ್ರಣ ತಪ್ಪಿ ಚರಂಡಿಗೆ ಉರುಳಿದ ಕಾರು: ಇಬ್ಬರು ಸ್ಥಳದಲ್ಲೇ ಸಾವು

**• ಉದಯವಾಹಿನಿ,ಭರಮಸಾಗರ**

ಸಮೀಪದ ರಾ.ಹೆ 48 ರ ಹುಣಸೆಕಟ್ಟೆ ಬಳಿ ಸೋಮವಾರ ಬೆಳಗ್ಗೆ ಸಂಭವಿಸಿದ ಕಾರು ಅಪಘಾತದಲ್ಲಿ ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ನಡೆದಿದೆ. ಕೊಟ್ರೇಶಪ್ಪ (65) ಪುಷ್ಪಾ (55) ಮೃತರು. ಚಾಲಕನ ನಿಯಂತ್ರಣ ತಪ್ಪಿ ಕಾರು ರಾಷ್ಟ್ರೀಯ ಹೆದ್ದಾರಿ ಪಕ್ಕದ ಚರಂಡಿಗೆ ಉರುಳಿದ ಪರಿಣಾಮ ಕಾರಿನಲ್ಲಿದ್ದ ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ . ಕಾರಿನಲ್ಲಿದ್ದ ಇತರೆ ನಾಲ್ವರಿಗೆ ಗಂಭೀರ ಗಾಯಗೊಂಡು ದಾವಣಗೆರೆ ಜಿಲ್ಲಾ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಮೂಲಗಳಿಂದ ತಿಳಿದುಬಂದಿದೆ. ದಾವಣಗೆರೆ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

### ಬಯಲು ಸೀಮೆಯ ಅಭಿವೃದ್ಧಿ ಮಂಡಳಿ ಕಾರ್ಯದರ್ಶಿ ಲೋಕಾಯುಕ್ತ ಬಲೆಗೆ

**• ಉದಯವಾಹಿನಿ ಚಿತ್ರದುರ್ಗ**

ಚಿತ್ರದುರ್ಗ ಬಯಲು ಸೀಮೆಯ ಅಭಿವೃದ್ಧಿ ಮಂಡಳಿ ಕಾರ್ಯದರ್ಶಿ ಬಸವರಾಜಪ್ಪ 4,00,000 ರೂಪಾಯಿ ಲಂಚ ಸ್ವೀಕರಿಸುವಾಗ ಲೋಕಾಯುಕ್ತ ಅಧಿಕಾರಿಗಳ ಬಲೆಗೆ ಬಿದ್ದಿದ್ದಾರೆ ಎನ್ನುವ ಮಾಹಿತಿ ಲಭ್ಯವಾಗಿದೆ. ಗುತ್ತಿಗೆದಾರನ ಕಾಮಗಾರಿಗೆ ಬಿಲ್ ಪಾವತಿ ಮಾಡಲು ಲಂಚಕ್ಕೆ ಬೇಡಿಕೆ ಇಟ್ಟಿದ್ದಾರೆ.

ಗುತ್ತಿಗೆದಾರ ಸಿದ್ದನಗೌಡನಿಂದ 4 ಲಕ್ಷ ರೂಪಾಯಿ ಲಂಚ ಸ್ವೀಕರಿಸುವ ವೇಳೆ ಲೋಕಾಯುಕ್ತ ಅಧಿಕಾರಿಗಳು ಬಯಲು ಸೀಮೆಯ ಅಭಿವೃದ್ಧಿ ಮಂಡಳಿ ಕಾರ್ಯದರ್ಶಿಯನ್ನು ಬಲೆಗೆ ಕೆಡವಿದ್ದಾರೆ ಎನ್ನುವ ಮಾಹಿತಿ ಲಭ್ಯವಾಗಿದೆ. ಈ ದಾಳಿಯನ್ನು ಲೋಕಾಯುಕ್ತ ಡಿವೈಎಸ್ಪಿ ಬಸವರಾಜ್ ನೇತೃತ್ವದಲ್ಲಿ ನಡೆಸಲಾಗಿದ್ದು, ಆರೋಪಿ ವಿರುದ್ಧ ಪ್ರಕರಣ ದಾಖಲಿಸಿ ತನಿಖೆ ನಡೆಸುತ್ತಿದ್ದಾರೆ ಎನ್ನಲಾಗಿದೆ.

### ಕಾಂಗ್ರೆಸ್ ಶಾಸಕರೊಬ್ಬರ ಷಡ್ಯಂತ್ರದಿಂದ ರೇವಣ್ಣ ಬಂಧನ: ಮಾಜಿ ಶಾಸಕ ಲಿಂಗೇಶ್

**• ಉದಯವಾಹಿನಿ ಹಾಸನ**



ಲೈಂಗಿಕ ದೌರ್ಜನ್ಯ ಆರೋಪ ಹಾಗೂ ಸಂತ್ರಸ್ತ ಮಹಿಳೆಯ ಕಿಡ್ನ್ಯಾಪ್ ಪ್ರಕರಣದಲ್ಲಿ ಎಸ್‌ಐಟಿ ಅಧಿಕಾರಿಗಳು ಮಾಜಿ ಸಚಿವ ಹೆಚ್.ಡಿ.ರೇವಣ್ಣರನ್ನು ಬಂಧಿಸಿದ್ದು, ಇದರ ಹಿಂದೆ ಕಾಂಗ್ರೆಸ್ ಶಾಸಕರೊಬ್ಬರ ಕೈವಾಡವಿದೆ ಎಂದು ಮಾಜಿ ಶಾಸಕ, ಜೆಡಿಎಸ್ ಜಿಲ್ಲಾಧ್ಯಕ್ಷ ಲಿಂಗೇಶ್ ಆರೋಪಿಸಿದ್ದಾರೆ. ಹಾಸನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಲಿಂಗೇಶ್, ಯಾವುದೇ ತಪ್ಪು ಮಾಡದ ರೇವಣ್ಣರನ್ನು ರಾಜಕೀಯ ಷಡ್ಯಂತ್ರದಿಂದ ವಿನಾಕಾರಣ ಬಂಧಿಸಲಾಗಿದೆ. ಇದರ ಹಿಂದೆ ಕೆ.ಆರ್. ನಗರದ ಶಾಸಕರೊಬ್ಬರ ಚಿತಾವಣೆಯಿದೆ ಎಂದು ಪರೋಕ್ಷವಾಗಿ ಶಾಸಕ ರವಿಶಂಕರ್ ವಿರುದ್ಧ ಆರೋಪ ಮಾಡಿದ್ದಾರೆ.

ಹೆಚ್.ಡಿ.ರೇವಣ್ಣ ತಮ್ಮ ತಂದೆ-ತಾಯಿ ಆರೋಗ್ಯ ವಿಚಾರಿಸಲೆಂದು ದೇವೇಗೌಡರ ಮನೆಗೆ ಹೋಗಿದ್ದರು ಹೊರತು ಅವರ ಮನೆಯಲ್ಲಿ ಅವಿತು ಕೂತಿರಲಿಲ್ಲ ಎಂದು ಲಿಂಗೇಶ್ ತಿಳಿಸಿದ್ದಾರೆ.

### ವನ್ಯಜೀವಿ ದಾಳಿಗೆ 16 ಜನರ ಸಾವು

**• ಉದಯವಾಹಿನಿ ಚಿಕ್ಕಮಗಳೂರು**

ಕಾಫಿನಾಡಿನ ಮಲೆನಾಡು ಭಾಗದಲ್ಲಿ ಕಾಡಾನೆಗಳ ಹಾವಳಿ ನಿಲ್ಲುವ ಲಕ್ಷಣಗಳು ಕಾಣುತ್ತಿಲ್ಲ. ಆಗಾಗ ಕಾಡಾನೆಗಳು ಜೀವ ಬಲಿ ಪಡೆಯುತ್ತಿದ್ದು, ಇಲ್ಲಿನ ಜನ ಕೂಲಿ ಕೆಲಸಕ್ಕೆ ತೆರಳಲು ಭಯಭೀತರಾಗಿದ್ದಾರೆ. ಇತ್ತೀಚೆಗೆ ''ಬೀಟಮ್ಮ ಗ್ಯಾಂಗ್' (ಅರಣ್ಯ ಇಲಾಖೆ ಇಟ್ಟ ಹೆಸರು) ಕಾಡಾನೆಗಳ ಹಿಂಡು ಇಲ್ಲಿನ ಜನರ ನಿದ್ದೆಗೆಡಿಸಿತ್ತು.


ಉದಯವಾಹಿನಿ ಚಿತ್ರ

ಒಂಟಿ ಸಲಗವೊಂದು ಈ ಭಾಗದಲ್ಲಿ ಸಂಚರಿಸುತ್ತಲೇ ಇದೆ. ಕಾಡಾನೆಗಳು ಮಾನವ ಜೀವಕ್ಕೆ ಹಾನಿ ಮಾಡುತ್ತಿರುವುದಲ್ಲದೆ ರೈತರು ಬೆಳೆದಿರುವ ಬೆಳೆಗಳನ್ನು ನಾಶಪಡಿಸುತ್ತಿವೆ. ಕಾಡಾನೆಗಳ ಹಾವಳಿ ಮಲೆನಾಡಿನ ಜನರಿಗೆ ದೊಡ್ಡ ತಲೆನೋವಾಗಿದೆ. ಜಿಲ್ಲೆಯ ಚಿಕ್ಕಮಗಳೂರು ವಿಭಾಗದಲ್ಲಿ ಕಳೆದ ಐದು ವರ್ಷಗಳಲ್ಲಿ ಕಾಡಾನೆ 15 ಜನರನ್ನು ಬಲಿ ಪಡೆದಿವೆ. ಅರಣ್ಯ ಇಲಾಖೆ ಕಾಡಾನೆಗಳ ಹಾವಳಿ ತಡೆಗಟ್ಟಲು ನಿರಂತರವಾಗಿ ಪ್ರಯತ್ನಿಸುತ್ತಿದ್ದರೂ ಯಾವುದೇ ಪ್ರಯೋಜನ ಕಾಣುತ್ತಿಲ್ಲ. ಮೂಡಿಗೆರೆ ತಾಲ್ಲೂಕು ಊರುಬಗೆಯ ಕುಂಬರಡಿ ಗ್ರಾಮದ ಸುನಿಲ್ 2018ರ ಅ.23ರಂದು ಕಾಡಾನೆ ದಾಳಿಗೆ ಮೃತಪಟ್ಟಿದ್ದರೆ, 2019ರ ಜ.22ರಂದು ಜಾಗರ ಹೋಬಳಿ ಗೋಣಕಲ್‌ನ ಕುಮಾರನಾಯ್ಕ, ಮಲ್ಲೇನಹಳ್ಳಿಯ ಪ್ರೇಮನಾಥ, 2019ರ ಮಾ.10ರಂದು ಮೂಡಿಗೆರೆ ತಾಲ್ಲೂಕು ಕೋಗಿಲೆಯ ಜಯಮ್ಮ 2019ರ ಜು.30ರಂದು, ಶಿರಗೂರಿನ ರಂಗಯ್ಯ, 2019ರ ನ.11ರಂದು, 2021 ಜು. 5ರಂದು ಅರಣ್ಯ ರಕ್ಷಕ ಪುಟ್ಟರಾಜು ಗಲ್ಲನ್‌ಪೇಟೆ ಕಾಡಾನೆಯನ್ನು ಕಾಡಿಗಟ್ಟಲು ತೆರಳಿದ್ದ ವೇಳೆ ಕಾಡಾನೆ ದಾಳಿಗೆ ಸಿಲುಕಿ ಮೃತಪಟ್ಟಿದ್ದಾರೆ.

### ಮತಗಟ್ಟೆಗಳಿಗೆ ತೆರಳಿದ ಅಧಿಕಾರಿಗಳು

**• ಉದಯವಾಹಿನಿ ದಾವಣಗೆರೆ**


ಉದಯವಾಹಿನಿ ಚಿತ್ರ

ಮೇ 7ರಂದು ನಡೆಯಲಿರುವ ಲೋಕಸಭಾ ಕ್ಷೇತ್ರದ ಚುನಾವಣೆಗೆ ನಿಯೋಜನೆಗೊಂಡಿರುವ ಅಧಿಕಾರಿಗಳು, ಸಿಬ್ಬಂದಿ, ನೌಕರರು, ರಕ್ಷಣಾ ಸಿಬ್ಬಂದಿಯವರು ಸೋಮವಾರ ಮತಗಟ್ಟೆಗಳಿಗೆ ತೆರಳಿದರು. ದಾವಣಗೆರೆ ಉತ್ತರ, ದಾವಣಗೆರೆ ದಕ್ಷಿಣ ಮತ್ತು ಮಾಯಕೊಂಡ ಕ್ಷೇತ್ರದ ಮಸ್ಟರಿಂಗ್ ಕೇಂದ್ರದಲ್ಲಿ ಬೆಳಗ್ಗೆಯಿಂದ ಹಾಜರಾದ ಸಿಬ್ಬಂದಿ ತಮ್ಮ ನಿಯೋಜಿತ ಕೇಂದ್ರಗಳಿಗೆ ವಿದ್ಯುನ್ಮಾನ ಮತಯಂತ್ರ, ಅಗತ್ಯ ಪರಿಕರಗಳ ಪಡೆದುಕೊಂಡು, ತಮ್ಮೊಂದಿಗೆ ನಿಯೋಜಿತಗೊಂಡ ಇತರೆ ಸಿಬ್ಬಂದಿಯ ಜೊತೆಗೆ ಸಾಗಿದ್ದು ಕಂಡು ಬಂದಿತು. ಮತಕೇಂದ್ರ ತೆರಳುವ ಮುನ್ನ ಮತದಾರರ ಪಟ್ಟಿ, ಶಾಯಿ ಹೀಗೆ ಪ್ರತಿಯೊಂದನ್ನೂ ಪುನರ್ ಪರಿಶೀಲಿಸಿ, ಸರಿಯಾಗಿದೆ ಎಂದು ಖಾತ್ರಿಪಡಿಸಿಕೊಂಡರು.

ಪ್ರತಿಯೊಂದು ಜವಾಬ್ದಾರಿ ಇರುತ್ತದೆ. ಕೊಂಚ ವ್ಯತ್ಯಯವಾದರೂ ಮತಗಟ್ಟೆಗಳಲ್ಲಿ ಸಮಸ್ಯೆ ಆಗಬಹುದು. ಹಾಗಾಗಿ ಎಲ್ಲವನ್ನೂ ಮತ್ತೊಮ್ಮೆ ಪರಿಶೀಲನೆ ಮಾಡಿಕೊಂಡೇ ಹೋಗಬೇಕಾಗುತ್ತದೆ. ಇವಿಎಂನಲ್ಲಿ ತೊಂದರೆಯಾದರೆ ಸೆಕ್ಟರ್ ಅಧಿಕಾರಿಗಳ ಗಮನಕ್ಕೆ ತರಲಾಗುವುದು. ಇನ್ನುಳಿದಂತೆ ನಾವು ಎಲ್ಲವನ್ನೂ ಜಾಗೃತಿಯಿಂದ ನೋಡಿಕೊಳ್ಳಬೇಕು ಎಂದು ಕೆಲ ನಿಯೋಜಿತ ಸಿಬ್ಬಂದಿ ತಿಳಿಸಿದರು. ಕೆಲ ಗ್ರಾಮದಲ್ಲಿ ಮತಗಟ್ಟೆಗಳಲ್ಲಿ ಫ್ಯಾನ್ ಇತರೆ ವ್ಯವಸ್ಥೆಯೂ ಇರುವುದಿಲ್ಲ. ಆದರಲ್ಲೇ ಹೊಂದಾಣಿಕೆ ಮಾಡಿಕೊಂಡು ಕೆಲಸ ಮಾಡುತ್ತೇವೆ. ಇದು ದೇಶದ ಕೆಲಸ. ಅದರ ಮುಂದೆ ಸಣ್ಣಪುಟ್ಟ ಸಮಸ್ಯೆಯನ್ನು ಗಣನೆಗೂ ತೆಗೆದುಕೊಳ್ಳದೆ ನಾವೇ ನಿಭಾಯಿಸಿಕೊಳ್ಳುತ್ತೇವೆ ಎಂದು ಸಿಬ್ಬಂದಿಗಳು ಹೆಮ್ಮೆಯಿಂದ ಹೇಳಿದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 03:00 ರಿಂದ 04:30 |
| ಗುಳಿಕ ಕಾಲ | ಮಧ್ಯಾಹ್ನ | 12:00 ರಿಂದ 01:30 |
| ಯಮಗಂಡ ಕಾಲ | ಬೆಳಿಗ್ಗೆ | 09:00 ರಿಂದ 10:30 |

**ಮೇಷ** ಆಹಾರದ ಸ್ವಾದ ಉಪ್ಪಿನಿಂದ ಬರುವಂತೆ ಅತೃಪ್ತಿಯಿದ್ದಾಗಲೇ ನೀವು ಸಂತೋಷದ ಮೌಲ್ಯವನ್ನು ಅರ್ಥ ಮಾಡಿಕೊಳ್ಳುತ್ತೀರಿ. ನಿಮ್ಮ ಮಕ್ಕಳ ಕಾರಣದಿಂದ ಆರ್ಥಿಕ ಲಬಹವನ್ನು ಪಡೆಯುವ ಸಾಧ್ಯತೆ ಕಂಡುಬರುತ್ತಿದೆ.

**ವೃಷಭ** ಆರೋಗ್ಯ ಚೆನ್ನಾಗಿರುತ್ತದೆ. ತನ್ನ ಹಣವನ್ನು ಹೇಗೆ ಸಂಗ್ರಹಿಸುವುದು ಎಂಬ ಈ ಕೌಶಲ್ಯವನ್ನು ಇಂದು ನೀವು ಕಲಿಯಬಹುದು ಮತ್ತು ಈ ಕೌಶಲ್ಯವನ್ನು ಕಲಿತು ನೀವು ನಿಮ್ಮ ಹಣವನ್ನು ಉಳಿಸಬಹುದು.

**ಮಿಥುನ** ಒಬ್ಬ ಆಧ್ಯಾತ್ಮಿಕ ವ್ಯಕ್ತಿ ಆಶೀರ್ವಾದ ಮಾಡುತ್ತಾರೆ. ಹಣಕಾಸಿನಲ್ಲಿ ಸುಧಾರಣೆ ದೀರ್ಘಕಾಲದಿಂದ ಬಾಕಿಯಿರುವ ನಿಮ್ಮ ಬಾಕಿಗಳು ಮತ್ತು ಬಿಲ್ಲುಗಳನ್ನು ಪಾವತಿಸುವುದನ್ನು ಅನುಕೂಲಕರವಾಗಿಸುತ್ತದೆ.

**ಕರ್ಕಾಟಕ** ನೀವು ಹಾಗೆ ಮಾಡಬಾರದು. ಅದನ್ನು ತೊಂದರೆ ಇನ್ನಷ್ಟು ಹೆಚ್ಚಾಗುತ್ತದೆ ಕಡಿಮೆಯಾಗುವುದಿಲ್ಲ. ಅನಿರೀಕ್ಷಿತ ಪ್ರಣಯ ಭಾವ. ನೀವು ಕೆಲಸದಲ್ಲಿ ಇಂದು ನಿಜವಾಗಿಯೂ ಏನಾದರೂ ಅದ್ಭುತವಾದದ್ದನ್ನು ಮಾಡಬಹುದು.

**ಸಿಂಹ** ಮಕ್ಕಳ ನಿಮ್ಮ ಸಂಜೆಯನ್ನು ಉಲ್ಲಾಸಮಯವಾಗಿಸುತ್ತಾರೆ. ಮಂಕು ಕವಿದ ಮತ್ತು ಒತ್ತಡದ ದಿನಕ್ಕೆ ಮಂಗಳ ಹಾಡಲು ಒಂದು ಸಂತೋಷಕೂಟವನ್ನು ಯೋಜಿಸಿ. ಮಕ್ಕಳ ಸಾಂಗತ್ಯ ನಿಮ್ಮ ದೇಹವನ್ನು ಪುನಃಶ್ಚೇತನಗೊಳಿಸುತ್ತದೆ.

**ಕನ್ಯಾ** ಸಂಬಂಧಗಳೊಂದಿಗಿನ ಸಂಬಂಧಗಳು ಹಾಗೂ ಬಂಧಗಳ ನವೀಕರಣದ ಒಂದು ದಿನ. ನೀವು ಇನ್ನು ಮುಂದೆ ನಿಮ್ಮ ಕಾಮಪ್ರಚೋದಕ ಕಲ್ಪನೆಗಳ ಬಗ್ಗೆ ಕನಸು ಕಾಣಬೇಕಾಗಿಲ್ಲ; ಅವು ಇಂದು ನಿಜವಾಗಬಹುದು.

**ತುಲಾ** ಸ್ವಲ್ಪ ಮನರಂಜನೆಗಾಗಿ ನಿಮ್ಮ ಕಚೇರಿಯಿಂದ ಬೇಗನೇ ಹೊರಬರಲು ಪ್ರಯತ್ನಿಸಿ. ನೀವು ಕಮಿಷನ್‌ಗಳಿಂದ ? ಡಿವಿಡೆಂಡ್‌ಗಳಿಂದ– ಅಥವಾ ರಾಯಧನಗಳಿಂದ ಪ್ರಯೋಜನ ಪಡೆಯುತ್ತೀರಿ.

**ವೃಶ್ಚಿಕ** ಇಂದು ಶಾಂತವಾಗಿ ಒತ್ತಡ ಮುಕ್ತವಾಗಿರಿ. ಬ್ಯಾಂಕ್ ವ್ಯವಹರಗಳಲ್ಲಿ ಕಾಳಜಿ ವಹಿಸಬೇಕು. ಮನೆಯ ವಿಷಯಗಳು ಮತ್ತು ಬಾಕಿಯಿರುವ ಗೃಹಕೃತ್ಯಗಳನ್ನು ಪೂರ್ರೈಸಲು ಒಂದು ಅನುಕೂಲಕರ ದಿನ.

**ಧನಸ್ಸು** ನಿಮ್ಮ ಅಭಿಪ್ರಾಯ ಕೇಳಿದಾಗ ಅದನ್ನು ವ್ಯಕ್ತಪಡಿಸಲು ನಾಚಬೇಡಿ ?ಇದಕ್ಕೆ ನಿಮಗೆ ತುಂಬ ಮೆಚ್ಚುಗೆ ಸಿಗುತ್ತದೆ. ಅನೇಕ ಜಗಳದ ದಿನಗಳ ನಂತರ, ನೀವು ಮತ್ತು ನಿಮ್ಮ ಸಂಗಾತಿ ಮತ್ತೆ ಪರಸ್ಪರರ ಪ್ರೇಮದಲ್ಲಿ ಬೀಳುತ್ತೀರಿ.


**ಮಕರ** ನೀವು ಅಭಿಪ್ರಾಯ ನೀಡುವಾಗ ಇತರರ ಭಾವನೆಗಳನ್ನು ವಿಶೇಷವಾಗಿ ಪರಿಗಣಿಸಿ. ಮಾಡಿದ ಯಾವುದೇ ತಪ್ಪು ನಿರ್ಧಾರ ಅವರಿಗೆ ಮಾತ್ರ ವ್ಯತಿರಿಕ್ತ ಪರಿಣಾಮ ಉಂಟುಮಾಡದೇ ನಿಮಗೂ ಮಾನಸಿಕ ಒತ್ತಡ ನೀಡುತ್ತದೆ.

**ಕುಂಭ** ಧ್ಯಾನ ಮತ್ತು ಯೋಗ ಲಾಭ ತರುತ್ತವೆ. ದೀರ್ಘಕಾಲದ ದೃಷ್ಟಿ ಕೋನ ದಿಂದ ಹೂಡಿಕೆ ಮಾಡಬೇಕು. ನಿಮ್ಮ ಪತ್ನಿಯ ಕೆಲಸವನ್ನು ಕಡಿಮೆ ಮಾಡಲು ಅವರಿಗೆ ಮನೆಗೆಲಸದಲ್ಲಿ ಸಹಾಯ ಮಾಡಿ.

**ಮೀನ** ಮಕ್ಕಳ ನಿಮ್ಮ ಸಂಜೆಯನ್ನು ಉಲ್ಲಾಸಮಯವಾಗಿಸುತ್ತಾರೆ. ಮಂಕು ಕವಿದ ಮತ್ತು ಒತ್ತಡದ ದಿನಕ್ಕೆ ಮಂಗಳ ಹಾಡಲು ಒಂದು ಸಂತೋಷಕೂಟವನ್ನು ಯೋಜಿಸಿ. ಮಕ್ಕಳ ಸಾಂಗತ್ಯ ನಿಮ್ಮ ದೇಹವನ್ನು ಪುನಃಶ್ಚೇತನಗೊಳಿಸುತ್ತದೆ.

## ಬಸ್ ಹತ್ತುವ ವೇಳೆ ಹೃದಯಾಘಾತ ಚುನಾವಣಾ ಸಿಬ್ಬಂದಿ ಸಾವು


• ಉದಯವಾಹಿನಿ ಬಾಗಲಕೋಟೆ


ಉದಯವಾಹಿನಿ ಚಿತ್ರ

ಮೇ 07ರಂದು ನಡೆಯಲಿರುವ ಎರಡನೇ ಹಂತದ ಲೋಕಸಭಾ ಚುನಾವಣೆಯ ಮತದಾನದ ಸಲುವಾಗಿ ಕರ್ತವ್ಯಕ್ಕೆ ತೆರಳುತ್ತಿದ್ದ ಸರ್ಕಾರಿ ಶಾಲಾ ಶಿಕ್ಷಕರೊಬ್ಬರು, ಬಸ್ ಹತ್ತುವ ವೇಳೆ ದಿಢೀರ್ ಹೃದಯಾಘಾತದಿಂದ ಸ್ಥಳದಲ್ಲೇ ಮೃತಪಟ್ಟ ಘಟನೆ ಬಾಗಲಕೋಟೆಯ ಮುಧೋಳ ನಗರದಲ್ಲಿ ವರದಿಯಾಗಿದೆ.

ಬಸ್ ನಿಲ್ದಾಣದ ಗೇಟ್ ಬಳಿ ಹೃದಯಾಘಾತದಿಂದ ಕುಸಿದು ಬಿದ್ದು ಸಾವನ್ನಪ್ಪಿದ್ದಾರೆ ಎಂದು ವರದಿಯಾಗಿದೆ. ಚುನಾವಣಾ ಕರ್ತವ್ಯಕ್ಕೆ ತೆರಳಲು ಬಸ್ ಹತ್ತಲು ಬಂದಿದ್ದ ವೇಳೆ ಹೃದಯಾಘಾತದಿಂದ ಸಾವಿಗೀಡಾದ ಶಿಕ್ಷಕನನ್ನು ಗೋವಿಂದಪ್ಪ ಸಿದ್ದಾಪುರ ಎಂದು ಗುರುತಿಸಲಾಗಿದೆ. ಮೃತಪಟ್ಟ ವ್ಯಕ್ತಿ ಸರಕಾರಿ ಪ್ರಾಥಮಿಕ ಶಾಲೆ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿದ್ದರು. ಚುನಾವಣೆಯ ಹಿನ್ನಲೆ ಅವರನ್ನು ಜಮಖಂಡಿ ತಾಲ್ಲೂಕಿನ ಮೈಗೂರು ಪ್ರಾಥಮಿಕ ಶಾಲೆ ಮತಗಟ್ಟೆಗೆ ಚುನಾವಣಾ ಕರ್ತವ್ಯಕ್ಕೆ ಆಹ್ವಾನಿಸಲಾಗಿತ್ತು. ಈ ವೇಳೆ ಈ ದುರ್ಘಟನೆ ಸಂಭವಿಸಿದೆ.

## ಕಾಡಾನೆ ದಾಳಿಗೆ ಬಲಿಯಾದ ರೈತನ ಮನೆಗೆ ಸಂಸದ ಬಿ.ವೈ.ರಾಘವೇಂದ್ರ ಭೇಟಿ


ಉದಯವಾಹಿನಿ ಚಿತ್ರ

• ಉದಯವಾಹಿನಿ ರಿಪ್ಪನ್‌ಪೇಟೆ

ಸಮೀಪದ ಬಸವಾಪುರ ಗ್ರಾಮದಲ್ಲಿ ಶುಕ್ರವಾರ ಕಾಡಾನೆ ದಾಳಿಯಿಂದ ಮೃತಪಟ್ಟ ರೈತ ತಿಮ್ಮಪ್ಪ ಮಡಿವಾಳ ಅವರ ಮನೆಗೆ ಸಂಸದ ಬಿ.ವೈ.ರಾಘವೇಂದ್ರ ಭೇಟಿ ನೀಡಿ ಕುಟುಂಬದವರಿಗೆ ಸಾಂತ್ವನ ಹೇಳಿದರು. ಈ ದುರ್ಘಟನೆ ನಡೆದ ಬಗ್ಗೆ ತಿಳಿದಾಗ ನಾನು ಬೈಂದೂರಿನಲ್ಲಿದ್ದೆ. ವಿಷಯ ತಿಳಿದು ಬಹಳ ನೋವಾಯಿತು. ದೇವರು ತಿಮ್ಮಪ್ಪರವರ ಅತ್ಮಕ್ಕೆ ಶಾಂತಿ ನೀಡಲಿ. ಕುಟುಂಬಕ್ಕೆ ದು:ಖ ಭರಿಸುವ ಶಕ್ತಿ ನೀಡಲಿ ಎಂದು ವೈಯಕ್ತಿಕ ಧನ ಸಹಾಯ ಮಾಡಿದರು.

## ನಾಯಿಯನ್ನು ರಕ್ಷಿಸಿದ ಅಗ್ನಿಶಾಮಕ ತಂಡ

• ಉದಯವಾಹಿನಿ ಬಂಟ್ವಾಳ


ಉದಯವಾಹಿನಿ ಚಿತ್ರ

ಪಾಳು ಬಾವಿಗೆ ಬಿದ್ದ ನಾಯಿಯೊಂದನ್ನು ಬಂಟ್ವಾಳ ಅಗ್ನಿಶಾಮಕ ದಳದವರು ರಕ್ಷಿಸಿದ ಘಟನೆ ಸೋಮವಾರ ಬೆಳಗ್ಗೆ ಮೊಡಂಕಾಪಿನ ಗಾಂದೋಡಿ ಬಳಿ ನಡೆದಿದೆ. ಸ್ಥಳೀಯರ ಮಾಹಿತಿ ಪ್ರಕಾರ ನಾಯಿಯು ಕಳೆದ ಮೂರು ದಿನಗಳ ಹಿಂದೆ ಬಾವಿಗೆ ಬಿದ್ದಿದ್ದು, ಬಾವಿಯನ್ನು ಯಾರೂ ಉಪಯೋಗಿಸದ ಹಿನ್ನೆಲೆಯಲ್ಲಿ ನಾಯಿ ಬಿದ್ದಿರುವುದು ಗಮನಕ್ಕೆ ಬಂದಿರಲಿಲ್ಲ. ಆದರೆ ನಾಯಿ ಬಾವಿಯಲ್ಲಿರುವುದು ಗೊತ್ತಾಗಿದ್ದು, ಗಾಂದೋಡಿ ನಿವಾಸಿ ವಿಶ್ವನಾಥ ಶೆಟ್ಟಿ ಅವರು ಪೊಲೀಸ್ 100 ಸಂಖ್ಯೆಗೆ ಕರೆ ಮಾಡಿದ್ದು, ಅವರು ಬಳಿಕ ಅಗ್ನಿಶಾಮಕ ದಳದವರಿಗೆ ಮಾಹಿತಿ ನೀಡಿದ್ದಾರೆ.

ಬಳಿಕ ಅಗ್ನಿಶಾಮಕ ಸಿಬಂದಿಯೊಬ್ಬರು ಹಗ್ಗದ ಸಹಾಯದಿಂದ ಬಾವಿಗೆ ಇಳಿದು ನಾಯಿಗೆ ಹಗ್ಗವನ್ನು ಕಟ್ಟಿದ್ದಾರೆ. ಅವರು ಮೇಲೆ ಬಂದ ಬಳಿಕ ನಾಯಿಯನ್ನು ಸುರಕ್ಷಿತವಾಗಿ ಮೇಲಕ್ಕೆ ಎಳೆಯಲಾಗಿದೆ.

# ಮತಗಟ್ಟೆಗಳತ್ತ ತೆರಳಿದ ಸಿಬ್ಬಂದಿಗಳು: ಮತದಾನಕ್ಕೆ ಸಕಲ ಸಿದ್ಧತೆ

### ಲೋಕಸಭಾ ಚುನಾವಣೆಗೆ ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ 3ನೇ ಹಂತದ ಮತದಾನಕ್ಕೆ ತಾಲ್ಲೂಕು ಸಕಲ ಸಿದ್ಧತೆ

• ಉದಯವಾಹಿನಿ ಮುದ್ದೇಬಿಹಾಳ

ಲೋಕಸಭಾ ಚುನಾವಣೆ ಎರಡನೇ ಹಂತದ ಮತದಾನಕ್ಕೆ ವಿಜಯಪುರ ಮೀಸಲು ಕ್ಷೇತ್ರದ ಮುದ್ದೇಬಿಹಾಳ ವಿಧಾನಸಭಾ ಕ್ಷೇತ್ರದ 245 ಮತಗಟ್ಟೆಗಳಿಗೆ ಮತಯಂತ್ರಗಳು ಸೇರಿದಂತೆ ಅಗತ್ಯ ಪರಿಕರಗಳು ಹಾಗೂ ಚುನಾವಣಾ ಸಿಬ್ಬಂದಿ ನಿಯೋಜನಾ ಕಾರ್ಯ ಪಟ್ಟಣದ ಎಂಜಿವಿಸಿ ಕಾಲೇಜನ ಆವರಣದಲ್ಲಿ ಸೋಮುವಾರ ನಡೆಯಿತು ತಾಲ್ಲೂಕು ಆಡಳಿತದಿಂದ ಮೇ 7 ರಂದು ನಡೆಯಲಿರುವ ಲೋಕಸಭಾ ಚುನಾವಣೆಗೆ ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ 3 ನೇ ಹಂತದ ಮತದಾನಕ್ಕೆ ತಾಲ್ಲೂಕು ಸಕಲ ಸಿದ್ದತೆ ಮಾಡಿಕೊಂಡಿದೆ.

**ಪ್ರತಿಯೊಬ್ಬರು ತಪ್ಪದೆ ಮತದಾನ ಮಾಡಿ**

ಮತದಾನ ಪ್ರತಿಯೊಬ್ಬರ ಹಕ್ಕು ಪ್ರತಿಯೊಬ್ಬರು ಮತದಾನವನ್ನು ಮಾಡಬೇಕು ಎಂದು ಸಹಾಯಕ ಚುನಾವಣಾ ಅಧಿಕಾರಿ ರಾಜಶೇಖರ ವಿಲಿಯಮ್ಸ್ ಹೇಳಿದರು ಅವರು ಸೋಮುವಾರ ಚುನಾವಣಾ ಸಿದ್ದತೆ ಸಿಬ್ಬಂದಿ ನಿಯೋಜನೆ ನಿರ್ದೇಶನ ನೀಡಿ ಮಾದ್ಯಮಗಳೊಂದಿಗೆ ಮಾತನಾಡಿ ಮಾಹಿತಿಯನ್ನು ನೀಡಿದರು. ಮತದಾನಕ್ಕೆ ಆಗಮಿಸುವ ಮತದಾರರಿಗೆ ಎಲ್ಲಿನೆರಳಿನ ವ್ಯವಸ್ಥೆ ಇಲ್ಲ ಅಲ್ಲಿ ನೆರಳು ಮತ್ತು ಕುಡಿಯುವ ನೀರಿನ ವ್ಯವಸ್ಥೆ ಮಾಡಿದ್ದು ಚುನಾವಣೆ ಸಿಬ್ಬಂದಿಗಳಿಗೆ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆ ಮತ್ತು

ಈಗಾಗಲೇ ಮತಕ್ಷೇತ್ರದಲ್ಲಿ 393 ಮತದಾರರು ಅಂಚೆ ಮತದಾನದ ಮೂಲಕ ( ಮನೆ ಮನೆಗೆ ಹೋಗಿ ಮತದಾನ ಪ್ರಕ್ರಿಯೆ ) ಮತ ಚಲಾಯಿಸಿದ್ದಾರೆ ತಾಲ್ಲೂಕಿನಲ್ಲಿ ಕಳೆದ ಚುನಾವಣೆಯಲ್ಲಿ ಕಡಿಮೆ ನಡೆದ ಭೂತಗಳಲ್ಲಿ ಸ್ವೀಪ್ ಸಮಿತಿ ಮತದಾನ ಮಾಡುವಂತೆ ಜಾಗೃತಿ ಜಾಥಾ ಮಾಡಿದ್ದಾರೆ. ಮತಕ್ಷೇತ್ರದಲ್ಲಿ ಒಟ್ಟು 3 ಚೆಕ್ ಪೋಸ್ಟ್ ನಿರ್ಮಿಸಿದ್ದು ( ಮಿಣಜಗಿ, ನಾರಾಯಣಪುರ, ತಂಗಡಗಿ ) ಇವುಗಳಲ್ಲಿ ಒಟ್ಟು ಇಲ್ಲಿವರೆಗೂ 3 ಲಕ್ಷ 70000 ರೂಪಾಯಿಗಳನ್ನು ಹಾಗೂ 475.99 ಲೀಟರ್ ಮಧ್ಯ ವಶಪಡಿಸಿಕೊಳ್ಳಲಾಗಿದೆ ಎಂದು ಮಾಹಿತಿಯನ್ನು ನೀಡಿದರು. ಒಟ್ಟು 245 ಮತಗಟ್ಟೆಗಳಲ್ಲಿ 123 ಮತಗಟ್ಟೆಗಳಿಗೆ ವೆಬ್ ಕಾಸ್ಟಿಂಗ್ ಮಾಡಲಾಗಿದೆ. ಸೂಕ್ಷ್ಮ ಮತ್ತು ಅತೀಸೂಕ್ಷ್ಮ ಮತಗಟ್ಟೆಗಳಲ್ಲಿ ಮೈಕ್ರೋ ಆಬ್ಸರ್ವರ್ ನೇಮಕ ಮಾಡಲಾಗಿದೆ.


ಉದಯವಾಹಿನಿ ಚಿತ್ರ

**ಒಟ್ಟು 245 ಮತಗಟ್ಟೆ**

**ಮತಕ್ಷೇತ್ರದಲ್ಲಿ ಒಟ್ಟು 245 ಮತಗಟ್ಟೆಗಳಿದ್ದು, ಒಟ್ಟು 223656 ಮತದಾರರಿದ್ದು ಅದರಲ್ಲಿ 112694 ಪುರುಷ ಮತದಾರರು, 110937 ಮಹಿಳಾ ಮತದಾರರು ಹಾಗೂ ಇತರೆ 25 ಇರುತ್ತಾರೆ.**

ಮತಕ್ಷೇತ್ರದಲ್ಲಿ 5 ಪಿಂಕ್ ಮತ್ತು ಸಖಿ ಮತಗಟ್ಟೆ, ಒಂದು ಯುವ ಮತಗಟ್ಟೆ,ಒಂದು ಅಂಗವಿಕಲ ಮತಗಟ್ಟೆ,ಧ್ಯೇಯ ಆಧಾರಿತ ಮತಗಟ್ಟೆ ಮಾಡಲಾಗಿದೆ

**ಮತಗಟ್ಟೆಗೆ ತೆರಳಿದ ಅಧಿಕಾರಿಗಳು**

**ಪಟ್ಟಣದ ಎಂಜಿವಿಸಿ ಕಾಲೇಜು ಮೈದಾನದಲ್ಲಿ ಕಾದಿರಿಸಲಾಗಿದ್ದ ಕೆಎಸ್‌ಆರ್‌ಟಿಸಿ ಬಸ್ ಹಾಗೂ ಇತರ ವಾಹನಗಳ ಸಹಾಯದಿಂದ ಮತಗಟ್ಟೆ ಅಧಿಕಾರಿ(ಪಿಆರ್‌ಒ), ಸಹಾಯಕ ಮತಗಟ್ಟೆ ಅಧಿಕಾರಿ (ಎಪಿಆರ್‌ಒ) ಮತದಾರರ ಪಟ್ಟಿ, ವಿದ್ಯುನ್ಮಾನ ಮತ ಯಂತ್ರದ ಬ್ಯಾಲೆಟ್ ಯೂನಿಟ್(ಬಿಯು), ಕಂಟ್ರೋಲ್ ಯೂನಿಟ್( ಸಿಯು) ವಿವಿ ಪ್ಯಾಟ್ ಗಳೊಂದಿಗೆ ತಮ್ಮ ನಿಗದಿತ ಮತಗಟ್ಟೆಗಳಿಗೆ ತೆರಳಿದರು. ಇದಕ್ಕೂ ಮೊದಲು ಚುನಾವಣಾ ಕರ್ತವ್ಯ ನಿರತ ಅಧಿಕಾರಿಗಳು ಮಸ್ಟರಿಂಗ್ ಕೇಂದ್ರದಲ್ಲಿ ವ್ಯವಸ್ಥೆ ಮಾಡಲಾಗಿದ್ದ ಅಂಚೆ ಮತ ಕೇಂದ್ರದಲ್ಲಿ ಪೋಸ್ಟಲ್ ಬ್ಯಾಲೆಟ್ ಮೂಲಕ ಹಕ್ಕು ಚಲಾಯಿಸಿದ ದೃಶ್ಯ ಸಾಮಾನ್ಯವಾಗಿತ್ತು. ಮತಗಟ್ಟೆಗೆ ಹೊರಡಲು ಸಜ್ಜಾದ ಸಿಬ್ಬಂದಿಗೆ ಅಧಿಕಾರಿಗಳು ಪ್ರೋತ್ಸಾಹ ತುಂಬಿದರು.**

ಮತಕ್ಷೇತ್ರದಲ್ಲಿರುವ 245 ಗಳಿಗೂ ಮುಂಜಾಗ್ರತಾ ಕ್ರಮವಾಗಿ ಆರೋಗ್ಯ ಇಲಾಖೆಯ ಸಿಬ್ಬಂದಿ ನೇಮಕ ಮಾಡಲಾಗಿದ್ದು ಚುನಾವಣಾ ಕರ್ತವ್ಯಕ್ಕೆ ತೆರಳುತ್ತಿರುವ ಎಲ್ಲಾ ಸಿಬ್ಬಂದಿಗಳ ಆರೋಗ್ಯ ತಪಾಸಣೆ ಬಿಪಿ ಶುಗರ್ ಪರೀಕ್ಷೆ ಮಾಡಿದಾಗ ಕೆಲವು ಸಿಬ್ಬಂದಿಗಳ ಶುಗರ್ ಜಾಸ್ತಿ ಇದ್ದದ್ದು ಕಂಡುಬಂದಿದ್ದು ಕೂಡಲೇ ಅವರಿಗೆ ಸೂಕ್ತ ಚಿಕಿತ್ಸೆಯನ್ನು ನೀಡಲಾಗಿದೆ ಮತ್ತು ಅಂಬ್ಯುಲೆನ್ಸ ವ್ಯವಸ್ಥೆ, ವೈದ್ಯಕೀಯ ಕಿಟ್: ಪ್ರತಿ ಸಿಬ್ಬಂದಿಗೆ ವೈದ್ಯಕೀಯ ಕಿಟ್ ನೀಡಲಾಗಿದೆ, ಜ್ವರ, ಮೈಕೈ ನೋವು, ವಾಂತಿ, ಶೀತ, ನೆಗಡಿ, ಕೆಮ್ಮು ಮಾತ್ರೆಗಳು, ಗಾಯಕ್ಕೆ ಹಚ್ಚುವ ಮುಲಾಮು ಈ ಕಿಟ್ ಹೊಂದಿದೆ ಎಂದು ಮಾಹಿತಿಯನ್ನು ತಾಲೂಕು ವೈದ್ಯಾಧಿಕಾರಿ ಸತೀಶ್ ತಿವಾರಿ ತಿಳಿಸಿದರು.

ಈ ವೇಳೆ ತಹಶೀಲ್ದಾರ ಬಸವರಾಜ ನಾಗರಾಳ ನೋಡಲ್ ಅಧಿಕಾರಿ ಚಂದ್ರಕಾಂತ ಪವಾರ, ಜಿಲ್ಲಾ ಮಟ್ಟದ ತರಬೇತಿದಾರ ಎಸ್ ಎಸ್ ಗಡೇದ , ತಾಪಂ ಇಒ ಸ್ವಿಪ್ ಸಮಿತಿ ಅಧ್ಯಕ್ಷ ಎಸ್ ಎಸ್ ಕಲ್ಮನಿ, ಸಿಡಿಪಿಓ ಶಿವ ಮೂರ್ತಿ ಕುಂಬಾರ ಮತ್ತಿತರರು ಇದ್ದರು.

## ಮಕ್ಕಳ ಆರೋಗ್ಯದ ಬಗ್ಗೆ ತಾತ್ಸಾರ ಬೇಡ: ಡಾ.ಮಾಧವಿ ವಡವಡಗಿ

• ಉದಯವಾಹಿನಿ ಚಿತ್ರದುರ್ಗ

ಮಕ್ಕಳು ಬೆಳೆದ ನಂತರವೂ ಹಲ್ಲಿನ ವಸಡು ರೋಗವನ್ನು ತಡೆಗಟ್ಟಲು ಪೋಷಕರು ಪ್ರತಿದಿನ ಮಕ್ಕಳ ಬಾಯಿಯ ಸರಿಯಾದ ಆರೈಕೆ ಮಾಡುವುದು ಅವಶ್ಯಕ ಇದು ದಂತವನ್ನು ಬಲಪಡಿಸಲು ಮತ್ತು ಹಲ್ಲುಗಳ ಕೊಳೆತವನ್ನು ತಡೆಯಲು ಸಹಾಯಕವಾಗುತ್ತದೆ ಎಂದು ದಂತ ಚಿಕಿತ್ಸಕರಾದ ಡಾ. ಸುನೀಲ್ ವಡವಡಗಿ ಹೇಳಿದರು.

ನಗರದ ತುರುವನೂರು ರಸ್ತೆಯ ಶ್ರೀ ವೆಂಕಟೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಭಾರತೀಯ ಯೋಗ ಶಿಕ್ಷಣ ಸಂಸ್ಥೆ ಚಿತ್ರದುರ್ಗ ಇವರು ಆಯೋಜಿಸಿರುವ ಬಾಲ ಗೋಕುಲ ಮಕ್ಕಳ ಬೇಸಿಗೆ ಶಿಬಿರದ ಐದನೇಯ ದಿನದ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಕ್ಕಳಿಗೆ ಹಾಗೂ ಪೋಷಕರಿಗಳ ಹಲ್ಲುಗಳ ಆರೈಕೆ ಕುರಿತು ಮಾಹಿತಿ ನೀಡಿದರು.


ಉದಯವಾಹಿನಿ ಚಿತ್ರ


**ತಜ್ಞ ವೈದ್ಯರ ಬಳಿ ಚಿಕಿತ್ಸೆ**

ಇದೇ ಸಂದರ್ಭದಲ್ಲಿ ಪ್ರಕೃತಿ ಆಯುರ್ವೇದ ಚಿಕಿತ್ಸಾಲಯದ ವೈದ್ಯರಾದ ಡಾ. ಮಾಧವಿ ವಡವಡಗಿ ಮಾತನಾಡಿ ಮಕ್ಕಳ ಆರೋಗ್ಯ ಕಾಪಾಡಲು ಮನೆಯಲ್ಲೇ ತಯಾರಿಸಿದ ಸಮತೋಲಿನ ಆಹಾರ ನೀಡುವುದು ಅವಶ್ಯಕ ಹಾಲಿನ ತಾಜಾ ರಸಗಳು ಇತ್ಯಾದಿಗಳಿಗೆ ಸಕ್ಕರೆಯನ್ನು ಬೆರೆಸದೆ ಜೇನು ಅಥವಾ ಬೆಲ್ಲವನ್ನು ಸೇರಿಸುವುದನ್ನು ಸೇರಿಸಿಕೊಡುವುದು ಒಳ್ಳೆಯದು ಮಾರುಕಟ್ಟೆಯಲ್ಲಿ ದೊರೆಯುವ ಹೆಚ್ಚು ರಸಾಯನಿಕ ಮಸಾಲೆ ಮಿಶ್ರಿತ ತಿಂಡಿಗಳು ಮತ್ತು ಸಿಹಿತಿಂಡಿಗಳನ್ನು ನೀಡುವುದನ್ನು ತಪ್ಪಿಸಿ ಪ್ರತಿ ಊಟದ ನಂತರ ಬಾಯಿಯನ್ನು ಚೆನ್ನಾಗಿ ತೊಳೆಯುವ ಅಭ್ಯಾಸವನ್ನು ಕಲಿಸಿಸ ಮಕ್ಕಳ ಆರೋಗ್ಯದಲ್ಲಿ ತಾತ್ಸಾರ ಮನೋಭಾವ ತೋರುವುದು ಬೇಡ ಮತ್ತು ಸ್ವಯಂ ವೈದ್ಯ ಮಾಡುವುದಕ್ಕಿಂತ ತಜ್ಞ ವೈದ್ಯರ ಬಳಿ ಚಿಕಿತ್ಸೆ ಕೊಡಿಸುವುದು ಒಳ್ಳೆಯದು ಎಂದು ಸಲಹೆ ನೀಡಿದರು.

ನಂತರ ಹಲ್ಲುಗಳ ಆರೋಗ್ಯದ ಬಗ್ಗೆ ಮಕ್ಕಳು ಕೇಳಿದ ಹಲವಾರು ಪ್ರಶ್ನೆಗಳಿಗೆ ಅವರು ಪರಿಹಾರ ಸೂಚಿಸಿದರು. ಸುಮಾರು ಎಂಭತ್ತಕ್ಕೂ ಹೆಚ್ಚು ಮಕ್ಕಳು ಭಾಗವಹಿಸಿದ್ದ ಕಾರ್ಯಕ್ರಮದಲ್ಲಿ ಶಿಬಿರದ ಆಯೋಜಕರಾದ ರವಿ ಕೆ. ಅಂಬೇಕರ್ ಉಪಸ್ಥಿತರಿದ್ದರು.

## ವೋಟ್ ಬ್ಯಾಂಕ್ ಬಗ್ಗೆ ಕಾಂಗ್ರೇಸ್‌ಗೆ ಹೆಚ್ಚು ಚಿಂತೆ

• ಉದಯವಾಹಿನಿ ಹುಬ್ಬಳ್ಳಿ



ಹುಬ್ಬಳ್ಳಿಯ ಕಾಲೇಜು ವಿದ್ಯಾರ್ಥಿನಿಯ ಕೊಲೆ ಪ್ರಕರಣದಲ್ಲಿ ಕಾಂಗ್ರೆಸ್ ಎಂದಿನಂತೆ ತುಷ್ಟೀಕರಣದ ರಾಜಕೀಯ ಮಾಡಿ ಕೋಮು ವಾದವನ್ನು ಉತ್ತೇಜಿಸಿತು. ಬಿಜೆಪಿ ವಿರುದ್ಧದ ಆರೋಪಗಳು ಸಂಪೂರ್ಣವಾಗಿ ರಾಜಕೀಯವಾಗಿವೆ. ಅದರ ಬದಲು, ಪಕ್ಷವು ಆತ್ಮಾವಲೋಕನ ಮಾಡಿಕೊಳ್ಳಬೇಕು, ಅದನ್ನು ಅದು ಎಂದಿಗೂ ಮಾಡುವುದಿಲ್ಲ.

ಬೆಂಗಳೂರಿನ ರಾಮೇಶ್ವರಂ ಕೆಫೆಯಲ್ಲಿ ನಡೆದ ಸ್ಫೋಟವಾಗಲಿ ಅಥವಾ ನೇಹಾ ಅವರ ಕೊಲೆಯಾಗಲಿ, ಕಾಂಗ್ರೆಸ್ ಸರ್ಕಾರದ ಪ್ರತಿಕ್ರಿಯೆ ವಿಭಿನ್ನ ಚಿತ್ರವನ್ನು ಚಿತ್ರಿಸುವುದಾಗಿದೆ. ತೀವ್ರಗಾಮಿ ಶಕ್ತಿಗಳ ಬಗ್ಗೆ ಮೃದು ಧೋರಣೆಗೆ ಪಕ್ಷ ಹೆಸರುವಾಸಿಯಾಗಿದೆ. ಅದು ತನ್ನ ವೋಟ್ ಬ್ಯಾಂಕ್ ಬಗ್ಗೆ ಹೆಚ್ಚು ಚಿಂತಿ ತವಾಗಿದೆ ಎಂದು ಪ್ರಹ್ಲಾದ್ ಜೋಷಿ ಹೇಳಿದರು. ಬಿಜೆಪಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತದೆ ಎಂದು ನನಗೆ 100% ವಿಶ್ವಾಸವಿದೆ. ಮೋದಿ ಸರ್ಕಾರದ ಕಾರ್ಯಕ್ಷಮತೆ ಮತ್ತು ನಮ್ಮ ದೇಶವನ್ನು ಶಕ್ತಿಯುತವಾಗಿಸಲು ಮಾಡಿದ ಕೆಲಸದ ಬಗ್ಗೆ ಕರ್ನಾಟಕದ ಜನರಿಗೆ ತಿಳಿದಿದೆ ಎಂದು ಅವರು ಹೇಳಿದರು. ಪ್ರಧಾನಿ ಮೋದಿಯವರ ವಿಶ್ವಾಸಾರ್ಹ ನಾಯಕತ್ವ ಮತ್ತು ನಾಯಕ, ದೂರದೃಷ್ಟಿ ಅಥವಾ ಟ್ರ್ಯಾಕ್ ರೆಕಾರ್ಡ್ ಇಲ್ಲದ ಇಂಡಿ ಪಕ್ಷಗಳ ಗೊಂದಲಮಯ ಮೈತ್ರಿಕೂಟದ ನಡುವೆ ನಡೆಯುತ್ತಿದೆ ಎಂದರು.

## 279 ಬೂತುಗಳು 3500 ಸಿಬ್ಬಂದಿಗಳು ನಿಯೋಜನೆ

• ಉದಯವಾಹಿನಿ ಜೇವರ್ಗಿ

ಕಲ್ಬುರ್ಗಿ ಲೋಕಸಭಾ ಕ್ಷೇತ್ರದ ಚುನಾವಣೆಯ ದಿನಾಂಕ ಏಳರಂದು ಮತದಾನ ನಡೆಯುವ ಹಿನ್ನೆಲೆಯಲ್ಲಿ ಜೇವರ್ಗಿ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ ತಮ್ಮ ತಮ್ಮ ಮತಗಟ್ಟೆಗೆ ಸಿಬ್ಬಂದಿಗಳು.

ತಾಲ್ಲೂಕ ದಂಡಾಧಿಕಾರಿ ಮಲ್ಲಣ್ಣ ಯಲಗೋಡ ಮಾತನಾಡಿ ಒಟ್ಟು ಜೇವರ್ಗಿ ವಿಧಾನಸಭಾ ಕ್ಷೇತ್ರದಲ್ಲಿ 279 ಮತಗಟ್ಟೆಗಳಿದ್ದು ಮತಗಟ್ಟೆಗಳಿಗೆ ಬೇಕಾದ ಸಕಲ ಸೌಲಭ್ಯಗಳು ಮತಯಂತ್ರಗಳು ಹಾಗೂ ಸಿಬ್ಬಂದಿಗಳನ್ನು ನಿಯೋಜನೆ ಮಾಡಲಾಗಿದೆ. ಸಿಬ್ಬಂದಿಗಳಿಗೆ ಹೋಗಲು ಬಸ್ಸಿನ ಮತ್ತು ಜೀಪಿನ ವ್ಯವಸ್ಥೆ ಎಲ್ಲಾ ಮತಗಟ್ಟೆಗಳಿಗೆ ಮಾಡಲಾಗಿದೆ ಎಂದು ತಿಳಿಸಿದರು. ಸುಮಾರು 3500 ಸಿಬ್ಬಂದಿಗಳು ಲೋಕಸಭಾ ಚುನಾವಣೆಯ ಮತಗಟ್ಟೆಗಳಲ್ಲಿ ಕೆಲಸ ನಿರ್ವಹಿಸುತ್ತಿರಲಿದ್ದು ಎಂದು ಹೇಳಿದರು.


ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ ಚುನಾವಣೆ ಸಹಾಯಕ ಅಧಿಕಾರಿಗಳಾದ ಕೃಷ್ಣ ಶಾಂತಗಿರಿ, ಪುರಸಭೆ ಮುಖ್ಯ ಅಧಿಕಾರಿ ಶಂಭುಲಿಂಗ ದೇಸಾಯಿ, ಡಿ ಬಿ ಪಾಟೀಲ್, ಹಾಗೂ ಚುನಾವಣೆ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಮತಯಂತ್ರಗಳೊಂದಿಗೆ ಮತಗಟ್ಟೆಗೆ ತೆರಳಿದ ಅಧಿಕಾರಿಗಳು

• ಉದಯವಾಹಿನಿ ಸಿರುಗುಪ್ಪ

ಲೋಕಸಭಾ ಚುನಾವಣೆ ಹಿನ್ನಲೆಯಲ್ಲಿ ನಗರದ ವಿವೇಕಾನಂದ ಪಬ್ಲಿಕ್ ಶಾಲೆಯ ಆವರಣದಲ್ಲಿ ಸೋಮವಾರ ಮಸ್ಟರಿಂಗ್ ಕಾರ್ಯ ಯಶಸ್ವಿಯಾಗಿ ಜರುಗಿತು.

ಕೊಪ್ಪಳ ಲೋಕಸಭಾ ಕ್ಷೇತ್ರಕ್ಕೆ ವ್ಯಾಪ್ತಿಗೆ ಬರುವ ಸಿರುಗುಪ್ಪ ವಿಧಾನಸಭೆ ಎಸ್.ಟಿ.ಮೀಸಲು ಕ್ಷೇತ್ರದ ಮತಗಟ್ಟೆಗಳಿಗೆ ಮತಯಂತ್ರಗಳು, ಅಗತ್ಯ ಪರಿಕರಗಳು, ಹಾಗೂ ಚುನಾವಣಾ ಸಿಬ್ಬಂದಿ ನಿಯೋಜನಾ ಕಾರ್ಯ ಜರುಗಿತು.

ತಹಶೀಲ್ದಾರ್ ಶಂಷಾಲಂ ಸುದ್ದಿಗಾರರೊಂದಿಗೆ ಮಾತನಾಡಿ ತಾಲ್ಲೂಕಿನ ಗ್ರಾಮೀಣ ವ್ಯಾಪ್ತಿಯ 114 ಹಾಗೂ ಪಟ್ಟಣ ಹಾಗೂ ನಗರ ಸೇರಿದಂತೆ 43 ಸೇರಿ ಒಟ್ಟು 228 ಮತಗಟ್ಟೆಗಳಲ್ಲಿ 1051 ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ.


ಉದಯವಾಹಿನಿ ಚಿತ್ರ

ಚುನಾವಣಾ ಕಾರ್ಯಕ್ಕೆಂದು 34 ಕೆ.ಎಸ್.ಆರ್.ಟಿ.ಸಿ ಬಸ್ಸುಗಳು, 17 ಶಾಲಾ ಮಿನಿ ಬಸ್ಸುಗಳು, ಹಾಗೂ 10 ಟ್ರ್ಯಾಕ್ಟರ್‌ಳ ಮೂಲಕ ಮತಗಟ್ಟೆಗಳಿಗೆ ತಲುಪಿಸಲಾಗುತ್ತಿದೆಂದು ತಿಳಿಸಿದರು.

ಬಿರು ಬಿಸಿಲಿನಿಂದಾಗಿ ಮರಗಿಡಗಳ ನೆರಳಿನಲ್ಲಿ ಸಿಬ್ಬಂದಿಗಳು ಮತದಾನಕ್ಕೆ ಅಗತ್ಯವಿರುವ ಯಂತ್ರಗಳು, ಇನ್ನಿತರ ಪರಿಕರಗಳನ್ನು ಜೋಡಿಸಿಕೊಂಡು ತಮ್ಮ ವಾಹನಗಳತ್ತ ತೆರಳುತ್ತಿರುವ ದೃಶ್ಯ ಕಂಡುಬಂದಿತು.

**ಮತಗಟ್ಟೆಯಲ್ಲಿ ಸಮರ್ಪಕವಾಗಿ ಕಾರ್ಯನಿರ್ವಹಿಸುವಂತೆ ಮತಗಟ್ಟೆಯ ಅಧಿಕಾರಿಗಳಿಗೆ, ಸಿಬ್ಬಂದಿಗಳಿಗೆ ಸಹಾಯಕ ಚುನಾವಣಾಧಿಕಾರಿ ಡಾ.ತಿರುಮಲೇಶ ಅವರು ಸೂಚನೆ ನೀಡಿದರು. ಮತದಾನಕ್ಕೆ ಕೇವಲ ಒಂದು ದಿನ ಬಾಕಿಯಿದ್ದು ಎಲ್ಲವೂ ಸುಸೂತ್ರವಾಗಿ ನಡೆಯಲು ಚುನಾವಣಾ ಆಯೋಗ, ಜಿಲ್ಲಾ ಮತ್ತು ತಾಲ್ಲೂಕಾಡಳಿತದಿಂದ ಅಗತ್ಯ ಕ್ರಮವನ್ನು ಕೈಗೊಳ್ಳಲಾಗಿದೆಂದರು. -ಚುನಾವಣಾಧಿಕಾರಿ**

## ಲೋಕಸಭಾ ಚುನಾವಣೆ: ಮತಗಟ್ಟೆಗಳಿಗೆ ತೆರಳಿದ ಅಧಿಕಾರಿಗಳು

• ಉದಯವಾಹಿನಿ ಹಾವೇರಿ

ಹಾವೇರಿ ಲೋಕಸಭಾ ಕ್ಷೇತ್ರದ ಸಾರ್ವತ್ರಿಕ ಚುನಾವಣೆಗೆ ಮೇ 7ರಂದು ಮತದಾನ ನಡೆಯಲಿದ್ದು, ಸೋಮವಾರ ಮಸ್ಟರಿಂಗ್ ಕೇಂದ್ರಗಳಿಂದ ಆಯಾ ಮತಗಟ್ಟೆಗಳಿಗೆ ವಿದ್ಯುನ್ಮಾನ ಮತಯಂತ್ರಗಳೊಂದಿಗೆ ನಿಯೋಜಿತ ಮತಗಟ್ಟೆ ಅಧಿಕಾರಿಗಳು ತೆರಳಿದರು.

ಜಿಲ್ಲೆಯ ಮಸ್ಟರಿಂಗ್ ಸಿದ್ಧತಾ ಕೇಂದ್ರಗಳಿಗೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ರಘುನಂದನ ಮೂರ್ತಿ, ಅಪರ ಜಿಲ್ಲಾಧಿಕಾರಿ ಹಾಗೂ ಸಹಾಯಕ ಚುನಾವಣಾಧಿಕಾರಿ ಪೂಜಾರ ವೀರಮಲ್ಲಪ್ಪ ಭೇಟಿ ನೀಡಿ ಪರಿಶೀಲನೆ ನಡೆಸಿ, ಅಧಿಕಾರಿಗಳಿಗೆ ಅಗತ್ಯ ಮಾರ್ಗದರ್ಶನ ಮಾಡಿದರು.

ಹಾವೇರಿ ಲೋಕಸಭಾ ಕ್ಷೇತ್ರದ ಐದು ವಿಧಾನಸಭಾ ಕ್ಷೇತ್ರ, ಹಾಗೂ ಧಾರವಾಡ ಕ್ಷೇತ್ರ ವ್ಯಾಪ್ತಿಗೆ ಬರುವ ಶಿಗ್ಗಾವಿ ಕ್ಷೇತ್ರ ಒಳಗೊಂಡಂತೆ 224 ಬಸ್‌ಗಳ ವ್ಯವಸ್ಥೆ ಮಾಡಲಾಗಿದೆ.

ಮತಗಟ್ಟೆ ಅಧ್ಯಕ್ಷಾಧಿಕಾರಿಗಳು, ಸಹಾಯಕ ಅಧ್ಯಕ್ಷಾಧಿಕಾರಿಗಳು, ಮತಗಟ್ಟೆ ಅಧಿಕಾರಿ, ಸೂಕ್ಷ್ಮ ವೀಕ್ಷಕರು ಒಳಗೊಂಡಂತೆ 6958 ಸಿಬ್ಬಂದಿಗಳನ್ನು ನಿಯೋಜಿಸಿದ್ದು, ಈ ಪೈಕಿ 3097 ಸಿಬ್ಬಂದಿಗಳು ಅದೇ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಹಾಗೂ 3861 ಸಿಬ್ಬಂದಿಗಳನ್ನು ತಾವು ಕರ್ತವ್ಯ ನಿರ್ವಹಿಸುತ್ತಿರುವ ವಿಧಾನಸಭಾ ಕ್ಷೇತ್ರದಿಂದ ಬೇರೆ ವಿಧಾನಸಭಾ ಕ್ಷೇತ್ರಕ್ಕೆ ನಿಯೋಜಿಸಲಾಗಿದೆ.


ಉದಯವಾಹಿನಿ ಚಿತ್ರ

ಎಲ್ಲರೂ ನಿಗದಿತ ಮಸ್ಟರಿಂಗ್ ಕೇಂದ್ರದಿಂದ ವಿದ್ಯುನ್ಮಾನ ಮತಯಂತ್ರಗಳು ಹಾಗೂ ಮತದಾನ ಪ್ರಕ್ರಿಯೆ ಅಗತ್ಯ ಚುನಾವಣಾ ಸಾಮಗ್ರಿಗಳೊಂದಿಗೆ ರಕ್ಷಣಾ ವ್ಯವಸ್ಥೆಯೊಂದಿಗೆ ಆಯಾ ಮತಗಟ್ಟೆಗೆ ತೆರಳಿದ್ದು, ಮೇ 7ರ ಮತದಾನ ಪ್ರಕ್ರಿಯೆಗೆ ಸಿದ್ಧತೆ ಮಾಡಿಕೊಳ್ಳಲಿದ್ದಾರೆ.

**ಮಸ್ಟರಿಂಗ್ ಮತ್ತು ಡಿ ಮಸ್ಟರಿಂಗ್ ಕೇಂದ್ರಗಳು**

**ಹಾನಗಲ್ಲ ಪಟ್ಟಣದ ಶ್ರೀ ಕುಮಾರೇಶ್ವರ ಪ್ರಥಮದರ್ಜೆ ಕಾಲೇಜು ಹಾಗೂ ಎನ್.ಸಿ.ಜೆ.ಸಿ. ಪಿ.ಯು ಕಾಲೇಜು, ಶಿಗ್ಗಾವಿ ಪಟ್ಟಣದ ಜೆ.ಎಂ.ಜೆ. ಶಾಲೆ, ಹಾವೇರಿ ನಗರದ ಹುಕ್ಕೇರಿಮಠ ಶ್ರೀ ಶಿವಲಿಂಗೇಶ್ವರ ಮಹಿಳಾ ಪ್ರಥಮ ದರ್ಜೆ ಕಾಲೇಜು, ಬ್ಯಾಡಗಿ ಪಟ್ಟಣದ ಎಸ್ .ಜೆ.ವಿ ಹೈಸ್ಕೂಲ್, ಹಿರೇಕೆರೂರು ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ರಾಣೆಬೆನ್ನೂರು ನಗರದ ರೋಟರಿ ಆಂಗ್ಲ ಮಾಧ್ಯಮ ಶಾಲೆ ಹಾಗೂ ರೋಟರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಮೇ 7ರಂದು ಡಿ ಮಸ್ಟರಿಂಗ್ ಕಾರ್ಯ ನಡೆಯಲಿದೆ.**

## ಕೆಎಸ್‌ಆರ್ ಟಿಸಿ ಬಸ್ ಚಾಲಕನ ಮೇಲೆ ಹಲ್ಲೆ

• ಉದಯವಾಹಿನಿ ಬಂಟ್ವಾಳ


ಉದಯವಾಹಿನಿ ಚಿತ್ರ

ಕಾರಿನ ಚಾಲಕರಿಗೆ ಸೈಡ್ ಕೊಟ್ಟಿಲ್ಲ ಕಾರಣಕ್ಕಾಗಿ ಕೆಎಸ್‌ಆರ್ ಟಿಸಿ ಬಸ್ ಚಾಲಕನಿಗೆ ಅಪರಿಚಿತರ ತಂಡವೊಂದು ಹಲ್ಲೆನಡೆಸಿ, ಬಸ್‌ಗೆ ಹಾನಿಗೊಳಿಸಿದ ಘಟನೆ ಬಂಟ್ವಾಳ ತಾಲ್ಲೂಕಿನ ಕಲ್ಲಡ್ಕ ಸಮೀಪದ ದಾಸಕೋಡಿ ಎಂಬಲ್ಲಿ ಭಾನುವಾರ ಸಂಜೆ ವೇಳೆ ನಡೆದಿದೆ. ಪುಂಜಾಲಕಟ್ಟೆ ನಿವಾಸಿ ಕೃಷ್ಣಪ್ಪ ಅವರು ಬಸ್ ಚಾಲಕನಾಗಿದ್ದು, ಅವರ ಮೇಲೆ ಹಲ್ಲೆಯಾಗಿದೆ ಎಂದು ಬಂಟ್ವಾಳ ನಗರ ಪೋಲೀಸ್ ಠಾಣೆಗೆ ದೂರು ನೀಡಿದ್ದಾರೆ. ಘಟನೆಯಿಂದ ಸುಮಾರು 30 ಸಾವಿರ ರೂ ನಷ್ಟ ಸಂಭವಿಸಿದೆ ಎಂದು ತಿಳಿಸಲಾಗಿದೆ. ಕೆಎಸ್‌ಆರ್ ಟಿಸಿಗೆ ಬಸ್ ಗೆ ಕಾರು ಅಡ್ಡಗಟ್ಟಿ ಜಖಂಗೊಳಿಸಿ ಸರಕಾರಿ ಕರ್ತವ್ಯಕ್ಕೆ ಅಡ್ಡಿಪಡಿಸಿದ ತಂಡದ ಮೇಲೆ ಕಾನೂನು ಕ್ರಮಕ್ಕೆ ಕೃಷ್ಣಪ್ಪ ದೂರಿನಲ್ಲಿ ತಿಳಿಸಿದ್ದಾರೆ.

ಮಂಗಳೂರು ಡಿಪೋದಿಂದ ಸೋಮವಾರ ಪೇಟೆಗೆ ಪ್ರಯಾಣಿಕರನ್ನು ಕರೆದುಕೊಂಡು ಹೋಗುವ ಮಾರ್ಗದಲ್ಲಿ ಸುಮಾರು 4 ಗಂಟೆಗೆ ದಾಸಕೋಡಿಗೆ ಬಸ್ ತಲುಪಿದಾಗ ಕೆ.ಎ.03 ಎಮ್ .ಕೆ.8149 ಮತ್ತು ಕೆ.ಎ.05 ಎ.ಎನ್.6722 ನೊಂದಾವಣೆಯ ಕಾರುಗಳಲ್ಲಿ ಬಂದ ಆರು ಜನರು ಕಲ್ಲಡ್ಕ ಏಕಮುಖ ರಸ್ತೆಯಲ್ಲಿ ಈ ಎರಡು ಕಾರುಗಳಿಗೆ ಮುಂದೆ ಹೋಗಲು ಸೈಡ್ ಕೊಟ್ಟಿಲ್ಲ ಎಂಬ ಆರೋಪ ಮಾಡಿ, ಬಸ್ಸನ್ನು ಅಡ್ಡಗಟ್ಟಿ ಸೈಡ್ ಮಿರರನ್ನು ಕಲ್ಲಿನಿಂದ ಹೊಡೆದು ಜಖಂಗೊಳಿಸಿದ್ದಾರೆ.

**ಜೀವ ಬೆದರಿಕೆ**

**ಬಳಿಕ ಚಾಲಕ ಕೃಷ್ಣಪ್ಪ ಅವರನ್ನು ಸೀಟಿನಿಂದ ಎಳೆದುಹಾಕಿ ಕೈಯಿಂದ ಹಣೆಗೆ ಮುಖಕ್ಕೆ ಎಡಕೈಗೆ ಹಿಗ್ಗಾಮುಗ್ಗ ಹೊಡೆದು ಅವ್ಯಾಚ್ಯ ಶಬ್ದಗಳಿಂದ ಬೈದು ಜೀವಬೆದರಿಕೆ ಹಾಕಿದ್ದಾರೆ. ಜೊತೆಗೆ ಬಸ್ ನ ಎದುರು ಭಾಗದ ಗಾಜನ್ನು ಕೈಯಿಂದ ಗುದ್ದಿ ಜಖಂ ಮಾಡಿದ್ದಾರೆ ಎಂದು ದೂರಿನಲ್ಲಿ ತಿಳಿಸಿದ್ದಾರೆ.**

# ಬೆಳೆ ಸಮೀಕ್ಷೆ ವ್ಯತ್ಯಾಸ: ಮರು ಪರಿಶೀಲಿಸಿ ಬೆಳೆವಿಮೆ ಪರಿಹಾರ ವಿತರಣೆಗೆ ಕ್ರಮ

### • ಚಳ್ಳಕೆರೆ ತಾಲ್ಲೂಕಿನ ಸೋಮಗುದ್ದು ಗ್ರಾಮ ಪಂಚಾಯಿತಿ ಹೊರತುಪಡಿಸಿ ಎಲ್ಲಾ ಪಂಚಾಯಿತಿಗಳಿಗೂ ಬೆಳೆವಿಮೆ ಹಣ

• ಉದಯವಾಹಿನಿ ಚಿತ್ರದುರ್ಗ


ಬೆಳೆ ಸಮೀಕ್ಷೆಯಲ್ಲಿ ಉಂಟಾದ ವ್ಯತ್ಯಾಸದಿಂದ ಚಳ್ಳಕೆರೆ ತಾಲ್ಲೂಕಿನ ಸೋಮಗುದ್ದು, ಎನ್.ದೇವರಹಳ್ಳಿ ಗ್ರಾಮ ಪಂಚಾಯಿತಿ ಸೇರಿದಂತೆ ಜಿಲ್ಲೆಯ ವಿವಿಧ ಗ್ರಾಮ ಪಂಚಾಯಿತಿ ವ್ಯಾಪ್ತಿಯ ರೈತರಿಗೆ ಬೆಳೆ ವಿಮೆ ಪರಿಹಾರ ಜಮೆ ಆಗದಿರುವುದು ಗಮನಕ್ಕೆ ಬಂದಿದೆ. ಈ ಭಾಗದ ರೈತರ ಜಮೀನುಗಳಲ್ಲಿ ಪುನಃ ಮರು ಪರಿಶೀಲಿಸಿ ಬೆಳೆವಿಮೆ ಪರಿಹಾರ ವಿತರಣೆಗೆ ಅಗತ್ಯ ಕ್ರಮಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ರೈತರಿಗೆ ಭರವಸೆ ನೀಡಿದರು.

**ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಭರವಸೆ**

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಬೆಳೆವಿಮೆ ಸಂಬಂಧ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಚಳ್ಳಕೆರೆ ತಾಲ್ಲೂಕು ರಾಜ್ಯದಲ್ಲಿಯೇ ಅತ್ಯಂತ ಕಡಿಮೆ ಮಳೆ ಬೀಳುವ ಪ್ರದೇಶವಾಗಿದೆ. ಇಂತಹ ಸಂದರ್ಭದಲ್ಲಿ ತಾಲ್ಲೂಕಿನ ಕೆಲವು ಗ್ರಾಮ ಪಂಚಾಯಿತಿ ವ್ಯಾಪ್ತಿಯ ರೈತರಿಗೆ ಬೆಳೆವಿಮೆ ವಿತರಣೆಯಾಗದಿರುವುದು, ಬೆಳೆವಿಮೆ ಹಣ ಪಾವತಿಯಲ್ಲಿಯೂ ವ್ಯತ್ಯಾಸ ಆಗಿರುವುದು ಹಾಗೂ ಕಂಪ್ಯೂಟರ್ ಸೆಂಟರ್‌ಗಳಲ್ಲಿ ಡಾಟಾ ಎಂಟ್ರಿ ಮಾಡುವ ಸಂದರ್ಭದಲ್ಲಿ ಆಗಿರುವ ತಪ್ಪುಗಳು ಸಹ ಗಮನಕ್ಕೆ ಬಂದಿವೆ. ಬೆಳೆ ಸಮೀಕ್ಷೆಯ ಸಂದರ್ಭದಲ್ಲಿ ಆಗಿರುವ ವ್ಯತ್ಯಾಸದ ಕುರಿತು ಈಗಾಗಲೇ ಚರ್ಚಿಸಿ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡಿದ್ದೇನೆ. ರೈತರು ಯಾವುದೇ ಆತಂಕ ಪಡುವ ಅಗತ್ಯವಿಲ್ಲ. ಪುನಃ ಪರಿಶೀಲಿಸಿ, ಬೆಳೆವಿಮೆ ಪರಿಹಾರಕ್ಕೆ ಕ್ರಮವಹಿಸಲಾಗುವುದು ಎಂದು ತಿಳಿಸಿದರು. ಜಿಲ್ಲೆಯ ರೈತರು ಬೆಳೆವಿಮೆ ಪಾವತಿಗೆ ರೂ.11.92 ಕೋಟಿ ಹಣ ಪಾವತಿಸಿದ್ದು, ಜಿಲ್ಲೆಗೆ ರೂ.284 ಕೋಟಿ ರೂಪಾಯಿ ಬೆಳೆವಿಮೆ ಹಣ ಬಂದಿದೆ. ಬೆಳೆವಿಮೆ ಹಣದ ಒಟ್ಟು ಮೊತ್ತದಲ್ಲಿ ಚಳ್ಳಕೆರೆ ತಾಲ್ಲೂಕಿಗೆ ಶೇ.51ರಷ್ಟು ಹಣ ಬಂದಿದೆ ಎಂದು ಮಾಹಿತಿ ನೀಡಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕ ಮಂಜುನಾಥ್ ಸೇರಿದಂತೆ ಸಾಂಖ್ಯಿಕ ಇಲಾಖೆ ಅಧಿಕಾರಿಗಳು, ಬೆಳೆವಿಮೆ ಪ್ರತಿನಿಧಿ, ರೈತರ ಸಂಘದ ಮುಖಂಡರಾದ ರೆಡ್ಡಿಹಳ್ಳಿ ವೀರಣ್ಣ, ಕೆ.ಪಿ.ಭೂತಯ್ಯ, ಚಿಕ್ಕಪನಹಳ್ಳಿ ರುದ್ರಸ್ವಾಮಿ, ಹಂಪಯ್ಯನಮಾಳಿಗೆ ಧನಂಜಯ, ಬ್ಯಾರಡಹಳ್ಳಿ ಶಿವಕುಮಾರ, ನಿವೃತ್ತ ಪ್ರಾಚಾರ್ಯ ಶಿವಲಿಂಗಪ್ಪ, ಮಲ್ಲಾಪುರ ತಿಪ್ಪೇಸ್ವಾಮಿ ಸೇರಿದಂತೆ ರೈತರು ಇದ್ದರು.

**ಚಳ್ಳಕೆರೆ ತಾಲ್ಲೂಕಿನ ಸೋಮಗುದ್ದು ಗ್ರಾಮ ಪಂಚಾಯಿತಿ ಹೊರತುಪಡಿಸಿ ಎಲ್ಲಾ ಪಂಚಾಯಿತಿಗಳಿಗೂ ಬೆಳೆವಿಮೆ ಹಣ ಬಂದಿದೆ. ಜಿಲ್ಲಾಧಿಕಾರಿಗಳ ನಿರ್ದೇಶನದಂತೆ ಬೆಳೆವಿಮೆ ಪಾವತಿಯಾಗದ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಳ್ಳಿಗಳಲ್ಲಿ ಮತ್ತೊಮ್ಮೆ ಪರಿಶೀಲನೆ ನಡೆಸಿ ಸೂಕ್ತ ದಾಖಲೆಗಳೊಂದಿಗೆ ವಿಮಾ ಕಂಪನಿಗೆ ಆಗಿರುವ ಲೋಪದೋಷ ಸರಿಪಡಿಸಿ ಬೆಳೆವಿಮೆ ಪಾವತಿಸಲು ಸೂಚನೆ ನೀಡಲಾಗುವುದು**

**-ಮಂಜುನಾಥ್, ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕ**


ಉದಯವಾಹಿನಿ ಚಿತ್ರ

**ರೈತರ ಸಾಲದ ಖಾತೆಗೆ ಜಮೆ ಮಾಡದಂತೆ ಸೂಚನೆ**

**ರೈತರಿಗೆ ನೀಡುವ ಬೆಳೆವಿಮೆ, ಸರ್ಕಾರಿ ಸೌಲಭ್ಯ ಸೇರಿದಂತೆ ಸಾಮಾಜಿಕ ಭದ್ರತಾ ಯೋಜನೆಯ ಪಿಂಚಣೆ ಹಣವನ್ನು ರೈತರ ಸಾಲದ ಖಾತೆಗಳಿಗೆ ಜಮೆ ಮಾಡುವಂತಿಲ್ಲ. ಈಗಾಗಲೇ ಲೀಡ್ ಬ್ಯಾಂಕ್ ವ್ಯವಸ್ಥಾಪಕರಿಗೆ ಸೂಚನೆ ನೀಡಿದ್ದು, ರೈತರ ಸಾಲದ ಖಾತೆಗೆ ಬೆಳೆವಿಮೆ ಹಣ ಜಮೆ ಮಾಡದಂತೆ ಕ್ರಮವಹಿಸಲಾಗಿದೆ. ಇದರ ಜೊತೆಗೆ ಬೆಳೆ ಪರಿಹಾರ ವಿತರಣೆಗೂ ಕ್ರಮವಹಿಸಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದರು.**

**ಬೆಳೆ ಸಮೀಕ್ಷೆ ಕ್ರಮಬದ್ಧವಾಗಿಲ್ಲ. ಮಳೆ ಆಶ್ರಿತ ಜಮೀನುಗಳಲ್ಲಿ ನಡೆಸಬೇಕಾದ ಬೆಳೆ ಕಟಾವು ಪ್ರಯೋಗವನ್ನು ನೀರಾವರಿ ಜಮೀನುಗಳ ಸರ್ವೇ ನಂಬರ್‌ಗಳಲ್ಲಿ ನಡೆಸಲಾಗಿದೆ. ಈ ಅಚಾತುರ್ಯ ಮಾಡಿದ ಪಿಡಿಓಗಳಿಗೆ ನೋಟಿಸ್ ನೀಡಲಾಗಿದೆ. ವರದಿ ಆಧಿರಿಸಿ ಇವರ ವಿರುದ್ಧ ಕಠಿಣ ಕ್ರಮಕ್ಕೈಗೊಳ್ಳಲಾಗುವುದು. ಬೆಳೆ ಸಮೀಕ್ಷೆ ತಪ್ಪಿನಿಂದಾಗಿ ಇಡೀ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಹಳ್ಳಿಗಳಿಗೂ ಪರಿಣಾಮ ಬೀರಿದೆ ಎಂದು ರೈತರು ಮಾಹಿತಿ ನೀಡಿದ್ದು, ಇದು ಅವೈಜ್ಞಾನಿಕ ಕ್ರಮವಾಗಿದೆ. ಈ ಕುರಿತು ಸೂಕ್ತ ಕ್ರಮಕೈಗೊಂಡು ಬೆಳೆ ನಷ್ಟ ಉಂಟಾದ ರೈತರಿಗೆ ಕಡ್ಡಾಯವಾಗಿ ಬೆಳೆವಿಮೆ ಪಾವತಿಗೆ ಕ್ರಮವಹಿಸಲಾಗುವುದು ಎಂದು ಹೇಳಿದರು. -ಟಿ.ವೆಂಕಟೇಶ್, ಜಿಲ್ಲಾಧಿಕಾರಿ**

# ರಾಮ ದ್ರೋಹ ಕಾಂಗ್ರೆಸ್, ಎಸ್‌ಪಿ ಡಿಎನ್‌ಎನಲ್ಲಿದೆ: ಯೋಗಿ

## ಕಾಂಗ್ರೆಸ್ ಪಕ್ಷ ರಾಮ ವಿರೋಧಿ, ಸನಾತನ ಧರ್ಮ ವಿರೋಧಿ ಅನ್ನೋ ಮಾತುಗಳನ್ನ ನಾನು ಈ ಹಿಂದೆಯೂ ಕೇಳಿದ್ದೆ, ಆದರೆ ನಂಬಿರಲಿಲ್ಲ

**ಹೊಸ ದಿಲ್ಲಿ:** ಕಾಂಗ್ರೆಸ್ ಹಾಗೂ ಸಮಾಜವಾದಿ ಪಕ್ಷ ಸೇರಿದಂತೆ ಸಮಸ್ತ ಇಂಡಿ ಮೈತ್ರಿ ಕೂಟದ ವಿರುದ್ಧ ಹರಿಹಾಯ್ದಿರುವ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ರಾಮ ದ್ರೋಹದ ಗುಣವು ಇವರೆಲ್ಲರ ವಂಶವಾಹಿಯಲ್ಲೇ ಬೇರೂರಿದೆ ಎಂದು ಆಕ್ರೋಶ ಹೊರ ಹಾಕಿದ್ದಾರೆ.

ಯೋಗಿ ಆದಿತ್ಯನಾಥ್ ಅವರ ಈ ವಾಗ್ದಾಳಿಗೆ ಕಾರಣವಾಗಿದ್ದು ಕಾಂಗ್ರೆಸ್ ನಾಯಕಿ ರಾಧಿಕಾ ಖೇರಾ ಅವರ ರಾಜೀನಾಮೆ ಪ್ರಸಂಗ. ಈ ಪ್ರಕರಣವನ್ನು ಉಲ್ಲೇಖಿಸಿ ಮಾತನಾಡಿದ ಯೋಗಿ ಆದಿತ್ಯನಾಥ್, 'ಆಕೆ ಅಯೋಧ್ಯೆಗೆ ಆಗಮಿಸಿ ರಾಮ ಲಲ್ಲಾ ಆಶೀರ್ವಾದ ಪಡೆದರು. ಆದರೆ, ಕಾಂಗ್ರೆಸ್ ನಾಯಕರು ಆಕೆಯ ಅವಹೇಳನ ಮಾಡಿದರು' ಎಂದು ಹರಿಹಾಯ್ದರು. ಕಾಂಗ್ರೆಸ್ ಪಕ್ಷದಲ್ಲಾದ ಅವಮಾನದಿಂದ ಮನನೊಂದ ರಾಧಿಕಾ ಖೇರಾ ಪಕ್ಷಕ್ಕೆ ರಾಜೀನಾಮೆ ನೀಡಿದರು. ಈ ಬೆಳವಣಿಗೆಯನ್ನ ಗಮನಿಸಿದರೆ ಕಾಂಗ್ರೆಸ್ ಹಾಗೂ ಸಮಾಜವಾದಿ ಪಕ್ಷಗಳ ಡಿಎನ್‌ಎನಲ್ಲೇ ರಾಮ ದ್ರೋಹ ಅಡಕ ಆಗಿರೋದು ಕಂಡು ಬರುತ್ತದೆ. ಇಂಡಿ ಮೈತ್ರಿ ಕೂಟದಲ್ಲಿ ಇರುವ ಪಕ್ಷಗಳ ನಾಯಕರ ವಂಶವಾಹಿಯಲ್ಲೂ ರಾಮ ದ್ರೋಹವೇ ಇದೆ ಎಂದು ಉತ್ತರ ಪ್ರದೇಶ ಸಿಎಂ ಯೋಗಿ ಆದಿತ್ಯನಾಥ್ ಹರಿಹಾಯ್ದರು.

- ಕಾಂಗ್ರೆಸ್ ನಾಯಕಿ ರಾಧಿಕಾ ಖೇರಾ ಅವರ ರಾಜೀನಾಮೆ ಪ್ರಸಂಗ ಉಲ್ಲೇಖಿಸಿದ ಯೋಗಿ ಆದಿತ್ಯನಾಥ್
- ಆಕೆ ಅಯೋಧ್ಯೆಗೆ ಆಗಮಿಸಿ ರಾಮ ಲಲ್ಲಾ ಆಶೀರ್ವಾದ ಪಡೆದದ್ದೇ ತಪ್ಪಾಯ್ತು
- ಕಾಂಗ್ರೆಸ್ ನಾಯಕರು ಆಕೆಯ ಅವಹೇಳನ ಮಾಡಿದರು ಎಂದು ಹರಿಹಾಯ್ದ ಯೋಗಿ



**ರಾಮ ದ್ರೋಹಿಗಳಿಗೆ ಈ ದೇಶದ ಜನರು ಎಂದಿಗೂ ಮತ ಹಾಕೋದಿಲ್ಲ**

ಇನ್ನು ಈ ರೀತಿಯ ರಾಮ ದ್ರೋಹಿಗಳಿಗೆ ಈ ದೇಶದ ಜನರು ಎಂದಿಗೂ ಮತ ಹಾಕೋದಿಲ್ಲ ಎಂದೂ ಯೋಗಿ ಆದಿತ್ಯನಾಥ್ ಹೇಳಿದ್ದಾರೆ. ಇದೇ ವೇಳೆ ಕಾಂಗ್ರೆಸ್ ವಿರುದ್ಧ ಹರಿಹಾಯ್ದ ಯೋಗಿ ಆದಿತ್ಯನಾಥ್ ಪಕ್ಷದ ಹುಸಿ ನೀತಿಗಳ ಬಗ್ಗೆ ಸಾರ್ವಜನಿಕರಿಗೆ ತುಂಬಾ ಚನ್ನಾಗಿ ಗೊತ್ತಿದೆ ಎಂದರು. ಒಡೆದು ಆಳುವ ಇವರ ನೀತಿಗಳು ಜನರಿಗೆ ಗೊತ್ತಾಗಿದೆ ಎಂದರು. ಕಾಂಗ್ರೆಸ್ ಪಕ್ಷ ರಾಮ ವಿರೋಧಿ, ಸನಾತನ ಧರ್ಮ ವಿರೋಧಿ ಅನ್ನೋ ಮಾತುಗಳನ್ನ ನಾನು ಈ ಹಿಂದೆಯೂ ಕೇಳಿದ್ದೆ, ಆದರೆ ನಂಬಿರಲಿಲ್ಲ. ಮಹಾತ್ಮ ಗಾಂಧಿ ಅವರು ತಮ್ಮ ಸಭೆಗಳ ಆರಂಭಕ್ಕೆ ಮುನ್ನ ರಘುಪತಿ ರಾಘವ ರಾಜಾರಾಮ್ ಭಜನೆ ಹಾಡಿಸುತ್ತಿದ್ದರು. ಇದೇ ಮಾರ್ಗ ಅನುಸರಿಸುತ್ತಿದ್ದ ನಾನು, ಕೆಲವು ದಿನಗಳ ಹಿಂದೆ ನನ್ನ ಅಜ್ಜಿ ಜೊತೆ ಅಯೋಧ್ಯೆಗೆ ರಾಮ ಮಂದಿರಕ್ಕೆ ಭೇಟಿ ನೀಡಿದ್ದೆ. ಅಲ್ಲಿಂದ ವಾಪಸ್ ಬಂದ ಮೇಲೆ ಮನೆಯ ಬಾಗಿಲಿಗೆ 'ಜೈ ಶ್ರೀರಾಮ್' ಎಂಬ ಧ್ವಜ ಹಾಕಿದ್ದೆವು ಎಂದು ರಾಧಿಕಾ ವಿವರಿಸಿದರು.

ಈ ಧ್ವಜವನ್ನು ಕಂಡ ಕಾಂಗ್ರೆಸ್ ನಾಯಕರು ನನ್ನನ್ನ ವಿರೋಧಿಸಲು ಆರಂಭಿಸಿದರು. ನಾನು ಫೋಟೋ, ವಿಡಿಯೋ ಹಾಕಿದಾಗ ತೆಗಳುತ್ತಿದ್ದರು, ಅಯೋಧ್ಯೆಗೆ ಹೋಗಿದ್ದು ಏಕೆ ಎಂದು ಕೇಳುತ್ತಿದ್ದರು ಎಂದು ರಾಧಿಕಾ ಖೇರಾ ತಮ್ಮ ನೋವನ್ನು ತೋಡಿಕೊಂಡಿದ್ದರು. ಕಾಂಗ್ರೆಸ್ ಪಕ್ಷಕ್ಕೆ ರಾಜೀನಾಮೆ ನೀಡಿದ ಬಳಿಕ ಸುದ್ದಿಗೋಷ್ಠಿ ನಡೆಸಿ ತಮ್ಮ ವಿಚಾರದಲ್ಲಿ ರಾಹುಲ್ ಗಾಂಧಿ ಹಾಗೂ ಪ್ರಿಯಾಂಕಾ ಮಧ್ಯ ಪ್ರವೇಶ ಮಾಡಲಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

### ಏನಿದು ರಾಧಿಕಾ ಖೇರಾ ರಾಜೀನಾಮೆ ಪ್ರಕರಣ?

**ಕಾಂಗ್ರೆಸ್ ನಾಯಕಿ ರಾಧಿಕಾ ಖೇರಾ ಅವರು ಸುದ್ದಿಗೋಷ್ಠಿ ಕರೆದು ತಾವು ಕಾಂಗ್ರೆಸ್ ಪಕ್ಷ ತೊರೆಯುತ್ತಿರೋದಾಗಿ ಘೋಷಿಸಿದ್ದರು. ಕಾಂಗ್ರೆಸ್ ಪಕ್ಷ ರಾಮ ವಿರೋಧಿ ಹಾಗೂ ಸನಾತನ ಧರ್ಮ ವಿರೋಧಿ ಎಂದು ಆಕ್ರೋಶ ವ್ಯಕ್ತಪಡಿಸಿದ್ದರು.**

# ಚುನಾವಣಾ ಆಯೋಗದಿಂದ ಆಂಧ್ರ ಡಿಜಿಪಿ ಎತ್ತಂಗಡಿ




**ಅಮರಾವತಿ:** ಆಂಧ್ರಪ್ರದೇಶದ ವಿಧಾನಸಭಾ, ಲೋಕಸಭಾ ಚುನಾವಣೆ ಹೊಸ್ತಿಲಲ್ಲೇ ಡಿಜಿಪಿ ಕೆ.ವಿ.ರಾಜೇಂದ್ರನಾಥ ರೆಡ್ಡಿ ಅವರನ್ನು ಚುನಾವಣಾ ಆಯೋಗ ವರ್ಗಾವಣೆ ಮಾಡಿದೆ. ಮುಂದಿನ ಶ್ರೇಣಿಯ ಅಧಿಕಾರಿಗೆ ತಕ್ಷಣವೇ ಅಧಿಕಾರ ಹಸ್ತಾಂತರಿಸುವಂತೆಯೂ ಸೂಚಿಸಲಾಗಿದೆ.

2024ರ ಲೋಕಸಭೆ ಚುನಾವಣೆಯೊಂದಿಗೆ ಆಂಧ್ರಪ್ರದೇಶ ವಿಧಾನಸಭೆಗೆ ಏಕಕಾಲದಲ್ಲಿ ಚುನಾವಣೆ ನಡೆಯುತ್ತಿದೆ. ರಾಜ್ಯದಲ್ಲಿ ಆಡಳಿತಾರೂಢ ವೈಎಸ್ ಆರ್ ಕಾಂಗ್ರೆಸ್ ಪಕ್ಷಕ್ಕೆ ಡಿಜಿಪಿ ಮತ್ತು ಇತರ ಹಲವು ಅಧಿಕಾರಿಗಳು ಸಹಕಾರ ನೀಡುತ್ತಿದ್ದಾರೆ ಎಂಬ ಪ್ರತಿಪಕ್ಷಗಳ ದೂರಿನ ಮೇರೆಗೆ ಚುನಾವಣಾ ಆಯೋಗ ಈ ಕ್ರಮಗಳನ್ನು ಕೈಗೊಂಡಿದೆ. ಮುಂದಿನ ಡಿಜಿಪಿ ಆಯ್ಕೆಗಾಗಿ ಸೋಮವಾರ ಬೆಳಗ್ಗೆ 11 ಗಂಟೆಯೊಳಗೆ ಮೂವರು ಡಿಜಿಪಿ ಶ್ರೇಣಿಯ ಅಧಿಕಾರಿಗಳ ಪಟ್ಟಿಯನ್ನು ನೀಡುವಂತೆ ಮುಖ್ಯ ಕಾರ್ಯದರ್ಶಿಗೆ ಸೂಚಿಸಿದೆ. ರಾಜೇಂದ್ರನಾಥ ರೆಡ್ಡಿ ಅವರಿಗೆ ಯಾವುದೇ ಚುನಾವಣಾ ಕರ್ತವ್ಯ ನೀಡದಂತೆಯೂ ನಿರ್ದೇಶನ ನೀಡಲಾಗಿದೆ.

ಎರಡೂ ಚುನಾವಣೆಗಳಿಗೆ ವೈಎಸ್‌ಆರ್‌ಪಿ ಮತ್ತು ಟಿಡಿಪಿ–ಬಿಜೆಪಿ–ಜನಸೇನಾ ಮೈತ್ರಿಕೂಟದ ನಡುವೆ ಪ್ರಬಲ ಹೋರಾಟ ನಡೆಯುತ್ತಿದೆ. ಈ ಸಮಯದಲ್ಲಿ ಡಿಜಿಪಿ ರಾಜೇಂದ್ರನಾಥ ರೆಡ್ಡಿ ಅವರ ವರ್ಗಾವಣೆ ರಾಜ್ಯದಲ್ಲಿ ಸಂಚಲನ ಮೂಡಿಸಿದೆ. ರಾಜೇಂದ್ರನಾಥ ರೆಡ್ಡಿ ನಿಷ್ಪಕ್ಷಪಾತವಾಗಿ ಕರ್ತವ್ಯ ನಿರ್ವಹಿಸುತ್ತಿಲ್ಲ, ವೈಎಸ್‌ಆರ್‌ಪಿ ಕಾರ್ಯಕರ್ತರಂತೆ ವರ್ತಿಸುತ್ತಿದ್ದಾರೆ ಎಂದು ವಿಪಕ್ಷಗಳಿಂದ ಮೊದಲಿನಿಂದಲೂ ಟೀಕೆಗಳು ವ್ಯಕ್ತವಾಗಿದ್ದವು. ರಾಜೇಂದ್ರನಾಥ ರೆಡ್ಡಿಯವರ ಅಧಿಕಾರಾವಧಿಯಲ್ಲಿ ಪ್ರತಿಪಕ್ಷ ನಾಯಕರನ್ನು ಅಕ್ರಮವಾಗಿ ಬಂಧಿಸಲು ಸುಳ್ಳು ಪ್ರಕರಣಗಳನ್ನು ದಾಖಲಿಸಲಾಗಿದೆ ಎಂಬ ಆರೋಪವನ್ನೂ ಪಕ್ಷಗಳ ನಾಯಕರು ಮಾಡಿದ್ದರು. ಆಡಳಿತಾರೂಢ ವೈಎಸ್‌ಆರ್‌ಪಿ ನಾಯಕರ ದೌರ್ಜನ್ಯದ ವಿರುದ್ಧ ನೀಡಲಾದ ನಿಜವಾದ ದೂರುಗಳನ್ನೂ ನಿರ್ಲಕ್ಷಿಸಲಾಗಿದೆ ಎಂದು ಟಿಡಿಪಿ–ಬಿಜೆಪಿ–ಜನಸೇನಾ ನಾಯಕರು ಆರೋಪಿಸಿದ್ದರು. ಆಂಧ್ರಪ್ರದೇಶದ 175 ಸದಸ್ಯ ಬಲದ ವಿಧಾನಸಭಾ ಮತ್ತು 25 ಲೋಕಸಭಾ ಸ್ಥಾನಗಳಿಗೆ ಮೇ 13ರಂದು ಏಕಕಾಲದಲ್ಲಿ ಚುನಾವಣೆ ನಡೆಯಲಿದ್ದು, ಜೂನ್ 4ರಂದು ಫಲಿತಾಂಶ ಹೊರಬರಲಿದೆ.

# ಕಾಂಗ್ರೆಸ್, ಬಿಜೆಡಿ ಲೂಟಿಕೋರ ಪಕ್ಷಗಳು: ನರೇಂದ್ರ ಮೋದಿ

**ಬಹರಂಪುರ:** ಸ್ವಾತಂತ್ರ್ಯದ ನಂತರ ಏಳು ದಶಕಗಳ ಕಾಲ ಕಾಂಗ್ರೆಸ್ ನಂತರ ಬಿಜು ಜನತಾ ದಳದ ಲೂಟಿ ಸಂಪನೂಲಗಳಿಂದ ಸಮೃದ್ಧವಾಗಿದ್ದ ಒಡಿಶಾ ಇಂದು ಬಡವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಇಂದು ವಾಗ್ದಾಳಿ ನಡೆಸಿದರು. ಬೆಹ್ರಾಂಪುರದಲ್ಲಿ ನಡೆದ ರ್‍ಯಾಲಿಯಲ್ಲಿ ಮಾತನಡಿದ ಅವರು, ಸಾರ್ವತ್ರಿಕ ಚುನಾವಣೆಯ ಜೊತೆಗೆ ಒಡಿಶಾದಲ್ಲಿ ನಡೆಯಲಿರುವ ರಾಜ್ಯ ಚುನಾವಣೆಗೂ ಮುನ್ನ ಪ್ರಧಾನಿ ಬಿಜೆಪಿ ಪರ ಪ್ರಚಾರ ನಡೆಸುತ್ತಿದ್ದರು.

ಮುಖ್ಯಮಂತ್ರಿ ನವೀನ್ ಪಟ್ನಾಯಕ್ ವಿರುದ್ಧ ಅಪರೂಪದ ದಾಳಿಯಲ್ಲಿ, ಗಂಜಾಮ್‌ನಲ್ಲಿ ನಡೆದ ರ್‍ಯಾಲಿಯಲ್ಲಿ ಪ್ರಧಾನಿ ತಮ ಕ್ಷೇತ್ರವಾದ ಹಿಂಜಿಲಿಯಿಂದ ಕಾರ್ಮಿಕರು ಬೇರೆ ರಾಜ್ಯಗಳಿಗೆ ಏಕೆ ವಲಸೆ ಹೋಗುತ್ತಾರೆ ಎಂದು ಕೇಳಿದರು.

ಇಲ್ಲಿನ ಹೆಚ್ಚಿನ ಆಸ್ಪತ್ರೆಗಳಲ್ಲಿ ವೈದ್ಯರ ಹುದ್ದೆಗಳು ಏಕೆ ಖಾಲಿ ಇವೆ ಹೆಚ್ಚಿನ ಮಕ್ಕಳು ಶಾಲೆಯಿಂದ ಏಕೆ ಹೊರಗುಳಿಯುತ್ತಾರೆ ಅಭಿವದ್ಧಿ ಕಾರ್ಯಗಳಿಗಾಗಿ ಒಡಿಶಾಗೆ ಬಜೆಟ್ ನೀಡಲು ಅವರು ಎಂದಿಗೂ ಹಿಂಜರಿಯುವುದಿಲ್ಲ ಎಂದು ಒತ್ತಿ ಹೇಳಿದರು. ಹಿಂದಿನ ಮನಮೋಹನ್ ಸಿಂಗ್ ಸರ್ಕಾರದ ವಿರುದ್ಧ ರಿಮೋಟ್ ಕಂಟ್ರೋಲ್ ಸ್ವೈಪ್ ಮಾಡಿದ ಪ್ರಧಾನಿ, ಕೇಂದ್ರದಲ್ಲಿ ಸೋನಿಯಾ ಗಾಂಧಿ ಅವರ ರಿಮೋಟ್ ಕಂಟ್ರೋಲ್ ಸರ್ಕಾರ 10 ವರ್ಷಗಳ ಕಾಲ ಅಧಿಕಾರದಲ್ಲಿದ್ದಾಗ ಮತ್ತು ಮನಮೋಹನ್ ಸಿಂಗ್ ಪ್ರಧಾನಿಯಾಗಿದ್ದಾಗ ಒಡಿಶಾಗೆ 10 ವರ್ಷಗಳಲ್ಲಿ 1 ಲಕ್ಷ ಕೋಟಿ ಸಿಕ್ಕಿತು. ಮೋದಿ 10 ವರ್ಷಗಳಲ್ಲಿ 3.5 ಲಕ್ಷ ಕೋಟಿ ನೀಡಿದ್ದಾರೆ ಆದರೆ ಹಣ ಮಾತ್ರ, ಕೆಲಸ ಮಾಡುವುದಿಲ್ಲ.



**ಒಡಿಶಾದಲ್ಲಿ ನೀರು, ಫಲವತ್ತಾದ ಭೂಮಿ, ಖನಿಜಗಳು, ಸುದೀರ್ಘ ಕರಾವಳಿ, ಇತಿಹಾಸ, ಸಂಸ್ಕೃತಿ ಇದೆ, ದೇವರು ಇಷ್ಟೆಲ್ಲಾ ಕೊಟ್ಟಿದ್ದಾನೆ. ಆದರೆ ಒಡಿಶಾದ ಜನರು ಏಕೆ ಬಡವರು ಇದಕ್ಕೆ ಉತ್ತರವೆಂದರೆ ಲೂಟಿ, ಮೊದಲು ಕಾಂಗ್ರೆಸ್ ನಾಯಕರು ಮತ್ತು ನಂತರ ಬಿಜೆಡಿ ನಾಯಕರು. ಬಿಜೆಡಿಯ ಸಣ್ಣ ನಾಯಕರೂ ದೊಡ್ಡ ಬಂಗಲೆಗಳನ್ನು ಹೊಂದಿದ್ದಾರೆ** -ನರೇಂದ್ರ ಮೋದಿ

ಒಡಿಶಾ ಸರ್ಕಾರಕ್ಕೆ ಮಹಿಳೆಯರ ಕಲ್ಯಾಣದ ಬಗ್ಗೆ ಕಾಳಜಿ ಇಲ್ಲ ಎಂದು ಪ್ರಧಾನಿ ಹೇಳಿದರು. ಕೇಂದ್ರವು ಪ್ರತಿ ಗರ್ಭಿಣಿಯರಿಗೆ 6,000 ಸಹಾಯವನ್ನು ನೀಡುತ್ತದೆ, ಒಡಿಶಾ ಸರ್ಕಾರವು ಈ ಮಹತ್ವದ ಯೋಜನೆಯನ್ನು ಸ್ಥಗಿತಗೊಳಿಸಿರುವುದು ನಿಮಗೆ ಆಶ್ಚರ್ಯವಾಗುತ್ತದೆ ಎಂದು ಅವರು ಹೇಳಿದರು.


ಜಲ ಜೀವನ್ ಮಿಷನ್‌ಗೆ ಕೇಂದ್ರದಿಂದ 10,000 ಕೋಟಿ ಕಳುಹಿಸಲಾಗಿದೆ.

ಆ ಹಣವನ್ನು ಖರ್ಚು ಮಾಡಲು ಇಲ್ಲಿಯ ಸರ್ಕಾರಕ್ಕೆ ಸಾಧ್ಯವಾಗಲಿಲ್ಲ. ಮೋದಿ ಗ್ರಾಮೀಣ ಪ್ರದೇಶದಲ್ಲಿ ರಸ್ತೆ ನಿರ್ಮಿಸಲು ಹಣ ಕಳುಹಿಸುತ್ತಾರೆ, ಆದರೆ ಇಲ್ಲಿನ ರಸ್ತೆಗಳು ಕೆಟ್ಟ ಸ್ಥಿತಿಯಲ್ಲಿವೆ. ಮೋದಿ ಅವರು ಉಚಿತ ಅಕ್ಕಿಗೆ ಹಣ ಕಳುಹಿಸುತ್ತಾರೆ, ಈ ಸರ್ಕಾರವು ಪ್ಯಾಕೆಟ್‌ಗಳ ಮೇಲೆ ತನ್ನದೇ ಆದ ಛಾಯಾಚಿತ್ರವನ್ನು ಅಂಟಿಸುತ್ತದೆ ಎಂದು ಪ್ರಧಾನಿ ಹೇಳಿದರು.

# ಗುಂಡಿಕ್ಕಿ ಈಕ್ವೆಡರ್ ಬ್ಯೂಟಿ ಹತ್ಯೆ: ಇನ್‌ಸ್ಟಾಗ್ರಾಮ್ ಫಾಲೋ ಮಾಡಿ ಸ್ಕೆಚ್ ಹಾಕಿದ್ದ ಹಂತಕರು

**ಈಕ್ವೆಡಾರ್:** ಸೋಷಿಯಲ್ ಮೀಡಿಯಾಗಳಲ್ಲಿ ಸ್ಟೇಸ್ ಹಾಕೋದು ತಮ್ಮ ದಿನದ ಬೆಳವಣಿಗೆಯನ್ನು ಫಾಲೋವರ್ಸ್‌ಗಳಿಗೆ ಹಂಚಿಕೊಳ್ಳಬೇಕೆಂಬುದು ಖಯಾಲಿ. ಇಂದು ಎಲ್ಲಿದ್ದೇವೆ, ಎಲ್ಲಿಗೆ ಹೋಗ್ತಿದ್ದೀವಿ, ಯಾರನ್ನ ಭೇಟಿ ಮಾಡ್ತೀವಿ, ಯಾವ ಹೋಟೆಲ್‌ನಲ್ಲಿ ಊಟ ಮಾಡಿದ್ರು, ಎಲ್ಲಿ ಶಾಪಿಂಗ್, ಹೀಗೆ ಪ್ರತಿ ಮಾಹಿತಿಯನ್ನು ಹಂಚಿಕೊಳ್ಳುತ್ತಾರೆ. ಹೀಗೆ ಮಾಡದಿದ್ದರೆ ನಿದ್ರೆಯೇ ಬರೋದಿಲ್ಲ. ಇದು ಕ್ರಿಮಿನಲ್‌ಗಳಿಗೆ ನೆರವಾಗುತ್ತದೆ ಎಂಬುದಕ್ಕೆ ಈಕ್ವೆಡರ್ ದೇಶದ ಬ್ಯೂಟಿ ಹತ್ಯೆಯೇ ಸ್ಪಷ್ಟ ಉದಾಹರಣೆಯಾಗಿದೆ.

ಹೌದು. 2022ರಲ್ಲಿ ಮಿಸ್ ಈಕ್ವೆಡರ್ ಕಿರೀಟ ಧರಿಸಿದ್ದ ಬ್ಯೂಟಿ ಲ್ಯಾಂಡಿ ಪರಾಗ ಗೊಯ್ಬುರೊ (23) ಅವರು ಕಳೆದ ಏಪ್ರಿಲ್ 28ರಂದು ಭೀಕರ ಗುಂಡಿನ ದಾಳಿಗೆ ತುತ್ತಾಗಿದ್ದರು. ಈಕ್ವೆಡರ್ ದೇಶದ ಕ್ವೆವೆಡೊ ನಗರದಲ್ಲಿ ಇರುವ ಜನಪ್ರಿಯ ರೆಸ್ಟೋರೆಂಟ್ ಒಂದರಲ್ಲಿ ಕುಳಿತಿದ್ದ ವೇಳೆ ಇಬ್ಬರು ದುಷ್ಕರ್ಮಿಗಳು ಗುಂಡಿಟ್ಟು ಕೊಂದಿದ್ದರು. ಈ ಘಟನೆ ಈಕ್ವೆಡರ್ ದೇಶವನ್ನೇ ಬೆಚ್ಚಿ ಬೀಳಿಸಿತ್ತು.



23 ವರ್ಷ ವಯಸ್ಸಿನ ಈಕೆಗೆ ತಮ್ಮ ಇನ್‌ಸ್ಟಾಗ್ರಾಮ್‌ನಲ್ಲಿ ಹೆಚ್ಚಿನ ಅಭಿಮಾನಿಗಳನ್ನು ಹೊಂದಿದ್ದರು. ಈ ಪ್ರಕರಣದ ಬೆನ್ನತ್ತಿದ್ದ ಪೊಲೀಸರಿಗೆ ಆಕೆ ಇನ್‌ಸ್ಟಾಗ್ರಾಮ್‌ನಲ್ಲಿ ಹಂಚಿಕೊಳ್ಳುತ್ತಿದ್ದ ಮಾಹಿತಿಯೇ ಹಂತಕರಿಗೆ ಸುಳಿವು ಸಿಗುವಂತೆ ಮಾಡಿದೆ ಎಂಬುದು ಗೊತ್ತಾಗಿದೆ. ಈ ಘಟನೆ ಸಿಸಿಟಿವಿಯಲ್ಲಿ ಸೆರೆಯಾಗಿದೆ.

# ಭಾರತದಲ್ಲಿ ಡಿಜಿಟಲ್ ಕ್ರಾಂತಿಯಾಗಿದೆ: ವಿದೇಶಾಂಗ ಸಚಿವ ಜೈಶಂಕರ್

**ಭುವನೇಶ್ವರ:** ದೇಶದಲ್ಲಿ ಡಿಜಿಟಲ್‌ಕ್ರಾಂತಿಯಾಗಿದ್ದು ಪ್ರತಿ ತಿಂಗಳು 12 ಬಿಲಿಯನ್ ನಗದು ರಹಿತ ಪಾವತಿ ಮಾಡಲಾಗುತ್ತಿದೆ ಎಂದು ವಿದೇಶಾಂಗ ಸಚಿವ ಎಸ್.ಜೈಶಂಕರ್ ಹೇಳಿದ್ದಾರೆ.

ಅನೇಕ ದೇಶಗಳಿವೆ, ಅಲ್ಲಿ ನಾವು ನಮ ವ್ಯವಹಾರವನ್ನು ಮುಗಿಸಿದಾಗ, ಅವರು ನಮ ಡಿಜಿಟಲ್ ಮೂಲಸೌಕರ್ಯವನ್ನು ಚರ್ಚಿಸಲು ನಮೊಂದಿಗೆ ಕುಳಿತುಕೊಳ್ಳುತ್ತಾರೆ. ಇದು ವಿಶ್ವದಲ್ಲಿ ಭಾರತದ ಗುರುತಾಗಿದೆ. ಪ್ರತಿ ತಿಂಗಳು, ಭಾರತೀಯರು 10–12 ಬಿಲಿಯನ್ ನಗದು ರಹಿತ ಪಾವತಿಗಳನ್ನು ಮಾಡುತ್ತಾರೆ. ಇದಕ್ಕೆ ವಿರುದ್ಧವಾಗಿ, ಯುಎಸ್ ಇಡೀ ವರ್ಷದಲ್ಲಿ 4 ಶತಕೋಟಿ ನಗದು ರಹಿತ ಪಾವತಿಗಳನ್ನು ಮಾಡುತ್ತದೆ ಎಂದು ಸಂಲ್ಬುರದಲ್ಲಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಜೈಶಂಕರ್ ಹೇಳಿದರು. ಡಿಜಿಟಲ್ ಮೂಲಸೌಕರ್ಯದ ಅರ್ಥವೇನು? ಒಂದು, ನಾವೆಲ್ಲರೂ ಮೊಬೈಲ್ ಫೋನ್ ಮೂಲಕ ಪಾವತಿ ಮಾಡುತ್ತೇವೆ. ಇದು ನಮ ಅಭ್ಯಾಸವಾಗಿದೆ. ನಾಲ್ಕೈದು ವರ್ಷಗಳ ಹಿಂದೆ ಮೊಬೈಲ್ ಮತ್ತು ಹಣದ ನಡುವಿನ ಲಿಂಕ್ ಬಗ್ಗೆ ನಮಗೆ ಅನುಮಾನವಿತ್ತು. ಹಾಗೆಯೇ ಇತ್ತು. ಪಾವತಿ ಮಾಡಿದ ನಂತರ ಏನಾದರೂ ಆಗಬಹುದೆಂದು ಭಯ ಇತ್ತು ಎಂದು ಅವರು ಹೇಳಿದರು. 10 ವರ್ಷಗಳ ಹಿಂದೆ ವಿಶ್ವವೇ ಭಾರತದ ಆರ್ಥಿಕತೆಯ ಬಗ್ಗೆ ಚಿಂತಿತರಾಗಿದ್ದರು ಇಂದು ಅದೇ ಜನರು ಭಾರತವು ವಿಶ್ವದ ಐದು ಪ್ರಮುಖ ಆರ್ಥಿಕತೆಗಳಲ್ಲಿ ಒಂದಾಗಿದೆ ಮತ್ತು ಮುಂದಿನ ದಿನಗ ಳಲ್ಲಿ ಮೂರನೇ ಅತಿದೊಡ್ಡ ಆರ್ಥಿಕತೆಯಾಗಲಿದೆ ಎಂದು ಅವರು ಹೇಳುತ್ತಿದ್ದಾರೆ ಎಂದು ಅವರು ವಿವರಿಸಿದರು.



**12 ಬಿಲಿಯನ್ ನಗದು ರಹಿತ ಪಾವತಿ**

ಭಾರತವು ತನ್ನ ರಚನಾತಕ ಸದೃಢತೆಯ ಬಲದಿಂದಾಗಿ ಜಾಗತಿಕ ಆರ್ಥಿಕ ಅಭಿವೃದ್ಧಿಯಲ್ಲಿ ದೊಡ್ಡ ಪಾತ್ರವನ್ನು ವಹಿಸುತ್ತದೆ ಎಂದು ಜೈಶಂಕರ್ ಹೇಳಿದರು. ಅಂತರರಾಷ್ಟ್ರೀಯ ಹಣಕಾಸು ನಿಧಿಯು ಮುಂದಿನ 20 ವರ್ಷಗಳಲ್ಲಿ ಭಾರತದ ರಚನಾತ್ಮಕ ಸದಢತೆಯ ಲದಿಂದಾಗಿ, ಜಾಗತಿಕ ಆರ್ಥಿಕ ಅಭಿವೃದ್ಧಿಯಲ್ಲಿ ಭಾರತವು ದೊಡ್ಡ ಪಾತ್ರವನ್ನು ವಹಿಸುತ್ತದೆ ಎಂದು ಅವರು ಹೇಳಿದರು.

ಕೋವಿಡ್ ನಂತರ ಅನೇಕ ರಾಷ್ಟ್ರಗಳು ಆರ್ಥಿಕ ಚೇತರಿಸಿಕೊಂಡಿಲ್ಲ. ದೊಡ್ಡ ಆರ್ಥಿಕತೆಗಳಲ್ಲಿ, 7 ಶೇಕಡಾ ಬೆಳವಣಿಗೆ ದರವನ್ನು ಮಾಡಿದ ಏಕೈಕ ದೇಶ ಭಾರತವಾಗಿದೆ ಎಂದು ಅವರು ಮಾಹಿತಿ ನೀಡಿದರು.

# ಇಸ್ರೇಲ್‌ನಲ್ಲಿ ಅಲ್ ಜಜೀರಾ ಚಾನಲ್ ಬಂದ್

**ಟೆಲ್ ಅವಿವ್:** ಕತಾರ್ ಒಡೆತನದ ಸುದ್ದಿ ವಾಹಿನಿ ಇಸ್ರೇಲ್‌ನಲ್ಲಿ ಸಂಪೂರ್ಣ ನಿಷೇಧವಾಗಿದೆ. ಮಾಧ್ಯಮ ಚಾನಲ್ ಅಲ್ ಜಜೀರಾದ ಸ್ಥಳೀಯ ಕಚೇರಿಗಳನ್ನು ಮುಚ್ಚಲು ಇಸ್ರೇಲ್ ನಿರ್ಧರಿಸಿದೆ. ಗಾಜಾದಲ್ಲಿ ಯುದ್ಧ ಮುಂದುವರಿಯುವವರೆಗೆ ಇಸ್ರೇಲ್‌ನಲ್ಲಿರುವ ಅಲ್ ಜಜೀರಾ ಸ್ಥಳೀಯ ಕಚೇರಿಗಳನ್ನು ಮುಚ್ಚಲು ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರ ಕ್ಯಾಬಿನೆಟ್ ನಿರ್ಧರಿಸಿದೆ.

ಇಸ್ರೇಲಿ ಅಧಿಕಾರಿಗಳು ನಂತರ ಅಲ್ ಜಜೀರಾ ಕಚೇರಿಯಾಗಿ ಬಳಸಲಾದ ಜೆರುಸಲೆಮ್ ಹೋಟೆಲ್ ಕೋಣೆಯ ಮೇಲೆ ದಾಳಿ ನಡೆಸಿದ್ದಾರೆ. ಆನ್‌ಲೈನ್‌ನಲ್ಲಿ ಹರಿದಾಡುತ್ತಿರುವ ವಿಡಿಯೋ ಸರಳ ಉಡುಪಿನ ಅಧಿಕಾರಿಗಳು ಹೋಟೆಲ್ ಕೋಣೆಯಲ್ಲಿ ಕ್ಯಾಮೆರಾ ಉಪಕರಣಗಳನ್ನು ನಾಶಪಡಿಸುವುದನ್ನು ತೋರಿಸಿದೆ. ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರ ಕ್ಯಾಬಿನೆಟ್ ಗಾಜಾದಲ್ಲಿ ಯುದ್ಧ ಮುಂದುವರಿದಾಗ ನೆಟ್‌ವರ್ಕ್ ಮುಚ್ಚಿದೆ. ಅಲ್ ಜಜೀರಾವನ್ನು ಉಗ್ರರ ವಾಹಿನಿ ಎಂದು ನೆತನ್ಯಾಹು ಕರೆದಿದ್ದಾರೆ. ಏತನ್ಮಧ್ಯೆ, ಅಲ್ ಜಜೀರಾ ಈ ಕ್ರಮವು ತನ್ನ ಪತ್ರಕರ್ತರನ್ನು ಅಪಾಯಕ್ಕೆ ತಳ್ಳುವ ಕ್ರಿಮಿನಲ್ ಕ್ರಮ ಎಂದು ಹೇಳಿದೆ. ಯಾವುದೇ ಕಾನೂನು ಕ್ರಮ ಕೈಗೊಳ್ಳುವ ಹಕ್ಕನ್ನು ಅದು ಕಾಯ್ದಿರಿಸಿದೆ ಎಂದು ಅಲ್ ಜಜೀರಾ ಹೇಳಿದೆ.



ಕತಾರ್‌ನಲ್ಲಿ ಹಮಾಸ್‌ನೊಂದಿಗೆ ಕದನ ವಿರಾಮಕ್ಕೆ ಸಂಬಂಧಿಸಿದ ಮಾತುಕತೆಗಳು ವೇಗವನ್ನು ಪಡೆಯುತ್ತಿರುವ ಸಮಯದಲ್ಲಿ ನೆತನ್ಯಾಹು ಸರ್ಕಾರ ಈ ನಿರ್ಧಾರವನ್ನು ತೆಗೆದುಕೊಂಡಿದೆ. ವರದಿಯ ಪ್ರಕಾರ, ಈ ನಿರ್ಧಾರವು ತಕ್ಷಣದಿಂದಲೇ ಜಾರಿಗೆ ಬರಲಿದೆ ಎಂದು ನೆತನ್ಯಾಹು ಅವರ ಕಚೇರಿ ಹೇಳಿಕೆಯಲ್ಲಿ ತಿಳಿಸಿದೆ. ಈ ನಿರ್ಧಾರವು ಇಸ್ರೇಲ್‌ನಲ್ಲಿ ಚಾನೆಲ್‌ನ ಕಚೇರಿಯನ್ನು ಮುಚ್ಚುವುದು, ಅದರ ಪ್ರಸಾರ ಉಪಕರಣಗಳನ್ನು ಮುಟ್ಟುಗೋಲು ಹಾಕಿಕೊಳ್ಳುವುದು, ಚಾನೆಲ್‌ನ ವರದಿಗಳ ಪ್ರಸಾರವನ್ನು ನಿಲ್ಲಿಸುವುದು ಮತ್ತು ಅದರ ವೆಬ್‌ಸೈಟ್ ಅನ್ನು ನಿರ್ಬಂಧಿಸುವುದನ್ನು ಒಳಗೊಂಡಿರುತ್ತದೆ.

**ಕತಾರ್ ಒಡೆತನದ ಅಲ್ ಜಜೀರಾ ಅವರ ಸ್ಥಳೀಯ ಕಚೇರಿಯನ್ನು ಮುಚ್ಚಲು ತಮ್ಮ ಸರ್ಕಾರ ಸರ್ವಾನುಮತದಿಂದ ಮತ ಹಾಕಿದೆ ಎಂದು ಇಸ್ರೇಲಿ ಪ್ರಧಾನಿ ಬೆಂಜಮಿನ್ ನೆತನ್ಯಾಹು ಭಾನುವಾರ ಹೇಳಿದ್ದಾರೆ. ಇಸ್ರೇಲ್-ಹಮಾಸ್ ಯುದ್ಧದ ಸಮಯದಲ್ಲಿ ಇಸ್ರೇಲ್ ಮತ್ತು ಚಾನಲ್ ನಡುವಿನ ಸಂಬಂಧಗಳು ಮತ್ತಷ್ಟು ಹದಗೆಟ್ಟವು.** -ನೆತನ್ಯಾಹು

# ಮಣಿಪುರದಲ್ಲಿ ಶಾಲಾ-ಕಾಲೇಜುಗಳಿಗೆ ರಜೆ ಘೋಷಣೆ

**ಇಂಫಾಲ:** ಭಾರಿ ಮಳೆಯಿಂದಾಗಿ ಮಣಿಪುರ ರಾಜ್ಯದ ಎಲ್ಲಾ ಶಾಲಾ-ಕಾಲೇಜುಗಳನ್ನು 2 ದಿನ ಮುಚ್ಚುವಂತೆ ಮಣಿಪುರ ಸರ್ಕಾರ ಘೋಷಿಸಿದೆ. ರಾಜ್ಯದಲ್ಲಿ ಭಾರೀ ಮಳೆ ಸುರಿದಿದ್ದು, ಇಂಫಾಲ್ ಪಶ್ಚಿಮ ಜಿಲ್ಲೆಯ ಕಾಂಚೀಪುರ ಮತ್ತು ತೇರಾ ಮತ್ತು ತೌಬಾಲ್ ಜಿಲ್ಲೆಯ ವಿವಿಧ ಭಾಗಗಳಲ್ಲಿ ಹಲವಾರು ಮನೆಗಳಿಗೆ ಹಾನಿಯಾಗಿದ್ದು, ಒಬ್ಬ ವ್ಯಕ್ತಿ ಸಾವನ್ನಪ್ಪಿದ್ದಾರೆ ಮತ್ತು ಇಬ್ಬರು ಗಾಯಗೊಂಡಿದ್ದಾರೆ ಎಂದು ಅಧಿಕಾರಿ ತಿಳಿಸಿದ್ದಾರೆ.

ಭಾನುವಾರ ಶುರುವಾದ ಆಲಿಕಲ್ಲು ಮಳೆಯಿಂದಾಗಿ ರಾಜ್ಯದಾದ್ಯಂತ ಅನೇಕ ಕಡೆ ಹಾನಿ ಸಂಭವಿಸಿರುವ ಹಿನ್ನಲೆಯಲ್ಲಿ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಶಿಕ್ಷಣ ನಿರ್ದೇಶನಾಲಯವು ಹೊರಡಿಸಿದ ಆದೇಶದಲ್ಲಿ ಶಿಕ್ಷಣ ಸಂಸ್ಥೆಗಳನ್ನು ಮುಚ್ಚಲು ತಿಳಿಸಿದೆ. ಮಣಿಪುರ ಮುಖ್ಯಮಂತ್ರಿ ಎನ್ ಬಿರೇನ್ ಸಿಂಗ್ ಅವರು ಫೇಸ್‌ಬುಕ್‌ನಲ್ಲಿ ಪೋಸ್ಟ್ ಮಾಡಿದ್ದು, ಪ್ರಸ್ತುತ ಹವಾಮಾನ ಪರಿಸ್ಥಿತಿಗಳಿಂದ ಉಂಟಾಗುವ ಅಪಾಯಗಳ ವಿರುದ್ಧ ಮುನ್ನೆಚ್ಚರಿಕೆ ಕ್ರಮವಾಗಿ ಈ ನಿರ್ಧಾರವನ್ನು ತೆಗೆದುಕೊಳ್ಳಲಾಗಿದೆ. ಮನೆಯೊಳಗೆ ಸುರಕ್ಷಿತವಾಗಿರಲು ನಾನು ಎಲ್ಲರನ್ನು ಕೋರುತ್ತೇನೆ. ರಾಜ್ಯ ಸರ್ಕಾರವು ಎಲ್ಲಾ ಸುರಕ್ಷತಾ ಕ್ರಮ ತೆಗೆದುಕೊಳ್ಳುತ್ತಿದೆ ಎಂದು ತಿಳಿಸಿದ್ದಾರೆ.



**ರಾಜ್ಯದಲ್ಲಿ ಭಾರೀ ಮಳೆ ಹಲವಾರು ಮನೆಗಳಿಗೆ ಹಾನಿ**

ರಾಜ್ಯದಲ್ಲಿ, ವಿಶೇಷವಾಗಿ ಇಂಫಾಲ್ ಕಣಿವೆಯಲ್ಲಿ ಸುರಿದ ಆಲಿಕಲ್ಲು ಸಹಿತ ಭಾರೀ ಮಳೆಯಿಂದಾಗಿ ನೂರಾರು ಮನೆಗಳಿಗೆ ಹಾನಿಯಾಗಿದೆ. ಇದರ ಬಗ್ಗೆ ವರದಿಯನ್ನು ಸಲ್ಲಿಸುವಂತೆ ರಾಜ್ಯ ಸರ್ಕಾರವು ಜಿಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚಿಸಿದೆ.

# 3ನೇ ಬಾರಿಗೆ ಬಾಹ್ಯಾಕಾಶಕ್ಕೆ ಸುನಿತಾ ವಿಲಿಯಮ್ಸ್

## ಬೋಯಿಂಗ್‌ನ ಸ್ಟಾರ್ಲೈನರ್ ಫ್ಲೋರಿಡಾದ ಕೇಪ್ ಕ್ಯಾನವೆರಲ್‌ನಿಂದ ಅಂತರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಉಡಾಯಿಸಲಾಗುತ್ತಿದೆ


**ವಾಷಿಂಗ್ಟನ್:** ಭಾರತೀಯ ಮೂಲದ ಗಗನಯಾತ್ರಿ ಸುನಿತಾ ವಿಲಿಯಮ್ಸ್ ಅವರು ಬೋಯಿಂಗ್‌ನ ಸ್ಟಾರ್ಲೈನರ್ ಬಾಹ್ಯಾಕಾಶ ನೌಕೆಯಲ್ಲಿ ಪೈಲಟ್ ಆಗಿ ನಾಳೆ ಮೂರನೇ ಬಾರಿಗೆ ಬಾಹ್ಯಾಕಾಶಕ್ಕೆ ಹಾರಲು ಸಿದ್ಧರಾಗಿದ್ದಾರೆ. ಬೋಯಿಂಗ್‌ನ ಸ್ಟಾರ್ಲೈನರ್ ಫ್ಲೋರಿಡಾದ ಕೇಪ್ ಕ್ಯಾನವೆರಲ್‌ನಿಂದ ಅಂತರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಉಡಾಯಿಸಲಾಗುತ್ತಿದೆ.

58 ವರ್ಷದ ಸ್ಟಾರ್ಲೈನರ್ ವಿಲಿಯಮ್ಸ್ ಮತ್ತು ಬುಚ್ ವಿಲ್ಮೋರ್ ಅವರನ್ನು ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಕರೆತರಲಾಗುತ್ತಿದೆ ಈ ಯೋಜನೆ ಬೋಯಿಂಗ್ ಕಾರ್ಯಕ್ರಮಕ್ಕೆ ಮಹತ್ವದ ಮತ್ತು ಬಹುನಿರೀಕ್ಷಿತ ವಿಜಯವಾಲಿದೆ. ನಿಗದಿತ ಲಿಫ್ಟ್ ಆಫ್ ಅನ್ನು ಸೋಮವಾರ ಸ್ಥಳೀಯ ಸಮಯ 22:34 ಕ್ಕೆ ಹೊಂದಿಸಲಾಗಿದೆ (ಮಂಗಳವಾರ ಬೆಳಗ್ಗೆ 8:04 ) ಬಾಹ್ಯಾಕಾಶಕ್ಕೆ ರಾಕೆಟ್ ಹಾರಲಿದೆ.

ನಾವೆಲ್ಲರೂ ಇಲ್ಲಿದ್ದೇವೆ, ನಾವೆಲ್ಲರೂ ಸಿದ್ಧರಾಗಿದ್ದೇವೆ ಅಂತೆಯೇ ನಮ್ಮ ಕುಟುಂಬ ಹಾಗು ಸ್ನೇಹಿತರು ಸಂತೋಷದಿಂದ ಹೆಮ್ಮೆಪಡುತ್ತಾರೆ, ನಾವು ಎಲ್ಲವನ್ನೂ ಸರಿಪಡಿಸುವ ಪ್ರಕ್ರಿಯೆಯ ಭಾಗವಾಗಿದ್ದೇವೆ ಎಂದು ವಿಲಿಯಮ್ಸ್ ಹೇಳಿದ್ದಾರೆ. ಬಾಹ್ಯಾಕಾಶ ನೌಕೆಯ ಅಭಿವೃದ್ಧಿಯಲ್ಲಿನ ವಿಳಂಬ ಮಿಷನ್ ವಿಳಂಬವಾಗಿದೆ, ಇದು ಯಶಸ್ವಿಯಾದರೆ, ಎಲೋನ್ ಮಸ್ಕ್‌ನ ಸ್ಪೇಸ್‌ಎಕ್ಸ್ ಜೊತೆಗೆ ಗೆ ಮತ್ತು ಅಲ್ಲಿಂದ ಸಿಬ್ಬಂದಿ ಸಾರಿಗೆಯನ್ನು ಒದಗಿಸುವ ಎರಡನೇ ಖಾಸಗಿ ಸಂಸ್ಥೆಯಾಗುತ್ತದೆ. ನಾವು ಜಯಿಸಬೇಕಾದ ದಾರಿಯುದ್ದಕ್ಕೂ ಆಶ್ಚರ್ಯಕರವಾದ ಹಲವಾರು ವಿಷಯಗಳಿವೆ. ಇದು ಖಂಡಿತವಾಗಿಯೂ ತಂಡವನ್ನು ತುಂಬಾ ಬಲಿಷ್ಠಗೊಳಿಸಿತು. ನಾವು ಎದುರಿಸಿದ ಪ್ರತಿಯೊಂದು ಸಮಸ್ಯೆಯನ್ನು ಅವರು ಹೇಗೆ ನಿವಾರಿಸಿದ್ದಾರೆ ಮತ್ತು ನಮ್ಮನ್ನು ಈ ಹಂತಕ್ಕೆ ತಂದಿದ್ದಾರೆ ಎಂಬುದರ ಬಗ್ಗೆ ನನಗೆ ತುಂಬಾ ಹೆಮ್ಮೆ ಇದೆ ಎಂದು ನಪ್ಪಿ ಹೇಳಿದರು.

**ಬೋಯಿಂಗ್ ಕಾರ್ಯಕ್ರಮಕ್ಕೆ ಮಹತ್ವ**

ನಾವೀಗ ಬಾಹ್ಯಾಕಾಶ ಪರಿಶೋಧನೆಯ ಸುವರ್ಣ ಯುಗದಲ್ಲಿದ್ದೇವೆ. ಸ್ಪೇಸ್‌ಎಕ್ಸ್ ಮತ್ತು ಬೋಯಿಂಗ್ ಖಾಸಗಿ ಉದ್ಯಮದ ಗುತ್ತಿಗೆದಾರರ ಸಹಭಾಗಿತ್ವದಲ್ಲಿ ನಾಸಾದ ವಾಣಿಜ್ಯ ಸಿಬ್ಬಂದಿ ಕಾರ್ಯಕ್ರಮದ ಅಡಿಯಲ್ಲಿ ತಮ್ಮ ವಾಹನಗಳನ್ನು ಅಭಿವೃದ್ಧಿಪಡಿಸಿದವು.



**ಸ್ಪೇಸ್‌ಎಕ್ಸ್‌ನ ಕ್ರೂ ಡ್ರ್ಯಾಗನ್ ಮತ್ತು ಸ್ಟಾರ್ಲೈನರ್ ನಿಯಮಿತವಾಗಿ ಹಾರುವ ಇಂತಹ ಸನ್ನಿವೇಶವು ಬಾಹ್ಯಾಕಾಶ ಸಂಸ್ಥೆ ದೀರ್ಘಕಾಲ ಕಾಯುತ್ತಿದೆ. ವಿನ್ಯಾಸ ಮತ್ತು ಅಭಿವೃದ್ಧಿ ವಿಶೇಷವಾಗಿ ಮಾನವ ಬಾಹ್ಯಾಕಾಶ ವಾಹನದೊಂದಿಗೆ ಕಷ್ಟಕರವಾಗಿದೆ ಎಂದು ಸುದ್ದಿಗೋಷ್ಠಿಯಲ್ಲಿ ಬೋಯಿಂಗ್‌ನ ಉಪಾಧ್ಯಕ್ಷ ಮತ್ತು ಸ್ಟಾರ್ಲೈನರ್ ಪ್ರೋಗ್ರಾಂ ಮ್ಯಾನೇಜರ್ ಮಾರ್ಕ್ ನ್ಯಾಪ್ಪಿ ಹೇಳಿದರು.** -ಮಾರ್ಕ್ ನ್ಯಾಪ್ಪಿ

ಮೊದಲಿನಿಂದಲೂ, ಬಾಹ್ಯಾಕಾಶ ಸಂಸ್ಥೆ ಎರಡೂ ಕಂಪನಿಗಳು ಏಕಕಾಲದಲ್ಲಿ ಕಾರ್ಯನಿರ್ವಹಿಸುವ ಗುರಿಯನ್ನು ಹೊಂದಿತ್ತು. ಕ್ರೂ ಡ್ರ್ಯಾಗನ್ ಮತ್ತು ಸ್ಟಾರ್ಲೈನರ್ಬಾಹ್ಯಾಕಾಶ ನೌಕೆಗಳು ಪ್ರತಿಯೊಂದೂ ಇನ್ನೊಂದಕ್ಕೆ ಬ್ಯಾಕ್‌ಅಪ್ ಆಗಿ ಕಾರ್ಯನಿರ್ವಹಿಸುತ್ತವೆ, ತಾಂತ್ರಿಕ ಸಮಸ್ಯೆಗಳು ಅಥವಾ ಇತರ ಹಿನ್ನಡೆಗಳು ಒಂದು ಬಾಹ್ಯಾಕಾಶ ನೌಕೆಯನ್ನು ನೆಲಸಮಗೊಳಿಸಿದರೂ ಸಹ, ಗಗನಯಾತ್ರಿಗಳಿಗೆ ಪಾರಾಗಲು ಆಯ್ಕೆಯನ್ನು ನೀಡುತ್ತದೆ ಎಂದರು.

### 33 ರ ಕಮಾಂಡರ್ ಆಗಿ ಸೇವೆ

**ವಿಲಿಯಮ್ಸ್ ಮೇ 1987 ರಲ್ಲಿ ಯುನೈಟೆಡ್ ಸ್ಟೇಟ್ಸ್ ನೇವಲ್ ಅಕಾಡೆಮಿಯಿಂದ ಯುನೈಟೆಡ್ ಸ್ಟೇಟ್ಸ್ ನೌಕಾಪಡೆಯಲ್ಲಿ ಅಧಿಕಾರಿಯಾದರು ,1998 ರಲ್ಲಿ ನಾಸಾದಿಂದ ಗಗನಯಾತ್ರಿಯಾಗಿ ಆಯ್ಕೆಯಾದರು ಮತ್ತು ಎಕ್ಸ್‌ಪೆಡಿಶನ್ಸ್ 14/15 ಮತ್ತು 32/33 ಎಂಬ ಎರಡು ಬಾಹ್ಯಾಕಾಶ ಕಾರ್ಯಾಚರಣೆಗಳ ಅನುಭವ ಹೊಂದಿದ್ದಾರೆ. ಎಕ್ಸ್‌ಪೆಡಿಷನ್ 32 ರಲ್ಲಿಫ್ಲೋಟ್ ಇಂಜಿನಿಯರ್ ಆಗಿ ಸೇವೆ ಸಲ್ಲಿಸಿದರು ಮತ್ತು ನಂತರ ಎಕ್ಸ್‌ಪೆಡಿಶನ್ 33 ರ ಕಮಾಂಡರ್ ಆಗಿ ಸೇವೆ ಸಲ್ಲಿಸಿದರು.**

## ಮಿನಿ ನ್ಯೂಸ್

### ಭಾರಿ ಪ್ರವಾಹಕ್ಕೆ 75 ಮಂದಿ ಬಲಿ



**ರಿಯೋ ಡಿ ಜನೈರೋ:** ಬ್ರೆಜಿಲ್‌ನ ದಕ್ಷಿಣದಲ್ಲಿರುವ ರಿಯೋ ಗ್ರಾಂಡೆ ಡೋ ಸುಲ್ ರಾಜ್ಯದಲ್ಲಿ ಉಂಟಾಗಿರುವ ಭಾರಿ ಪ್ರವಾಹದಿಂದಾಗಿ ಕಳೆದ ಏಳು ದಿನಗಳಲ್ಲಿ ಕನಿಷ್ಠ ಪಕ್ಷ 75 ಜನರು ಮೃತಪಟ್ಟಿದ್ದು ಇತರ 103 ಮಂದಿ ನಾಪತ್ತೆಯಾಗಿದ್ದಾರೆ ಎಂದು ವರದಿಯಾಗಿರುವುದಾಗಿ ಸ್ಥಳಿಯ ಅಧಿಕಾರಿಗಳು ತಿಳಿಸಿದ್ದಾರೆ.

ಕನಿಷ್ಠ ಪಕ್ಷ 155 ಮಂದಿ ಗಾಯಗೊಂಡಿದ್ದಾರೆ. ಮಳೆಯಿಂದ ಉಂಟಾದ ಹಾನಿ 88,000 ಕ್ಕೂ ಅಧಿಕ ಮಂದಿ ಮನೆ ತೊರೆಯುವಂತೆ ಮಾಡಿದೆ. ಅಂದಾಜು 16,000 ಜನರು ಶಾಲೆಗಳು, ಜಿಮ್ನಾಷಿಯಂಗಳು ಮತ್ತು ಇತರ ತಾತ್ಕಾಲಿಕ ಸೂರುಗಳಡಿ ಆಶ್ರಯ ಪಡೆದಿದ್ದಾರೆ.

ಪ್ರವಾಹವು ರಾಜ್ಯವನ್ನು ಉಧ್ವಸ್ತಗೊಳಿಸಿದೆ. ಭೂ ಕುಸಿತಗಳು, ಕೊಚ್ಚಿ ಹೋದ ರಸ್ತೆಗಳು, ಕುಸಿದು ಬಿದ್ದ ಸೇತುವೆಗಳ ದೃಶ್ಯ ರಾಜ್ಯದೆಲ್ಲೆಡೆ ಗೋಚರಿಸುತ್ತಿದೆ. ವಿದ್ಯುಚ್ಛಕ್ತಿ ಮತ್ತು ಇತರ ಸಂಪರ್ಕಗಳು ಕಡಿತಗೊಂಡಿವೆ. 8 ಲಕ್ಷಕ್ಕೂ ಅಧಿಕ ಜನರಿಗೆ ನೀರಿನ ಪೂರೈಕೆ ಇಲ್ಲದೆ ತೀವ್ರ ತೊಂದರೆಯಾಗಿದೆ ಎಂದು ನಾಗರಿಕ ರಕ್ಷಣಾ ಸಂಸ್ಥೆ ತಿಳಿಸಿದೆ.

### ಕಟ್ಟಡದಿಂದ ಜಿಗಿದು ಆತ್ಮಹತ್ಯೆ ಮಾಡಿಕೊಂಡ ಎನ್‌ಐಟಿ ವಿದ್ಯಾರ್ಥಿ

**ಕೋಝಿಕ್ಕೋಡ್:** ರಾಷ್ಟ್ರೀಯ ತಂತ್ರಜ್ಞಾನ ಸಂಸ್ಥೆಯ ವಿದ್ಯಾರ್ಥಿಯೊಬ್ಬ ಉತ್ತರ ಕೇರಳ ಜಿಲ್ಲೆಯ ವಿವಿ ಕ್ಯಾಂಪಸ್‌ನೊಳಗಿನ ಕಟ್ಟಡದಿಂದ ಜಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಮೃತರನ್ನು ಯೋಗೇಶ್ವರ್ ನಾಥ್ ಎಂದು ಗುರುತಿಸಲಾಗಿದ್ದು, ಇವರು ಕೇರಳದ ಹೊರಗಿನವರು ಎಂದು ಕುನ್ನಮಂಗಲಂ ಪೊಲೀಸರು ತಿಳಿಸಿದ್ದಾರೆ. ಪ್ರಾಥಮಿಕವಾಗಿ, ಇದು ಆತ್ಮಹತ್ಯೆಯ ಪ್ರಕರಣವಾಗಿದೆ. ಅವರು ಕಟ್ಟಡದಿಂದ ಜಿಗಿದ ನಂತರ ಶವವಾಗಿ ಪತ್ತೆಯಾಗಿದ್ದಾರೆ. ಅವರು ಬೆಳಿಗ್ಗೆ 5.30 ರ ಸುಮಾರಿಗೆ ಕಟ್ಟಡದಿಂದ ಜಿಗಿದು ಆತಹತ್ಯೆ ಮಾಡಿಕೊಂಡಿದ್ದಾರೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ವಿವರವಾದ ತನಿಖೆಯ ನಂತರವೇ ಹೆಚ್ಚಿನ ವಿವರಗಳನ್ನು ಬಹಿರಂಗಪಡಿಸಬಹುದು ಎಂದು ಅಧಿಕಾರಿ ತಿಳಿಸಿದ್ದಾರೆ.

### 5 ಮಕ್ಕಳಿಗೆ ಜನ್ಮ ನೀಡಿದ ಮಹಾ ತಾಯಿ

**ಪಾಟ್ನಾ:** ಅವಳಿ, ತ್ರಿವಳಿ ಮಕ್ಕಳಿಗೆ ಜನ್ಮ ನೀಡಿರುವುದನ್ನೇ ಕೇಳಿದ್ದೇವೆ. ಆದರೆ ಬಿಹಾರದ ಪಾಟ್ನಾದಲ್ಲಿ ಮಹಿಳೆಯೊಬ್ಬರು ಐದು ಮಕ್ಕಳಿಗೆ ಜನ್ಮ ನೀಡಿದ್ದಾರೆ. ಜನಿಸಿದ ಅಷ್ಟೂ ಮಕ್ಕಳು ಹೆಣ್ಣು ಶಿಶುಗಳಾಗಿವೆ.

ಠಾಕೂರ್‌ಗಂಜ್ ಕನಕಪುರ ಪಂಚಾಯತ್‌ನ ಜಲ್ಮಲಿಕ್ ಗ್ರಾಮದ ನಿವಾಸಿ ತಾಹಿರಾ ಬೇಗಂ(20) ಎಂಬ ಮಹಿಳೆ ಬರೋಬ್ಬರಿ ಐದು ಹೆಣ್ಣು ಶಿಶುಗಳಿಗೆ ಜನ್ಮ ನೀಡಿದ್ದಾರೆ. ಶಿಶುಗಳು 1 ಕೆಜಿಗಿಂತ ಕಡಿಮೆ ಹೊಂದಿವೆ. ಸದ್ಯ ತಾಯಿ ಮತ್ತು ಮಕ್ಕಳು ಆರೋಗ್ಯವಾಗಿದ್ದಾರೆ. ಅಂದಹಾಗೆ ಈ ಬಾರಿ ತಾಹಿರಾ ಎರಡನೇ ಬಾರಿಗೆ ತಾಯಿಯಾಗಿದ್ದು, ಈಗಾಗಲೇ ಮೂರು ವರ್ಷದ ಮಗ ಇದ್ದಾನೆ. ಒಟ್ಟು ಆರು ಮಕ್ಕಳ ತಾಯಿಯಾಗಿದ್ದಾರೆ. ಕಿಶನ್‌ಗಂಜ್ ಜಿಲ್ಲೆಯ ಪೋಥಿಯಾ ಬ್ಲಾಕ್ ಖಾಸಗಿ ನರ್ಸಿಂಗ್ ಹೋಂನಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ತಾಹಿರಾ ಅವರು 2 ತಿಂಗಳ ಗರ್ಭಿಣಿಯಾಗಿದ್ದಾಗ ಹೊಟ್ಟೆಯಲ್ಲಿ ನಾಲ್ಕು ಮಕ್ಕಳಿರುವುದು ಗೊತ್ತಾಗಿದೆ. ಬಳಿಕ ವೈದ್ಯರ ಬಳಿ ತಪಾಸಣೆಗೆ ಹೋದಾಗ ನಾಲ್ಕಲ್ಲ ಐದು ಮಕ್ಕಳಿರುವುದು ಗೊತ್ತಾಯಿತು. ಈ ಪ್ರಕರಣ ಸವಾಲಿನದ್ದಾಗಿದ್ದು, ಇಂತಹ ಪ್ರಕರಣಗಳು ತೀರಾ ವಿರಳ. ಅಚ್ಚರಿಯ ವಿಷಯ ಎಂದರೆ ಎಲ್ಲಾ ಮಕ್ಕಳು ಶಸ್ತ್ರ ಚಿಕಿತ್ಸೆ ಇಲ್ಲದೆ ಸಾಮಾನ್ಯ ಹೆರಿಗೆಯ ಮೂಲಕ ಜನಿಸಿವೆ ಎಂದು ಇವೈದ್ಯೆ ಡಾ.ಫರ್ಜಾನಾ ಹೇಳಿದ್ದಾರೆ.

### ಕವಿತಾ ಜಾಮೀನು ಅರ್ಜಿ ವಜಾ

**ನವದೆಹಲಿ:** ಮದ್ಯ ನೀತಿ ಪ್ರಕರಣದಲ್ಲಿ ಬಂಧನಕ್ಕೊಳಗಾಗಿರುವ ಬಿಆರ್‌ಎಸ್ ನಾಯಕಿ ಕೆ. ಕವಿತಾ ಅವರ ಜಾಮೀನು ಅರ್ಜಿಯನ್ನು ದೆಹಲಿಯ ರೂಸ್ ಅವೆನ್ಯೂ ನ್ಯಾಯಾಲಯ ಇಂದು ತಿರಸ್ಕರಿಸಿದೆ.


ಭಾರತ ರಾಷ್ಟ್ರ ಸಮಿತಿಯ ಬೆಂಬಲಿಗರ ಪ್ರತಿಭಟನೆ ನಡುವೆಯೂ ತೆಲಂಗಾಣ ವಿಧಾನ ಪರಿಷತ್ ಸದಸ್ಯ ಮತ್ತು ಮಾಜಿ ಮುಖ್ಯಮಂತ್ರಿ ಕೆ. ಚಂದ್ರಶೇಖರ್ ರಾವ್ ಅವರ ಪುತ್ರಿ ಕೆ. ಕವಿತಾ ಅವರನ್ನು ಮದ್ಯ ನೀತಿ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾರ್ಚ್ 15 ರಂದು ಅವರ ಬಂಜಾರ ಹಿಲ್ಸ್‌ನ ಅವರ ನಿವಾಸದಿಂದ ಬಂಧಿಸಲಾಗಿತ್ತು. ವಿಶೇಷ ನ್ಯಾಯಾಧೀಶರಾದ ಕಾವೇರಿ ಬವೇಜಾ ಅವರು ಮದ್ಯ ನೀತಿ ಪ್ರಕರಣಕ್ಕರ ಸಂಬಂಧಿಸಿದಂತೆ ಬಂಧನಲ್ಲಿರುವ ಕೆ. ಕವಿತಾ ಅವರು ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ತಿರಸ್ಕರಿಸಿದರು.

ದೆಹಲಿ ಅಬಕಾರಿ ನೀತಿ ಪ್ರಕರಣದಲ್ಲಿ ಕೆ. ಕವಿತಾ ಅವರ ಹಸ್ತಕ್ಷೇಪ ಆರೋಪದ ಮೇಲೆ ಜಾರಿ ನಿರ್ದೇಶನಾಲಯ ಅವರನ್ನು ಮಾರ್ಚ್ 15ಕ್ಕೆ ಬಂಧಿಸಿತ್ತು. ನಂತರ ತಿಹಾರ್ ಜೈಲಿನಲ್ಲಿರುವ ಕೆ. ಕವಿತಾ ಅವರನ್ನು ಏಪ್ರಿಲ್ 15 ರಂದು ಸಿಬಿಐ ಬಂಧಿಸಿತ್ತು.

### ಜಗಳ ಬಿಡಿಸಲು ಹೋದ 22 ವರ್ಷದ ಭಾರತೀಯ ವಿದ್ಯಾರ್ಥಿ ಹತ್ಯೆ

**ಚಂಡೀಗಡ:** ಆಸ್ಟ್ರೇಲಿಯಾದಲ್ಲಿ ನಡೆದ ಭಾರತೀಯ ವಿದ್ಯಾರ್ಥಿಗಳ ನಡುವಿನ ಜಗಳದಲ್ಲಿ 22 ವರ್ಷದ ಎಂಟೆಕ್ ವಿದ್ಯಾರ್ಥಿಯನ್ನು ಇರಿದು ಕೊಲ್ಲಲಾಗಿದೆ. ನವಜೀತ್ ಸಂಧು ಮೃತ ವಿದ್ಯಾರ್ಥಿ.

ಸಂತ್ರಸ್ತನ ಚಿಕ್ಕಪ್ಪ ಯಶ್ವೀರ್ ಪ್ರಕಾರ, ಬಾಡಿಗೆ ವಿಚಾರದಲ್ಲಿ ಕೆಲವು ಭಾರತೀಯ ವಿದ್ಯಾರ್ಥಿಗಳ ನಡುವೆ ನಡೆದ ವಿವಾದದಲ್ಲಿ ಮಧ್ಯ ಪ್ರವೇಶಿಸಲು ಪ್ರಯತ್ನಿಸಿದಾಗ ಇನ್ನೊಬ್ಬ ವಿದ್ಯಾರ್ಥಿಯು ಚಾಕುವಿನಿಂದ ನವಜೀತ್ ಸಂಧು ಮೇಲೆ ಮಾರಣಾಂತಿಕವಾಗಿ ಹಲ್ಲೆ ನಡೆಸಿದ್ದಾನೆ ಎಂದು ಹೇಳಿದ್ದಾರೆ. ಮೆಲ್ಬೋರ್ನ್‌ನಲ್ಲಿ ಸ್ಥಳೀಯ ಕಾಲಮಾನ ಶನಿವಾರ ರಾತ್ರಿ 9 ಗಂಟೆ ಸುಮಾರಿಗೆ ನಡೆದ ಘಟನೆಯಲ್ಲಿ ಮತ್ತೊಬ್ಬ ವಿದ್ಯಾರ್ಥಿ ಗಾಯಗೊಂಡಿದ್ದಾನೆ ಎಂದು ಅವರು ಹೇಳಿದರು. ನವಜೀತ್‌ನ ಸ್ನೇಹಿತ ಬಳಿ ಕಾರು ಇತ್ತು. ಹೀಗಾಗಿ ಆತನ ಸಾಮಾನುಗಳನ್ನು ತೆಗೆದುಕೊಳ್ಳಲು ಸ್ನೇಹಿತನ ಜೊತೆಗೆ ಕಾರಿನಲ್ಲಿ ಆತನ ಮನೆಗೆ ಹೋಗಿದ್ದಾನೆ. ಅವನ ಸ್ನೇಹಿತ ಒಳಗೆ ಹೋದಾಗ, ನವಜೀತ್ ಗೆ ಚೀರಾಡುವ ಕೂಗುಗಳನ್ನು ಕೇಳಿಸಿಕೊಂಡು ಒಳ ಹೋಗಿದ್ದಾನೆ. ಜಗಳವಾಡಬೇಡಿ ಎಂದು ನವಜೀತ್ ಮಧ್ಯಪ್ರವೇಶಿಸಲು ಪ್ರಯತ್ನಿಸಿದಾಗ, ಆತನ ಎದೆಗೆ ಚಾಕುವಿನಿಂದ ಮಾರಣಾಂತಿಕವಾಗಿ ಇರಿದಿದ್ದಾನೆ ಎಂದು ಯಶ್ವೀರ್ ಹೇಳಿದರು. ನವಜೀತ್ ಅವರಂತೆ ಆರೋಪಿಯೂ ಕೂಡ ಕರ್ನಾಲ್ ಮೂಲದವನಾಗಿದ್ದಾನೆ.



# ಸೂರ್ಯ ಕುಮಾರ್ ಶತಕದ ನೆರವು ಮುಂಬೈಗೆ ಗೆಲುವು

## 3 ವಿಕೆಟ್ ಕಳೆದುಕೊಂಡು 174 ರನ್ ಗಳಿಸುವ ಮೂಲಕ 7 ವಿಕೆಟ್‌ಗಳ ಭರ್ಜರಿ ಜಯ

ಮುಂಬೈನ ವಾಂಖೆಡೆ ಮೈದಾನದಲ್ಲಿ ನಡೆದ ಮುಂಬೈ ಇಂಡಿಯನ್ಸ್ ಮತ್ತು ಸನ್‌ರೈಸರ್ಸ್ ಹೈದ್ರಾಬಾದ್ ನಡುವೆ ಪಂದ್ಯ ನಡೆಯಿತು. ಈ ಪಂದ್ಯದಲ್ಲಿ ಟಾಸ್ ಗೆದ್ದ ಮುಂಬೈ ಇಂಡಿಯನ್ಸ್ ತಂಡದ ನಾಯಕ ಹಾರ್ದಿಕ್ ಪಾಂಡ್ಯ ಮೊದಲು ಬೌಲಿಂಗ್ ಆಯ್ಕೆ ಮಾಡಿಕೊಂಡರು. ಇದರ ಭಾಗವಾಗಿ ಮುಂಬೈ ಬೌಲರ್ ಗಳು ಉತ್ತಮ ದಾಳಿ ನಡೆಸಿದರು. ಅಂತಿಮವಾಗಿ ಹೈದರಾಬಾದ್ ತಂಡವು ನಿಗದಿತ 20 ಓವರ್‌ಗೆ 8 ವಿಕೆಟ್ ನಷ್ಟಕ್ಕೆ 173 ರನ್ ಸಿಡಿಸಿದರು. ಬಳಿಕ ಈ ಟಾರ್ಗೆಟ್ ಬೆನ್ನಟ್ಟಿದ ಮುಂಬೈ ಇಂಡಿಯನ್ಸ್ ತಂಡವು 17.2 ಓವರ್‌ಗೆ 3 ವಿಕೆಟ್ ಕಳೆದುಕೊಂಡು 174 ರನ್ ಗಳಿಸುವ ಮೂಲಕ 7 ವಿಕೆಟ್‌ಗಳ ಭರ್ಜರಿ ಗೆಲುವು ದಾಖಲಿಸಿತು. ಸೂರ್ಯಕುಮಾರ್ ಯಾದವ್ ಹೈದರಾಬಾದ್ ವಿರುದ್ಧ ಭರ್ಜರಿ ಶತಕ ಸಿಡಿಸಿ ಅಬ್ಬರಿಸಿದರು.




### ಸೂರ್ಯಕುಮಾರ್ ಅಬ್ಬರಕ್ಕೆ ಬೆಚ್ಚಿದ ಎಸ್‌ಆರ್‌ಎಚ್

**ಹೈದರಾಬಾದ್ ನೀಡಿದ 174 ರನ್ ಗಳ ಟಾರ್ಗೆಟ್ ಬೆನ್ನಟ್ಟಿದ ಮುಂಬೈ ಇಂಡಿಯನ್ಸ್ ತಂಡಕ್ಕೆ ಆರಂಭಿಕ ಆಘಾತ ಎದುರಾಯಿತು. ಆರಂಭಿಕರಾಗಿ ಕಣಕ್ಕಿಳಿದ ಇಶಾನ್ ಕಿಶನ್ 9 ರನ್ ಹಾಗೂ ರೋಹಿತ್ ಶರ್ಮಾ 4 ರನ್ ಸಿಡಿಸಿ ಔಟ್ ಆದರು. ನಮನ್ ದೀರ್ ಸಹ ಶೂನ್ಯಕ್ಕೆ ಮರಳಿದರು. ಆದರೆ ಸೂರ್ಯಕುಮಾರ್ ಯಾದವ್‌ಗೆ ತಿಲಕ್ ವರ್ಮಾ ಉತ್ತಮ ಸಾಥ್ ನೀಡಿದರು. ಈ ವೇಳೆ ತಿಲಕ್ 32 ಎಸೆತದಲ್ಲಿ 37 ರನ್ ಸಿಡಿಸಿದರು. ಆದರೆ ಇದೇ ವೇಳೆ ಸೂರ್ಯಕುಮಾರ್ ಯಾದವ್ ಟಿ20 ವಿಶ್ವಕಪ್ ತಂಡ ಪ್ರಕಟವಾದ ನಂತರ ಮೊದಲ ಭಾರತೀಯ ಆಟಗಾರನೊಬ್ಬ ಟಿ20 ಮಾದರಿಯಲ್ಲಿ ಶತಕ ಸಿಡಿಸಿದ್ದಾರೆ. ಹೌದು ಸೂರ್ಯಕುಮಾರ್ ಕೇವಲ 51 ಎಸೆತದಲ್ಲಿ 12 ಫೋರ್ ಮತ್ತು 6 ಸಿಕ್ಸ್ ಮೂಲಕ 102 ರನ್ ಸಿಡಿಸಿ ಅಬ್ಬರಿಸಿದರು.**

### ಬ್ಯಾಟಿಂಗ್‌ನಲ್ಲಿ ಅಬ್ಬರಿಸದ ಹೈದರಾಬಾದ್

**ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಸನ್‌ರೈಸರ್ಸ್ ಹೈದರಾಬಾದ್ ತಂಡವು ನಿಗದಿತ 20 ಓವರ್‌ಗೆ 8 ವಿಕೆಟ್ ನಷ್ಟಕ್ಕೆ 173 ರನ್ ಸಿಡಿಸಿದರು. ಈ ವೇಳೆ ಎಸ್‌ಆರ್‌ಎಚ್ ಆರಂಭಿಕರಾಗಿ ಕಣಕ್ಕಿಳಿದ ಟ್ರಾವಿಸ್ ಹೆಡ್ 30 ಎಸೆತದಲ್ಲಿ 1 ಸಿಕ್ಸ್ ಮತ್ತು 7 ಫೋರ್ ಮೂಲಕ 48 ರನ್ ಸಿಡಿಸಿದರು. ಆದರೆ ಅಭಿಷೇಕ್ ಶರ್ಮಾ 11 ರನ್, ಮಾಯಾಂಕ್ ಅರ್ಗವಾಲ್ 5 ರನ್, ನಿತೀಶ್ ಕುಮಾರ್ ರೆಡ್ಡಿ 20 ರನ್, ಹೆನ್ರಿಚ್ ಕ್ಲಾಸಿನ್ 2 ರನ್, ಮಾರ್ಕೋ ಜಾನ್ಸನ್ 17 ರನ್, ಶಾಬ್ಲಾಜ್ ಅಹ್ಮದ್ 10 ರನ್, ಅಬ್ದುಲ್ ಸಮದ್ 3 ರನ್ ಹಾಗೂ ಸನ್ವಿರ್ ಸಿಂಗ್ 8 ರನ್ ಸಿಡಿಸಿದರು. ಆದರೆ ಕೊನೆಯಲ್ಲಿ ನಾಯಕ ಪ್ಯಾಟ್ ಕಮಿನ್ಸ್ 17 ಎಸೆತದಲ್ಲಿ 2 ಸಿಕ್ಸ್ ಮತ್ತು 2 ಫೋರ್ ಮೂಲಕ 35 ರನ್ ಸಿಡಿಸುವ ಮೂಲಕ ಕೊನೆಯಲ್ಲಿ 173 ರನ್ ಕಲೆಹಾಕಲು ಸಹಾಯಕರಾದರು. ಮುಂಬೈ ಇಂಡಿಯನ್ಸ್ ಭರ್ಜರಿ ಬೌಲಿಂಗ್ ಮಾಡಿದರು. ಅದರಲ್ಲಿಯೂ ಮುಂಬೈ ನಾಯಕ ಹಾರ್ದಿಕ್ ಪಾಂಡ್ಯ 4 ಓವರ್‌ಗೆ 31 ರನ್ ನೀಡಿ 3 ವಿಕೆಟ್ ಕಬಳಿಸಿದರು. ಈ ಮೂಲಕ ಕೊನೆಗೂ ಬೌಲಿಂಗ್‌ನಲ್ಲಿ ಪಾಂಡ್ಯ ಮತ್ತೆ ಹಳೆಯ ಚಾರ್ಮ್‌ಗೆ ಮರಳಿದಂತಾಗಿದೆ. ಬಳಿಕ ಪಿಯೂಶ್ ಚಾವ್ಲಾ ಸಹ 4 ಓವರ್‌ಗೆ 33 ರನ್ ನೀಡಿ 3 ವಿಕೆಟ್ ಪಡೆದರು. ಅನ್ಷುಲ್ ಕಂಬೋಜ್ 1 ವಿಕೆಟ್, ಜಸ್ಪ್ರೀತ್ ಬುಮ್ರಾ 1 ವಿಕೆಟ್ ಪಡೆದು ಅಬ್ಬರಿಸಿದರು.**

## ಐಪಿಎಲ್‌ನಲ್ಲಿ ಧೋನಿ ಹೊಸ ದಾಖಲೆ

ಐಪಿಎಲ್ 2024ರ 53ನೇ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ತಂಡ ಜಯ ಸಾಧಿಸಿದೆ. ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಸಿಎಸ್‌ಕೆ ತಂಡವು 167 ರನ್ ಕಲೆಹಾಕಿತು. ಈ ಸ್ಪರ್ಧಾತ್ಮಕ ಗುರಿಯನ್ನು ಬೆನ್ನತ್ತಿದ ಪಂಜಾಬ್ ಕಿಂಗ್ಸ್ ತಂಡ 139 ರನ್‌ಗಳಿಗೆ ಆಲೌಟ್ ಆಗಿದೆ. ಈ ಮೂಲಕ ಚೆನ್ನೈ ಸೂಪರ್ ಕಿಂಗ್ಸ್ ತಂಡ 28 ರನ್‌ಗಳ ಭರ್ಜರಿ ಜಯ ಸಾಧಿಸಿದೆ.

ಇಂಡಿಯನ್ ಪ್ರೀಮಿಯರ್ ಲೀಗ್‌ನ 53ನೇ ಪಂದ್ಯದ ಮೂಲಕ ಮಹೇಂದ್ರ ಸಿಂಗ್ ಧೋನಿ ಹೊಸ ದಾಖಲೆ ನಿರ್ಮಿಸಿದ್ದಾರೆ. ಪಂಜಾಬ್ ಕಿಂಗ್ಸ್ ವಿರುದ್ಧದ ಈ ಪಂದ್ಯದಲ್ಲಿ ಒಂದು ಕ್ಯಾಚ್ ಹಿಡಿಯುವುದರೊಂದಿಗೆ ಧೋನಿ ಐಪಿಎಲ್‌ನಲ್ಲಿ ವಿಶೇಷ ಮೈಲುಗಲ್ಲನ್ನು ದಾಟಿದರು.

**ಐಪಿಎಲ್ ಇತಿಹಾಸದಲ್ಲಿ 150 ಕ್ಯಾಚ್ ಗಳನ್ನು ಹಿಡಿದ ಮೊದಲ ವಿಕೆಟ್ ಕೀಪರ್ ಎಂಬ ದಾಖಲೆ ಧೋನಿ ಪಾಲಾಗಿದೆ**

ಆ ಮೈಲುಗಲ್ಲು ಯಾವುದು ಎಂಬುದು ಸಂಪೂರ್ಣ ಮಾಹಿತಿ ಈ ಕೆಳಗಿನಂತಿದೆ...

ಪಂಜಾಬ್ ಕಿಂಗ್ಸ್ ವಿರುದ್ಧದ ಪಂದ್ಯದಲ್ಲಿ ಜಿತೇಶ್ ಶರ್ಮಾ ಬಾರಿಸಿದ ಚೆಂಡು ವಿಕೆಟ್ ಕೀಪರ್ ಮಹೇಂದ್ರ ಸಿಂಗ್ ಕೈ ಸೇರಿತು. ಇದರೊಂದಿಗೆ ಐಪಿಎಲ್ ಇತಿಹಾಸದಲ್ಲಿ 150 ಕ್ಯಾಚ್ ಗಳನ್ನು ಹಿಡಿದ ಮೊದಲ ವಿಕೆಟ್ ಕೀಪರ್ ಎಂಬ ದಾಖಲೆ ಧೋನಿ ಪಾಲಾಗಿದೆ. 254 ಇನಿಂಗ್ಸ್‌ಗಳಲ್ಲಿ ವಿಕೆಟ್ ಕೀಪಿಂಗ್ ಮಾಡಿರುವ ಧೋನಿ ಈವರೆಗೆ 150 ಕ್ಯಾಚ್‌ಗಳನ್ನು ಹಿಡಿದಿದ್ದಾರೆ. ಹಾಗೆಯೇ 42 ಸ್ಟಂಪಿಂಗ್ ಮಾಡುವಲ್ಲಿ ಯಶಸ್ವಿಯಾಗಿದ್ದಾರೆ. ಈ ಮೂಲಕ ವಿಕೆಟ್ ಹಿಂದೆ 192★ ಬಲಿ ಪಡೆದ ಐಪಿಎಲ್‌ನ ಅತ್ಯಂತ ಯಶಸ್ವಿ ವಿಕೆಟ್ ಕೀಪರ್ ಎನಿಸಿಕೊಂಡಿದ್ದಾರೆ.

ಇನ್ನು ಈ ಪಟ್ಟಿಯಲ್ಲಿ ದಿನೇಶ್ ಕಾರ್ತಿಕ್ ದ್ವಿತೀಯ ಸ್ಥಾನದಲ್ಲಿದ್ದಾರೆ. ಆರ್‌ಸಿಬಿ ಪರ ಕಣಕ್ಕಿಳಿಯುತ್ತಿರುವ ಡಿಕೆ ಈವರೆಗೆ 141 ಕ್ಯಾಚ್‌ಗಳನ್ನು ಹಿಡಿದಿದ್ದಾರೆ.

ಹಾಗೆಯೇ 231 ಇನಿಂಗ್ಸ್‌ಗಳಲ್ಲಿ 177 ಬಲಿ ಪಡೆಯುವ ಮೂಲಕ ಐಪಿಎಲ್‌ನ 2ನೇ ಯಶಸ್ವಿ ವಿಕೆಟ್ ಕೀಪರ್ ಎನಿಸಿಕೊಂಡಿದ್ದಾರೆ. ಒಟ್ಟಿನಲ್ಲಿ 42ನೇ ಹಿರಿ ವಯಸ್ಸಿನಲ್ಲಿ ವಿಕೆಟ್ ಹಿಂದೆ ಅದ್ಭುತ ಪ್ರದರ್ಶನ ನೀಡುವ ಮೂಲಕ ಮಹೇಂದ್ರ ಸಿಂಗ್ ಧೋನಿ ಐಪಿಎಲ್‌ನಲ್ಲಿ ಹೊಸ ಇತಿಹಾಸ ನಿರ್ಮಿಸಿದ್ದಾರೆ. ಈ ಭರ್ಜರಿ ದಾಖಲೆಯೊಂದಿಗೆ ಧೋನಿ ಈ ಬಾರಿಯ ಐಪಿಎಲ್‌ನೊಂದಿಗೆ ವಿದಾಯ ಹೇಳಲಿದ್ದಾರಾ ಕಾದು ನೋಡಬೇಕಿದೆ.



## ತಂಡದಿಂದ ಹೊರಗಿಡಿ; ಧೋನಿ ವಿರುದ್ಧ ಗುಡುಗಿದ ಟರ್ಬನೇಟರ್!

ಗೆಲುವಿನ ಹೊರತಾಗಿಯೂ ಚೆನ್ನೈ ತಂಡದ ಮಾಜಿ ನಾಯಕ ಎಂಎಸ್ ಧೋನಿ ವಿರುದ್ಧ ತಂಡದ ಮಾಜಿ ಆಟಗಾರ ಹರ್ಭಜನ್ ಸಿಂಗ್ ವಾಗ್ದಾಳಿ ನಡೆಸಿದ್ದಾರೆ. ಸತತ ವಿಕೆಟ್‌ಗಳ ಪತನದ ನಡುವೆಯೂ ಧೋನಿ ಮೇಲಿನ ಕ್ರಮಾಂಕದಲ್ಲಿ ಬ್ಯಾಟಿಂಗ್‌ಗೆ ಬರದಿರುವುದು ಟರ್ಬನೇಟರ್ ಕೋಪಕ್ಕೆ ಕಾರಣವಾಗಿದೆ. ನಡೆದ ಐಪಿಎಲ್ 53 ನೇ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ತಂಡವನ್ನು 28 ರನ್‌ಗಳಿಂದ ಮಣಿಸಿದ ಚೆನ್ನೈ ಸೂಪರ್ ಕಿಂಗ್ಸ್ ತಂಡ ಪಾಯಿಂಟ್ ಪಟ್ಟಿಯಲ್ಲಿ ಮೂರನೇ ಸ್ಥಾನಕ್ಕೇರಿದೆ. ಗೆಲುವಿಗೆ 167 ರನ್‌ಗಳ ಸಾಧಾರಣ ಗುರಿ ಪಡೆದ ಹೊರತಾಗಿಯೂ ಪಂಜಾಬ್‌ಗೆ ಗೆಲುವು ದಕ್ಕಿಸಿಕೊಳ್ಳಲು ಸಾಧ್ಯವಾಗಲಿಲ್ಲ.



ಈ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಸಿಎಸ್‌ಕೆ ತಂಡ ನಿಯಮಿತ ಅಂತರದಲ್ಲಿ ವಿಕೆಟ್ ಕಳೆದುಕೊಳ್ಳುತ್ತ ಅಲ್ಪ ಮೊತ್ತ ಕಲೆಹಾಕುವ ಆತಂಕದಲ್ಲಿತ್ತು. ಆದರೆ ತಂಡದ ಪರ ಏಕಾಂಗಿಯಾಗಿ ಹೋರಾಡಿದ ರವೀಂದ್ರ ಜಡೇಜಾ ಗೆಲುವಿನ ಇನ್ನಿಂಗ್ಸ್ ಆಡಿದರು. ಹಾಗೆಯೇ ಬೌಲಿಂಗ್‌ನಲ್ಲೂ ಕಮಾಲ್ ಮಾಡಿದರು. ಇದು ಚೆನ್ನೈ ತಂಡವನ್ನು ಗೆಲುವಿನ ದಡ ಸೇರಿಸಿತು. ಈ ಗೆಲುವಿನ ಹೊರತಾಗಿಯೂ ಚೆನ್ನೈ ತಂಡದ ಮಾಜಿ ನಾಯಕ ಎಂಎಸ್ ಧೋನಿ ವಿರುದ್ಧ ತಂಡದ ಮಾಜಿ ಆಟಗಾರ ಹರ್ಭಜನ್ ಸಿಂಗ್ ವಾಗ್ದಾಳಿ ನಡೆಸಿದ್ದಾರೆ. ಸತತ ವಿಕೆಟ್‌ಗಳ ಪತನದ ನಡುವೆಯೂ ಧೋನಿ ಮೇಲಿನ ಕ್ರಮಾಂಕದಲ್ಲಿ ಬ್ಯಾಟಿಂಗ್‌ಗೆ ಬರದಿರುವುದು ಟರ್ಬನೇಟರ್ ಕೋಪಕ್ಕೆ ಕಾರಣವಾಗಿದೆ. ವಾಸ್ತವವಾಗಿ ಚೆನ್ನೈ ತಂಡ 101 ರನ್‌ಗಳಿಗೆ 5ನೇ ವಿಕೆಟ್ ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿತ್ತು. ಹೀಗಾಗಿ ಧೋನಿ ಬ್ಯಾಟಿಂಗ್‌ಗೆ ಬರುತ್ತಾರೆ ಎಂದು ಎಲ್ಲರೂ ನಿರೀಕ್ಷಿಸಿದರು.

ಆದರೆ ಧೋನಿ, ಸ್ಯಾಂಟ್ನರ್ ಅವರನ್ನು ಬ್ಯಾಟಿಂಗ್‌ಗೆ ಕಳುಹಿಸಿದರು. ಸ್ಯಾಂಟ್ನರ್ ಔಟಾದ ಬಳಿಕ ಶಾರ್ದೂಲ್ ಠಾಕೂರ್ ಬ್ಯಾಟಿಂಗ್‌ಗೆ ಬಂದರು. ಈ ಇಬ್ಬರು ಹೇಳಿಕೊಳ್ಳುವಂತಹ ಕೊಡುಗೆ ನೀಡಲಿಲ್ಲ. ಈ ಇಬ್ಬರ ವಿಕೆಟ್ ಪತನದ ಬಳಿಕ ಧೋನಿ 9ನೇ ಕ್ರಮಾಂಕದಲ್ಲಿ ಬ್ಯಾಟಿಂಗ್‌ಗೆ ಬಂದರು. ತಂಡ ಸಂಕಷ್ಟದ ಸಮಯದಲ್ಲಿದ್ದಾಗ ಧೋನಿ ಮೇಲಿನ ಕ್ರಮಾಂಕದಲ್ಲಿ ಬ್ಯಾಟಿಂಗ್‌ಗೆ ಬರದಿರುವುದು ಹರ್ಭಜನ್ ರನ್ನು ಅಸಮಾಧಾನಗೊಳ್ಳುವಂತೆ ಮಾಡಿದೆ. ಈ ಕುರಿತು ಮಾತನಾಡಿದ ಟೀಂ ಇಂಡಿಯಾದ ಮಾಜಿ ಸ್ಪಿನ್ ಬೌಲರ್ ಹರ್ಭಜನ್ ಸಿಂಗ್, ಈ ಸೀಸನ್‌ನಲ್ಲಿ ಧೋನಿ ಸಿಎಸ್‌ಕೆ ಪರ ವೇಗವಾಗಿ ರನ್ ಗಳಿಸಿದ್ದಾರೆ. ಆದರೆ ಪಂಜಾಬ್ ಕಿಂಗ್ಸ್ ವಿರುದ್ಧದ ಮಹತ್ವದ ಪಂದ್ಯದಲ್ಲಿ ಅವರು 9ನೇ ಕ್ರಮಾಂಕದಲ್ಲಿ ಬ್ಯಾಟಿಂಗ್ ಮಾಡುವ ನಿರ್ಧಾರ ಸರಿ ಇರಲಿಲ್ಲ. ಈ ಪಂದ್ಯದಲ್ಲಿ ಸಿಎಸ್‌ಕೆ ಗೆದ್ದಿರಬಹುದು. ಆದರೆ ನಾನು ಧೋನಿ ಮಾಡಿದ್ದು ತಪ್ಪು ಎಂದೇ ಹೇಳುತ್ತೇನೆ. ಧೋನಿ 9ನೇ ಕ್ರಮಾಂಕದಲ್ಲಿ ಬ್ಯಾಟಿಂಗ್ ಮಾಡುವುದಾದರೆ ಅವರು ಇನ್ನು ಮುಂದೆ ತಂಡದಲ್ಲಿ ಆಡಬಾರದು. ಅವರ ಬದಲಿಗೆ ಸಿಎಸ್‌ಕೆ ಫ್ರಾಂಚೈಸಿ ವೇಗದ ಬೌಲರ್‌ನನ್ನು ಆಡಿಸಬೇಕು ಎಂದು ಭಜ್ಜಿ ಹೇಳಿದ್ದಾರೆ. ಇನ್ನು ಪಂಜಾಬ್ ವಿರುದ್ಧ ಮೊದಲ ಬಾರಿಗೆ ಧೋನಿ 9 ನೇ ಸ್ಥಾನದಲ್ಲಿ ಬ್ಯಾಟಿಂಗ್‌ಗೆ ಬಂದರೂ ವಿಶೇಷವಾದುದ್ದು ಏನನ್ನು ಮಾಡಲು ಸಾಧ್ಯವಾಗಲಿಲ್ಲ. ಹರ್ಷಲ್ ಪಟೇಲ್ ಎಸೆದ ಮೊದಲ ಎಸೆತದಲ್ಲಿ ಮಹಿ ಔಟಾದರು.



## ಜಪಾನ್‌ನತ್ತ 'ಸಲಾರ್' ಜುಲೈ 5ರಂದು ರಿಲೀಸ್

ಪ್ರಭಾಸ್ ನಟನೆಯ 'ಸಲಾರ್' ಸಿನಿಮಾ ಕಳೆದ ವರ್ಷ ಡಿಸೆಂಬರ್ 22ರಂದು ಬಹುಭಾಷೆಗಳಲ್ಲಿ ರಿಲೀಸ್ ಆಗಿ ಗಲ್ಲಾಪೆಟ್ಟಿಗೆಯಲ್ಲಿ ಸದ್ದು ಮಾಡಿತ್ತು. ಇದೀಗ 'ಸಲಾರ್' ಚಿತ್ರ ಜಪಾನ್‌ನಲ್ಲಿ ಜುಲೈ 5ರಂದು ರಿಲೀಸ್ ಆಗಲಿದೆ. ಪ್ರಶಾಂತ್ ನೀಲ್ ನಿರ್ದೇಶನ ಮತ್ತು ಹೊಂಬಾಳೆ ಸಂಸ್ಥೆ ನಿರ್ಮಾಣದ 'ಸಲಾರ್ ಪಾರ್ಟ್ 1' ಚಿತ್ರ 700 ಕೋಟಿ ರೂ.ಗಿಂತ ಅಧಿಕ ಕಲೆಕ್ಷನ್ ಮಾಡುವ ಮೂಲಕ ಗಮನ ಸೆಳೆದಿತ್ತು. ಪ್ರಭಾಸ್ ಮತ್ತು ಪೃಥ್ವಿರಾಜ್ ಸುಕುಮಾರನ್ ಜುಗಲ್‌ಬಂದಿ ನೋಡುಗರಿಗೆ ಮೋಡಿ ಮಾಡಿತ್ತು.

ಜಪಾನ್‌ನತ್ತ ಸಲಾರ್ ಮೆರವಣಿಗೆ ಹೊರಟಿದೆ. ಇದೇ ಜುಲೈ 5ರಂದು ಸಲಾರ್ ಜಪಾನ್‌ನಲ್ಲಿ ರಿಲೀಸ್ ಆಗುತ್ತಿರುವ ಬಗ್ಗೆ ಖುದ್ದು ಚಿತ್ರತಂಡ ಮಾಹಿತಿ ನೀಡಿದೆ. ಸದ್ಯ ಈ ವಿಚಾರ ಕೇಳಿ ಅಭಿಮಾನಿಗಳು ಥ್ರಿಲ್ ಆಗಿದ್ದಾರೆ. ಅಂದಹಾಗೆ, ಸಲಾರ್ ಪಾರ್ಟ್ 2 ಶೂಟಿಂಗ್ ಮಾಡಲು ಕೂಡ ಸಿದ್ಧತೆ ನಡೆಯುತ್ತಿದೆ.





## ಹೌಸ್‌ಫುಲ್ 5 ಚಿತ್ರತಂಡ ಸೇರಿಕೊಂಡ ಅಭಿಷೇಕ್ ಬಚ್ಚನ್



ಬಾಲಿವುಡ್ ನಟ ಅಭಿಷೇಕ್ ಬಚ್ಚನ್ ಅವರು ಇದೀಗ ಹೊಸ ಸಿನಿಮಾವೊಂದನ್ನು ಒಪ್ಪಿಕೊಂಡಿದ್ದಾರೆ. 'ಹೌಸ್‌ಫುಲ್' ಸೀಕ್ವೆಲ್‌ನಲ್ಲಿ ನಟಿಸಲು ಗ್ರೀನ್ ಸಿಗ್ನಲ್ ನೀಡಿದ್ದಾರೆ. ಅಕ್ಷಯ್ ಕುಮಾರ್ ಜೊತೆ ಮತ್ತೆ ನಗಿಸಲು ಅಭಿಷೇಕ್ ಬಚ್ಚನ್ ರೆಡಿಯಾಗಿದ್ದಾರೆ. ಅಕ್ಷಯ್ ಕುಮಾರ್ ಮತ್ತು ರಿತೇಶ್ ದೇಶ್‌ಮುಖ್ ಮೊದಲಾದವರು ನಟಿಸಿರುವ ಈ ಚಿತ್ರವನ್ನು ಪಾರ್ಟ್ 5 ಮಾಡಲು ಸಿದ್ಧತೆ ಮಾಡಲಾಗುತ್ತಿದೆ. ಅಕ್ಷಯ್ ಜೊತೆ ಅನಿಲ್ ಕಪೂರ್, ನಾನಾ ಪಾಟೇಕರ್, ರಿತೇಶ್, ಚಂಕಿ ಪಾಂಡೆ ಪ್ರಮುಖ ಪಾತ್ರದಲ್ಲಿ ನಟಿಸಲಿದ್ದಾರೆ. ಹೌಸ್‌ಫುಲ್-5ರಲ್ಲಿ ಅಭಿಷೇಕ್ ಬಚ್ಚನ್ ಕೂಡ ಲೀಡ್ ರೋಲ್‌ನಲ್ಲಿ ನಟಿಸಲಿದ್ದಾರೆ. ಈ ಚಿತ್ರವನ್ನು ಚಿತ್ರವನ್ನು ಸಾಜಿದ್ ನಿರ್ಮಾಣ ಮಾಡಲಿದ್ದಾರೆ. 'ಹೌಸ್‌ಫುಲ್' ನನ್ನ ಫೇವರಿಟ್ ಕಾಮಿಡಿ ಫ್ರಾಂಚೈಸ್‌ಗಳಲ್ಲಿ ಒಂದು. ಇದರಲ್ಲಿ ನಟಿಸೋದು ಮನೆಗೆ ಮರಳಿದ ಭಾವನೆ ಕೊಡುತ್ತದೆ. ಸಾಜಿದ್ ಜೊತೆ ಕೆಲಸ ಮಾಡೋದು ಖುಷಿ ನೀಡುತ್ತದೆ. ಅಕ್ಷಯ್ ಹಾಗೂ ರಿತೇಶ್ ಜೊತೆ ಸೆಟ್‌ನಲ್ಲಿ ಫನ್ ಮಾಡಲು ಕಾದಿದ್ದೇನೆ ಎಂದು ಖುಷಿಯಿಂದ ಅಭಿಷೇಕ್ ಬಚ್ಚನ್ ಮಾತನಾಡಿದ್ದಾರೆ.

## ದೇಶ ಬಿಟ್ಟು ನರಕಕ್ಕೆ ಹೋಗಿ ಎಂದ ಬಿಗ್ ಬಾಸ್ ವಿನ್ನರ್



ಒಂದು ಪಕ್ಷದ ನಾಯಕರು ಮತ್ತೊಂದು ಪಕ್ಷದ ನಾಯಕರನ್ನು ಟೀಕಿಸುವುದು ಕಾಮನ್. ಆದರೆ, ಫುಲ್ ಟೈಮ್ ರಾಜಕಾರಣಿ ಅಲ್ಲದ ನಟಿಯೊಬ್ಬರು ರಾಹುಲ್ ಗಾಂಧಿ ಅವರನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ಜೊತೆಗೆ ರಾಹುಲ್ ಬೆಂಬಲಿಸಿದವರಿಗೂ ಚಾಟಿ ಬೀಸಿರುವ ಅವರು ನೀವೆಲ್ಲರೂ ನರಕಕ್ಕೆ ಹೋಗಿ ಅಂದಿದ್ದಾರೆ. ರಾಹುಲ್ ಬಗ್ಗೆ ಇಂತಹ ಮಾತುಗಳನ್ನು ಆಡಿದ್ದು ಬೇರೆ ಯಾರೂ ಅಲ್ಲ, ಬಿಗ್ ಬಾಸ್ ಮರಾಠಿಯ ವಿನ್ನರ್, ನಟಿ ಮೇಘಾ ಧಾಡೆ ಆಕ್ರೋಶ ಹೊರ ಹಾಕಿದ್ದಾರೆ. ಅವರು ಈ ರೀತಿ ಮಾತನಾಡಿದ್ದಕ್ಕೆ ಕಾರಣವೂ ಇದೆ. ಚುನಾವಣಾ ಪ್ರಚಾರದ ವೇಳೆ ರಾಹುಲ್ ಅವರಿಗೆ ಶಿವಾಜಿ ಮಹಾರಾಜರ ಪ್ರತಿಮೆಯನ್ನು ನೀಡಲಾಗಿದೆ. ಫೋಟೋಗಾಗಿ ಅದನ್ನು ಸ್ವೀಕರಿಸಿ, ನಂತರ ಅಲ್ಲಿಯೇ ಪ್ರತಿಮೆಯನ್ನು ಬಿಟ್ಟು ಹೋಗಿದ್ದಾರಂತೆ.

## ಥೈಲ್ಯಾಂಡ್ ಬೀಚ್ ಬಿಕಿನಿಯಲಿ ಕಾಣಿಸಿಕೊಂಡ ದಿಶಾ

ಬಾಲಿವುಡ್ ಖ್ಯಾತ ನಟಿ ದಿಶಾ ಪಟಾನಿ ಬೇಸಿಗೆ ರಜೆ ಕಳೆಯುವುದಕ್ಕಾಗಿ ಥೈಲ್ಯಾಂಡ್ ಗೆ ಹಾರಿದ್ದಾರೆ. ಬಿಕಿನಿಲ್ಲಿ ಹಾಟ್ ಬೆಡಗಿ ಪೋಸ್ ನೀಡಿ, ಹುಡುಗರ ನಿದ್ದೆ ಕೆಡಿಸಿದ್ದಾರೆ. ಸ್ಟುಡಿಯೋ ರೂಮ್ ಒಳಗೆ ಹಾಟ್ ಫೋಟೋಗೆ ಪೋಸ್ ಕೊಡುತ್ತಿದ್ದವರು ಈ ಬಾರಿ ಬೀಚ್‌ನಲ್ಲಿ ಕಾಣಿಸಿಕೊಂಡಿದ್ದಾರೆ.ದಿಶಾ ಪಟಾನಿ ಅವರು ಸದಾ ಟ್ರೋಲ್‌ಗಳ ಮೂಲಕ ಸದ್ದು ಮಾಡ್ತಿರುತ್ತಾರೆ. ಕಳೆದ ಬಾರಿ ಫೇಸ್ ಸರ್ಜರಿ ವಿಷ್ಯವಾಗಿ ನಟಿ ಭಾರಿ ಟ್ರೋಲ್ ಆಗಿದ್ದರು. ನಂತರ ಹಾಟ್ ಫೋಟೋಶೂಟ್ ಮೂಲಕ ಪಡ್ಡೆಹುಡುಗರ ನಿದ್ದೆ ಕದ್ದಿದ್ದರು. ಭಾಘಿ 2, ಭಾಘಿ 3, ರಾಧೆ ಸಿನಿಮಾಗಳಲ್ಲಿ ನಟಿಸಿರುವ ದಿಶಾ ಪಟಾನಿ ಅವರಿಗೆ ಚಿತ್ರರಂಗದಲ್ಲಿ ಹೇಳಿಕೊಳ್ಳುವಂತಹ ಯಶಸ್ಸು ಸಿಗಲಿಲ್ಲ. ಸದಾ ಬೋಲ್ಡ್ ಫೋಟೋಶೂಟ್‌ನಿಂದಲೇ ನಟಿಮಣಿ ದಿಶಾ ಸಂಚಲನ ಸೃಷ್ಟಿಸಿದ್ದರು.



## 'ಜಟ್ಟ' ಖ್ಯಾತಿಯ ನಿರ್ದೇಶಕನ ಹೊಸ ಚಿತ್ರಕ್ಕೆ ರಾಗಿಣಿ ನಾಯಕಿ

ಗಿರೀಶ್ ವಿ ಗೌಡ ಸಾರಥ್ಯದಲ್ಲಿ, ರಾಮಕೃಷ್ಣ ನಿಗಾಡಿ ಅವರ ನಿರ್ಮಾಣದಲ್ಲಿ ಹಾಗೂ ಜಟ್ಟ, ಮೈತ್ರಿ ಚಿತ್ರಗಳ ಖ್ಯಾತಿಯ ಬಿ.ಎಂ.ಗಿರಿರಾಜ್ ನಿರ್ದೇಶನದಲ್ಲಿ ನೂತನ ಚಿತ್ರವೊಂದು ಸದ್ಯದಲ್ಲೇ ಆರಂಭವಾಗಲಿದೆ. ರಾಗಿಣಿ ದ್ವಿವೇದಿ ಈ ಚಿತ್ರದ ನಾಯಕಿಯಾಗಿ ನಟಿಸಲಿದ್ದಾರೆ. ಇತ್ತೀಚಿಗೆ ಈ ಚಿತ್ರದ ಫಸ್ಟ್ ಲುಕ್ ಬಿಡುಗಡೆಯಾಯಿತು. ರಾಷ್ಟ್ರಪ್ರಶಸ್ತಿ ವಿಜೇತ ಹರಿವು ಚಿತ್ರದಿಂದ ನನ್ನ ಸಿನಿ ಜರ್ನಿ ಆರಂಭವಾಯಿತು ಎಂದು ಮಾತನಾಡಿದ ಗಿರೀಶ್ ವಿ ಗೌಡ, ಹತ್ತು ವರ್ಷಗಳಿಂದ ರಾಗಿಣಿ ಅವರ ಜೊತೆಗೆ ಚಿತ್ರ ನಿರ್ಮಾಣ ಮಾಡಬೇಕೆಂದು ಪ್ರಯತ್ನಿಸುತ್ತಿದ್ದೆ. ಈಗ ಕಾಲ ಕೂಡಿ ಬಂದಿದೆ. ನಿರ್ದೇಶಕ ಬಿ.ಎಂ.ಗಿರಿರಾಜ್ ಒಳ್ಳೆ ಕಥೆ ಮಾಡಿಕೊಂಡಿದ್ದಾರೆ. ಹಿಂದೆ ಹೊಂಬಣ್ಣ ಚಿತ್ರ ನಿರ್ಮಿಸಿದ್ದ ರಾಮಕೃಷ್ಣ ನಿಗಾಡಿ ಅವರು ಸಂಚಲನ ಮೂವೀಸ್ ಮೂಲಕ ಈ ಚಿತ್ರ ನಿರ್ಮಾಣ ಮಾಡುತ್ತಿದ್ದಾರೆ. ಇಂದು ಫಸ್ಟ್ ಲುಕ್ ಬಿಡುಗಡೆಯಾಗಿದೆ ಎಂದರು. ಕೌಂಡಿನ್ಯ ಅವರು ನನ್ನ ನೆಚ್ಚಿನ ಲೇಖಕರು. ಅವರ ಕಥೆಗಳಿಂದ ಪ್ರೇರಿತನಾಗಿ ಈ ಚಿತ್ರದ ಕಥೆ ಸಿದ್ದ ಮಾಡಿದ್ದೇನೆ. ರಾಗಿಣಿ ಅವರ ಜೊತೆ ಇದು ನನ್ನ ಮೊದಲ ಸಿನಿಮಾ ಎಂದರು ನಿರ್ದೇಶಕ ಬಿ.ಎಂ.ಗಿರಿರಾಜ್. ಫಸ್ಟ್ ಲುಕ್ ಸಖತಾಗಿದೆ. ಅದಕ್ಕಿಂತ ಚಿತ್ರದ ಶೀರ್ಷಿಕೆ ಹಾಗೂ ಕಥೆ ಇನ್ನೂ ಚೆನ್ನಾಗಿದೆ. ಸದ್ಯದಲ್ಲೇ ಶೀರ್ಷಿಕೆ ಅನಾವರಣವಾಗಲಿದೆ. ಗಿರೀಶ್ ವಿ ಗೌಡ ಅವರಿಗೆ ಧನ್ಯವಾದಗಳು ಎಂದರು ನಾಯಕಿ ರಾಗಿಣಿ ದ್ವಿವೇದಿ.

## ವಿಕ್ರಮ್ ಪುತ್ರನ ಜೊತೆ ಅನುಪಮಾ ಪರಮೇಶ್ವರನ್ ರೊಮ್ಯಾನ್ಸ್

'ಟಿಲ್ಲು ಸ್ಕ್ವೇರ್' ಸಿನಿಮಾದ ನಂತರ ಅನುಪಮಾ ಪರಮೇಶ್ವರನ್ ಅದೃಷ್ಟ ಕೈಹಿಡಿದಿದೆ. ರಶ್ಮಿಕಾ ಮಂದಣ್ಣ, ಶ್ರೀಲೀಲಾ ಹವಾ ನಡುವೆ ಮಲಯಾಳಂ ಬೆಡಗಿ ಅನುಪಮಾ ಲಕ್ಕಿ ನಟಿಯಾಗಿದ್ದಾರೆ. ಸಾಲು ಸಾಲು ಚಿತ್ರಗಳಿಗೆ ಹೀರೋಯಿನ್ ಆಗಿ ಬುಕ್ ಆಗಿದ್ದಾರೆ. ವಿಕ್ರಮ್ ಪುತ್ರನ ಜೊತೆ ನಟಿಸಲು ಅನುಪಮಾಗೆ ಆಫರ್ ಸಿಕ್ಕಿದೆ. ಸ್ಟಾರ್ ನಟ ವಿಕ್ರಮ್ ಪುತ್ರ, ಧ್ರುವ ಜೊತೆ ನಟಿಸಲು ಅನುಪಮಾಗೆ ಅವಕಾಶ ಸಿಕ್ಕಿದೆ.

**ಚಿಯಾನ್ ವಿಕ್ರಮ್ ಕ್ಲ್ಯಾಪ್**

ಈ ಚಿತ್ರಕ್ಕೆ 'ಬೈಸನ್' ಎಂದು ಟೈಟಲ್ ಇಡಲಾಗಿದ್ದು, ಸಿನಿ ಮಾದ ಮುಹೂರ್ತ ಅದ್ಧೂರಿಯಾಗಿ ನೆರವೇರಿದೆ. ಮಗನ ಸಿನಿ ಮಾಗೆ ಚಿಯಾನ್ ವಿಕ್ರಮ್ ಕ್ಲ್ಯಾಪ್ ಮಾಡಿ ಶುಭಹಾರೈಸಿದ್ದಾರೆ. ಧ್ರುವ ಮತ್ತು ಅನುಪಮಾಗೆ ಮರಿ ಸೆಲ್ವರಾಜ್ ಆಯಕ್ಷನ್ ಕಟ್ ಹೇಳ್ತಿದ್ದಾರೆ. ಇದೊಂದು ಥ್ರಿಲರ್ ಸಿನಿಮಾವಾಗಿದ್ದು, ವಿಭಿನ್ನ ಕಥೆಯನ್ನು ಹೇಳಲು ಹೊರಟಿದೆ ಚಿತ್ರತಂಡ. ಮೊದಲ ಬಾರಿಗೆ ಧ್ರುವ ಮತ್ತು ಅನುಪಮಾ ಜೋಡಿಯಾಗ್ತಿರೋದ್ರಿಂದ ಈ ಚಿತ್ರದ ಮೇಲೆ ಅಭಿಮಾನಿಗಳಿಗೆ ಹೆಚ್ಚಿನ ನಿರೀಕ್ಷೆಯಿದೆ.



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966